
ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ
ನವೆಂಬರ್ 8 ಬುಧವಾರ 2023
ಸಂಪುಟ: 44 | ಸಂಚಿಕೆ: 202 | ಪುಟಗಳು: 12
ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ– ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.co
₹4

ವಿಶ್ವೇಶ್ವರಯ್ಯ ನಾಲೆಗೆ ಕಾರು ಉರುಳಿ

ತಿಪಟೂರಿನ ಐವರು ಜಲಸಮಾಧಿ

● ಪಾಂಡವಪುರದ ಬನಘಟ್ಟ ಬಳಿ ದುರ್ಘಟನೆ ● ನಾಲೆಗಳಲ್ಲಿ ಮಾರಣಹೋಮಕ್ಕೆ ಮತ್ತೊಂದು ಸೇರ್ಪಡೆ
● ನಾಲೆಯಿಂದ ಕಾರು ಮೇಲೆತ್ತಿದಾಗ ಮೊಬೈಲ್ ರಿಂಗ್; ಇದರಿಂದ ಕಾರಿನಲ್ಲಿದ್ದವರ ಗುರುತು ಪತ್ತೆ



ಪಾಂಡವಪುರ, ನ.7(ನಾಗ ಸುಂದರ್, ಮೋಹನ್‌ರಾಜ್)– ಮಂಡ್ಯ ಜಿಲ್ಲೆಯ ನಾಲೆಗಳಲ್ಲಿ ದುರಂತಗಳು ಮುಂದುವರೆದಿದ್ದು, ಮಂಗಳವಾರ ವಿಶ್ವೇಶ್ವರಯ್ಯ ನಾಲೆಗೆ ಕಾರು ಉರುಳಿ ಬಿದ್ದು ಐವರು ಜಲ ಸಮಾಧಿಯಾಗಿದ್ದಾರೆ. ಈ ಘಟನೆ ತಾಲೂಕಿನ ಬನಘಟ್ಟ ಗೇಟ್ ಬಳಿ ಮಂಗಳವಾರ ಸಂಜೆ ಸಂಭವಿಸಿದೆ.

ತುಮಕೂರು ಜಿಲ್ಲೆ, ತಿಪಟೂರು ತಾಲೂಕಿನ ಕೈದಾಳು ಗ್ರಾಮದ ನಿವಾಸಿಗಳಾದ ಕೆ.ಟಿ.ಕೃಷ್ಣಪ್ಪ(60), ಚಂದ್ರಪ್ಪ(61), ಧನಂಜಯ್ಯ(55), ಬಾಬು ಹಾಗೂ ಪ್ರಸನ್ನ ದುರಂತದಲ್ಲಿ ಸಾವನ್ನಪ್ಪಿದ್ದಾರೆ. ಮೈಸೂರಿನಲ್ಲಿ ನಡೆದ ಸಂಬಂಧಿಕರೊಬ್ಬರ ಬೀಗರ ಔತಣ ಮುಗಿಸಿಕೊಂಡು ಪಾಂಡವಪುರ–ನಾಗಮಂಗಲ ಮಾರ್ಗವಾಗಿ ತಿಪಟೂರಿಗೆ ವಾಪಸ್ ತೆರಳುವಾಗ ಈ ದುರ್ಘಟನೆ ನಡೆದಿದೆ.

ಶಿವಮೊಗ್ಗ ನೋಂದಣಿಯ (ಕೆಎ–14, ಎನ್.2457) ಇಂಡಿಕಾ ಕಾರಿನಲ್ಲಿ ಮಂಗಳವಾರ ಸಂಜೆ 4.35ರ ಸಮಯದಲ್ಲಿ ಪಾಂಡವಪುರ–ನಾಗಮಂಗಲ ಮುಖ್ಯ ರಸ್ತೆಯಲ್ಲಿ ತೆರಳುತ್ತಿದ್ದಾಗ ಬನಘಟ್ಟ ಗ್ರಾಮದ ಹತ್ತಿರ ವಿಶ್ವೇಶ್ವರಯ್ಯ ನಾಲೆಯ ಸೇತುವೆ ಬಳಿ ನಾಗಮಂಗಲ ಕಡೆಯಿಂದ ಬೈಕ್‌ನಲ್ಲಿ ಇಬ್ಬರು ಬಂದಿದ್ದಾರೆ. ಈ ವೇಳೆ ಬೈಕ್‌ಗೆ ಡಿಕ್ಕಿಯಾಗುವುದನ್ನು ತಪ್ಪಿಸುವ ಪ್ರಯತ್ನದಲ್ಲಿ ಚಾಲಕನ ನಿಯಂತ್ರಣ ಕಳೆದುಕೊಂಡ ಕಾರು 30 ಅಡಿ ಆಳದ ವಿಸಿ ನಾಲೆಗೆ ಉರುಳಿ ಬಿದ್ದಿದೆ. ▶ 6ನೇ ಪುಟಕ್ಕೆ

ಮಂಡ್ಯದಲ್ಲಿ ನಾಲೆಗಳ ದುರಂತ ಸರಣಿ

ಮಂಡ್ಯ, ನ.7–ಮಂಡ್ಯ ಜಿಲ್ಲೆಯಲ್ಲಿ ನಾಲೆಗಳಿಗೆ ವಾಹನಗಳು ಉರುಳಿ ದುರಂತ ಸಂಭವಿಸುತ್ತಿರುವುದು ಮುಂದುವರೆದಂತೆ ಜನರಲ್ಲಿ ಆತಂಕ ಸೃಷ್ಟಿಸಿದೆ. ಇಂತಹ ದುರಂತಗಳಲ್ಲಿ ಈವರೆಗೆ 50ಕ್ಕೂ ಹೆಚ್ಚು ಮಂದಿ ಪ್ರಾಣ ಕಳೆದುಕೊಂಡಿದ್ದಾರೆ.

ಇದಕ್ಕೆ ಯಾವುದೋ ಅಗೋಚರ ಕಾರಣಗಳನ್ನು ಹುಡುಕುವುದಕ್ಕಿಂತ ಕಣ್ಮುಂದಿರುವ ಸಮಸ್ಯೆಗಳನ್ನು ಪರಿಹಾರೋಪಾಯ ಕಂಡುಕೊಳ್ಳುವುದು ಅವಶ್ಯವಾಗಿದೆ. ನಾಲೆಗಳಿಗೆ ಸೂಕ್ತ ತಡೆಗೋಡೆ ಇಲ್ಲದಿರುವುದು, ಅತೀವೇಗ ಹಾಗೂ ಅಜಾರೂಕತೆಯಿಂದ ವಾಹನ ಚಾಲಿಸುವುದೂ ದುರಂತಗಳಿಗೆ ಕಾರಣವಾಗಿದೆ.

ಮೂರು ತಿಂಗಳಲ್ಲಿ 3 ಘಟನೆ: ಕಳೆದ 3 ತಿಂಗಳಲ್ಲಿ ವಿಶ್ವೇಶ್ವರಯ್ಯ ನಾಲೆಗೆ ಮೂರು ಕಾರುಗಳು ಉರುಳಿ ಬಿದ್ದಿವೆ. ಜು.27ರಂದು ಮಂಡ್ಯ ತಾಲೂಕಿನ ತಿಬ್ಬನಹಳ್ಳಿ ಬಳಿ ವಿಶ್ವೇಶ್ವರಯ್ಯ ನಾಲೆಗೆ ಕಾರು ಉರುಳಿ ಬಿದ್ದು, ಲೋಕೇಶ್ ಎಂಬುವವರು ಸಾವನ್ನಪ್ಪಿದ್ದರು. ಜು.29 ರಂದು ಶ್ರೀರಂಗಪಟ್ಟಣದ ಗಾಮನಹಳ್ಳಿಯ ವಿಶ್ವೇಶ್ವರಯ್ಯ ನಾಲೆಗೆ ಇಂಡಿಕಾ ಕಾರು ಉರುಳಿ ನಾಲ್ವರು ಸಾವನ್ನಪ್ಪಿದ್ದರು. ಇದೀಗ ಬನಘಟ್ಟ ಬಳಿ ▶ 6ನೇ ಪುಟಕ್ಕೆ

ಮೌಢ್ಯ ನಂಬಲ್ಲ: ದೇವರ ನಂಬುತ್ತೇನೆ!

ಹಾಸನಾಂಬೆ ದರ್ಶನ ಪಡೆದ ಸಿಎಂ ಸಿದ್ದರಾಮಯ್ಯ



ಹಾಸನ, ನ.7– ಮೌಢ್ಯ ನಂಬಲ್ಲ. ಆದರೆ, ದೇವರನ್ನು ನಂಬುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಹಾಸನಾಂಬೆ ದರ್ಶನ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೌಢ್ಯ ನಿನ್ನೆ, ಮೊನ್ನೆಯದಲ್ಲ. ಮೌಢ್ಯ ಎಂದರೆ ನಂಬಿಕೆಯಲ್ಲ, ಅಪನಂಬಿಕೆ. ಮೌಢ್ಯವನ್ನು ಹಿಂದಿನಿಂದ ಆಚರಣೆ ಮಾಡಿಕೊಂಡು ಬಂದಿದ್ದೇವೆ. ಅವುಗಳನ್ನು ನಾನು ನಂಬುವುದಿಲ್ಲ. ಆದರೆ, ದೇವರಲ್ಲಿ ನಂಬಿಕೆ ಇದೆ ಎಂದರು.

ರಾಜ್ಯದಲ್ಲಿ ಬರ ಪರಿಸ್ಥಿತಿಯಿಂದ ರೂ. 37,700 ಕೋಟಿ ಬೆಳೆ ನಷ್ಟ ಸಂಭವಿಸಿದೆ. ಎನ್‌ಡಿಆರ್‌ಎಫ್– ಎಸ್‌ಡಿಆರ್‌ಎಫ್ ನಿಯಮದಂತೆ ರೂ. 17, 900 ಕೋಟಿ ಪರಿಹಾರ ಬಿಡುಗಡೆಗೆ ಕೇಂದ್ರಕ್ಕೆ ಪ್ರಸ್ತಾವ ನೀಡಿರುವುದಾಗಿ ತಿಳಿಸಿದ ಮುಖ್ಯಮಂತ್ರಿ, ಕೇಂದ್ರ ಸರ್ಕಾರ ಕೂಡಲೇ ರಾಜ್ಯಕ್ಕೆ ಅಗತ್ಯ ಬರ ಪರಿಹಾರದ ಹಣ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ದೇಶಾದ್ಯಂತ ಪಟಾಕಿ ನಿಷೇಧಿಸಿ ಸುಪ್ರೀಂ ತೀರ್ಪು!

ದೀಪಾವಳಿಗೂ ಮುನ್ನ ಮಹತ್ವದ ಆದೇಶ

ನವದೆಹಲಿ: ದೀಪಾವಳಿ ಮತ್ತು ಇತರ ಸಂದರ್ಭಗಳಲ್ಲಿ ಬೇರಿಯಂ ರಾಸಾಯನಿಕ ಒಳಗೊಂಡ ಪಟಾಕಿ ಸಿಡಿಸದಂತೆ, ಸುಪ್ರೀಂ ಕೋರ್ಟ್ ಮಂಗಳವಾರ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಈ ಆದೇಶ ಪಾಲಿಸುವಂತೆ ಸೂಚಿಸಿದೆ.

ಈ ತೀರ್ಪು ಕೇವಲ ದೆಹಲಿಗೆ ಮಾತ್ರವಲ್ಲ, ಇಡೀ ದೇಶಕ್ಕೆ ಅನ್ವಯ ಎಂದು ತಿಳಿಸಿದೆ. ನ್ಯಾಯಮೂರ್ತಿಗಳಾದ ಎ.ಎಸ್. ಬೋಪಣ್ಣ ಮತ್ತು ಎಂ.ಎಂ. ಸುಂದರೇಶ್ ಅವರನ್ನೊಳಗೊಂಡ ಪೀಠವು ಪಟಾಕಿ ಸಿಡಿಸುವ ಕುರಿತು ಹಿಂದಿನ ಆದೇಶಗಳನ್ನು ಜಾರಿಗೊಳಿಸಲು ನಿರ್ದೇಶನ ಕೋರಿ ಸಲ್ಲಿಸಿದ್ದ ರಾಜಸ್ಥಾನ ರಾಜ್ಯದ ಅರ್ಜಿಗಳನ್ನು ಆಲಿಸಿದ ನಂತರ ಈ ತೀರ್ಪು ನೀಡಿದೆ.

ಪಟಾಕಿ ಖರೀದಿ–ಮಾರಾಟ ನಿಷೇಧ: ದೇಶದಲ್ಲಿ ನಿಷೇಧಿತ ರಾಸಾಯನಿಕಗಳು ಮತ್ತು ಬೇರಿಯಂ ಲವಣಗಳಿರುವ ಪಟಾಕಿ ಮಾರಾಟ, ಖರೀದಿ ಮತ್ತು ಬಳಕೆಯನ್ನು ನಿಷೇಧಿಸುವಂತೆ ಕೋರಿ ಸುಪ್ರೀಂ ಕೋರ್ಟ್‌ನಲ್ಲಿ ಹಲವು ಅರ್ಜಿಗಳು ಸಲ್ಲಿಕೆಯಾಗಿವೆ. ರಾಜಸ್ಥಾನದ ಅರ್ಜಿದಾರರು ಸಲ್ಲಿಸಿದ್ದ ಅರ್ಜಿಗಳನ್ನು ಸುಪ್ರೀಂ ಕೋರ್ಟ್ ಪೀಠ ವಿಚಾರಣೆ ನಡೆಸಿ, ಈ ತೀರ್ಪು ದೇಶದ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೂ ಅನ್ವಯಿಸುತ್ತದೆ ಎಂದು ತಿಳಿಸಿದೆ.

ಬೆಳಗಾವಿ ಅಧಿವೇಶನದಲ್ಲೇ ಸದಾಶಿವ ವರದಿ ಮಂಡನೆ; ಸಿಎಂಗೆ ಮನವಿ



ಬೆಂಗಳೂರು, ನ.7– ಬೆಳಗಾವಿಯ ಚಳಿಗಾಲದ ಅಧಿವೇಶನದಲ್ಲಿಯೇ ಎಜೆ ಸದಾಶಿವ ಆಯೋಗದ ವರದಿ ಮಂಡಿಸಿ ಒಳ ಮೀಸಲಾತಿ ಕಲ್ಪಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಲಾಗಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ ಮಂಗಳವಾರ ತಿಳಿಸಿದ್ದಾರೆ.

ಒಳ ಮೀಸಲಾತಿ ಸಂಬಂಧ ಸದಾಶಿವ ಆಯೋಗದ ವರದಿ ಜಾರಿ ಕುರಿತಂತೆ ಪರಿಶಿಷ್ಟ ಜಾತಿಗೆ ಸೇರಿದ ಸಚಿವರು ಮತ್ತು ಶಾಸಕರು ನಡೆಸಿದ ಸಭೆ ಬಳಿಕ ಅವರು ಮಾತನಾಡಿದರು.

ಚುನಾವಣೆ ಸಂದರ್ಭದಲ್ಲಿ ಒಳ ಮೀಸಲಾತಿ ಕುರಿತು ಚಿತ್ರದುರ್ಗ ನಗರದಲ್ಲಿ ಎಸ್‌ಸಿ–ಎಸ್‌ಟಿ ಸಮಾವೇಶ ನಡೆಸಲಾಗಿತ್ತು. ಆಗ ಹತ್ತು ಹಲವು ಘೋಷಣೆಗಳನ್ನು ಮಾಡಿದ್ದೆವು. ಅದರಲ್ಲಿ ಸದಾಶಿವ ಆಯೋಗದ ವರದಿಯನ್ನು ಮೊದಲ ಅಧಿವೇಶನದಲ್ಲಿಯೇ ಸದನದ ಮುಂದಿಡಲಾಗುವುದು ಎಂದು ಭರವಸೆ ನೀಡಲಾಯಿತು. ಆದರೆ, ಕಾರಣಾಂತರಗಳಿಂದ ಅದು ಸಾಧ್ಯವಾಗಿಲ್ಲ ಎಂದು ಹೇಳಿದರು. ಬೆಳಗಾವಿಯಲ್ಲಿ ನಡೆಯಲಿರುವ ಚಳಿಗಾಲದ ಅಧಿವೇಶನದಲ್ಲಿ ಸದಾಶಿವ ಆಯೋಗದ ವರದಿಯನ್ನು ▶ 9ನೇ ಪುಟಕ್ಕೆ

ಮುಡಾ ಮಾಜಿ ಕಾರ್ಯದರ್ಶಿ ಸಹಿ ನಕಲಿ ಮಾಡಿ ಬದಲಿ ನಿವೇಶನ ಮಂಜೂರಾತಿಯಲ್ಲಿ ಭಾರಿ ಗೋಲ್‌ಮಾಲ್!

ಜಿಲ್ಲಾಧಿಕಾರಿಗಳಿಗೆ ಸ್ವತಃ ಕೆಎಎಸ್ ಅಧಿಕಾರಿ ಕುಸುಮಾಕುಮಾರಿ ದೂರು



ಮೈಸೂರು, ನ.7(ಆರ್‌ಕೆ)– ಮೈಸೂರು ತಾಲೂಕು ಕುಪ್ಪಲೂರು 3ನೇ ಹಂತದ ವಸತಿ ಬಡಾವಣೆಯ ನಿವೇಶನಗಳಿಗೆ ಸಂಬಂಧಿಸಿದ ಕಡತವೊಂದರಲ್ಲಿ ತಮ್ಮ ಸಹಿಯನ್ನು ನಕಲು ಮಾಡಿ, ಅನುಮೋದನೆ ನೀಡಲಾಗಿದೆ ಎಂದು ನಮೂದಿಸಲಾಗಿದೆ ಎಂದು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ ನಿಕಟಪೂರ್ವ ಕಾರ್ಯದರ್ಶಿ, ಕೆಎಎಸ್ ಅಧಿಕಾರಿ ಎಸ್. ಕುಸುಮಾಕುಮಾರಿ, ಜಿಲ್ಲಾಧಿಕಾರಿಗಳೂ ಆದ ಪ್ರಾಧಿಕಾರದ ಅಧ್ಯಕ್ಷ ಡಾ. ಕೆ.ವಿ.ರಾಜೇಂದ್ರ ಅವರಿಗೆ ಲಿಖಿತ ದೂರು ನೀಡಿದ್ದಾರೆ. ತಾವು ಈ ಹಿಂದೆ ಮುಡಾ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಸರ್ಕಾರದ ಆದೇಶದಂತೆ ಜಿ.ಡಿ. ಶೇಖರ ಅವರು ಈಗ ಕಾರ್ಯದರ್ಶಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಸರ್ಕಾರದ ಆದೇಶ ಪ್ರಶ್ನಿಸಿ ನಾನು ನ್ಯಾಯಾಲಯದ ಮೊರೆ ಹೋಗಿದ್ದು, ಆದೇಶಕ್ಕಾಗಿ ಕಾಯುತ್ತಿದ್ದೇನೆ ಎಂದು ಅವರು ತಮ್ಮ ದೂರು ಪತ್ರದಲ್ಲಿ ತಿಳಿಸಿದ್ದಾರೆ. ಈ ಮಧ್ಯೆ ಮುಡಾ ನೌಕರರಾದ ಎಂ.ಎಸ್. ನಂದೀಶ್ ಹಾಗೂ ಗುರುದತ್ ಅವರು ▶ 9ನೇ ಪುಟಕ್ಕೆ

ಪರಿಶೀಲಿಸಿ ವರದಿ ನೀಡಲು ಸೂಚಿಸಿದ್ದೇನೆ



ಮೈಸೂರು, ನ. 7(ಆರ್‌ಕೆ)– ಸಹಿ ನಕಲಿ ಮಾಡಿದ್ದಾರೆಂದು ಕುಸುಮಾಕುಮಾರಿ ನೀಡಿರುವ ದೂರಿನ ಸಂಬಂಧ ಪರಿಶೀಲಿಸಿ ವರದಿ ನೀಡುವಂತೆ ಮುಡಾ ಆಯುಕ್ತರಿಗೆ ಸೂಚಿಸಿದ್ದೇನೆ ಎಂದು ಜಿಲ್ಲಾಧಿಕಾರಿ ಡಾ. ಕೆ.ವಿ. ರಾಜೇಂದ್ರ ತಿಳಿಸಿದ್ದಾರೆ. ನಿಕಟಪೂರ್ವ ಮುಡಾ ಕಾರ್ಯದರ್ಶಿ ಕುಸುಮಾಕುಮಾರಿ ಅವರ ದೂರು ಪ್ರತಿಯನ್ನು ಆಯುಕ್ತರಿಗೆ ಕಳುಹಿಸಿ, ಆರೋಪದ ಸಂಬಂಧ ದಾಖಲೆಗಳನ್ನು ಪರಿಶೀಲಿಸಿ ಸಮಗ್ರ ಮಾಹಿತಿಯೊಂದಿಗೆ ವರದಿ ನೀಡುವಂತೆ ಸೂಚಿಸಿದ್ದೇನೆ. ವರದಿ ಬಂದ ಬಳಿಕ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ರೀತಿಯ ಕ್ರಮ ಕೈಗೊಳ್ಳುತ್ತೇನೆ ಎಂದು ಅವರು ತಿಳಿಸಿದರು.

ಈ ರೀತಿಯ ಹಲವು ದೂರುಗಳು ಬರುತ್ತಿರುವುದರಿಂದ ಆ ಕುರಿತಂತೆಯೇ ತಾವು ಶೀಘ್ರ ಪ್ರತ್ಯೇಕವಾಗಿ ವಿಶೇಷ ಸಭೆ ಕರೆದು ಪರಿಶೀಲಿಸುತ್ತೇನೆ. ಸಂಬಂಧಪಟ್ಟ ಅಧಿಕಾರಿಗಳಿಂದ ಸ್ಪಷ್ಟೀಕರಣ ಪಡೆದು ಸೂಕ್ತ ನಿರ್ದೇಶನ ನೀಡುವುದಾಗಿಯೂ ಡಾ. ಕೆ.ವಿ. ರಾಜೇಂದ್ರ ತಿಳಿಸಿದರು. ದೂರಿನ ಸಂಬಂಧ ಪ್ರತಿಕ್ರಿಯೆ ಪಡೆಯಲು 'ಮೈಸೂರು ಮಿತ್ರ' ದೂರವಾಣಿ ಮೂಲಕ ಸಂಪರ್ಕಿಸಲು ಪ್ರಯತ್ನಿಸಿದರೂ, ಮುಡಾ ಆಯುಕ್ತ ಜಿ.ಟಿ. ದಿನೇಶ್‌ಕುಮಾರ್ ಲಭ್ಯವಾಗಲಿಲ್ಲ.



ಕುಡಿಯುವ ನೀರಿನ ಮಹತ್ವ ಮನವರಿಕೆ

ಮೈಸೂರು ಪಾಲಿಕೆಯಿಂದ 'ಜಲ್ ದಿವಾಳಿ'

ನೀರನ್ನು ಅನಗತ್ಯವಾಗಿ ವ್ಯರ್ಥ ಮಾಡದೆ ಮಿತವಾಗಿ ಬಳಸುವುದು ಅವಶ್ಯ: ಮಹಿಳೆಯರಲ್ಲಿ ಜಾಗೃತಿ

■ ಮಹಿಳಾ ಸ್ವ ಸಹಾಯ ಸಂಘಗಳ ಮುಖ್ಯಸ್ಥರಿಗೆ ಮೊದಲು ಅರಿವು ■ 'ಮಹಿಳೆಯರಿಗಾಗಿ ನೀರು, ನೀರಿಗಾಗಿ ಮಹಿಳೆಯರು' ಘೋಷವಾಕ್ಯ
■ 90 ಮಹಿಳಾ ಮುಖ್ಯಸ್ಥರ ಮೂಲಕ ಜಾಗೃತಿ ಅಭಿಯಾನಕ್ಕೆ ಚಾಲನೆ ■ ಹೊಂಗಳ್ಳಿ, ವಿವಿ ವಾಟರ್ ವರ್ಕ್ಸ್‌ನಲ್ಲಿ ನೀರಿನ ಶುದ್ಧೀಕರಣ ಪ್ರಕ್ರಿಯೆ ಬಗ್ಗೆ ಮಾಹಿತಿ

ಮೈಸೂರು, ನ.7(ಬಿಎಲ್‌ಯು)– ಶುದ್ಧ ಕುಡಿಯುವ ನೀರು ವ್ಯರ್ಥ ಮಾಡದೆ ಮಿತವಾಗಿ ಬಳಕೆ ಮಾಡುವ ಸಂಬಂಧ ಮಹಿಳಾ ಸ್ವಸಹಾಯ ಸಂಘಗಳ ಮುಖ್ಯಸ್ಥರ ಮೂಲಕ ಜನರಲ್ಲಿ ಪರಿಣಾಮಕಾರಿ ಜಾಗೃತಿ ಮೂಡಿಸಲು ನಗರ ಪಾಲಿಕೆಯು ಮೂರು ದಿನಗಳ **'ಜಲ್ ದಿವಾಳಿ' ಅಭಿಯಾನ'** ಆರಂಭಿಸಿದೆ.

ಇದರ ಅಂಗವಾಗಿ ಮಹಿಳಾ ಸ್ವ ಸಹಾಯ ಸಂಘಗಳ ಮುಖ್ಯಸ್ಥರನ್ನು ಮಂಗಳವಾರ ಕೆಆರ್‌ಎಸ್‌ನ ಹೊಂಗಳ್ಳಿ ಹಾಗೂ ಮೈಸೂರಿನ ವಾಣಿ ವಿಲಾಸ ನೀರು ಸರಬರಾಜು ಕೇಂದ್ರಕ್ಕೆ ಕರೆದೊಯ್ಯಲಾಗಿತ್ತು. ನದಿ ಪಾತ್ರದಿಂದ ನೀರನ್ನು ಹೇಗೆ ಪಂಪ್ ಮಾಡಲಾಗುತ್ತದೆ, ನಂತರ ಹೇಗೆ ಶುದ್ಧೀಕರಣಗೊಳಿಸಿ ನಗರಕ್ಕೆ ನೀರು ಸರಬರಾಜು ಮಾಡಲಾಗುತ್ತದೆ ಎಂಬ ಬಗ್ಗೆ ಪ್ರಾಯೋಗಿಕ ಮಾಹಿತಿ ನೀಡಿ, ನೀರಿನ ಮಹತ್ವವನ್ನು ತಿಳಿಸಲಾಯಿತು.

ಬಹಳಷ್ಟು ಕಡೆ ಕುಡಿಯುವ ನೀರಿಗೆ ಹಾಹಾಕಾರವಿದೆ. ಹನಿ ನೀರಿಗೂ ಪರದಾಡುತ್ತಿರುವ ನಿದರ್ಶನಗಳಿವೆ. ಆದರೆ ಬಹಳಷ್ಟು ಜನರು ಕುಡಿಯುವ ನೀರಿನ ಮಹತ್ವ ಅರಿಯದೆ ಸುಖಾಸುಮ್ಮನೆ ವ್ಯಯ ಮಾಡುತ್ತಾರೆ. ಈ ಹಿನ್ನೆಲೆಯಲ್ಲಿ ಮಹಿಳಾ ಸ್ವ–ಸಹಾಯ ಸಂಘಗಳ ಮೂಲಕ ಜನರಲ್ಲಿ ನೀರಿನ ಸಂರಕ್ಷಣೆ, ಮಹತ್ವ ಹಾಗೂ ಮಿತ ಬಳಕೆ ಬಗ್ಗೆ ಜಾಗೃತಿ ಮೂಡಿಸಲು ಈ ಅಭಿಯಾನ ಆಯೋಜಿಸಲಾಗಿತ್ತು.




'ಮಹಿಳೆಯರಿಗಾಗಿ ನೀರು, ನೀರಿಗಾಗಿ ಮಹಿಳೆಯರು' ಘೋಷವಾಕ್ಯದೊಂದಿಗೆ ಆರಂಭಿಸಿದ ಅಭಿಯಾನದಲ್ಲಿ ಮೈಸೂರಿನ 30 ಸ್ವಸಹಾಯ ಸಂಘಗಳ ಮುಖ್ಯಸ್ಥರು ಭಾಗವಹಿಸಿದ್ದರು. ನದಿ ಪಾತ್ರದಿಂದ ಹೊಂಗಳ್ಳಿಯ ನೀರು ಸರಬರಾಜು ಕೇಂದ್ರದಲ್ಲಿ ನೀರನ್ನು ಹೇಗೆ ಪಂಪ್ ಮಾಡಲಾಗುತ್ತದೆ ಎಂದು ಮಹಿಳಾ ಸ್ವ ಸಹಾಯ ಸಂಘಗಳ ಮುಖ್ಯಸ್ಥರಿಗೆ ಮೊದಲು ಮನವರಿಕೆ ಮಾಡಲಾಯಿತು. ತರುವಾಯ ಪಂಪ್ ಮಾಡಿದ ನೀರನ್ನು ಸಂಗ್ರಹಣಾ ಕೇಂದ್ರಕ್ಕೆ ಹೇಗೆ ಹರಿಸಲಾಗುತ್ತದೆ ಎಂದು ಮನವರಿಕೆ ಮಾಡಿಕೊಡಲಾಯಿತು. ನಂತರ ಸಿಲಿಕಾ ಮರಳು, ಆಂತ್ರಾಸೈಟ್ ಬಳಸಿ ಕಸ ಮುಕ್ತ ಮಾಡಿದ ನಂತರ ವಿ ವೈಯರ್ ಫಿಲ್ಟರ್ ಮೂಲಕ ನೀರನ್ನು ಹೇಗೆ ಶುದ್ಧಿಕರಣ ಮಾಡಲಾಗುತ್ತದೆ ಎಂದು ತೋರಿಸಲಾಯಿತು. ಹೀಗೆ ಶುದ್ಧೀಕರಣಗೊಂಡ ನೀರನ್ನು ಕೀಟಾಣು ಮುಕ್ತಮಾಡಲು ಕ್ಲೋರಿನ್ ರಾಸಾಯನಿಕ ಮಿಶ್ರಣದ ಬಗ್ಗೆಯೂ ಮಾಹಿತಿ ▶ 9ನೇ ಪುಟಕ್ಕೆ



ಹಿರಿಯ ರಾಜಕಾರಣಿ ಡಿ.ಬಿ.ಚಂದ್ರೇಗೌಡ ಇನ್ನಿಲ್ಲ

ನಾಲ್ಕೂ ಸದನಗಳಲ್ಲಿ ಕಾರ್ಯ ನಿರ್ವಹಣೆ; ಇಂದಿರಾ ಗಾಂಧಿಗಾಗಿ ಸ್ಥಾನ ತೊರೆದು ಕ್ಷೇತ್ರ ಬಿಟ್ಟುಕೊಟ್ಟಿದ್ದ ರಾಜಕೀಯ ಧುರೀಣ



ಚಿಕ್ಕಮಗಳೂರು, ನ.7– ದಾರದಹಳ್ಳಿ ಭೈರೇಗೌಡ ಚಂದ್ರೇಗೌಡ(ಡಿ.ಬಿ. ಚಂದ್ರೇಗೌಡ–87) ಮಂಗಳವಾರ ನಿಧನರಾದರು. ನಾಲ್ಕೂವರೆ ದಶಕದ ಸುದೀರ್ಘ ರಾಜಕೀಯ ಬದುಕಿನಲ್ಲಿ ಸ್ಪೀಕರ್, ಪ್ರತಿಪಕ್ಷ ನಾಯಕ, ಸಚಿವರಾಗಿಯೂ ಕಾರ್ಯನಿರ್ವಹಿಸಿದ್ದರು. ನಾಲ್ಕು ಪಕ್ಷ ಮತ್ತು ನಾಲ್ಕು ಸದನಗಳಾದ ವಿಧಾನಸಭೆ, ವಿಧಾನಪರಿಷತ್, ಲೋಕಸಭೆ ಹಾಗೂ ರಾಜ್ಯಸಭೆಯ ಸದಸ್ಯರಾಗಿ ಕಾರ್ಯನಿರ್ವಹಿಸಿದ ಅಪರೂಪದ ಸಾಧನೆ ಮಾಡಿದ್ದರು. ಹೀಗೆ ಕಾರ್ಯ ನಿರ್ವಹಿಸಿದ್ದರೂ ಮಾಜಿ ಪ್ರಧಾನಿ ಇಂದಿರಾಗಾಂಧಿ ಅವರಿಗಾಗಿ ತಮ್ಮ ಸಂಸತ್ ಸ್ಥಾನಕ್ಕೆ ರಾಜೀನಾಮೆ ನೀಡಿದ್ದು ಚಂದ್ರೇಗೌಡರ ರಾಜಕೀಯ ಜೀವನದಲ್ಲಿ ಮಹತ್ವದ ಘಟ್ಟವಾಗಿತ್ತು.

ಕಾಫಿನಾಡು ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನ ದಾರದಹಳ್ಳಿಯಲ್ಲಿ 1936ರ ಆಗಸ್ಟ್ 26ರಂದು ಡಿ.ಎ.ಭೈರೇಗೌಡ ಮತ್ತು ಪುಟ್ಟಮ್ಮ ದಂಪತಿ ಪುತ್ರನಾಗಿ ಚಂದ್ರೇಗೌಡ ಜನಿಸಿದ್ದರು. ಹುಟ್ಟೂರಿನಲ್ಲೇ ಪ್ರಾಥಮಿಕ ಶಿಕ್ಷಣ ಪಡೆದ ಅವರು ಬೆಂಗಳೂರಿನ ರೇಣುಕಾಚಾರ್ಯ ಕಾಲೇಜಿನಲ್ಲಿ ತಮ್ಮ ಬಿಎಸ್‌ಸಿ ಶಿಕ್ಷಣವನ್ನು ಮತ್ತು ಬೆಳಗಾವಿಯ ಆರ್‌ಎಲ್ ಕಾನೂನು ಕಾಲೇಜಿನಲ್ಲಿ ಎಲ್‌ಎಲ್‌ಬಿ ಪದವಿ ಪಡೆದಿದ್ದರು. ವಿದ್ಯಾಭ್ಯಾಸದ ಬಳಿಕ 1966ರ ಮೇ 22 ರಂದು ಪೂರ್ಣ ಅವರೊಂದಿಗೆ ವಿವಾಹವಾಯಿತು. ಅವರಿಗೆ ನಾಲ್ಕು ಜನ ಹೆಣ್ಣು ಮಕ್ಕಳಿದ್ದಾರೆ. ಕಾಲೇಜು ದಿನಗಳಲ್ಲಿ ರಾಜಕೀಯ ಕ್ಷೇತ್ರದ ಹಾದಿ ತುಳಿದಿದ್ದ ಅವರು, ಮೊದಲು ರೇಣುಕಾಚಾರ್ಯ ಕಾಲೇಜು ವಿದ್ಯಾರ್ಥಿಗಳ ಸಂಘದ ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದರು. ನಂತರ ಆರ್‌ಎಲ್ ಕಾಲೇಜಿನಲ್ಲಿದ್ದಾಗ ಕಾಲೇಜಿನ ▶ 9ನೇ ಪುಟಕ್ಕೆ

ಕೊನೆವರೆಗೂ ಸನಾತನ ಧರ್ಮ ವಿರೋಧಿಸುತ್ತಲೇ ಇರುತ್ತೇನೆ

ಸಚಿವ ಉದಯನಿಧಿ ಸ್ಟಾಲಿನ್ ಸಮರ್ಥನೆ



ಚೆನ್ನೈ: ಕೊನೆವರೆಗೂ ಸನಾತನ ಧರ್ಮ ವಿರೋಧಿಸುತ್ತೇನೆ ಎಂದು ತಮಿಳುನಾಡು ಸಚಿವ ಮತ್ತು ಡಿಎಂಕೆ ನಾಯಕ ಉದಯನಿಧಿ ಸ್ಟಾಲಿನ್ ಮತ್ತೆ ತಮ್ಮ ನಿಲುವನ್ನು ಸಮರ್ಥಿಸಿಕೊಂಡಿದ್ದಾರೆ.

ಸನಾತನ ಧರ್ಮವನ್ನು 'ಡೆಂಗ್ಯೂ' ಮತ್ತು 'ಮಲೇರಿಯಾ'ಗೆ ಹೋಲಿಸಿದ್ದ ಉದಯನಿಧಿ ಸ್ಟಾಲಿನ್, ತಾನು ಯಾವುದೇ ತಪ್ಪು ಹೇಳಿಕೆ ನೀಡಿಲ್ಲ ಎಂದಿದ್ದರು. ತಮ್ಮ ಹೇಳಿಕೆಗೆ ಸಂಬಂಧಿಸಿದಂತೆ ಕಾನೂನು ಪರಿಣಾಮ ಎದುರಿಸಲು ಸಿದ್ಧ ಎಂದು ಹೇಳಿದ್ದರು. ನಾನೇನೂ ತಪ್ಪಾಗಿ ಹೇಳಿಲ್ಲ. ನಾನು ಹೇಳಿದ್ದು ಸರಿ, ಅದನ್ನು ಕಾನೂನಾತ್ಮಕವಾಗಿ ಎದುರಿಸುತ್ತೇನೆ. ನನ್ನ ಹೇಳಿಕೆಯನ್ನು ಬದಲಾಯಿಸುವುದಿಲ್ಲ. ನನ್ನ ಸಿದ್ಧಾಂತವನ್ನು ಮಾತನಾಡಿದ್ದೇನೆ. ಅಂಬೇಡ್ಕರ್, ಪೆರಿಯಾರ್ ಹೇಳಿದ್ದಕ್ಕಿಂತ ಹೆಚ್ಚಾಗಿ ಮಾತನಾಡಿಲ್ಲ. ನಾನು ಎಂಎಲ್ಎ ಆಗಬಹುದು, ಮಂತ್ರಿಯಾಗಬಹುದು ಅಥವಾ ಯುವ ಘಟಕದ ಕಾರ್ಯದರ್ಶಿಯಾಗಿ ನಾಳೆ ನಾನು ಇರಬಹುದು. ಆದರೆ ಮನುಷ್ಯನಾಗಿರುವುದು ಹೆಚ್ಚು ಮುಖ್ಯ ಎಂದು ತಿಳಿಸಿದ್ದಾರೆ.

ನಾವು ಹಲವಾರು ವರ್ಷಗಳಿಂದ ಸನಾತನದ ಬಗ್ಗೆ ಮಾತನಾಡುತ್ತಿದ್ದೇವೆ. ಇದು (ಸನಾತನ) ನೂರಾರು ವರ್ಷಗಳ ಸಮಸ್ಯೆಯಾಗಿದೆ. ನಾವು ಇದನ್ನು ಕೊನೆವರೆಗೂ ವಿರೋಧಿಸುತ್ತೇವೆ ಎಂದು ಸ್ಪಷ್ಟಪಡಿಸಿದ್ದಾರೆ. ಸೆಪ್ಟೆಂಬರ್‌ನಲ್ಲಿ ಮಾತನಾಡಿದ್ದ ಉದಯನಿಧಿ ಸ್ಟಾಲಿನ್, ಸನಾತನ ಧರ್ಮದ ನಿರ್ಮೂಲನೆ ಆಗಬೇಕು. ಅದು ಸಾಮಾಜಿಕ ನ್ಯಾಯ ಮತ್ತು ಸಮಾನತೆಗೆ ವಿರುದ್ಧವಾಗಿದೆ ಎಂದು ಕರೆ ನೀಡಿದ್ದರು.



8ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಅಂಗವಾಗಿ ಟಿ.ನರಸೀಪುರ ತಾಲೂಕಿನ ಸೋಸಲೆ ಗ್ರಾಪಂ ವ್ಯಾಪ್ತಿಯ ವ್ಯಾಸರಾಜಪುರದಲ್ಲಿ ಚೈತನ್ಯ ಚಾರಿಟಬಲ್ ಟ್ರಸ್ಟ್ ಹಾಗೂ ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರದ ವತಿಯಿಂದ ಉಚಿತ ಆರೋಗ್ಯ ತಪಾಸಣೆ ಶಿಬಿರ ನಡೆಯಿತು. ಶಿಬಿರವನ್ನು ಡಾ.ಗುರು ಬಸವರಾಜು ಹಾಗೂ ಸಮಾಜ ಸೇವಕ ಡಾ.ಮಹೇಂದ್ರ ಸಿಂಗ್ ಕಾಳಪ್ಪ ಉದ್ಘಾಟಿಸಿದರು. ಇದೇ ವೇಳೆ ಶಿಬಿರಕ್ಕೆ ಡಾ.ಮಹೇಂದ್ರ ಸಿಂಗ್ ಕಾಳಪ್ಪ ಲಕ್ಷ ರೂ. ಮೌಲ್ಯದ ಔಷಧಿಗಳನ್ನು ವಿತರಿಸಿದರು. ಶಿಬಿರದಲ್ಲಿ ಟ್ರಸ್ಟ್‌ನ ಸಿಸ್ಟರ್‌ಗಳಾದ ಜುಬಿ, ಜೈನ್, ತೆರೆಸ್, ಅನು, ಡಾ.ಜೀವರ್ಗಿಸ್, ಉಷಾ, ತಾಪಂ ಸದಸ್ಯ ರಂಗಸ್ವಾಮಿ, ಗ್ರಾಪಂ ಅಧ್ಯಕ್ಷೆ ಚಾಂದಿನಿ, ಟ್ರಸ್ಟ್ ನಿರ್ದೇಶಕ ಡಾ.ಸದಾನಂದ ಪರಗುಂಟೆ, ಸಹಾಯಕ ನಿರ್ದೇಶಕ ಡಾ.ಲಕ್ಷ್ಮೀನಾರಾಯಣ ಶೆಣೈ ಇನ್ನಿತರರಿದ್ದರು.

ಮೈಸೂರು ಯೂತ್ ಫೌಂಡೇಶನ್‌ನಿಂದ ರಕ್ತದಾನ ಶಿಬಿರ



ಮೈಸೂರು, ನ. 7– ನಗರದ ಯೂತ್ ಫೌಂಡೇಶನ್‌ನಿಂದ ಬಾಡಿ ಝೋನ್ ಜಿಮ್ ಆವರಣದಲ್ಲಿ ರಕ್ತದಾನ ಶಿಬಿರವನ್ನು ಏರ್ಪಡಿಸಲಾಗಿತ್ತು. ಕಾರ್ಯಕ್ರಮವನ್ನು ಕೆ.ಆರ್.ಪೊಲೀಸ್ ಠಾಣೆ ಮುಖ್ಯ ಪೊಲೀಸ್ ಅಧಿಕಾರಿ ನಾಗೇಗೌಡ ಉದ್ಘಾಟಿಸಿದರು.

ಮುಖ್ಯ ಅತಿಥಿಗಳಾಗಿ ಪ್ರಖ್ಯಾತ ವೈದ್ಯರಾದ ಎನ್.ರವಿಶಂಕರ್ ಹಾಗೂ ಜೆ.ಶಿವಾನಂದ ಆಗಮಿಸಿದ್ದರು. ಜೀವಧಾರ ರಕ್ತ ನಿಧಿಯ ಮುಖ್ಯ ವೈದ್ಯೆ ಡಾ.ಕೃತಿಕಾ ಸಹಯೋಗ ನೀಡಿದರು. ಕಾರ್ಯಕ್ರಮದಲ್ಲಿ ಬಸವಣ್ಣ, ಡಾ.ಅಂಶು, ಡಾ.ಸಹನಾ ಉಪಸ್ಥಿತರಿದ್ದರು. 'ಮೈಸೂರು ಯೂತ್ ಫೌಂಡೇಶನ್'ನ ಅಧ್ಯಕ್ಷ ಮಧು ಸಿ. ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಸಂಘದ ಸದಸ್ಯರಾದ ಕೆ.ಧ್ರುವಕುಮಾರ್ (ರೈಲ್ವೆ), ಹರೀಶ, ಮಲ್ಲೇಶ್, ಗಿರೀಶ, ಸಂತೋಷ್ ಎಂ.ಸಿ., ಶ್ರೀನಿವಾಸ (ಬಿ.ಇ.ಎಂ.ಎಲ್.), ಮಹೇಶ್, ಸುಹಾಸ್, ರವಿಕುಮಾರ್ ಮತ್ತಿತರರು ಭಾಗವಹಿಸಿದ್ದರು.




ಮೈಸೂರಿನ ಬೋಗಾದಿಯ ಶಾರದಾನಗರ ರೈಲ್ವೆ ಬಡಾವಣೆಯಲ್ಲಿರುವ ಶರಣು ವಿಶ್ವವಚನ ಫೌಂಡೇಷನ್ ಕಚೇರಿ ಶರಣುಕುಟೀರಕ್ಕೆ ಭೇಟಿ ನೀಡಿದ ಶ್ರೀ ಮಲ್ಲಿಕಾರ್ಜುನಸ್ವಾಮಿಗಳು, ನಂದೀಶಸ್ವಾಮಿಗಳನ್ನು ಗೌರವಿಸಲಾಯಿತು. ಶರಣು ವಿಶ್ವವಚನ ಫೌಂಡೇಷನ್ ಸಂಸ್ಥಾಪಕರಾದ ವಚನ ಕುಮಾರಸ್ವಾಮಿ, ರೂಪ ಕುಮಾರಸ್ವಾಮಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ವ್ಯೋಮ ಮೂರುತಿ ಅಲ್ಲಮ, ಜಗದ ನಂಟ ಕೃತಿ ಬಿಡುಗಡೆ

ಮೈಸೂರು, ನ.7– ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ವತಿಯಿಂದ ಡಾ.ಚಂದ್ರಶೇಖರಯ್ಯ ಅವರು ರಚಿಸಿರುವ 'ವ್ಯೋಮ ಮೂರುತಿ ಅಲ್ಲಮ' ಮತ್ತು 'ಜಗದ ನಂಟ' ಪುಸ್ತಕ ಲೋಕಾರ್ಪಣೆ ಕಾರ್ಯಕ್ರಮವನ್ನು ನ.12ರಂದು ಏರ್ಪಡಿಸಲಾಗಿದೆ.

ಅಂದು ಬೆಳಗ್ಗೆ 11 ಗಂಟೆಗೆ ಜೆಎಸ್‌ಎಸ್ ಆಸ್ಪತ್ರೆ ಆವರಣದಲ್ಲಿರುವ ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಭವನದಲ್ಲಿ ಕಾರ್ಯಕ್ರಮ ಆಯೋಜಿಸಿದ್ದು, ಸುತ್ತೂರು ಕ್ಷೇತ್ರದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ. ಶ್ರೀ ಕುಂದೂರು ಮಠದ ಡಾ.ಶ್ರೀ ಶರತ್‌ಚಂದ್ರ ಸ್ವಾಮೀಜಿ ಪುಸ್ತಕ ಲೋಕಾರ್ಪಣೆಗೊಳಿಸಲಿದ್ದಾರೆ. ವ್ಯೋಮ ಮೂರುತಿ ಅಲ್ಲಮ ಪುಸ್ತಕ ಕುರಿತು ಕನ್ನಡ ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷ ಡಾ.ನಂದೀಶ್ ಹಂಚೆ ಹಾಗೂ ಜಗದ ನಂಟ ಪುಸ್ತಕ ಕುರಿತು ಮಹಾರಾಣಿ ಮಹಿಳಾ ಕಲಾ ಕಾಲೇಜಿನ ಡಾ.ಬಿ. ವಸಂತಕುಮಾರ್ ಮಾತನಾಡಲಿದ್ದಾರೆ. ಕಾರ್ಯಕ್ರಮದಲ್ಲಿ ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಜೆಎಸ್‌ಎಸ್ ನಿವೃತ್ತ ಪ್ರಾಂಶುಪಾಲ ಡಾ.ಚಂದ್ರಶೇಖರಯ್ಯ, ಕನ್ನಡ ಸಾಹಿತ್ಯ ಕಲಾಕೂಟದ ಅಧ್ಯಕ್ಷ ಎಂ.ಚಂದ್ರಶೇಖರ್ ಸೇರಿದಂತೆ ಮತ್ತಿತರರು ಉಪಸ್ಥಿತರಿರಲಿದ್ದಾರೆ ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

ನಿಜದನಿ ಸಂಪಾದಕ ಶಾಂತರಾಜು ಇನ್ನಿಲ್ಲ



ಮೈಸೂರು, ನ.7(ಆರ್‌ಕೆ)–ಮೈಸೂರಿನ ನಿಜದನಿ ಕನ್ನಡ ದಿನಪತ್ರಿಕೆ ಸಂಪಾದಕ, ಶ್ರೀರಾಂಪುರದ ಎಂಸಿಡಿಎಸ್ ಬಡಾವಣೆ ನಿವಾಸಿ ಶಾಂತರಾಜು (68) ಮಂಗಳವಾರ ನಿಧನರಾದರು. ಅವರು ಪತ್ನಿ ಎಸ್.ಶಶಿರೇಖಾ, ಪುತ್ರ ಎಸ್.ಸುನೀಲ್‌ಕುಮಾರ್, ಪುತ್ರಿ ಎಸ್.ಮೌನಶ್ರೀ, ಅಪಾರ ಬಂಧು ಬಳಗ ಹಾಗೂ ಸ್ನೇಹಿತರನ್ನು ಅಗಲಿದ್ದಾರೆ. ಇಂದು ಮಧ್ಯಾಹ್ನ ಕೆ.ಜಿ.ಕೊಪ್ಪಲು ಬಳಿಯ ರುದ್ರಭೂಮಿಯಲ್ಲಿ ಶಾಂತರಾಜು ಅಂತ್ಯಕ್ರಿಯೆ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ. ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಸದಸ್ಯರಾಗಿದ್ದ ಶಾಂತರಾಜು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಸಂಪಾದಕರ ಸಂಘದ ಅಧ್ಯಕ್ಷರಾಗಿ, ದಲಿತ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾಗಿ ಹಾಗೂ ಸಿಂಧುವಳ್ಳಿಯ ಶ್ರೀ ಮಹದೇಶ್ವರ ವಿದ್ಯಾಸಂಸ್ಥೆ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸುತ್ತಿದ್ದರು. ಶಾಂತರಾಜು ಅವರ ನಿಧನಕ್ಕೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು, ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಪರವಾಗಿ ಅಧ್ಯಕ್ಷ ಎಸ್.ಟಿ.ರವಿಕುಮಾರ್ ತೀವ್ರ ಸಂತಾಪ ಸೂಚಿಸಿದ್ದಾರೆ.

ಪರಿಸರ ಸಮತೋಲನ ಕಾಯ್ದುಕೊಳ್ಳಲು ಪ್ರತಿಯೊಂದು ಪ್ರಾಣಿ–ಪಕ್ಷಿ ಸಂರಕ್ಷಣೆ ಅವಶ್ಯ

- ವೈಲ್ಡ್ ಲೈಫ್ ಕನ್ಸರ್ವೇಷನ್ ಮುಖ್ಯಸ್ಥ ರಾಜಕುಮಾರ್ ಡಿ.ಅರಸ್ ಅಭಿಮತ
- ರಣಹದ್ದುಗಳ ಸಂತತಿ ಸಂರಕ್ಷಣೆ ಅನಿವಾರ್ಯತೆ ಮನವರಿಕೆ



ಮೈಸೂರು, ನ.7(ಎಂಟಿವೈ)– ಪರಿಸರದಲ್ಲಿ ಸಮತೋಲನ ಕಾಯ್ದುಕೊಳ್ಳಲು ಪ್ರತಿಯೊಂದು ಪ್ರಾಣಿ–ಪಕ್ಷಿ ಸಂಕುಲದ ಸಂರಕ್ಷಣೆ ಅನಿವಾರ್ಯ ಎಂದು ವೈಲ್ಡ್ ಲೈಫ್ ಕನ್ಸರ್ವೇಷನ್ ಮುಖ್ಯಸ್ಥ ರಾಜಕುಮಾರ್ ಡಿ.ಅರಸ್ ಅಭಿಪ್ರಾಯಪಟ್ಟಿದ್ದಾರೆ.

ಹೆಚ್.ಡಿ.ಕೋಟೆ ತಾಲೂಕಿನ ಕೆಂಚನಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ಆಯೋಜಿಸಿದ್ದ ರಣಹದ್ದುಗಳ ಸಂರಕ್ಷಣೆ ಕುರಿತ ಜಾಗೃತಿ ಕಾರ್ಯಕ್ರಮದಲ್ಲಿ, ರಣಹದ್ದುಗಳ ಸಂತತಿ ಸಂರಕ್ಷಣೆಯ ಮಹತ್ವ ಕುರಿತಂತೆ ಮಾತನಾಡಿದ ಅವರು, ಅರಣ್ಯ ಸಂಪತ್ತಿನ ಸಂರಕ್ಷಣೆಯ ಜವಾಬ್ದಾರಿ ಎಲ್ಲರ ಮೇಲಿದೆ. ಪ್ರತಿಯೊಂದು ಪ್ರಾಣಿ, ಪಕ್ಷಿ ಹಾಗೂ ಸಸ್ಯ ಸಂಪತ್ತಿನ ಸಂರಕ್ಷಣೆ ಅಗತ್ಯವಾಗಿದೆ. ಪರಿಸರದಲ್ಲಿರುವ ಕೀಟಗಳು ತನ್ನದೇ ಆದ ಕೊಡುಗೆ ನೀಡುತ್ತವೆ. ಈ ಹಿನ್ನೆಲೆಯಲ್ಲಿ ಎಲ್ಲವನ್ನು ರಕ್ಷಣೆ ಮಾಡಿದರೆ ಮಾತ್ರ ಉತ್ತಮ ಸಮತೋಲನವುಳ್ಳ ಪರಿಸರ ಕಾಣಬಹುದಾಗಿದೆ ಎಂದರು.

ವನ್ಯಜೀವಿಗಳ ಸಂರಕ್ಷಣೆಗೆ ಹೆಚ್ಚಿನ ಮಹತ್ವ ನೀಡುವ ಅಗತ್ಯವಿದೆ. ಕಾಡು ಸಮೃದ್ಧವಾಗಿದ್ದರೆ, ನಾಡು ಸುಭಿಕ್ಷೆಯಿಂದ ಕೂಡಿರುತ್ತದೆ. ವನ್ಯಜೀವಿಗಳ ಆಹಾರ ಸರಪಳಿಯಲ್ಲಿ ಒಂದು ಕೊಂಡಿ ಕಳಚಿದರೂ ಏರುಪೇರಾಗುತ್ತದೆ. ಅರಣ್ಯ ಪ್ರದೇಶದ ವಾತಾವರಣ ಸ್ವಚ್ಛವಾಗಿಡುವ ಪ್ರಮುಖ ಜವಾಬ್ದಾರಿ ನಿಭಾಯಿಸುತ್ತಿದ್ದ ರಣಹದ್ದುಗಳ ಸಂಖ್ಯೆ ಗಣನೀಯ ಪ್ರಮಾಣದಲ್ಲಿ ಕ್ಷೀಣಿಸಿದೆ. ವನ್ಯಪ್ರಾಣಿಗಳು ಆಹಾರಕ್ಕಾಗಿ ಬೇಟೆಯಾಡುತ್ತಿದ್ದ ಇತರೆ ಪ್ರಾಣಿಗಳ ಕಳೇಬರ ಭಕ್ಷಿಸಿ, ಕಾಡಿನ ವಾತಾವರಣವನ್ನು ಸ್ವಚ್ಛವಾಗಿಡುತ್ತಿದ್ದ ರಣಹದ್ದುಗಳ ಸಂತತಿ ಇದೀಗ ಅಳಿವಿನಂಚಿಗೆ ದೂಡಲ್ಪಟ್ಟಿರುವುದು ವಿಷಾದಕರ ಸಂಗತಿ ಎಂದು ಅಭಿಪ್ರಾಯಪಟ್ಟರು.

ಈ ಹಿಂದೆ ದಕ್ಷಿಣ ಭಾರತದಲ್ಲಿ 4 ಜಾತಿಯ ರಣಹದ್ದುಗಳು ಹೆಚ್ಚಿನ ಸಂಖ್ಯೆಯಲ್ಲಿದ್ದವು. ಕೆಂಪುತಲೆ ರಣಹದ್ದು, ಬಿಳಿ ಬೆನ್ನಿನ ರಣಹದ್ದು, ಭಾರತೀಯ ರಣಹದ್ದು ಹಾಗೂ ಈಜಿಪ್ಟಿಯನ್ ರಣಹದ್ದುಗಳು. ಹಸು ಸೇರಿದಂತೆ ಜಾನುವಾರುಗಳಿಗೆ ನೀಡುತ್ತಿದ್ದ ನೋವು ನಿವಾರಕ ಔಷಧಿ 'ಡೈಕ್ಲೋಫಿನಾಕ್'ನಿಂದಾಗಿಯೇ ರಣಹದ್ದಿನ ಸಂತತಿಗೆ ಸಂಚಕಾರ ಬಂದೊದಗಿದೆ. ಸತ್ತ ವನ್ಯಜೀವಿಗಳ ಕಳೇಬರ ತಿಂದು ಎಲ್ಲ ರೀತಿಯ ವೈರಾಣು, ಕ್ರಿಮಿಗಳು ಹಾಗೂ ಸೂಕ್ಷ್ಮಾಣು ಜೀವಿಗಳನ್ನು ಜೀರ್ಣಿಸಿಕೊಂಡು ಪರಿಸರ ಸ್ವಚ್ಛತಾ ಕರ್ಮಿಯಾಗಿವೆ. ಡೈಕ್ಲೋಫಿನಾಕ್ ಔಷಧಿಯ ಅಂಶವುಳ್ಳ ಜಾನುವಾರುಗಳ ಕಳೇಬರ ಭಕ್ಷಿಸುತ್ತಿದ್ದ ರಣಹದ್ದುಗಳ ಸಂತತಿ ಈಗಾಗಲೇ ಶೇ.99 ರಷ್ಟು ನಾಶವಾಗಿದೆ. ಇದೀಗ ಶೇ.1ರಷ್ಟು ಇರುವ ರಣಹದ್ದುಗಳ ಸಂತತಿ ಕಾಪಾಡಿಕೊಳ್ಳಲೇಬೇಕಾಗಿದೆ. ರಣಹದ್ದುಗಳು ನಿಸರ್ಗ ಸಮತೋಲನ ಹಾಗೂ ಆರೋಗ್ಯಕರ ಪರಿಸರಕ್ಕಾಗಿ ಸಂರಕ್ಷಣೆ ಮಾಡುವುದು ನಮ್ಮೆಲ್ಲರ ಹೊಣೆಯಾಗಿದೆ ಎಂದರು.

ಪಕ್ಷಿಗಳ ಪ್ರಾಮುಖ್ಯತೆ, ಮಾನವ ಮತ್ತು ವನ್ಯಜೀವಿಗಳ ನಡುವಿನ ಸಂಬಂಧ, ಆಹಾರ ಸರಪಳಿ ಮತ್ತಿತರ ವಿಷಯಗಳ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಲಾಯಿತು. ಇದೇ ವೇಳೆ ಶಾಲಾ ಮಕ್ಕಳು ರಣಹದ್ದುಗಳ ಕುರಿತು ಚಿತ್ರಗಳನ್ನು ಬಿಡಿಸುವ ಮೂಲಕ ಗಮನ ಸೆಳೆದರು.

ಕಾರ್ಯಕ್ರಮದಲ್ಲಿ ಡಬ್ಲ್ಯೂ ಸಿಎಫ್‌ನ ಮಾರ್ಕ್‌ಸ್ಟೀವ್, ಜಗದೀಶ್, ವೀ ಟು ಸಾಫ್ಟ್ ಸಂಸ್ಥೆಯ ಕಾರ್ತಿಕೇಯನ್, ದೀಕ್ಷಿತ್, ಅನಘ, ದಿವ್ಯ, ಗೀತಾ, ಶಾಲಾ ದೈಹಿಕ ಶಿಕ್ಷಕ ಶಂಕರ ದುರ್ಗಾ ಪ್ರಸಾದ್, ರಾಜ ನಾಯಕ, ಅಣ್ಣಯ್ಯ ಸ್ವಾಮಿ ಮತ್ತಿತರರು ಹಾಜರಿದ್ದರು.

ಹೆಚ್.ಎನ್.ಗಿರೀಶ್‌ಗೆ ಎಜುಕೇಷನ್ ಎಕ್ಸಲೆನ್ಸ್ ಪ್ರಶಸ್ತಿ-2023 ಪ್ರದಾನ



ಇತ್ತೀಚೆಗೆ ಉತ್ತರ ಪ್ರದೇಶದ ನೋಯಿಡಾದಲ್ಲಿ ನಡೆದ ಜಿ.20 ಸಮಾವೇಶದಲ್ಲಿ ಜರುಗಿದ 4ನೇ ವಿಶ್ವ ಪರಿಸರ ಸಮ್ಮೇಳನದಲ್ಲಿ ಹುಣಸೂರು ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಜೀವಶಾಸ್ತ್ರ ಉಪನ್ಯಾಸಕ ಹೆಚ್.ಎನ್.ಗಿರೀಶ್ ಅವರಿಗೆ 'ಎಜುಕೇಷನ್ ಎಕ್ಸಲೆನ್ಸ್' ಪ್ರಶಸ್ತಿಯನ್ನು ರಾಷ್ಟ್ರೀಯ ಗಂಗಾ ಶುಚಿ ಅಭಿಯಾನದ ನಿರ್ದೇಶಕ ಜಿ.ಅಶೋಕ್‌ಕುಮಾರ್ ಪ್ರದಾನ ಮಾಡಿದರು. ಈ ವೇಳೆ ಭಾರತದ ನೀರಿನ ಮನುಷ್ಯ ರಾಜೇಂದ್ರ ಸಿಂಗ್, ಜಲಗ್ರಾಮ ಅಭಿಯಾನದ ಉಮಾಶಂಕರ್ ಪಾಂಡೆ, ಹಿರಿಯ ಪರಿಸರವಾದಿ ಅನಿಲ್‌ಕುಮಾರ ಜೋಷಿ ಹಾಗೂ ಸಮ್ಮೇಳನದ ಅಧ್ಯಕ್ಷ ಡಾ.ಜಿತೇಂದ್ರ ಸಿಂಗ್ ಉಪಸ್ಥಿತರಿದ್ದರು.

ವಿವಿಧ ಸೌಲಭ್ಯ ಒದಗಿಸಲು ಅರ್ಜಿ ಆಹ್ವಾನ

ಮೈಸೂರು,ನ.7–ಬನ್ನೂರು ಪುರಸಭಾ ವ್ಯಾಪ್ತಿಯಲ್ಲಿ ದೀನ ದಯಾಳ್ ಅಂತ್ಯೋದಯ ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ ಯೋಜನೆಯಡಿ 2023–24ನೇ ಸಾಲಿನ ಆರ್ಥಿಕ ಮತ್ತು ಭೌತಿಕ ಗುರಿಗೆ ಅನುಸಾರವಾಗಿ ಸ್ವ–ಸಹಾಯ ಸಂಘಗಳ ರಚನೆ, ಪ್ರದೇಶ ಮಟ್ಟದ ಒಕ್ಕೂಟ ರಚನೆ, ಎಸ್‌ಹೆಚ್‌ಜಿ ಬ್ಯಾಂಕ್ ಲಿಂಕೇಜ್ ಮತ್ತು ಎಸ್‌ಇಪಿ ವೈಯಕ್ತಿಕ ಸಾಲ ಸೌಲಭ್ಯ (Intrest Subsidy) ಯೋಜನೆಗೆ ಅರ್ಹ ಬಿಪಿಎಲ್ ಕುಟುಂಬದ ಸದಸ್ಯರಿಂದ ಅರ್ಜಿ ಆಹ್ವಾನಿಸಲಾಗಿದೆ. ಸೌಲಭ್ಯ ಪಡೆಯಲು ಇಚ್ಛಿಸುವವರು ಪುರಸಭಾ ಕಚೇರಿಯಲ್ಲಿ ಅರ್ಜಿಯನ್ನು ಪಡೆದು ಭರ್ತಿಮಾಡಿ ನ.29 ಸಂಜೆ 4.30ರೊಳಗೆ ಸಲ್ಲಿಸಬೇಕು. ಜಾತಿ ಮತ್ತು ದೃಢೀಕರಣ ಪತ್ರ, ಆಧಾರ್ ಕಾರ್ಡ್, ಭಾವಚಿತ್ರ ಬ್ಯಾಂಕ್ ಪಾಸ್ ಪುಸ್ತಕದ ಜೆರಾಕ್ಸ್ ಪ್ರತಿ, ನೋಟರಿ ಪ್ರಮಾಣ ಪತ್ರ, ಯೋಜನಾ ವರದಿ ಪ್ರತಿ ಹಾಗೂ ಉದ್ಯಮಶೀಲತಾ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು. ಮಾಹಿತಿಗಾಗಿ ಪುರಸಭೆಯ ಡೇ–ನಲ್ಮ್ ಶಾಖೆಯನ್ನು ಸಂಪರ್ಕಿಸುವಂತೆ ಪುರಸಭಾ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನ.15, ಭಗವಾನ್ ಬಿರ್ಸಾ ಮುಂಡಾ ಜಯಂತಿ

ಮೈಸೂರು,ನ.7(ಎಸ್‌ಬಿಡಿ)–ಪಡುವಾರಹಳ್ಳಿ ಸ್ನೇಹ ಬಳಗದ ವತಿಯಿಂದ ಭಾರತೀಯ ಬುಡಕಟ್ಟು ಸ್ವಾತಂತ್ರ್ಯ ಹೋರಾಟಗಾರ ಭಗವಾನ್ ಬಿರ್ಸಾ ಮುಂಡಾರವರ 148ನೇ ಜಯಂತಿಯನ್ನು ನ.15ರಂದು ಬೆಳಗ್ಗೆ 11ಕ್ಕೆ ಮೆಟ್ರೋಪೋಲ್ ವೃತ್ತದ ಬಳಿ ಆಚರಿಸಲಿದ್ದು, ಮಾಜಿ ಶಾಸಕ ಎಲ್.ನಾಗೇಂದ್ರ, ವಿದ್ಯಾವಿಕಾಸ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಕವೀಶ್ ಗೌಡ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ ಎಂದು ವಕೀಲ ಪಡುವಾರಹಳ್ಳಿ ಎಂ.ರಾಮಕೃಷ್ಣ ತಿಳಿಸಿದ್ದಾರೆ.

ಜಾಗತಿಕವಾಗಿ ಭಾರತದ ಕೀರ್ತಿ ಪತಾಕೆ ಹಾರಿಸಿದ ಮಹಾನ್ ವಿಜ್ಞಾನಿ ಸರ್ ಸಿ.ವಿ.ರಾಮನ್

ಮೈಸೂರಲ್ಲಿ ನೆನಪು–ನಮನ

ಮೈಸೂರು,ನ.7(ಎಸ್‌ಬಿಡಿ)– ನೊಬೆಲ್ ಪುರಸ್ಕೃತ ಖ್ಯಾತ ವಿಜ್ಞಾನಿ ಸರ್ ಸಿ.ವಿ. ರಾಮನ್ ಅವರು ಜಾಗತಿಕ ಮಟ್ಟದಲ್ಲಿ ಭಾರತದ ಕೀರ್ತಿ ಪತಾಕೆ ಹಾರಿಸಿದ್ದಾರೆ ಎಂದು ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ ಸಂಚಾಲಕ ಅನಂತರಾಮು ಬಣ್ಣಿಸಿದರು.

ಸರ್.ಸಿ.ವಿ.ರಾಮನ್ ಅವರ ಜನ್ಮದಿನಾಚರಣೆ ಅಂಗವಾಗಿ ಮೈಸೂರಿನ ವಿದ್ಯಾರಣ್ಯ ಟ್ರಸ್ಟ್‌ನಲ್ಲಿ ಮಂಗಳವಾರ ಆಯೋಜಿಸಿದ್ದ 'ಸರ್ ಸಿ.ವಿ.ರಾಮನ್ ಒಂದು ನೆನಪು' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿಜ್ಞಾನ ಕ್ಷೇತ್ರದಲ್ಲಿ ಸಿ.ವಿ.ರಾಮನ್ ಅವರ ಕೊಡುಗೆ ಅವಿಸ್ಮರಣೀಯ. ಸಂಶೋಧನೆ ಮೂಲಕ ವಿಶ್ವಕ್ಕೆ ಮಹತ್ವದ ಕೊಡುಗೆ ನೀಡಿರುವ ಇವರನ್ನು ನೊಬೆಲ್ ಪ್ರಶಸ್ತಿಯೊಂದಿಗೆ ಗೌರವಿಸಲಾಗಿದೆ. ಈ ಮೂಲಕ ಜಾಗತಿಕ ಮಟ್ಟದಲ್ಲಿ ದೇಶದ ಕೀರ್ತಿ ಪತಾಕೆ ಹಾರಿಸಿದ್ದಾರೆ. ಇವರ ಆದರ್ಶಗಳನ್ನು ವಿದ್ಯಾರ್ಥಿಗಳು ರೂಢಿಸಿಕೊಂಡರೆ ವಿಜ್ಞಾನ ಕ್ಷೇತ್ರದಲ್ಲಿ ಭಾರತ ಮತ್ತಷ್ಟು ಸಾಧನೆ ಮೆರೆಯಲಿದೆ ಎಂದು ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಮಾತನಾಡಿ, ಪ್ರಸಿದ್ಧ ವಿಜ್ಞಾನಿ ಸರ್ ಸಿ.ವಿ.ರಾಮನ್ ಅವರ ಸಂಶೋಧನಾ ಕ್ಷೇತ್ರದಲ್ಲಿನ ಸಾಧನೆ ಭಾರತದ ಹಿರಿಮೆ ಹೆಚ್ಚಿಸಿದೆ. ಅವರು ಇಡೀ ವಿಶ್ವಕ್ಕೆ ಬೆಳಕಿನ ಮಹತ್ವವನ್ನು ತೋರಿಸಿಕೊಟ್ಟಿದ್ದಾರೆ. ಕಡು ಬಡತನದ ಕುಟುಂಬದಲ್ಲಿ ಜನಿಸಿ, ಸರಕಾರಿ ಶಾಲೆಯಲ್ಲಿ ಓದಿ, ಜೀವಮಾನ ಸಾಧನೆ ಮಾಡಿದ್ದಾರೆ. ವಿಶ್ವ ವಿಜ್ಞಾನ ಭೂಪಟದಲ್ಲಿ ಭಾರತದ ಜೊತೆಗೆ ಕರ್ನಾಟಕವನ್ನೂ ಚಿತ್ರಿಸಿದ್ದಾರೆ. ಭೌತವಿಜ್ಞಾನ ಕ್ಷೇತ್ರದಲ್ಲಿನ ಅವರ ಸಂಶೋಧನೆ ರಾಮನ್ ಎಫೆಕ್ಟ್ ಎಂದೇ ಪ್ರಸಿದ್ಧವಾಗಿದೆ ಎಂದು ಬಣ್ಣಿಸಿದರು. ಕಾರ್ಯಕ್ರಮದಲ್ಲಿ ವಿದ್ಯಾರಣ್ಯ ಟ್ರಸ್ಟ್ ಅಧ್ಯಕ್ಷ ಜಿ.ವಿ.ರವಿಶಂಕರ್, ಅಖಿಲ ಭಾರತೀಯ ಗ್ರಾಹಕ ಪಂಚಾಯತ್‌ನ ಚಂದ್ರಶೇಖರ್, ವಿಕ್ರಂ ಅಯ್ಯಂಗಾರ್, ಚಕ್ರಪಾಣಿ, ಜಯಕುಮಾರ್ ಮತ್ತಿತರರಿದ್ದರು.



ಸರ್ ಸಿ.ವಿ.ರಾಮನ್ ಒಂದು ನೆನಪು' ಕಾರ್ಯಕ್ರಮದ ಉದ್ಘಾಟನಾ ಸಂದರ್ಭ

ಕೆಇಎ ಪರೀಕ್ಷಾ ಅಕ್ರಮದ ಕಿಂಗ್‌ಪಿನ್ ಆರ್.ಡಿ.ಪಾಟೀಲ್ ಪರಾರಿ

ಕಲಬುರಗಿ,ನ.7–ಕರ್ನಾಟಕ ಪರೀಕ್ಷಾ ಪ್ರಾಧಿಕಾರದ(ಕೆಇಎ) ನೇಮಕಾತಿ ಪರೀಕ್ಷೆಯಲ್ಲಿ ಬ್ಲೂಟೂತ್ ಬಳಸಿ ಪರೀಕ್ಷೆ ಬರೆಯಲು ಯತ್ನಿಸಿದ ಪ್ರಕರಣದ ಕಿಂಗ್‌ಪಿನ್ ಆರ್.ಡಿ.ಪಾಟೀಲ್ ನಗರದ ವಸತಿ ಸಮುಚ್ಚಯದಿಂದ ಸೋಮವಾರ ಪರಾರಿಯಾಗಿದ್ದು, ಆತ ಕಾಪೌಂಡ್ ಹಾರಿ ಪರಾರಿಯಾಗುವುದು ಸಿಸಿಟಿವಿಯಲ್ಲಿ ದಾಖಲಾಗಿದೆ.

ಕಲಬುರಗಿ ನಗರದ ಜೇವರ್ಗಿ ರಸ್ತೆಯಲ್ಲಿ ಇರುವ ವಸತಿ ಸಮುಚ್ಚಯ ಒಂದರಲ್ಲಿ ಅಡಗಿಕೊಂಡಿದ್ದ ಎಂಬ ಮಾಹಿತಿ ಲಭಿಸಿದ ಬೆನ್ನಲ್ಲಿಯೇ ಪೊಲೀಸರು ಅಲ್ಲಿಗೆ ತೆರಳಿದ್ದರು. ಪೊಲೀಸರು ಬರುತ್ತಿರುವುದನ್ನು ಗಮನಿಸಿದ ಆರ್.ಡಿ.ಪಾಟೀಲ್, ವಸತಿ ಸಮುಚ್ಚಯದ ಕಾಂಪೌಂಡ್ ಹಾರಿ ತಪ್ಪಿಸಿಕೊಂಡು ಹೋಗಿದ್ದಾನೆ. ಈ ದೃಶ್ಯಗಳು ಸಿಸಿಟಿವಿಯಲ್ಲಿ ಸೆರೆಯಾಗಿವೆ. ಇದೀಗ ಆತನ ಬಂಧನಕ್ಕೆ ಪೊಲೀಸರು ಕ್ರಮ ಕೈಗೊಂಡಿದ್ದಾರೆ. ವಸತಿ ಸಮುಚ್ಚಯ ಹಿಂಭಾಗದ ಕಾಂಪೌಂಡ್ ಮತ್ತು ಗೇಟ್ ಹತ್ತಿ ಇಳಿಯುವಾಗ ಕಾಲಿನಿಂದ ಬೂಟ್ ಕಳಚಿ ಬಿದ್ದಿದೆ. ಬೂಟ್ ಎತ್ತಿಕೊಡುವಂತೆ ಅಲ್ಲಿಯೇ ಇದ್ದ ಮಹಿಳೆಯೊಬ್ಬರಿಗೆ ಕೇಳಿದ್ದಾನೆ. ಮಹಿಳೆ ಅದಕ್ಕೆ ಸ್ಪಂದಿಸದೆ ಸ್ವಚ್ಛತೆಯಲ್ಲಿ ನಿರತವಾಗಿದ್ದು, ಮತ್ತೊಬ್ಬ ಮಹಿಳೆ ಬರುತ್ತಿದ್ದಂತೆ ಆರ್.ಡಿ.ಪಾಟೀಲ ಅಲ್ಲಿಂದ ಕಾಲ್ಕಿತ್ತಿರುವ ವಿಡಿಯೋ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿವೆ. ಈ ಬೆಳವಣಿಗೆ ಸೋಮವಾರ ಮಧ್ಯಾಹ್ನ 1 ಗಂಟೆ ವೇಳೆಗೆ ನಡೆದಿದೆ.



ಆರ್.ಡಿ.ಪಾಟೀಲ್

ಈ ಬಗ್ಗೆ ಪ್ರತಿಕ್ರಿಯೆ ನೀಡಿದ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ಕಳೆದ ಒಂದು ವಾರದಿಂದ ಆರ್.ಡಿ.ಪಾಟೀಲಗಾಗಿ ಹುಡುಕಾಟ ನಡೆಸಲಾಗುತ್ತಿದೆ. ಈಗಾಗಲೇ 20 ಆರೋಪಿಗಳ ಬಂಧನವಾಗಿದೆ. ಆರ್.ಡಿ.ಪಾಟೀಲ ಇರುವಿಕೆಯ ಬಗ್ಗೆ ಖಚಿತ ಮಾಹಿತಿ ಇದ್ದರೂ ಅಧಿಕಾರಿಗಳು ಉದ್ದೇಶಪೂರ್ವಕವಾಗಿ, ಬೇಜವಾಬ್ದಾರಿ ತೋರಿದ್ದು ಕಂಡುಬಂದರೆ ಕ್ರಮ ತೆಗೆದುಕೊಳ್ಳಲಾಗುವುದು. ರಾಜ್ಯದ ಕಲಬುರಗಿ, ಯಾದಗಿರಿ ಮಾತ್ರವಲ್ಲದೆ ಹುಬ್ಬಳ್ಳಿ, ವಿಜಯಪುರ, ಬೆಂಗಳೂರಿನಲ್ಲಿಯೂ ಅಕ್ರಮ ನಡೆದಿರುವ ಬಗ್ಗೆ ತನಿಖೆ ನಡೆಯುತ್ತಿದೆ. ಪೊಲೀಸ್ ತನಿಖೆಯಿಂದ ಏನು ಮಾಹಿತಿ ಬರುತ್ತದೆಯೋ ನೋಡಿಕೊಂಡು ಸಿಐಡಿಗೆ ಒಪ್ಪಿಸಬೇಕೇ, ಬೇಡವೇ ಎಂಬ ತೀರ್ಮಾನವನ್ನು ಗೃಹ ಸಚಿವರು ತೆಗೆದುಕೊಳ್ಳುತ್ತಾರೆ. ನಾವು ಅವರ ತೀರ್ಮಾನಕ್ಕೆ ಬದ್ಧರಾಗುತ್ತೇವೆ ಎಂದು ತಿಳಿಸಿದರು.

ಏನಿದು ಪ್ರಕರಣ?

ಅ.28ರಂದು ಕೆಇಎ ನೇಮಕಾತಿ ಪರೀಕ್ಷೆ ನಡೆಯಿತು. ಅಫಜಲಪುರ, ಕಲಬುರಗಿಯ ಕೆಲವು ಪರೀಕ್ಷಾ ಕೇಂದ್ರದಲ್ಲಿ ಅಭ್ಯರ್ಥಿಗಳು ಅಕ್ರಮವಾಗಿ ಬ್ಲೂಟೂತ್ ಬಳಸಲು ಯತ್ನಿಸಿ ಬಂಧಿತರಾಗಿದ್ದರು. ಈ ಅಭ್ಯರ್ಥಿಗಳಿಗೆ ಬ್ಲೂಟೂತ್ ಪೂರೈಸಲು ಆರ್.ಡಿ.ಪಾಟೀಲ್ ಹಣ ಪಡೆದಿದ್ದ ಎನ್ನಲಾಗಿದ್ದು, ನ.19ರಂದು ನಡೆಯುವ ಪೊಲೀಸ್ ಕಾನ್‌ಸ್ಟೇಬಲ್ ಪರೀಕ್ಷೆಗೂ ಅಭ್ಯರ್ಥಿಗಳೊಂದಿಗೆ ಈತ ಒಪ್ಪಂದ ಮಾಡಿಕೊಂಡಿದ್ದ. ಅಭ್ಯರ್ಥಿಗಳಿಗೆ ಬ್ಲೂಟೂತ್ ವ್ಯವಸ್ಥೆ ಮಾಡಿಕೊಡಲು ಕಲಬುರಗಿ ನಗರಕ್ಕೆ ಬಂದು ವಸತಿ ಸಮುಚ್ಚಯ ಒಂದರಲ್ಲಿ ತಂಗಿದ್ದ. ಬ್ಲೂಟೂತ್ ಪ್ರಕರಣ ಹೊರಬರುತ್ತಿದ್ದಂತೆ ಆರ್.ಡಿ.ಪಾಟೀಲ ತಲೆಮರೆಸಿಕೊಂಡಿದ್ದ.


ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

8.11.2023 ಬುಧವಾರ, ಮಳೆ ನಕ್ಷತ್ರ: ವಿಶಾಖ, 07.11.2023ರಿಂದ 19.11.2023 ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಅಶ್ವಯುಜ ಮಾಸ, ಕೃಷ್ಣ ಪಕ್ಷ, ತಿಥಿ: ದಶಮಿ, ನಕ್ಷತ್ರ: ಪುಬ್ಬ, ರಾಹುಕಾಲ: ಮಧ್ಯಾಹ್ನ 12ರಿಂದ 1.30ರವರೆಗೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಗಳಿಕೆ–ಉಳಿಕೆ–ಹೂಡಿಕೆ–ಹಣಕಾಸಿನ ಮಾಹಿತಿಯ ಬಾನುಲಿ ಸರಣಿ, ಪ್ರಸ್ತುತಿ–ಮೂಕನಹಳ್ಳಿ ರಂಗಸ್ವಾಮಿ, 6.40 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ–ಜಿ.ಕೆ.ರವೀಂದ್ರಕುಮಾರ್, 6.45 ಕಲ್ಯಾಣ ಕರೆದಿದೆ ಕಲ್ಯಾಣ–ಪ್ರಾಯೋಜಿತ ಕಾರ್ಯಕ್ರಮ, 6.50 ರೈತರಿಗೆ ಸಲಹೆ, 7.15 ಆರೋಗ್ಯ ವಾಣಿ–ಪ್ರಾಯೋಜಿತ ಕಾರ್ಯಕ್ರಮ, 9.00 ವೃತ್ತಿ ಮಾರ್ಗದರ್ಶನ–ಕ್ಯಾಂಪಸ್ ಇಂಟರ್‌ವ್ಯೂ, ಟ್ರೈನಿಂಗ್ ಮತ್ತು ಪ್ಲೇಸ್‌ಮೆಂಟ್ ವಿಧಾನ ಕುರಿತು ಡಾ.ಪಿ.ಪ್ರದೀಪ್‌ಕುಮಾರ್ ಅವರೊಂದಿಗೆ ಮಾತುಕತೆ, 10.00 ಬಾಲಚಂದ್ರ ನೋಕೋಡ್–ಗಾಯನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30 ದೇವರ ನಾಮ–ಶೇಷಗೋಪಾಲನ್ 12.45 ಕನಕಗೀತ ಗಾಂಭೀರ್ಯ, ಬಾನುಲಿ ಸರಣಿ. ರಚನೆ–ಡಾ.ಶ್ರೀಧರ ಹೆಗಡೆ ಭದ್ರನ್, ಪ್ರಸ್ತುತಿ–ದಿವಾಕರ ಹೆಗಡೆ, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 3.00 ಡಾ.ಬಿ.ದೇವೇಂದ್ರಪ್ಪ–ಹಾಡುಗಾರಿಕೆ, 4.00 ಮಹಿಳಾರಂಗ–ಸ್ತ್ರೀ ಚೇತನ, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಕಿಸಾನ್‌ವಾಣಿ–ಸಾವಯವ ಕೃಷಿಗೆ ಸರ್ಕಾರದ ಬೆಂಬಲ ಹಾಗೂ ಇಲಾಖೆ ಸವಲತ್ತುಗಳು ಕುರಿತು ಡಾ.ಚಂದ್ರಶೇಖರ್ ಅವರೊಂದಿಗೆ ಸಂದರ್ಶನ, 9.30 ಹಿಂದೂಸ್ಥಾನಿ ಸಂಗೀತ–ಪಂಡಿತ್ ಅಶೋಕ್ ಹುಗ್ಗಣ್ಣನವರ್, 10.00 ಜನಪದ ಸಂಗೀತ, 10.30 ಸವಿನೆನಪು

■ **ರಾಮ್‌ಸನ್ಸ್ ಬೊಂಬೆ ಮನೆ :** ದಸರಾ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ರಿಂದ ಸಂಜೆ 7 ಗಂಟೆವರೆಗೆ.

■ **ಶ್ರೀ ನಟರಾಜ ಪ್ರತಿಷ್ಠಾನ, ಶ್ರೀ ನಟರಾಜ ಆಂಗ್ಲ ಮಾಧ್ಯಮ ಶಾಲೆ:** ಕನ್ನಡ ರಾಜ್ಯೋತ್ಸವ ಪ್ರಯುಕ್ತ ಅಂತರ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಕನ್ನಡ ಪ್ರಬಂಧ ಸ್ಪರ್ಧೆ, ಸಾನ್ನಿಧ್ಯ: ಶ್ರೀ ನಟರಾಜ ಪ್ರತಿಷ್ಠಾನ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಉದ್ಘಾಟನೆ: ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಅಧ್ಯಕ್ಷತೆ: ಶ್ರೀ ನಟರಾಜ ಪ್ರತಿಷ್ಠಾನ ವಿಶೇಷಾಧಿಕಾರಿ ಪ್ರೊ.ಶಿವರಾಜಪ್ಪ, ಉಪಸ್ಥಿತರು: ಶ್ರೀ ನಟರಾಜ ಆಂಗ್ಲ ಮಾಧ್ಯಮ ಪ್ರೌಢಶಾಲೆ ಮುಖ್ಯೋಪಾಧ್ಯಾಯ ದಿನೇಶ್, ಸ್ಥಳ: ಶ್ರೀ ನಟರಾಜ ಸಭಾ ಭವನ, ಬೆಳಗ್ಗೆ 10.30ಕ್ಕೆ.

■ **ಕರ್ನಾಟಕ ದಲಿತ ಸಂಘರ್ಷ ಸಮಿತಿ :** ಜಿಲ್ಲಾ ಮಟ್ಟದ ಸರ್ವ ಸದಸ್ಯರ ಸಭೆ, ಉಪಸ್ಥಿತರು : ರಾಜ್ಯ ಸಂಘಟನಾ ಸಂಚಾಲಕ ಅಂಬುಗಾ ಮಲ್ಲೇಶ್, ವಿಭಾಗೀಯ ಸಂಚಾಲಕ ಕೆ. ಸಿದ್ದರಾಜು ದೊಡ್ಡಿಂದುವಾಡಿ, ಜಿಲ್ಲಾ ಸಂಚಾಲಕ ಬನ್ನಹಳ್ಳಿ ಸೋಮಣ್ಣ, ಸ್ಥಳ: ವಿಶ್ವ ಮೈತ್ರಿ ಬುದ್ಧ ವಿಹಾರ, ಅಶೋಕ ವೃತ್ತ, ಬೆಳಗ್ಗೆ 11ಕ್ಕೆ.


■ **ಮೈಸೂರು ಜಿಲ್ಲಾ ಪತ್ರಕರ್ತರ ಸಂಘ:** ದತ್ತಿ ಪ್ರಶಸ್ತಿ ಪ್ರದಾನ, ಗೌರವ ಡಾಕ್ಟರೇಟ್ ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಿಗೆ ಅಭಿನಂದನೆ, ಪ್ರಶಸ್ತಿ ಪ್ರದಾನ: ಮಾಜಿ ಸಚಿವ ಎಸ್.ಟಿ.ಸೋಮಶೇಖರ್, ಮುಖ್ಯ ಅತಿಥಿಗಳು: ಮಾಜಿ ಮುಡಾ ಅಧ್ಯಕ್ಷ ಹೆಚ್.ವಿ.ರಾಜೀವ್, ವಿಜಯ ಕರ್ನಾಟಕ ಸ್ಥಾನಿಕ ಸಂಪಾದಕ ಐತಿಚಂಡ ರಮೇಶ್ ಉತ್ತಪ್ಪ, ಅಧ್ಯಕ್ಷತೆ: ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಟಿ. ರವಿಕುಮಾರ್, ಅಭಿನಂದನೆ: ಮೈಸೂರು ವಿವಿ ಗೌರವ ಡಾಕ್ಟರೇಟ್ ಪುರಸ್ಕೃತರಾದ ಡಾ. ಕೆ.ಬಿ.ಗಣಪತಿ, ದತ್ತಿ ಪ್ರಶಸ್ತಿ ಪುರಸ್ಕೃತರು: ಹಿರಿಯ ವರದಿಗಾರ ರಾಜಕುಮಾರ್ ಭಾವಸಾರ್, ಛಾಯಾಗ್ರಾಹಕ ಲಕ್ಷ್ಮೀನಾರಾಯಣ ಯಾದವ್, ಸ್ಥಳ: ಮೈಸೂರು ಜಿಲ್ಲಾ ಪತ್ರಕರ್ತರ ಸಂಘ, ಬೆಳಗ್ಗೆ 11ಕ್ಕೆ.

■ **ದಿ ಆರ್ಟ್ ಆಫ್ ಲಿವಿಂಗ್ (ವೇದ ವಿಜ್ಞಾನ ಮಹಾ ವಿದ್ಯಾಪೀಠ):** ಶ್ರೀ ಶ್ರೀ ರವಿಶಂಕರ್ ಗುರೂಜಿಯವರ ಆರ್ಟ್ ಆಫ್ ಲಿವಿಂಗ್ ಶಿಬಿರ, ಆನಂದದ ಅನುಭೂತಿ ಶಿಬಿರ, ಸ್ಥಳ: ಆರ್ಟ್ ಆಫ್ ಲಿವಿಂಗ್ ಆಶ್ರಮ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 6ರಿಂದ 8.30, ಸಂಜೆ 6ರಿಂದ 8.30ರವರೆಗೆ.

■ **ವಸುಂಧರ ಪ್ರದರ್ಶಕ ಕಲೆಗಳ ಕೇಂದ್ರ :** ವಸುಂಧರೋತ್ಸವ–2023, ಸಂಜೆ 6.15 ರಿಂದ ವಿದುಷಿ ಸುಜಾತ ನಾಯರ್ ಅವರಿಂದ ಮೋಹಿನಿ ಅಟ್ಟಂ, ಸಂಜೆ 7.30 ರಿಂದ ವಿದುಷಿ ಶ್ರೀಮತಿ ಸೌಂದರ್ಯ ಶ್ರೀವತ್ಸ ಅವರಿಂದ ಭರತನಾಟ್ಯ, ಗೌರವ ಸಮರ್ಪಣೆ : ನೂಪುರ ಟ್ರಸ್ಟ್ ನಿರ್ದೇಶಕ ಪ್ರೊ. ಕೆ. ರಾಮಮೂರ್ತಿರಾವ್, ಸ್ಥಳ: ಶ್ರೀ ನಾದಬ್ರಹ್ಮ ಸಂಗೀತ ಸಭಾ, ಜೆಎಲ್‌ಬಿ ರಸ್ತೆ.

ಪ್ರಸ್ತುತ ಶಿಕ್ಷಣ ನೀತಿ ಮಕ್ಕಳಲ್ಲಿ ದ್ವೇಷ, ಅಸೂಯೆ ಮೂಡಿಸುವಂತದ್ದಾಗಿದೆ

● ಹಿರಿಯ ಸಾಹಿತಿ ಡಾ.ಎಸ್.ಜಿ.ಸಿದ್ದರಾಮಯ್ಯ ತೀವ್ರ ಬೇಸರ ● ಮೈಸೂರು ಮೆಡಿಕಲ್ ಕಾಲೇಜಿನಲ್ಲಿ ಕನ್ನಡ ರಾಜ್ಯೋತ್ಸವ, ಶತಮಾನೋತ್ಸವ ಸಂಭ್ರಮ



ಡಾ.ಎಸ್.ಜಿ.ಸಿದ್ದರಾಮಯ್ಯ





ಮೈಸೂರು, ನ.7(ಎಸ್‌ಪಿಎನ್)–ಈಗ ಮಕ್ಕಳಿಗೆ ಪ್ರೀತಿ, ಪ್ರೇಮ–ಅಂತಃಕರಣ ಬಿಂಬಿಸುವ ಶಿಕ್ಷಣ ದೊರಕಬೇಕು. ಆದರೆ, ಪ್ರಸ್ತುತ ಶಿಕ್ಷಣ ನೀತಿಯಲ್ಲಿ ಮಕ್ಕಳ ಮನಸ್ಸಿನಲ್ಲಿ ದ್ವೇಷ, ಅಸೂಯೆ ಬಿತ್ತುವ ಅಂಶಗಳೇ ಹೆಚ್ಚಿವೆ ಎಂದು ಹಿರಿಯ ಸಾಹಿತಿ ಡಾ.ಎಸ್.ಜಿ.ಸಿದ್ದರಾಮಯ್ಯ ತೀವ್ರ ಬೇಸರ ವ್ಯಕ್ತಪಡಿಸಿದರು.

ಮೈಸೂರಿನ ಜೆ.ಕೆ. ಮೈದಾನದಲ್ಲಿರುವ ಮೈಸೂರು ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಸಂಸ್ಥೆ ಅಮೃತ ಮಹೋತ್ಸವ ಭವನದಲ್ಲಿ 68ನೇ ಕನ್ನಡ ರಾಜ್ಯೋತ್ಸವ ಹಾಗೂ ಶತಮಾನೋತ್ಸವದ ಸಂಭ್ರಮದ ಅಂಗವಾಗಿ ಧಮನಿ–23 ಕಾರ್ಯಕ್ರಮದಲ್ಲಿ ಮಾತನಾಡಿದರು.

ಈ ಮಹಾವಿದ್ಯಾಲಯಕ್ಕೆ ಪರಂಪರೆ, ಇತಿಹಾಸವಿದೆ. ಇಲ್ಲಿ ಅಭ್ಯಾಸ ಮಾಡುತ್ತಿರುವ ಪ್ರತಿಯೊಬ್ಬ ವಿದ್ಯಾರ್ಥಿ ಈ ಅಂಶವನ್ನು ಮರೆಯಬಾರದು. ಏಕೆಂದರೆ, ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು, ವೈದ್ಯಕೀಯ ಶಿಕ್ಷಣವನ್ನು ನಾಲ್ಕು ಹಂತದಲ್ಲಿ ಸ್ಥಾಪಿಸಿ, ಬಡವರಿಗೆ ಕಡಿಮೆ ದರದಲ್ಲಿ ವೈದ್ಯಕೀಯ ಚಿಕಿತ್ಸೆ ಲಭಿಸುವಂತೆ ಮಾಡಿದ್ದಾರೆ.

ನಾಲ್ವಡಿ ಅವರ ಅಭಿವೃದ್ಧಿ ಕಾರ್ಯವನ್ನು ಮಹಾತ್ಮ ಗಾಂಧೀಜಿ ಅವರು ಮೆಚ್ಚಿ 'ರಾಜರ್ಷಿ' ಎಂಬ ಬಿರುದು ನೀಡಿದ್ದಾರೆ. ಅಂತಹವರ ಜಯಂತಿಯನ್ನು ಸರ್ಕಾರವೇ ಆಚರಿಸುವಂತಾಗಬೇಕು. ಆದರೂ ರಾಜ್ಯ ಸರ್ಕಾರ ಆಚರಿಸಲು ಹಿಂದು–ಮುಂದು ನೋಡುತ್ತಿರುವುದು ಬೇಸರದ ಸಂಗತಿ. ಅಲ್ಲದೆ, ಕೆಲಸಕ್ಕೆ ಬಾರದ ಹಲವು ಜಯಂತಿಗಳನ್ನು ಸರ್ಕಾರವೇ ಆಚರಿಸುತ್ತಿದೆ. ನಾಲ್ವಡಿ ಅವರ ಜಯಂತಿ ಆಚರಿಸಲು ಹಿಂದೇಟು ಏಕೆ? ಎಂದು ಪ್ರಶ್ನಿಸಿದರು.

ನಾಲ್ವಡಿಯವರದ್ದು ದೂರದೃಷ್ಟಿ: ಪ್ರಭುತ್ವ ಆಡಳಿತ ಇದ್ದ ಸಂದರ್ಭದಲ್ಲೇ ಅಭಿವೃದ್ಧಿಯ ದೂರದೃಷ್ಟಿ ಹೊಂದಿದ್ದ ನಾಲ್ವಡಿಯವರು, ಮೈಸೂರು ವೈದ್ಯಕೀಯ ಶಿಕ್ಷಣ ಸಂಸ್ಥೆಯನ್ನು ನಾಲ್ಕು ಹಂತಗಳಲ್ಲಿ ಸ್ಥಾಪಿಸಿದ್ದಾರೆ. ಈ ಸಂಗತಿ ಇಂದಿನ ರಾಜಕಾರಣಿಗಳಿಗೆ ಅರ್ಥ ಮಾಡಿಸಬೇಕು. ರಾಜಕಾರಣಿಗಳಲ್ಲಿ ಮಾನವೀಯ ಹಿನ್ನೆಲೆ ಉಳ್ಳವರು ಅಧಿಕಾರದಲ್ಲಿದ್ದರೆ ಅಭಿವೃದ್ಧಿ ಯಾವ ದಿಕ್ಕಿನಲ್ಲಿ ಸಾಗುತ್ತದೆ ಎಂಬುದಕ್ಕೆ ನಾಲ್ವಡಿ ಅವರ ಆಡಳಿತವೇ ಸಾಕ್ಷಿ. ಇವರ ಆಡಳಿತದಲ್ಲಿ ರಾಜ್ಯದ ಅಭಿವೃದ್ಧಿ, ಸಾಮಾಜಿಕ ಸಮಾನತೆ, ಬಡವರ ಅಭಿವೃದ್ಧಿ ಅಡಗಿತ್ತು. ಈ ಹಿನ್ನೆಲೆಯಲ್ಲಿ ಮೈಸೂರು ಸಂಸ್ಥಾನ ಅಭಿವೃದ್ಧಿ ಹೊಂದಿದೆ ಎಂದರು.

ನಾಲ್ವಡಿಯವರ ಆಡಳಿತದಲ್ಲಿ ಬಡವರಿಗಾಗಿ ಮೀಸಲಾತಿ, ಬಡವರ ಏಳಿಗೆಗಾಗಿ ಮೈಸೂರು ವಿವಿ, ವೈದ್ಯಕೀಯ ಕಾಲೇಜು ಸೇರಿದಂತೆ ಹತ್ತು–ಹಲವು ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿದ್ದರು. ರೈತರ ಏಳಿಗೆಗಾಗಿ ಕೆಆರ್‌ಎಸ್ ಅಣೆಕಟ್ಟೆ ಕಟ್ಟಿದ್ದರು. ಯುವಕರಿಗೆ ಉದ್ಯೋಗ ನೀಡಲು ಭದ್ರಾವತಿಯಲ್ಲಿ ಉಕ್ಕಿನ ಕಾರ್ಖಾನೆ ಸೇರಿದಂತೆ ಇತರೆ ಕಾರ್ಖಾನೆಗಳನ್ನು ಸ್ಥಾಪಿಸಿದ್ದರು. ಆರ್ಥಿಕವಾಗಿ ಶಿಸ್ತು ಕಾಪಾಡಲು ಎಸ್‌ಬಿಎಂ ಬ್ಯಾಂಕ್ ಸ್ಥಾಪನೆ ಮಾಡಿದ್ದರು. ಕನ್ನಡ ಭಾಷೆ ಬೆಳವಣಿಗೆಗಾಗಿ ಕನ್ನಡ ಸಾಹಿತ್ಯ ಪರಿಷತ್ತು ಸ್ಥಾಪಿಸಿದ್ದರು.

ಆಡಳಿತದಲ್ಲಿ ಮಾನವೀಯ ಮೌಲ್ಯಗಳಿಲ್ಲ: ರಷ್ಯಾ–ಉಕ್ರೇನ್, ಇಸ್ರೇಲ್– ಹಮಾಸ್ ನಡುವಿನ ಯುದ್ಧ, ಮಣಿಪುರ, ರಾಜಸ್ಥಾನದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯಗಳನ್ನು ನೋಡಿದರೆ, ಆಡಳಿತದಲ್ಲಿ ಮಾನವೀಯ ಮೌಲ್ಯಗಳು ಮರೆಯಾಗುತ್ತಿವೆ ಎನಿಸುತ್ತಿದೆ. ಈ ಯುದ್ಧ, ದೌರ್ಜನ್ಯಗಳಿಂದ ಹೆಚ್ಚು ಸಾವು–ನೋವು ಅನುಭವಿಸುತ್ತಿರುವವರು ಮಾತ್ರ ಮಕ್ಕಳು, ಮಹಿಳೆಯರು. ಈ ಯುದ್ಧಗಳು ಮುಂದಿನ ಹಲವು ವರ್ಷಗಳವರೆಗೆ ಯುವ ಪೀಳಿಗೆಯ ಮನಸ್ಸಿನಲ್ಲಿ ದ್ವೇಷವನ್ನು ಮುಂದುವರೆಸಿಕೊಂಡು ಹೋಗುವ ಸನ್ನಿವೇಶಗಳು ಸೃಷ್ಟಿಯಾಗುತ್ತವೆ. ಇಂತಹ ಪ್ರಸಂಗಗಳನ್ನು ಸಾಧ್ಯವಾದಷ್ಟು ಕಡಿಮೆ ಮಾಡಿ, ಶಾಂತಿಯುತ ವಾತಾವರಣ ನಿರ್ಮಿಸಲು ಪ್ರತಿಯೊಬ್ಬರು ಚಿಂತಿಸಬೇಕು ಎಂದು ತಿಳಿಸಿದರು.

ವೈದ್ಯಕೀಯ ವಿದ್ಯಾರ್ಥಿಗಳು ತಮ್ಮ ಶಿಕ್ಷಣದ ಜೊತೆಗೆ ಮಾನವಿಕ ಅಂಶಗಳನ್ನು ಮೈಗೂಡಿಸಿಕೊಂಡು ಅಧ್ಯಯನ ನಡೆಸಬೇಕು. ಇದರ ಭಾಗವಾಗಿ ಕನ್ನಡ ರಾಜ್ಯೋತ್ಸವ, ನಾಟಕ, ನೃತ್ಯ, ಗಾಯನ, ಜನಪದ ನೃತ್ಯ ಸೇರಿದಂತೆ ಇತರೆ ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರಿಂದ ಶಿಕ್ಷಣಾರ್ಥಿಗಳಲ್ಲಿ ಮಾನವೀಯ ಮೌಲ್ಯಗಳು ಅಳವಡಿಸಿಕೊಳ್ಳಲು ಸಾಧ್ಯವಿದೆ ಎಂದ ಅವರು, ಅಲ್ಲದೆ, ಈ ಕಾರ್ಯಕ್ರಮ ದೇಶಿ ಪರಂಪರೆ ಉಳಿಸುವ ಜಾಗೃತ ಕಾರ್ಯಕ್ರಮವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಬುದ್ಧ ಧರ್ಮದಲ್ಲಿ ಪಾಳಿ ಭಾಷೆ, ಜೈನ ಧರ್ಮದಲ್ಲಿ ಪ್ರಾಕೃತ, ವಚನ ಧರ್ಮದಲ್ಲಿ ಅಪ್ಪಟ ಕನ್ನಡ ಭಾಷೆ ನೆಲೆಯೂರಿ, ಸಾಹಿತ್ಯ ರಚನೆಗೊಂಡಿದೆ. ಈ ಭಾಷೆಯಲ್ಲಿ ಜಗತ್ತಿನ ಯಾವುದೇ ಭಾಷೆಯ ಪದಗಳನ್ನು ಕನ್ನಡೀಕರಣಗೊಳಿಸುವ ತಾಕತ್ತು ಕನ್ನಡ ವರ್ಣಮಾಲೆಗಿದೆ. ಹಾಗಾಗಿ ಕನ್ನಡ ನುಡಿ, ಚಿನ್ನದ ನುಡಿ ಎಂದು ಹಲವು ಹಿರಿಯ ಸಾಹಿತಿಗಳು ಅಭಿಪ್ರಾಯಪಟ್ಟಿರುವ ಸಂಗತಿಗಳನ್ನು ಉದಾಹರಣೆ ಸಮೇತ ತಿಳಿಸಿಕೊಟ್ಟರು.

ಎಂಎಂಸಿ ಮತ್ತು ಆರ್‌ಐನ ಡೀನ್ ಮತ್ತು ನಿರ್ದೇಶಕಿ ಡಾ.ಕೆ.ಆರ್.ದಾಕ್ಷಾಯಿಣಿ ಮಾತನಾಡಿ, ಮೈಸೂರು ವೈದ್ಯಕೀಯ ಕಾಲೇಜು ಅನ್ನು ನಾಲ್ವಡಿ ಕೃಷ್ಣರಾಜ ಒಡೆಯರ್ ಸ್ಥಾಪಿಸಿ, ಮೈಸೂರು, ಚಾಮರಾಜನಗರ, ಮಂಡ್ಯ, ಕೊಡಗು, ಹಾಸನ ಜಿಲ್ಲೆಯ ಬಡವರ ಜೀವವೃಕ್ಷವಾಗಿ ಹೊರಹೊಮ್ಮಿದೆ. ಕೆ.ಆರ್.ಆಸ್ಪತ್ರೆ, ಚೆಲುವಾಂಬ, ಪಿಕೆಟಿಬಿ ಆಸ್ಪತ್ರೆ ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಟ್ರಾಮಾ ಸೆಂಟರ್ ಸೇರಿದಂತೆ ಇತರೆ ವಿಭಾಗಗಳಲ್ಲಿ ಬಡಜನರಿಗೆ ಕಡಿಮೆ ವೆಚ್ಚದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಈ ಸಂಸ್ಥೆಯನ್ನು ಸ್ಥಾಪಿಸಿದ ಕೀರ್ತಿ ನಾಲ್ವಡಿಯವರಿಗೆ ಸಲ್ಲುತ್ತದೆ ಎಂದರು.

ಈ ಸಂದರ್ಭದಲ್ಲಿ ಡಾ.ದಿನೇಶ್, ಡಾ.ರಾಜೇಶ್, ಡಾ.ಮಂಜುನಾಥ್ ಅವರನ್ನು ಸನ್ಮಾನಿಸಲಾಯಿತು. ವೇದಿಕೆಯಲ್ಲಿ ಕೆ.ಆರ್.ಆಸ್ಪತ್ರೆಯ ಡಾ.ಎಚ್.ಪಿ.ಶೋಭಾ, ಚೆಲುವಾಂಬ ಆಸ್ಪತ್ರೆಯ ಡಾ.ರಾಜೇಂದ್ರಕುಮಾರ್, ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ಅಧಿಕಾರಿ ಡಾ.ಚಂದ್ರಶೇಖರ್, ಕನ್ನಡ ಸಂಘದ ಅಧ್ಯಕ್ಷ ಡಾ.ಸಿ.ರವೀಂದ್ರನಾಥ್, ಉಪಾಧ್ಯಕ್ಷ ಡಾ.ಶುಭಾ ಜಯರಾಮ್, ಕಾರ್ಯದರ್ಶಿ ಶಿವಕುಮಾರ್, ಪ್ರಧಾನ ಕಾರ್ಯದರ್ಶಿ ಅಭಿಷೇಕ್ ಸಾನಬಾಳ್, ಡಿ.ಆರ್.ಚಂದನ್ ರೆಡ್ಡಿ, ಕೆ.ಪಿ.ಪ್ರಜ್ವಲ್, ಆರ್.ದಿವ್ಯಾ ಉಪಸ್ಥಿತರಿದ್ದರು.

ಹೆಸರು ಬದಲಾವಣೆ

ಅಭಿರಾಮಿ.ಆರ್ D/O ರಾಜಗೋಪಾಲ #1928, ಬಿಇಎಂಎಲ್ ಆರ್ಚ್, 2ನೇ ಕ್ರಾಸ್, ಶ್ರೀರಾಂಪುರ 3ನೇ ಹಂತ, ಮೈಸೂರು – 570023. ಇಲ್ಲಿ ವಾಸವಾಗಿದ್ದು, ನನ್ನ ಹೆಸರನ್ನು ಅಭಿರಾಮಿ ಇಂದ ಅಭಿರಾಮಿ.ಆರ್ ಎಂಬುದಾಗಿ ನೋಟರಿ ಎ.ಎಂ.ಸುಮಿತ್ರ ಇವರ ಎದುರು ದಿನಾಂಕ: 07.11.2023ರಂದು ಬದಲಾವಣೆ ಮಾಡಿ ಪ್ರಮಾಣೀಕರಿಸಿರುತ್ತೇನೆ

ಸಹಿ/– ಅಭಿರಾಮಿ.ಆರ್

ಚಂದ್ರಯಾನ ಬೆನ್ನಲ್ಲೇ ಇಸ್ರೋಗೆ ಮತ್ತೊಂದು ಸಕ್ಸಸ್

ಸೂರ್ಯನ ಶಕ್ತಿ ಸ್ಫೋಟ ಸೆರೆ ಹಿಡಿದ ಆದಿತ್ಯ L1!

ಬೆಂಗಳೂರು,ನ.7–ಚಂದ್ರನ ಮೇಲೆ ಯಶಸ್ವಿಯಾಗಿ ಇಳಿದು ಅಧ್ಯಯನ ನಡೆಸಿದ ಇಸ್ರೋ ಈಗಾಗಲೇ ಸೂರ್ಯನ ಅಧ್ಯಯನಕ್ಕೆ ಆದಿತ್ಯ L1 ನೌಕೆಯನ್ನು ಕಳುಹಿಸಲಾಗಿದೆ. ಇದೀಗ ಈ ಆದಿತ್ಯ L1 ಸೂರ್ಯನಿಂದ ಮೊದಲ ಶಕ್ತಿ ಸ್ಫೋಟವನ್ನು ಸೆರೆ ಹಿಡಿದಿದೆ. ಆದಿತ್ಯ ಐ1 ನೌಕೆಯಲ್ಲಿ 7 ಪ್ಲೇಲೋಡ್‌ಗಳಿವೆ. ಇದರಲ್ಲಿ ಹೈ ಎನರ್ಜಿ L1 ಆರ್ಬಿಟಿಂಗ್ ಎಕ್ಸ್–ರೇ ಸ್ಪೆಕ್ಟ್ರೋಮೀಟರ್ (HEL1OS) ಪ್ಲೇಲೋಡ್ ಸೂರ್ಯ ಮೇಲ್ಮೈನಲ್ಲಿ ನಡೆಯುವ ಸೌರ ಜ್ವಾಲೆಗಳ ಹಠಾತ್ ಸ್ಫೋಟವನ್ನು ಸೆರೆ ಹಿಡಿದಿದೆ. ಅ.29 ರಂದು ಈ ಸ್ಫೋಟ ದಾಖಲಿಸಿದೆ.



ಸೂರ್ಯ ಮೇಲ್ಮೈನಲ್ಲಿ ಎಕ್ಸ್ ಕಿರಣಗಳ ಬೆಳಕಿನ ರೂಪದಲ್ಲಿ ಶಕ್ತಿ ಮತ್ತು ವಿಕಿರಣವನ್ನು ಹೊರಸೂಸುತ್ತದೆ. ಆಗ ಸ್ಫೋಟದ ತೀವ್ರತೆಗಳನ್ನು ಆದಿತ್ಯ ಎಲ್1 ದಾಖಲಿಸಿದೆ. ಸೂರ್ಯನ ಸುತ್ತಲಿನ ವಾತಾವರಣದಲ್ಲಿ ಸಂಗ್ರಹವಾಗಿರುವ ಕಾಂತೀಯ ಶಕ್ತಿ ಬಿಡುಗಡೆ ವೇಳೆ ಈ ರೀತಿ ಸ್ಫೋಟಗಳು ಸಂಭವಿಸುತ್ತವೆ. ಈ ಪೈಕಿ ಕೆಲವು ತೀವ್ರ ಸ್ಫೋಟವಾಗಿದ್ದರೆ, ಕೆಲವು ಸಾಮಾನ್ಯವಾಗಿರುತ್ತದೆ. ಈ ಸ್ಫೋಟದ ತೀವ್ರತೆಯನ್ನೂ ಇಸ್ರೋ ಉಪಗ್ರಹ ದಾಖಲಿಸಿದೆ.

ಸೆ.9ರಂದು ಆದಿತ್ಯ ಎಲ್1 ನೌಕೆಯನ್ನು ಆಂಧ್ರಪ್ರದೇಶದ ಶ್ರೀಹರಿಕೋಟಾದ ನೆಲೆಯಿಂದ ಉಡಾವಣೆ ಮಾಡಲಾಗಿತ್ತು. ಪಿಎಸ್‌ಎಲ್‌ವಿ–ಸಿ57 ರಾಕೆಟ್ ಮೂಲಕ ಆದಿತ್ಯ ಎಲ್1 ನೌಕೆ ಹಾರಿಸಲಾಗಿತ್ತು. 15 ಲಕ್ಷ ಕಿ.ಮೀ. ದೂರಕ್ಕೆ ಸಾಗಿ ಸೂರ್ಯನ ಎಲ್1 ಪಾಯಿಂಟ್‌ನಲ್ಲಿ ಈ ಅದಿತ್ಯ ಎಲ್1 ಅಧ್ಯಯನ ನಡೆಸಲಿದೆ. ಈ ದೂರ ಕ್ರಮಿಸಲು 125 ದಿನಗಳ ಅವಶ್ಯಕತೆ ಇದೆ. ಸೂರ್ಯನ ದೂರ ಭೂಮಿಯಿಂದ 15 ಕೋಟಿ ಕಿ.ಮೀ. ಲ್ಯಾಗ್ರೇಂಜಿಯನ್ ಪಾಯಿಂಟ್ ಅಥವಾ ಎಲ್1 ಎನ್ನುವುದು ಸೂರ್ಯ–ಭೂಮಿಯ ಗುರುತ್ವ ಬಲ ಸಮಾನವಾಗಿರುವ ಸ್ಥಳ. ಇಲ್ಲಿ ನೌಕೆ ನಿಯೋಜಿಸಿದರೆ ಸೂರ್ಯನನ್ನು ಗ್ರಹಣದಂಥ ಯಾವುದೇ ಅಡ್ಡಿ ಆತಂಕಗಳು ಇಲ್ಲದೇ ಸತತವಾಗಿ ನೇರವಾಗಿ ವೀಕ್ಷಣೆ ಮಾಡಲು ಸಾಧ್ಯ. ಇದು ಹೆಚ್ಚಿನ ಇಂಧನ ವ್ಯರ್ಥಮಾಡದೇ ಸುದೀರ್ಘ ಕಾಲ ನೌಕೆ ಕಾರ್ಯನಿರ್ವಹಿಸಲು ಅನುವು ಮಾಡಿಕೊಡುತ್ತದೆ. ನೌಕೆಯಲ್ಲಿನ 4 ಉಪಕರಣಗಳು ಸತತವಾಗಿ ಸೂರ್ಯನನ್ನು ವೀಕ್ಷಿಸುತ್ತಾ ಮಾಹಿತಿ ಸಂಗ್ರಹಿಸಲಿದ್ದರೆ, ಉಳಿದ ಮೂರು ಉಪಕರಣಗಳು ಸ್ಥಳದಲ್ಲಿನ ಪಾರ್ಟಿಕಲ್ (ಕಣಗಳು) ಮತ್ತು ಪ್ರದೇಶಗಳ ಅಧ್ಯಯನ ನಡೆಸಿ ಅದರ ಮಾಹಿತಿಯನ್ನು ಭೂಮಿಗೆ ರವಾನಿಸಲಿವೆ.

ಜನರಿಂದ ಅರ್ಜಿ ಸ್ವೀಕರಿಸಿದರೆ ಸ್ವೀಕೃತಿ ಪತ್ರ ನೀಡಬೇಕು



ಹಾಸನ, ನ.7–ಜನರಿಂದ ಅರ್ಜಿ ಸ್ವೀಕರಿಸುವ ಅಧಿಕಾರಿಗಳು ಕಡ್ಡಾಯವಾಗಿ ಸ್ವೀಕೃತಿ ಪತ್ರ ನೀಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಹಾಸನ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಮುಖ್ಯಮಂತ್ರಿ, ಸಣ್ಣಪುಟ್ಟ ಸಮಸ್ಯೆಗಳಿಗಾಗಿ ಜನರು ಬೆಂಗಳೂರಿನವರೆಗೂ ನನ್ನನ್ನು ಹುಡುಕಿಕೊಂಡು ಬರಬಾರದು. ಸ್ಥಳೀಯ ಸಮಸ್ಯೆಗಳನ್ನು ಸಕಾಲದಲ್ಲಿ ಪರಿಹರಿಸಬೇಕು. ರೈತರು ಮತ್ತು ಶ್ರಮಿಕರ ಸಮಸ್ಯೆಗಳು ಬಹುತೇಕ ತಾಲೂಕು ಮತ್ತು ಜಿಲ್ಲಾ ಮಟ್ಟದಲ್ಲೇ ಬಗೆಹರಿಸಬೇಕು ಎಂದರು.

ಅನಗತ್ಯ ಸತಾಯಿಸುವ ಅಧಿಕಾರಿ ಮತ್ತು ಸಿಬ್ಬಂದಿಯನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಯಾವುದೇ ಪ್ರಭಾವಕ್ಕೂ ಮಣಿಯುವುದಿಲ್ಲ. ಕಠಿಣ ಕ್ರಮ ಖಚಿತ. ಜನರ ಮನೆ ಬಾಗಿಲಿಗೆ ಸರ್ಕಾರವನ್ನು ತಲುಪಿಸಬೇಕು. ಜನರನ್ನು ಸರ್ಕಾರಿ ಕಚೇರಿಗೆ ಅಲೆದಾಡಿಸುವುದು ಭ್ರಷ್ಟಾಚಾರ. ಜನರಿಗೆ ಅಧಿಕಾರಿಗಳ ಅನುಕಂಪ ಬೇಕಾಗಿಲ್ಲ. ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸಿದರೆ ಸಾಕು. ಅಧಿಕಾರಿಗಳು ಮತ್ತು ನಾವು ಜನರ ಸೇವಕರು. ಜನರೇ ನಮ್ಮ ಮಾಲೀಕರು. ಜನರ ಸಮಸ್ಯೆಗಳ ಬಗ್ಗೆ ನಿರ್ಲಕ್ಷ್ಯ ತೋರಿಸಿದರೆ ಸಹಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಗೃಹಜ್ಯೋತಿ, ಗೃಹಲಕ್ಷ್ಮಿ ಯೋಜನೆಯ ಸಾಧನೆ ಶೇ100ರಷ್ಟು ಸಾಧಿಸಬೇಕು. ಆದರೆ ಹಾಸನ ಜಿಲ್ಲೆಯಲ್ಲಿ ಇನ್ನೂ ಶೇ.90ರಷ್ಟಕ್ಕೆ ನಿಂತಿದೆ. ಇದನ್ನು ಶೇ.100ರಷ್ಟು ಪೂರೈಸಬೇಕು. ನೋಂದಣಿ ಮಾಡಿಸಿರುವ ಪ್ರತಿಯೊಬ್ಬರಿಗೂ ಗ್ಯಾರಂಟಿ ಸ್ಕೀಂಗಳು ತಲುಪಬೇಕು. ಹಾಸನ, ಅರಸೀಕರೆ, ಅರಕಲಗೂಡು ತಾಲೂಕುಗಳಲ್ಲಿ ಗ್ಯಾರಂಟಿ ಯೋಜನೆಗಳು ಶೇ.90ರಷ್ಟನ್ನೂ ತಲುಪದೆ ಇರಲು ಯಾರು ಹೊಣೆ? ಎಂದು ಅಧಿಕಾರಿಗಳನ್ನು ಸಿದ್ದರಾಮಯ್ಯ ಪ್ರಶ್ನಿಸಿದರು.

In The Court of V Additional Senior Civil Judge and JMFC at Mysore

P& Sc No: 56/2023

Petitioners: 1) Mr. Charles Joseph Susheel S/o Late M. F. Joseph Susheel, aged about 60 years, Residing at # 10/10-C, 2nd Cross, St. Mary's Road, N.R. Mohalla, Mysuru-570007

2) Mr. J. S. Richard, S/o Late M.F. Joseph Susheel, aged about 69 years, Residing at # C 001, Vaishnavi Sarovara' Apartment, Yadavagiri, Mysuru-570020.

3) Mrs. Catherine D. I. W/o Late Dominic Irudaya Kumar & D/o Late M. F. Joseph Susheel, aged about 63 years, Residing at # 10/10-C, 2nd Cross, St. Mary's Road, N. R. Mohalla, Mysuru-570007

Vs

RESPONDENT: NIL

WHEREAS the petitioners in the above case have filed a petition U/s 372 of Indian Succession act seeking issue of Succession Certificate against the amount accrued in the LIC policies of their brother late J. S. Francis Xavier, morefully described in the schedule.

The above case has been posted for hearing on 29/11/2023 at 11.00 AM before the Honourable Court of V Additional Senior Civil Judge & JMFC at Mysuru. Anybody having any objection to the said petition may file it on the said date before the Hon'ble Court.

SCHEDULE:


Approximate amount of Rs. 5,00,000/- (Rs. Five Lakh only), accrued in two LIC policies, "Jeevan Dhara" bearing #721504610 and "Jeevan Suraksha" policy bearing #613051133.

By order of the Court
Sd/- Chief Ministerial Officer,
Court of Senior Civil Judge and JMFC, Mysuru.

Sd/- D'Souza George William
Advocate for Petitioners
Place: Mysore. Date 06.10.2023

ಕಾಂಗ್ರೆಸ್ ಸರ್ಕಾರ ವಾಂಟೆಡ್ ಕ್ರಿಮಿನಲ್‌ಗಳನ್ನು ರಕ್ಷಿಸುತ್ತಿದೆ

ಬಿಜೆಪಿ ಶಾಸಕ ಬಿ.ವೈ.ವಿಜಯೇಂದ್ರ ಆರೋಪ



ಕಲಬುರಗಿ/ಬೆಂಗಳೂರು, ನ.7– ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (ಕೆಇಎ) ಹಗರಣದಲ್ಲಿ ಭಾಗಿಯಾಗಿರುವ ಆಪಾದಿತ ಕ್ರಿಮಿನಲ್ ಆರ್‌ಡಿ ಪಾಟೀಲ್ ಅವರನ್ನು ಕಾಂಗ್ರೆಸ್ ಸರ್ಕಾರ ರಕ್ಷಿಸುತ್ತಿದೆ ಎಂದು ಬಿಜೆಪಿ ಶಾಸಕ ಬಿವೈ ವಿಜಯೇಂದ್ರ ಆರೋಪಿಸಿದ್ದಾರೆ.

ಪಿಎಸ್‌ಐ ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ಪಾಟೀಲ್ ಅವರನ್ನು ಬಂಧಿಸಲಾಗಿತ್ತು. ಆ ಹಗರಣದಲ್ಲಿ ಜಾಮೀನು ಪಡೆದ ಬಳಿಕ ಕೆಇಎ ಹಗರಣದಲ್ಲಿ ಇವರ ಪಾತ್ರ ಬಯಲಾಗಿದೆ. ಮಂಗಳವಾರ ಕಲಬುರಗಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ವಿಜಯೇಂದ್ರ, ಆಪಾದಿತ ಕ್ರಿಮಿನಲ್ ಆರ್‌ಡಿ ಪಾಟೀಲ್ ಅವರನ್ನು ಕಾಂಗ್ರೆಸ್ ಸರ್ಕಾರ ಮತ್ತು ಸಚಿವರು ರಕ್ಷಿಸುತ್ತಿದ್ದಾರೆ. ಪಾಟೀಲ್ ಮತ್ತು ಅವರ ತಂಡ ಕಾಂಗ್ರೆಸ್ ಸರ್ಕಾರದ ಕೈಗೊಂಬೆಗಳಾಗಿದ್ದಾರೆ ಎಂದು ಆರೋಪಿಸಿದರು.

ಸಚಿವರು, ಶಾಸಕರ ಬೆಂಬಲವಿಲ್ಲದ ಹೊರತು ಆರೋಪಿ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ. ಆರ್‌ಡಿ ಪಾಟೀಲ್ ಸಾಮಾನ್ಯರಲ್ಲ. ಕಾಂಗ್ರೆಸ್ ಸರ್ಕಾರದ ದೊಡ್ಡ ನಾಯಕರ ನೇರ ಸಂಪರ್ಕ ಮತ್ತು ಬೆಂಬಲ ಹೊಂದಿದ್ದಾರೆ. ಎಸ್‌ಪಿ ಶ್ರೇಣಿಯ ಅಧಿಕಾರಿಯಿಂದಲೂ ಅವರು ತಪ್ಪಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. ಇದು ಕಾಣದ ಕೈಗಳ ಪಾತ್ರವನ್ನು ಸೂಚಿಸುತ್ತದೆ ಎಂದರು.

ಆರ್‌ಡಿಪಿಆರ್ ಮತ್ತು ಐಟಿ, ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ವಾಗ್ದಾಳಿ ನಡೆಸಿದ ವಿಜಯೇಂದ್ರ, ಆರೋಪಿಗಳಿಗೆ ಹಿಂದಿನ ಬಿಜೆಪಿ ಸರ್ಕಾರದ ಜೊತೆಗೆ ನಂಟಿದೆ ಎಂದು ಈಗಿನ ಜಿಲ್ಲಾ ಉಸ್ತುವಾರಿ ಸಚಿವರು ಆರೋಪ ಮಾಡಿದ್ದಾರೆ. ಆದರೆ, ಈಗ ಆರೋಪಿಗಳಿಗೆ ಕಾಂಗ್ರೆಸ್ ಪಕ್ಷ ಸಂಪೂರ್ಣ ಬೆಂಬಲ ನೀಡುತ್ತಿರುವುದು ಸ್ಪಷ್ಟವಾಗಿದೆ. ಪೊಲೀಸ್ ಅಧಿಕಾರಿಗಳಿಗೆ ಯಾವುದೇ ಗೌರವ ದೊರಕುತ್ತಿಲ್ಲ. ಆರೋಪಿಯನ್ನು ಬೆಂಬಲಿಸುವುದು ದುರದೃಷ್ಟಕರ ಮತ್ತು ಆಡಳಿತದ ವೈಫಲ್ಯ ಎಂದು ಹೇಳಿದ್ದಾರೆ.

ಈ ಬೆಳವಣಿಗೆ ಬಗ್ಗೆ ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿದ ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ, ಸರ್ಕಾರ ಕೂಡಲೇ ಆರೋಪಿಯನ್ನು ಬಂಧಿಸಲು ಕ್ರಮ ಕೈಗೊಳ್ಳಬೇಕು. ಆರೋಪಿ ಪರಾರಿಯಾಗಿರುವ ಬಗ್ಗೆ ನನಗೆ ತಿಳಿದು ಬಂದಿದ್ದು, ಈ ಬಗ್ಗೆ ಹೆಚ್ಚಿನ ಮಾಹಿತಿ ತಿಳಿದುಕೊಳ್ಳುತ್ತೇನೆ. ರುದ್ರ ಪಾಟೀಲರನ್ನು ಬಂಧಿಸಬೇಕು ಎಂದು ಒತ್ತಾಯಿಸಿದರು.

ಶೀಘ್ರ ಬಂಧನ: ಬೆಂಗಳೂರಿನಲ್ಲಿ ಮಾತನಾಡಿದ ಗೃಹ ಸಚಿವ ಡಾ.ಜಿ.ಪರಮೇಶ್ವರ, ಪಾಟೀಲ್ ವಿರುದ್ಧ ಹಲವು ಪ್ರಕರಣಗಳಿವೆ. ಈತನನ್ನು ಶೀಘ್ರವೇ ಬಂಧಿಸುವಂತೆ ಪೊಲೀಸರಿಗೆ ಸೂಚನೆ ನೀಡಿದ್ದೇವೆ. ಮಹಾರಾಷ್ಟ್ರದಲ್ಲಿ ತಲೆಮರೆಸಿಕೊಂಡಿರುವ ಬಗ್ಗೆ ನಮಗೆ ಮಾಹಿತಿ ಇದೆ. ಇಲಾಖೆಗೆ ಇದು ದೊಡ್ಡ ವಿಷಯವಲ್ಲ, ಎಷ್ಟು ದಿನ ತಲೆಮರೆಸಿಕೊಳ್ಳಲು ಸಾಧ್ಯ ಎಂದರು.

'ಸತ್ಯವನ್ನು ಹೊರತರುವುದು ನಮ್ಮ ಉದ್ದೇಶವಾಗಿದೆ ಮತ್ತು ನಾವು ಆತನನ್ನು ಖಂಡಿತವಾಗಿಯೂ ಬಂಧಿಸುತ್ತೇವೆ. ಅವರು ಪಿಎಸ್‌ಐ ನೇಮಕಾತಿ ಹಗರಣದಲ್ಲಿ ಭಾಗಿಯಾಗಿದ್ದಾರೆ ಮತ್ತು ಕೆಇಎ ಹಗರಣದಲ್ಲಿ ನಮಗೆ ಹೆಚ್ಚಿನ ಸಾಕ್ಷ್ಯಗಳು ಸಿಗುತ್ತವೆ. ಅಗತ್ಯವಿದ್ದರೆ, ಕೆಇಎ ಪರೀಕ್ಷೆ ಹಗರಣದ ಪ್ರಕರಣವನ್ನು ಅಪರಾಧ ತನಿಖಾ ಇಲಾಖೆಗೆ (ಸಿಐಡಿ) ಹಸ್ತಾಂತರಿಸಲಾಗುವುದು' ಎಂದು ಅವರು ಹೇಳಿದರು.

ಮೈಸೂರು ಮಿತ್ರ

ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

–ಜಾಹೀರಾತು ವ್ಯವಸ್ಥಾಪಕರು

ನಕ್ಕರೆ ಅದೇ ಸ್ವರ್ಗ

ಸ್ನೇಹಿತ : "ಓ ಗೆಳತಿ, ನಿನ್ನನ್ನು ಬಿಟ್ಟು ನಾನೊಬ್ಬನೇ ಹೇಗೆ ಮನೆಗೆ ಹೋಗಲಿ?."

ಗೆಳತಿ : "ಚಿಂತಿಸಬೇಡ. 226ನೇ ನಂಬರ್ ಸಿಟಿ ಬಸ್‌ನಲ್ಲಿ ಅಥವಾ ನಡೆದುಕೊಂಡು ಹೋಗು!"

ಮೈಸೂರು ಮಿತ್ರ
ಬುಧವಾರ, 8 ನವೆಂಬರ್ 2023
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ.........

ನಾವು ನಮ್ಮ ಬಗ್ಗೆ, ನಮ್ಮ ಮನಸ್ಸಿನ ಬಗ್ಗೆ, ನಮ್ಮ ಭಾವನೆಗಳ ಬಗ್ಗೆ ಶೋಧಿಸಿಕೊಳ್ಳುವ ಕುತೂಹಲವನ್ನು ಬರಮಾಡಿಕೊಳ್ಳುವುದೇ ಇಲ್ಲ.

– ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಛಲವಾದಿ ಸಂಗಡ ಹಠವಾದಿ ಸೇರಿದಂಗ

ನಿಮ್ಮ ಪತ್ರಗಳು

ಕೂಸು ಹುಟ್ಟುವುದಕ್ಕಿಂತ ಮುಂಚೆಯೇ...

ಮಾನ್ಯರೆ,

ಮುಂದಿನ ಮುಖ್ಯಮಂತ್ರಿ ಆಯ್ಕೆಯ ಬಗ್ಗೆ ರಾಜ್ಯ ಕಾಂಗ್ರೆಸ್ ಪಾಳಯದಲ್ಲಿ ಹೇಳಿಕೆಗಳ ಮಹಾಪೂರವೇ ಹರಿದು ಬರುತ್ತಿದೆ. ಕೂಸು ಹುಟ್ಟುವುದಕ್ಕಿಂತ ಮುಂಚೆಯೇ ಕುಲಾವಿ ಹೊಲಿಸಿದರು ಎಂಬ ಮಾತಿನಂತೆ ಮುಖ್ಯಮಂತ್ರಿಯ ಹುದ್ದೆ ಖಾಲಿಯಾಗುವ ಮೊದಲೇ ಮುಂದಿನ ಮುಖ್ಯಮಂತ್ರಿಯ ಬಗ್ಗೆ ಚರ್ಚೆ ನಡೆಯುತ್ತಿರುವುದು ಹಾಸ್ಯಾಸ್ಪದವಾಗಿ ಕಾಣುತ್ತಿದೆ.

ಕಾಂಗ್ರೆಸ್ ಹೈಕಮಾಂಡ್ ಮಟ್ಟದಲ್ಲಿ ಆಗಿದೆಯೆಂದು ಹೇಳಲಾಗುತ್ತಿರುವ ಒಪ್ಪಂದದ ಪ್ರಕಾರ, ಮೊದಲ 2 ವರ್ಷ ಸಿದ್ದರಾಮಯ್ಯ ಹಾಗೂ ಉಳಿದ ಅವಧಿಗೆ ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿಯಾಗಿರುತ್ತಾರೆ ಎಂಬ ವಾದದ ಬಗ್ಗೆ ಸ್ಪಷ್ಟತೆಯಾಗಲಿ ಅಥವಾ ಖಚಿತತೆಯಾಗಲಿ ಇಲ್ಲ. ಈಗ ಸಿದ್ದರಾಮಯ್ಯ ಹಾಗೂ ಡಿಕೆಶಿ ಪರವಾಗಿರುವ ಶಾಸಕರು ತಮ್ಮ ನಾಯಕರ ಬಗ್ಗೆ ಹೇಳಿಕೆ ಮತ್ತು ಪ್ರತಿ ಹೇಳಿಕೆ ನೀಡುತ್ತಿರುವುದು ಆಡಳಿತದಲ್ಲಿ ಹಾಗೂ ಪಕ್ಷದಲ್ಲಿ ಗೊಂದಲ ಮೂಡಿಸಿದೆ. ಒಂದು ವೇಳೆ ಸಿದ್ದರಾಮಯ್ಯ ಅಧಿಕಾರದಿಂದ ಕೆಳಗೆ ಇಳಿದರೆ, ಡಾ.ಪರಮೇಶ್ವರ್ ಅವರು ಮುಖ್ಯಮಂತ್ರಿಯಾಗಲಿದ್ದಾರೆ ಎಂಬ ಸಹಕಾರ ಸಚಿವ ಕೆ.ಎನ್.ರಾಜಣ್ಣನವರ ಬಹಿರಂಗ ಹೇಳಿಕೆ ಹಾಗೂ ಮತ್ತೊಂದು ಕಡೇ ಹೈಕಮಾಂಡ್ ಹೇಳಿದರೆ, ನಾನು ಮುಖ್ಯಮಂತ್ರಿಯಾಗುತ್ತೇನೆ ಎಂದು ಗ್ರಾಮೀಣ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಹೇಳಿರುವುದು ಮತ್ತಷ್ಟು ಗೊಂದಲವನ್ನು ಸೃಷ್ಟಿಸಿದೆ. ಮುಖ್ಯಮಂತ್ರಿ ಹುದ್ದೆಯ ಮೇಲೆ ಅನೇಕರು ಕಣ್ಣಿಟ್ಟಿರುವ ಸಂಗತಿ ಸಹ ಬೆಳಕಿಗೆ ಬಂದಿದೆ. ಈ ರೀತಿ ಮನಸ್ಸಿಗೆ ಬಂದ ಹಾಗೆ ಹೇಳಿಕೆ ನೀಡುವುದು ಪಕ್ಷದ ಶಿಸ್ತನ್ನು ಉಲ್ಲಂಘನೆ ಮಾಡಿದಂತೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಈಗಾಗಲೇ ಆಯ್ದ ಕೆಲವು ಸಚಿವರನ್ನು ಉಪಹಾರ ಕೂಟಕ್ಕೆ ಆಹ್ವಾನಿಸಿ, ಪಕ್ಷ ಮತ್ತು ಸರ್ಕಾರದ ಅಂತರಿಕ ವಿಷಯಗಳನ್ನು ಹಾದಿ ಬೀದಿಯಲ್ಲಿ ಮಾತನಾಡಬಾರದೆಂಬ ಖಡಕ್ ಎಚ್ಚರಿಕೆ ನೀಡಿರುವುದು ಮಾಧ್ಯಮಗಳಲ್ಲಿ ವರದಿಯಾಗಿದೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಹ, ಇಂತಹುದೇ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಹಲವು ನಿರೀಕ್ಷೆಗಳನ್ನು ಇಟ್ಟುಕೊಂಡು ರಾಜ್ಯದ ಮತದಾರರು ಕಾಂಗ್ರೆಸ್ ಪಕ್ಷಕ್ಕೆ ಪೂರ್ಣ ಬಹುಮತ ನೀಡಿ ಅಧಿಕಾರಕ್ಕೆ ತಂದಿದ್ದಾರೆ. ಜನರ ಆಶೋತ್ತರಗಳಿಗೆ ಕಾಂಗ್ರೆಸ್ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸಿ, ಉತ್ತಮ ಆಡಳಿತ ನೀಡಲು ಪ್ರಯತ್ನಿಸಬೇಕೇ ವಿನಹ ಜನರಲ್ಲಿ ಮತ್ತಷ್ಟು ಗೊಂದಲವನ್ನು ಸೃಷ್ಟಿಸಬಾರದು. ಅದೇ ರೀತಿ ಶಾಸಕರು, ಪಕ್ಷದ ವಿಚಾರಗಳನ್ನು ಬಹಿರಂಗವಾಗಿ ಚರ್ಚಿಸುವ ಬದಲು ಪಕ್ಷದ ವೇದಿಕೆಗಳಲ್ಲಿ ಚರ್ಚಿಸಿ ಪರಿಹಾರ ಕಂಡುಕೊಳ್ಳಬೇಕು. ಅದೇ ರೀತಿ, ಮುಂದಿನ ಮುಖ್ಯಮಂತ್ರಿ ಆಯ್ಕೆಯ ವಿಚಾರ ಈಗ ಅಪ್ರಸ್ತುತ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು

ಪೊಲೀಸ್ ಪಬ್ಲಿಕ್ ಶಾಲೆಯ ಮುಂಭಾಗ ಹಂಪ್ಸ್ ಅಳವಡಿಕೆ ಅಗತ್ಯ

ಮಾನ್ಯರೆ,

ಮೈಸೂರು ದಸರಾ ಹಬ್ಬದ ಸಂದರ್ಭದಲ್ಲಿ ನಗರದ ಹಲವು ರಸ್ತೆಗಳನ್ನು ಡಾಂಬರೀಕರಣ ಮಾಡಲಾಗಿದೆ. ಅದೇ ರೀತಿಯಲ್ಲಿ ಉದಯಗಿರಿಯ ಮಹದೇವಪುರ ಮುಖ್ಯ ರಸ್ತೆಯಲ್ಲಿರುವ ಫೋರಂ ಮಾಲ್ (ನೆಕ್ಸಾಸ್ ಸಿಟಿ) ಮುಂಭಾಗದ ರಸ್ತೆಯಲ್ಲಿ ಡಾಂಬರೀಕರಣ ಮಾಡಿ ಫೋರಂ ಮಾಲ್ ಒಳ ಪ್ರವೇಶಿಸಲು ಮತ್ತು ಹೊರ ಹೋಗಲು ಅನುಕೂಲವಾಗುವಂತೆ ಜೋಡಿ ರಸ್ತೆಯ ಎರಡೂ ಭಾಗಗಳಲ್ಲಿಯೂ ಹಂಪ್ಸ್ ಅಳವಡಿಸಲಾಗಿದೆ. ಆದರೆ, ಇದೇ ರಸ್ತೆಯಲ್ಲಿರುವ ಪೊಲೀಸ್ ಪಬ್ಲಿಕ್ ಶಾಲೆಯ ಮುಂದೆ ಪ್ರತಿದಿನ ಒಂದಲ್ಲ ಒಂದು ಅಪಘಾತ ಸಂಭವಿಸುತ್ತಿದ್ದರೂ ಈ ಶಾಲೆಯ ಮುಂಭಾಗದಲ್ಲಿ ರಸ್ತೆಗೆ ಹಂಪ್ಸ್ ಹಾಕುವಂತೆ ಈ ಹಿಂದೆ ಹಲವಾರು ಬಾರಿ ಪತ್ರಿಕೆಯಲ್ಲಿ ಫೋಟೋ ಸಹಿತವಾದ ಸುದ್ದಿ ಪ್ರಕಟವಾದರೂ ಸಂಬಂಧಪಟ್ಟವರು ಯಾರು ಸಹ ಈ ಶಾಲೆಯ ಮುಂಭಾಗದಲ್ಲಿ ಹಂಪ್ಸ್ ಹಾಕದೇ ಮೌನವಹಿಸಿದ್ದಾರೆ.

ಈ ಮಹದೇವಪುರ ಜೋಡಿ ಮುಖ್ಯ ರಸ್ತೆಯ ಎರಡು ಭಾಗದಲ್ಲಿಯೂ ಹಲವು ಕಡೆ ಹಂಪ್ಸ್‌ಗಳನ್ನು ನಿರ್ಮಿಸಿದ್ದಾರೆ. ಆದರೆ, ಮಕ್ಕಳು ಓಡಾಡುವ ಈ ಶಾಲೆಯ ಮುಂಭಾಗದಲ್ಲಿ ಹಂಪ್ಸ್ ಹಾಕದೆ ಅಧಿಕಾರಿಗಳು ಸುಮ್ಮನಿದ್ದಾರೆ. ಪತ್ರಿಕೆಗಳಲ್ಲಿ ಫೋಟೋ ಸಹಿತವಾದ ಸುದ್ದಿ ಪ್ರಕಟವಾದ ನಂತರ ಶಾಲೆಯ ಅವಧಿಯಲ್ಲಿ ಮಾತ್ರ ಪೊಲೀಸ್ ಸಿಬ್ಬಂದಿಯನ್ನು ಹಾಕಿದ್ದು, ಇವರು ಶಾಲೆಯ ಸಮಯದ ನಂತರ ಡ್ಯೂಟಿ ಮುಗಿಸಿಕೊಂಡು ಹೊರಟು ಹೋಗುತ್ತಾರೆ. ಈ ಶಾಲೆಯ ಮುಂಭಾಗ ಹಂಪ್ಸ್ ಅಳವಡಿಸಿದರೆ ಪೊಲೀಸ್ ಸಿಬ್ಬಂದಿಯನ್ನು ನೇಮಿಸುವ ಅವಶ್ಯಕತೆಯೇ ಇರುವುದಿಲ್ಲ. ಈ ರಸ್ತೆಯಲ್ಲಿ ವಾಹನ ಸವಾರರು ಶಾಲೆಯ ಬಳಿ ನಿಧಾನವಾಗಿ ಹೋಗಬೇಕು ಎಂಬ ಪರಿಜ್ಞಾನವಿಲ್ಲದೇ ಬಹಳ ವೇಗವಾಗಿ ವಾಹನ ಚಾಲನೆ ಮಾಡಿಕೊಂಡು ಹೋಗುತ್ತಾರೆ. ಇದರಿಂದ ಪೋಷಕರು ಭಯಭೀತರಾಗಿ ರಸ್ತೆ ದಾಟಲು ಪರಿತಪಿಸುವಂತಾಗಿದೆ. ಆದ್ದರಿಂದ, ದಯವಿಟ್ಟು ಈ ಶಾಲೆಯ ಮುಂಭಾಗದಲ್ಲಿ ಜರೂರಾಗಿ ಎರಡು ಭಾಗದಲ್ಲಿ ಹಂಪ್ಸ್ ಗಳನ್ನು ನಿರ್ಮಿಸಿ ಶಾಲಾ ವಿದ್ಯಾರ್ಥಿಗಳಿಗೆ ಮತ್ತು ಪೋಷಕರಿಗೆ ಅನುಕೂಲ ಮಾಡಿಕೊಡಬೇಕಾಗಿ ಎಲ್ಲಾ ವಿದ್ಯಾರ್ಥಿಗಳ ಮತ್ತು ಪೋಷಕರ ಪರವಾಗಿ ಕೋರುತ್ತೇನೆ.

–ಎಂ.ಕೆ. ಕಿರಣ್, ಟೆಲಿಕಾಂ ಕಾಲೋನಿ, ಉದಯಗಿರಿ ಅಂಚೆ, ಮೈಸೂರು.

ಲೋಕಾಯುಕ್ತ ಸಕ್ರಿಯ ಭ್ರಷ್ಟರ ಪಾಲಿಗೆ ನಡುಕ

ಮಾನ್ಯರೆ,

ರಾಜ್ಯದಲ್ಲಿ ಭ್ರಷ್ಟಾಚಾರ ನಿಗ್ರಹ ದಳವನ್ನು (ಎಸಿಬಿ) ಉಚ್ಚ ನ್ಯಾಯಾಲಯ ರದ್ದುಗೊಳಿಸಿ ಲೋಕಾಯುಕ್ತ ಸಂಸ್ಥೆಯನ್ನು ಮರುಸ್ಥಾಪಿಸಿದ ಬಳಿಕ ಲೋಕಾಯುಕ್ತ ಹೆಚ್ಚು ಸಕ್ರಿಯವಾಗಿರುವುದು ಭ್ರಷ್ಟರ ಪಾಲಿಕೆ ನಡುಕ ಹುಟ್ಟಿಸಿದೆ. ಈ ಹಿಂದೆ ಲೋಕಾಯುಕ್ತರಾಗಿದ್ದ ನ್ಯಾ. ಎನ್. ವೆಂಕಟಾಚಲ ಹಾಗೂ ನ್ಯಾ. ಎನ್. ಸಂತೋಷ್ ಹೆಗ್ಡೆಯವರು ಲೋಕಾಯುಕ್ತ ಸಂಸ್ಥೆಯನ್ನು ದೇಶದಲ್ಲೇ ಮಾದರಿ ಸಂಸ್ಥೆಯನ್ನಾಗಿ ರೂಪಿಸಿದ್ದರು. ಆದರೆ, ಈ ಹಿಂದೆ ಲೋಕಾಯುಕ್ತರಾಗಿದ್ದ ನ್ಯಾ. ವೈ. ಭಾಸ್ಕರ್ ರಾವ್ ಅವರ ವಿಷಯದಲ್ಲಿ ಮತ್ತೊಮ್ಮೆ ಕರ್ನಾಟಕ ಲೋಕಾಯುಕ್ತ ದೇಶದ ಗಮನ ಸೆಳೆದಿತ್ತು. ಇತ್ತೀಚಿನ ದಿನಮಾನದಲ್ಲಿ ಲೋಕಾಯುಕ್ತ ರಾಜ್ಯದಲ್ಲಿ ಹಲವು ಕಡೆಗಳಲ್ಲಿ ತನಿಖೆ ನಡೆಸಿ ಭ್ರಷ್ಟರ ವಿರುದ್ಧ ಪ್ರಕರಣ ದಾಖಲಿಸುತ್ತಿದೆ. ಆದರೆ, ಗಂಭೀರ ಸ್ವರೂಪದ ಪ್ರಕರಣಗಳಲ್ಲಿ ತಪ್ಪಿತಸ್ಥ ಸರ್ಕಾರಿ ಅಧಿಕಾರಿ, ನೌಕರನ ವಿರುದ್ಧ ಯಾವ ಕ್ರಮ ಕೈಗೊಂಡಿದೆ ಎಂಬುದು ಪ್ರಶ್ನೆಯಾಗಿದೆ. ತಪ್ಪಿತಸ್ಥರನ್ನು ಸೇವೆಯಿಂದಲೇ ವಜಾಗೊಳಿಸುವ ನಿರ್ಧಾರ ತೆಗೆದುಕೊಳ್ಳಬೇಕು. ಈ ರೀತಿಯ ಕ್ರಮದಿಂದ ಭ್ರಷ್ಟಾಚಾರ ಎಸಗುವವರು ಪಾಠ ಕಲಿಯುತ್ತಾರೆ ಮತ್ತು ಅಂತಹವರಿಗೆ ಎಚ್ಚರಿಕೆಯ ಗಂಟೆಯಾಗಲಿದೆ. ಶ್ರೀಸಾಮಾನ್ಯನಿಗೆ ಲೋಕಾಯುಕ್ತ ಸಂಸ್ಥೆ ಮೇಲೆ ನಂಬಿಕೆ ಹೆಚ್ಚಾಗಲಿದೆ.

–ಪ್ರಸಾದ್ ಜಿ.ಎಂ, ಮೈಸೂರು.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು

ಸಂಸ್ಕೃತಿ ಚಿಂತನಾ

ಚತುಷ್ಷಷ್ಟಿ ಕಲೆಗಳು

ಚತುಷ್ಷಷ್ಟಿ ಎಂದರೆ ಅರುವತ್ತನಾಲ್ಕು. ಭಾರತ ದೇಶದಲ್ಲಿ ಪ್ರಾಚೀನ ಕಾಲದಿಂದ 64 ಕಲೆಗಳನ್ನು ಅಂಗೀಕರಿಸಲಾಗಿದ್ದು, ವಾತ್ಸ್ಯಾಯನ ಮಹರ್ಷಿಯ ಕಾಮಶಾಸ್ತ್ರವೇ ಮೊದಲಾದ ಹಲವು ಗ್ರಂಥಗಳಲ್ಲಿ ಅವುಗಳನ್ನು ಪಟ್ಟಿ ಮಾಡಿ ವಿವರಿಸಲಾಗಿದೆ. ಸಾಮಾನ್ಯವಾಗಿ ಅಂಗೀಕೃತವಾದ 64 ಕಲೆಗಳು ಯಾವುವೆಂದರೆ–

1) ಗೀತಂ, 2) ವಾದ್ಯಂ, 3) ನೃತ್ಯಂ, 4) ನಾಟಕಂ, 5) ವಾಚನಂ, 6) ದುರೋದರಂ, 7) ಇಂದ್ರಜಾಲಂ, 8) ಹಸ್ತಲಾಘವಂ, 9) ಸೂತ್ರಕ್ರೀಡಾ, 10) ಧಾತುವಾದಃ, 11) ಖನಿವಿದ್ಯಾ, 12) ರತ್ನವಿದ್ಯಾ, 13) ಮಣಿರಾಗಾಕರ ಜ್ಞಾನಂ, 14) ಲೋಹಕ್ರಿಯಾ, 15) ಅಶ್ಮಕ್ರಿಯಾ, 16) ಮೃತ್‌ಕ್ರಿಯಾ, 17) ತಕ್ಷಣಂ, 18) ವೇಣ್ವಾದಿಕ್ರಿಯಾ, 19) ಯಂತ್ರಮಾತೃಕಾ, 20) ವಾಸ್ತುವಿದ್ಯಾ, 21) ಚಿತ್ರಕರ್ಮ, 22) ಪುಷ್ಪಾಸ್ತರಣಂ, 23) ಶಯ್ಯಾರಚನಾ, 24) ವಿಶೇಷಕ ಚ್ಛೇದ್ಯಂ, 25) ಮಾಲ್ಯ ಗ್ರಥನಂ, 26) ಸೂತ್ರಪಟಕರಣಂ, 27) ದಶನವಸನಾಂಗ ರಾಗಃ, 28) ಸೂಚೀವಾನಕರ್ಮ, 29) ಛಲಿತಕಂ, 30) ಗಜಾಶ್ವರಥಕೌಶಲಂ, 31) ಯುದ್ಧವಿದ್ಯಾ, 32) ವ್ಯಾಯಾಮ ವಿದ್ಯಾ, 33) ತರಣಂ, 34) ಪ್ಲವನಂ, 35) ಉದಕಾಘಾತಃ, 36) ಕಾವ್ಯಂ, 37) ಪ್ರಹೇಲಿಕಾ, 38) ಪ್ರತಿಮಾಲಾ, 39) ದುರ್ವಾಚಕಯೋಗಃ, 40) ಅಕ್ಷರಮುಷ್ಟಿಕಾ, 41) ಮ್ಲೇಚ್ಛಿತ ವಿಕಲ್ಪಃ, 42) ಅಭಿಧಾನಕೋಶಃ, 43) ಛಂದೋಜ್ಞಾನಂ, 44) ದೇಶಭಾಷಾಜ್ಞಾನಂ, 45) ಲಿಪಿಕರ್ಮ, 46) ಗಣಿತಂ, 47) ಇತಿಹಾಸ ಪುರಾಣಂ, 48) ನಿಮಿತ್ತ ಜ್ಞಾನಂ, 49) ಅಂಗವಿದ್ಯಾ, 50) ಧಾರಣಾ ಮಾತೃಕಾ, 51) ಔಷಧ ಸಿದ್ಧಿಃ, 52) ವೈನಯಿಕೀ ವಿದ್ಯಾ, 53) ಬಾಲಕ್ರೀಡನಕಾದಿ, 54) ವೈಜಯಿಕೀ ವಿದ್ಯಾ, 55) ಸಾರಥ್ಯಂ, 56) ಮಾರ್ಜನಂ, 57) ಸೇವಾ, 58) ತಂಡುಲಕುಸುಮಬಲಿವಿಕಾಶಃ, 59) ದೇವತಾ ತೋಷಣಂ, 60) ಶುಕಶಾರಿಕಾ ಪ್ರಲಾಪನಂ, 61) ಸೂದಕರ್ಮ, 62) ಗಂಧಯುಕ್ತಿಃ, 63) ಕೃಷಿಃ, 64) ಪಶುಪಾಲನಮ್.

ಇವುಗಳಲ್ಲಿ ಕೆಲವು ಕೆಲಗಳು ಎಲ್ಲರಿಗೂ ಪರಿಚಿತ. ಗೀತ ಎಂದರೆ ಹಾಡುಗಾರಿಕೆ. ವಾದ್ಯ ಎಂದರೆ ಸಂಗೀತದ ವಾದ್ಯಗಳಾದ ವೀಣೆ, ಮೃದಂಗ, ಕೊಳಲು ಇತ್ಯಾದಿಗಳನ್ನು ನುಡಿಸುವುದು, ನೃತ್ಯ ಎಂದರೆ ನರ್ತನ, ನಾಟಕ ಎಂದರೆ ಅಭಿನಯ, ವಾಚನ ಎಂದರೆ ಗಮಕ, ಕಾವ್ಯಗಳನ್ನು ಸರಾಗವಾಗಿ ಓದುವುದು. ಇವೆಲ್ಲವೂ ಪ್ರದರ್ಶಕ ಕಲೆಗಳು. ಇವುಗಳನ್ನು ಜೀವಂತವಾಗಿ ಇರಿಸಿ ಬೆಳೆಸುತ್ತಿರುವ ಅನೇಕ ಕಲಾವಿದರಿದ್ದಾರೆ. ಇವುಗಳಲ್ಲಿ ಒಂದೊಂದೂ ಅನೇಕ ಪ್ರಭೇದಗಳನ್ನು ಹೊಂದಿದೆ. ನಾಟಕ ನಾನಾರೂಪವಾಗಿ, ಚಲನಚಿತ್ರವಾಗಿ ವಿಶ್ವವ್ಯಾಪಿಯಾಗಿದೆ.

ನೃತ್ಯ ಎಂದು ಇಲ್ಲಿ ಕರೆದಿರುವ ಕಲೆ ಇಂದು ಅನೇಕ ಸ್ವತಂತ್ರ ರೂಪಗಳನ್ನು ಹೊಂದಿದೆ. ಭರತನಾಟ್ಯ, ಕಥಕ್, ಕಥಕ್ಕಳಿ, ಮೋಹಿನಿ ಆಟ್ಟಂ, ಮಣಿಪುರಿ ಮುಂತಾದ ಪ್ರಭೇದಗಳಲ್ಲಿ ಆಗಿರುವ ವಿಕಾಸ ಅದ್ಭುತ. ಗೀತ, ವಾದ್ಯ, ನಾಟ್ಯ, ನಾಟಕ ಎಂಬ ಅನೇಕ ಕಲೆಗಳ ಸಂಗಮವಾಗಿರುವ ಯಕ್ಷಗಾನ ತನ್ನದೇ ಆದ ವೈಶಿಷ್ಟ್ಯವನ್ನು ಮೆರೆಸಿದೆ. ಭಾರತದಲ್ಲಿ ಇಂತಹ ಇನ್ನೆಷ್ಟು ಪ್ರಕಾರದ ಕಲೆಗಳಿವೆಯೋ ಬಲ್ಲವರಾರು?

ಧಾತುವಾದ ಎಂದರೆ ಲೋಹಗಳ ಸ್ವರೂಪ. ಅವುಗಳ ರಾಸಾಯನಿಕ ಸಂಯೋಗದಿಂದ ಹೊಸ ಲೋಹಗಳ ಉತ್ಪಾದನೆ ಇತ್ಯಾದಿ. ಇದನ್ನು ಇಂಗ್ಲಿಷ್‌ನಲ್ಲಿ Metallurgy ಎನ್ನುತ್ತಾರೆ. ಇದು ಕಲೆಯೋ ವಿಜ್ಞಾನವೋ ಎಂಬ ಪ್ರಶ್ನೆ ಹುಟ್ಟುತ್ತದೆ. ಇದೇ ರೀತಿ ಖನಿವಾದ ಎಂಬುದು ಗಣಿಗಳ ಅಗೆತ, ಅಲ್ಲಿರುವ ಅದಿರಿನ ಸಂಗ್ರಹ, ಶುದ್ಧೀಕರಣವನ್ನು ಒಳಗೊಳ್ಳುವುದರಿಂದ ಅದು Mineralogy. ಇದು ವಿಜ್ಞಾನದ ಶಾಖೆಯಲ್ಲವೆ? ಇದು ಕಲೆ, ಇದು ವಿಜ್ಞಾನ ಎಂದು ವಿಭಾಜಿಸುವ ರೇಖೆ ಯಾವುದು? ಇದೇ ರೀತಿಯಲ್ಲಿ ರತ್ನಶಾಸ್ತ್ರವು ಶಾಸ್ತ್ರ ಕಲೆ ಅಲ್ಲ ಎಂಬ ವಾದಕ್ಕೆ ಉತ್ತರವೇನು?

ಕಲೆಯ ಮತ್ತು ವಿಜ್ಞಾನದ ಅಂಶಗಳು ಎಲ್ಲ ಜ್ಞಾನ ಶಾಖೆಗಳಲ್ಲಿ ಮಿಳಿತವಾಗಿರುತ್ತವೆ. ಈಗ ಹಾಡುಗಾರಿಕೆಯನ್ನೇ ತೆಗೆದುಕೊಳ್ಳೋಣ. ಒಬ್ಬರು ಅತ್ಯಂತ ಮನೋಹರವಾಗಿ ಹಾಡುತ್ತಾರೆ, ಕೇಳುಗರ ಹೃದಯವನ್ನು ವಶಪಡಿಸಿಕೊಳ್ಳುತ್ತಾರೆ. ಅವರು ಶ್ರೇಷ್ಠ ಗಾಯಕರು (Musician) ಎಂಬುದರಲ್ಲಿ ಸಂಶಯವಿಲ್ಲ. ಆದರೆ ಅವರಿಗೆ ಸಂಗೀತಶಾಸ್ತ್ರದ ಪರಿಚಯವಿಲ್ಲದಿರಬಹುದು. ಮತ್ತೊಬ್ಬರು ಸಂಗೀತ ಶಾಸ್ತ್ರಜ್ಞರು (Musicologist). ಅವರು ಸ್ವರಗಳ, ರಾಗಗಳ, ತಾಳಗಳ ಸ್ವರೂಪವನ್ನು ಶಾಸ್ತ್ರೀಯವಾಗಿ ವಿವರಿಸಬಲ್ಲರು. ಆದರೆ ಹಾಡಲಾರರು. ಎರಡನ್ನೂ ತಿಳಿದವರಲ್ಲಿ ಶಾಸ್ತ್ರ–ಕಲೆಗಳ ಸಂಗಮವನ್ನು ಕಾಣುತ್ತೇವೆ.

ಅರುವತ್ತನಾಲ್ಕು ಕಲೆಗಳಲ್ಲಿ ಕಾವ್ಯ ಕಲೆಯೂ ಸೇರಿದೆ. ಇದರ ಆರಂಭವನ್ನು ವೇದಗಳಲ್ಲೇ ಕಾಣುತ್ತೇವೆ. ಪರಮಾತ್ಮನೇ ಕವಿ, ಅವನು ಕವಿಗಳೆಲ್ಲರ ಕವಿ, ಅವನು ರಚಿಸಿದ ಕಾವ್ಯವೇ ವಿಶ್ವ ಎಂದು ವೇದಗಳು ಹೇಳುತ್ತವೆ. ಆ ಕಾವ್ಯ ಮನುಷ್ಯರಲ್ಲಿ ಅರಳಿತು. ಅದರ ಎರಡು ಕವಲು ಶ್ರವ್ಯ (ಕೇಳಲಾಗುವುದು) ಮತ್ತು ದೃಶ್ಯ (ನೋಡಲಾಗುವುದು). ಶ್ರವ್ಯದಲ್ಲಿ ಗದ್ಯ, ಪದ್ಯ, ಚಂಪೂ ಎಂಬ ತ್ರೈವಿಧ್ಯ. ಗೀತವು ಆಪಾತಮಧುರವಾದರೆ ಕಾವ್ಯವು ಆಲೋಚನಾಮೃತ. ಸಹೃದಯರ ರಸಾನುಭವಕ್ಕೆ ಕಾವ್ಯವೇ ಆಧಾರ, ಕಾವ್ಯವೇ ಸೋಪಾನ. ಇಂದೂ ಮಾನವನ ಭಾವಾಭಿವ್ಯಕ್ತಿಗೆ ಅತ್ಯಂತ ಮುಖ್ಯ ಸಾಧನ ಕಾವ್ಯವೇ.

ಈ ಕಲೆಗಳಲ್ಲಿ ಒಂದರೊಳಗೆ ಒಂದು ಅವಿನಾಭಾವದಿಂದ ಸೇರಿರುವುದನ್ನೂ ಕಾಣುತ್ತೇವೆ. ನಾಟಕವು ಕಾವ್ಯವಿಲ್ಲದೆ ಇರುವುದು ಹೇಗೆ ಸಾಧ್ಯ? ಆಂಗಿಕ, ವಾಚಿಕ, ಆಹಾರ್ಯ, ಸಾತ್ತ್ವಿಕ ಎಂಬ ಚತುರ್ವಿಧ ಅಭಿನಯಗಳಿಲ್ಲದೆ ನಾಟಕದ ಅಸ್ತಿತ್ವವೇ ಇಲ್ಲ. ವಾಚಿಕಾಭಿನಯವೆಂದರೆ ಕಾವ್ಯದ ಮಾತುಗಳ ಉಚಿತ ಗಾನ ಮತ್ತು ಉಚ್ಚಾರಣೆಯೇ ಅಲ್ಲವೇ? ಸಂಗೀತವು ಶುದ್ಧವಾಗಿ ಕಾವ್ಯವಿಲ್ಲದೆ ಸಂಭವಿಸಬಹುದಾದರೂ ಸಾಹಿತ್ಯದ ಜೊತೆಯಲ್ಲಿ ಅದು ಶೋಭಿಸಿದಾಗಲೇ ಪೂರ್ಣ ರಸಾನುಭವ ಸಾಧ್ಯ.

ದುರೋದರಂ ಎಂದರೆ ದ್ಯೂತ. ಇದನ್ನು ಕಲೆ ಎನ್ನಬಹುದೆ? ಪ್ರಾಯಃ ಇದರಲ್ಲಿ ಪಗಡೆ ಮುಂತಾದ ಆಟದ ಕೌಶಲವನ್ನು ಗುರುತಿಸಿ ಇದನ್ನೂ ಒಂದು ಕಲೆಯೆಂದು ಪರಿಗಣಿಸಿರಬಹುದು. ಎಲ್ಲಾ ಕಲೆಗಳೂ ಕೌಶಲವನ್ನೂ ನೈಪುಣ್ಯವನ್ನೂ ಅಪೇಕ್ಷಿಸುತ್ತವೆ. ಅವು ಮಾನವನ ಹಿತವನ್ನೇ ತರುತ್ತವೆ ಎಂದು ಯಾರೂ ಹೇಳಿಲ್ಲ ತಾನೆ? ಇಂದ್ರಜಾಲ, ಮಹೇಂದ್ರ ಜಾಲ ಎಂಬವು ಮಾಯಾವಿದ್ಯೆಗಳು. ಅವುಗಳನ್ನು ಮ್ಯಾಜಿಕ್ ಎಂದು ಕರೆಯಬಹುದು. ಇದು ಇಂದೂ ಪರಿಚಿತವಾಗಿರುವ, ಜನಪ್ರಿಯವಾಗಿರುವ ಕಲೆ. ಇದರ ದುರುಪಯೋಗ ಆಗಬಾರದು ಅಷ್ಟೆ. ಲೋಹಕ್ರಿಯಾ, ಅಶ್ಮಕ್ರಿಯಾ, ಮೃತ್‌ಕ್ರಿಯಾ ಎಂಬವು ಲೋಹಶಿಲ್ಪ, ಶಿಲಾಶಿಲ್ಪ, ಮಣ್ಣಿನಿಂದ ಮಾಡುವ ಶಿಲ್ಪಗಳನ್ನೂ ಒಳಗೊಂಡಿವೆ ಎಂದು ಅರಿತುಕೊಳ್ಳಬೇಕು. ದೇಶಭಾಷಾ ಜ್ಞಾನಂ ಎಂಬುದನ್ನು ಇಂದು ಕಲೆಯೆಂದು ಯಾರೂ ಪರಿಗಣಿಸುವುದಿಲ್ಲ. ಹಲವು ಭಾಷೆಗಳ ಜ್ಞಾನ ಸಾಮಾನ್ಯ ಜನರಿಗೂ ಇರುತ್ತದೆ. ವ್ಯಾಪಾರಿಗಳಿಗೆ ಇದು ಅತ್ಯಂತ ಆವಶ್ಯಕ. ಆದರೆ ಭಾಷಾಜ್ಞಾನವಿರುವವರನ್ನು ಕಲಾವಿದರೆಂದು ಯಾರೂ ಕರೆಯುವುದಿಲ್ಲ.

ಚತುಷ್ಷಷ್ಟಿ ಕಲೆಗಳಲ್ಲದೆ ಇಂದಿನ ಪ್ರಪಂಚದಲ್ಲಿ ಇನ್ನೂ ಎಷ್ಟೋ ಕಲೆಗಳು ಹೊಸದಾಗಿ ಹುಟ್ಟಿರುತ್ತವೆ. ಯಾವುದೇ ಕಾರ್ಯವನ್ನು ಚೆಲುವಾಗಿ ಮಾಡಿದಾಗ, ಆ ಮಾಡುವ ರೀತಿಯೇ ಕಲೆಗೆ ಕಾರಣವಾಗುತ್ತದೆ. ಎಲ್ಲದರಲ್ಲಿ ಸೌಂದರ್ಯವನ್ನು ಕಾಣುವ ದೃಷ್ಟಿಯಿಂದ ವೈಶಿಷ್ಟ್ಯವನ್ನು ತಂದಾಗ ಆ ವಸ್ತು ಕಲೆಯ ಉದಾಹರಣೆಯಾಗಬಹುದು. ಯಾಂತ್ರಿಕವಾಗಿ ತಯಾರಿಸಿದ್ದ ವಸ್ತು ಉಪಯೋಗದ ದೃಷ್ಟಿಯಿಂದ ಅತ್ಯುತ್ತಮವೇ ಆದರೂ ಕಲೆಯ ದೃಷ್ಟಿಯಿಂದ ಅತಿಸಾಮಾನ್ಯವೆನಿಸುತ್ತದೆ.


ಮೊದಲನೆಯ ಕಲಾಕಾರ ಭಗವಂತ ಶಿವನೇ.
ನಿರುಪಾದಾನಸಂಭಾರಮಭಿತ್ತಾಮೇವ ತನ್ವತೇ।
ಜಗಚ್ಚಿತ್ರಂ ನಮಸ್ತಸ್ಮೈ ಕಲಾಶ್ಲಾಘ್ಯಾಯ ಶೂಲಿನೇ॥

ಭಗವಂತನು ಪ್ರಪಂಚವೆಂಬ ಚಿತ್ರವನ್ನು ರಚಿಸಲು ಹೊರಟಾಗ ಭಗವಂತನು ಪ್ರಪಂಚವೆಂಬ ಚಿತ್ರವನ್ನು ರಚಿಸಲು ಹೊರಟಾಗ ಯಾವ ಬಣ್ಣವೂ ಇರಲಿಲ್ಲ. ಯಾವ ಗೋಡೆ ಅಥವಾ ಕ್ಯಾನ್ವಾಸ್ ಇರಲಿಲ್ಲ. ಆದರೂ ಅದ್ಭುತತಮ ಚಿತ್ರವನ್ನು ರಚಿಸಿದ್ದಾನೆ. ಆ ಭಗವಂತನೇ ಎಲ್ಲಾ ಕಲೆಗಳ ಮೂಲ. ತಾಂಡವನನ್ನು ಮಾಡಿ ಶಿವನೇ ನಟರಾಜನಾದ. ಸಾಮಗಾನವನ್ನು ಜಗತ್ತಿಗೆ ಕೊಟ್ಟಿದ್ದೂ ಆ ಭಗವಂತನೇ. ಕೊಳಲನ್ನು ಊದಿದ ಮೊಲನೆಯ ವೈಣವಿಕ ಶ್ರೀ ಕೃಷ್ಣ. ಈ ಕಲೆಗಳನ್ನೆಲ್ಲ ಭಗವಂತ ನಿಗೆ ಅರ್ಪಿಸುವ ಪೂಜೆಯೆಂದು, ಉಪಾಸನೆಯೆಂದು ಭಾರತೀಯರ ಭಾವನೆ.

ಕಲೆಯನ್ನು ಮಾನವರು ಅಭ್ಯಾಸದಿಂದ ಸಾಧಿಸಿ ನೈಪುಣ್ಯವನ್ನು ಗಳಿಸಬಹುದಾದರೂ ಹುಟ್ಟಿನಿಂದಲೇ ಕಲೆಯನ್ನು ರಕ್ತದಲ್ಲೇ ಪಡೆದುಕೊಂಡ ಪ್ರತಿಭಾಶಾಲಿಗಳ ಕಾರ್ಯವೈಖರಿಯೇ ಬೇರೆ. Poets are born, not made ಎಂಬ ಲೋಕೋಕ್ತಿಯು ಕಾವ್ಯಕ್ಕೆ ಸೀಮಿತವಲ್ಲ. ಅದು ಎಲ್ಲಾ ಕಲೆಗಳಿಗೂ ಅನ್ವಯಿಸುವ ಮಾತು. ಆದಿಕವಿ ವಾಲ್ಮೀಕಿಗೆ 'ಕಾವ್ಯವೆಂದರೆ ಹೀಗಿರಬೇಕು, ಅದರಲ್ಲಿ ವರ್ಣನೆ ಹಾಗಿರಬೇಕು' ಎಂದು ಹೇಳಿಕೊಡುವ ಗುರು ಇರುವುದು ಹೇಗೆ ಸಾಧ್ಯ? ಆದರೂ ಮುಂದಿನ ಎಲ್ಲರಿಗೂ ಮಾದರಿಯಾಗಿರುವ, ಸಕಲಲಕ್ಷಣ ಸಂಪನ್ನವಾದ ರಾಮಾಯಣವನ್ನು ರಚಿಸಲಿಲ್ಲವೆ? ಲಿಯನಾರ್ಡೋ ಡವಿನ್ಸಿಗೆ ಚಿತ್ರಕಲೆಯನ್ನು ಹೇಳಿಕೊಟ್ಟವರಾರು? ಅದೆಲ್ಲ ಜನ್ಮಸಿದ್ಧ ಪ್ರತಿಭೆ. ಅದು ಕೋಟಿ ಜನರಲ್ಲಿ ಒಬ್ಬನಿಗಿರಬಹುದಷ್ಟೆ. ಬೇರೆ ಎಲ್ಲರೂ ಪ್ರಯತ್ನಪಟ್ಟು ಕಲೆಯನ್ನು ಸಾಧಿಸಬೇಕು. ಕೆಲಸವನ್ನು ಕಲೆಯಾಗಿ ಮಾರ್ಪಡಿಸುವ ಜಾಣ್ಮೆ ಆವಶ್ಯಕ.

ಕಲೆಗಳಲಿ ಪರಮಕಲೆ ಜೀವನದ ಲಲಿತ ಕಲೆ
ಕಲಿಸಲದನಳವಲ್ಲ ಬಾಹ್ಯಬೋಧನೆಯಿಂ।
ಒಲಿದೊಲಿಸಿಕೊಳುವ ಲೌಕಿಕ ನಯದ ಸೊಗಸ ನೀಂ
ತಿಳಿವುದೊಳ ಹದದಿಂದ ಮಂಕುತಿಮ್ಮ ॥

ವೈವಾಹಿಕ ವಿವಾದಗಳಲ್ಲಿ ತೊಂದರೆಗೆ ಸಿಲುಕುವ ಮಕ್ಕಳ ಹಿತಾಸಕ್ತಿ ಕಾಪಾಡಲು ಮನಃಶಾಸ್ತ್ರಜ್ಞರ ಸಹಕಾರ ಅತ್ಯಗತ್ಯ



ಬೆಂಗಳೂರು, ನ.7– ಮಕ್ಕಳ ಪಾಲನೆಗೆ ಸಂಬಂಧಿಸಿದಂತೆ ಮಾನಸಿಕವಾಗಿ ಎದುರಾಗುವ ಸಮಸ್ಯೆಗಳ ಪರಿಹಾರಕ್ಕೆ ಸೂಕ್ತ ನಿರ್ದೇಶನಗಳನ್ನು ನೀಡುವಂತೆ ಕೋರಿ ದಾಖಲಾಗಿರುವ ಸ್ವಯಂಪ್ರೇರಿತ ಸಾರ್ವಜನಿಕ ಹಿತಾಸಕ್ತಿ ಅರ್ಜಿಯು (ಪಿಐಎಲ್) ಸಂಬಂಧ ಕೇಂದ್ರ ಮತ್ತು ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನೋಟಿಸ್ ಜಾರಿ ಮಾಡಿದೆ.


2023ರ ಅ.5ರಂದು ಅಪ್ರಾಪ್ತ ಬಾಲಕನೊಬ್ಬನ ಪೋಷಕರು ಅವರ ತಾಯಿ, ಅಜ್ಜಿಯ ನಡುವಿನ ಮಕ್ಕಳ ಪಾಲನೆಗೆ ಸಂಬಂಧಿಸಿದ ಉಂಟಾಗಿದ್ದ ನ್ಯಾಯಾಂಗ ನಿಂದನೆ ಅರ್ಜಿಯ ವಿಚಾರಣೆ ಸಂಬಂಧಿಸಿದಂತೆ ಮುಖ್ಯ ನ್ಯಾಯಮೂರ್ತಿ ಪ್ರಸನ್ನ ಬಾಲಚಂದ್ರ ವರಾಳೆ ನಿರ್ದೇಶನ ನೀಡಿದ್ದರು. ಈ ನಿರ್ದೇಶನದಂತೆ ಹೈಕೋರ್ಟ್ ರಿಜಿಸ್ಟ್ರಾರ್ ಸಲ್ಲಿಸಿರುವ ಅರ್ಜಿಯ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಪ್ರಸನ್ನ ಬಾಲಚಂದ್ರ ವರಾಳೆ ಮತ್ತು ನ್ಯಾಯಮೂರ್ತಿ ಕೃಷ್ಣ ಎಸ್.ದೀಕ್ಷಿತ್ ಅವರಿದ್ದ ನ್ಯಾಯಪೀಠ ಸರ್ಕಾರಗಳಿಗೆ ನೋಟಿಸ್ ಜಾರಿ ಮಾಡಿ ಆಕ್ಷೇಪಣೆ ಸಲ್ಲಿಸುವಂತೆ ಕೋರಿದೆ.

ಮಕ್ಕಳ ಪಾಲನೆಯಲ್ಲಿ ದೇಶದ ನ್ಯಾಯಾಂಗ ಮತ್ತು ಕಾನೂನು ಚೌಕಟ್ಟು ಎದುರಿಸುತ್ತಿರುವ ಒಂದು ಸಂಕೀರ್ಣ ಸಮಸ್ಯೆಯಾಗಿದೆ. ಅಲ್ಲದೆ, ಈ ರೀತಿಯ ಸಮಸ್ಯೆಗಳನ್ನು ಎದುರಿಸುವಾಗ ಮನೋವಿಜ್ಞಾನಿಗಳನ್ನು ಒಳಗೊಳ್ಳವಂತೆ ಮಾರ್ಗಸೂಚಿಗಳನ್ನು ರಚಿಸಬೇಕಾಗಿದೆ ಎಂದು ತಿಳಿಸಿದೆ. ದಂಪತಿಯ ನಡುವೆ ಎದುರಾಗುವ ಸಮಸ್ಯೆಗಳಿಗೆ ಮಾನಸಿಕ ಸಮಸ್ಯೆಗಳೂ ಇರಬಹುದಾಗಿದೆ. ಹೀಗಾಗಿ ಈ ರೀತಿಯ ಪ್ರಕರಣಗಳಲ್ಲಿ ಮಗುವಿನ ಪಾಲನೆಗೆ ಒಳಗೊಳ್ಳುವ ವಿಚಾರಗಳಲ್ಲಿ ಕೇವಲ ತಾಂತ್ರಿಕ ಹಾಗೂ ಕಾನೂನಾತ್ಮ ವಿಚಾರಗಳೊಂದಿಗೆ ಮಾನಸಿಕ ಅಂಶಗಳನ್ನೊಳಗೊಂಡು ನೋಡಬೇಕಾಗುತ್ತೆ. ಈ ರೀತಿಯ ಪರಿಸ್ಥಿತಿಗಳನ್ನು ಎದುರಿಸುವುದು ಮಕ್ಕಳ ಹಿತಾಸಕ್ತಿ ರಕ್ಷಣೆ ಮಾಡುವುದು ಮತ್ತು ಮನಃಶಾಸ್ತ್ರಜ್ಞರ ಸಹಕಾರ ಪಡೆಯುವುದು ಅತ್ಯಗತ್ಯ ಎಂದು ಅರ್ಜಿಯಲ್ಲಿ ಹೇಳಲಾಗಿದೆ. ವೈವಾಹಿಕ ವಿವಾದಗಳಲ್ಲಿ ಮಗುವಿನ ಪಾಲನೆಗೆ ಸಂಬಂಧಿಸಿದಂತೆ ಹೆಚ್ಚು ತೊಂದರೆಗೆ ಸಿಲುಕುವುದು ಮಗುವೇ ಆಗಿರುತ್ತದೆ. ಅಲ್ಲದೆ, ವಿಚ್ಛೇದನ ಪ್ರಕರಣಗಳಲ್ಲಿ ಪೋಷಕರು ಮಕ್ಕಳ ಪಾಲನೆ ಮತ್ತು ತಮ್ಮ ವಶಕ್ಕೆ ಪಡೆದುಕೊಳ್ಳುವುದಕ್ಕೆ ಹೋರಾಡುತ್ತಾರೆ. ತಮ್ಮ ಮಕ್ಕಳನ್ನು ಪೋಷಣೆಗೆ ನಾವೇ ಸೂಕ್ತರು ಎಂದು ಮನವೊಲಿಸಲು ಸಾಕಷ್ಟು ಪ್ರಯತ್ನ ಮಾಡುತ್ತಾರೆ.

ಮಗುವಿನ ಅಜ್ಜಿಯರು ಹಾಗೂ ಇತರೆ ಕುಟುಂಬ ಸದಸ್ಯರು ಇದೇ ರೀತಿಯಲ್ಲಿ ಮನವೊಲಿಸುವ ತಂತ್ರಗಳನ್ನು ಬಳಸಿಕೊಂಡು ನ್ಯಾಯಾಂಗದ ಮೇಲೆ ಪ್ರಭಾವ ಬೀರಿ ಪ್ರಕರಣದ ತೀರ್ಪು ದುರ್ಬಲಗೊಳ್ಳುವಂತೆ ಮಾಡಲಾಗುತ್ತಿದೆ. ಇಂತಹ ಸಂದರ್ಭದಲ್ಲಿ ಮಗುವಿನ ಮನಸ್ಸನ್ನು ಸರಿಯಾದ ರೀತಿಯಲ್ಲಿ ಅರ್ಥ ಮಾಡಿಕೊಂಡು ಅದಕ್ಕೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ರಚನೆ ಮಾಡುವುದು ಅತ್ಯಗತ್ಯ ಎಂದು ಅರ್ಜಿಯಲ್ಲಿ ಹೇಳಲಾಗಿದೆ.

ಈ ಕುರಿತಂತೆ ನ್ಯಾಯಾಂಗ ಕ್ಷೇತ್ರ ಹಲವು ಕಾನೂನುಗಳಲ್ಲಿ ನಿಯಮಗಳಿದ್ದರೂ, ಮನೋವಿಜ್ಞಾನ ಕ್ಷೇತ್ರದಲ್ಲಿ ಪರಿಣಿತಿ ಹೊಂದಿರುವುದಿಲ್ಲ. ಹೀಗಾಗಿ ಮಾನಸಿಕ ತಜ್ಞರ ಅಭಿಪ್ರಾಯಗಳು ಮುಖ್ಯವಾಗಿದೆ ಎಂದು ಅರ್ಜಿಯಲ್ಲಿ ಉಲ್ಲೇಖಿಸಲಾಗಿದೆ. ಪ್ರಕರಣದಲ್ಲಿ ನ್ಯಾಯಾಲಯಕ್ಕೆ ನೆರವಾಗಲು ಹಿರಿಯ ವಕೀಲ ಹಾಗೂ ಮಾಜಿ ಹೆಚ್ಚುವರಿ ಅಡ್ವೋಕೇಟ್ ಜನರಲ್ ಧ್ಯಾನ್ ಚಿನ್ನಪ್ಪ ಅವರನ್ನು ಅಮೈಕಾಸ್ ಕ್ಯೂರಿಯನ್ನಾಗಿ ನೇಮಿಸಿದೆ. ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ತಮ್ಮ ಅಹವಾಲುಗಳನ್ನು ಸಲ್ಲಿಸುವಂತೆ ತಿಳಿಸಲಾಗಿದೆ.

ಸತೀಶ್ ಜಾರಕಿಹೊಳಿ ಜೊತೆ ಡಿಕೆಶಿ ಗೌಪ್ಯ ಸಭೆ



ಬೆಂಗಳೂರು: ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಂಗಳವಾರ ಮುಖ್ಯಮಂತ್ರಿ ಸಿದ್ದರಾಮಯ್ಯರ ಕಟ್ಟಾ ಬೆಂಬಲಿಗರಾಗಿರುವ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಭೇಟಿಯಾಗಿದ್ದು, ಗೌಪ್ಯ ಸಭೆ ನಡೆಸಿದ್ದಾರೆ. ಕ್ರೆಸೆಂಟ್ ರಸ್ತೆಯಲ್ಲಿರುವ ಸತೀಶ್ ಜಾರಕಿಹೊಳಿ ಅವರ ಸರ್ಕಾರಿ ನಿವಾಸದಲ್ಲಿ ನಡೆದಿರುವ ಈ ಸಭೆ ರಾಜ್ಯ ರಾಜಕೀಯದಲ್ಲಿ ಸಂಚಲನ ಮೂಡಿಸಿದ್ದು, ವಿಶೇಷವಾಗಿ ಕಾಂಗ್ರೆಸ್‌ನಲ್ಲಿ ಊಹಾಪೋಹಗಳನ್ನು ಹುಟ್ಟುಹಾಕಿದೆ.


ಸಭೆ ಮುಗಿದ ಕೂಡಲೇ ಶಿವಕುಮಾರ್ ನವದೆಹಲಿಗೆ ತೆರಳಿದ್ದಾರೆ. ಈ ಹಿಂದೆ ಜಾರಕಿಹೊಳಿ ಬೆಳಗಾವಿಯಲ್ಲಿ ಶಿವಕುಮಾರ್ ಹಸ್ತಕ್ಷೇಪದ ಬಗ್ಗೆ ತಮ್ಮ ಆಕ್ಷೇಪವನ್ನು ವ್ಯಕ್ತಪಡಿಸಿದ್ದರು. ಜಿಲ್ಲೆಯಲ್ಲಿ ಜಾರಕಿಹೊಳಿ ಕುಟುಂಬದ ಪ್ರಾಬಲ್ಯಕ್ಕೆ ಸವಾಲು ಹಾಕಿ ಲಿಂಗಾಯತ ನಾಯಕಿಯಾಗಿ ಹೊರಹೊಮ್ಮುತ್ತಿರುವ ಮಹಿಳಾ ಮತ್ತು ಮಕ್ಕಳ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಶಿವಕುಮಾರ್ ನೀಡಿದ ಪ್ರಾಮುಖ್ಯತೆ ಮತ್ತು ಬೆಂಬಲದಿಂದ ಪಿಡಬ್ಲ್ಯೂಡಿ ಸಚಿವರು ಅಸಮಾಧಾನಗೊಂಡಿದ್ದರು.

ಇತ್ತೀಚೆಗೆ ಶಿವಕುಮಾರ್ ಬೆಳಗಾವಿಗೆ ಆಗಮಿಸಿದಾಗ ಅವರಿಗೆ ಸ್ವಾಗತ ಕೋರುವ ಕಾರ್ಯಕ್ರಮದಿಂದಲೂ ಸತೀಶ್ ಜಾರಕಿಹೊಳಿ ಹೊರಗುಳಿದಿದ್ದರು. ಅಲ್ಲದೇ, ಶಿವಕುಮಾರ್ ಅವರನ್ನು ಹೊರಗಿಟ್ಟು ಸಿಎಂ ಸಿದ್ದರಾಮಯ್ಯ ಭಾಗವಹಿಸಿದ್ದ ಡಿನ್ನರ್ ಮೀಟ್‌ನಲ್ಲಿ ಹಾಜರಾಗಿದ್ದರು. ಈ ಬೆಳವಣಿಗೆ ದೊಡ್ಡ ಸಂಚಲನ ಮೂಡಿಸಿತ್ತು. 2028ರಲ್ಲಿ ಸಿಎಂ ಸ್ಥಾನಕ್ಕೆ ನಾನು ಕೂಡಾ ಸ್ಪರ್ಧಿ ಎಂದು ಜಾರಕಿಹೊಳಿ ಹೇಳಿದ್ದರು.

ಸಭೆಯ ನಂತರ ಮಾಧ್ಯಮದವರೊಂದಿಗೆ ಮಾತನಾಡಿದ ಜಾರಕಿಹೊಳಿ, ಶಿವಕುಮಾರ್, ಪಕ್ಷ ಸಂಘಟನೆ, ಲೋಕಸಭೆ ಚುನಾವಣೆ, ಜಿಲ್ಲಾಧ್ಯಕ್ಷರ ಬದಲಾವಣೆಗೆ ಸಂಬಂಧಿಸಿದಂತೆ ತಮ್ಮೊಂದಿಗೆ ಚರ್ಚೆ ನಡೆಸಿದ್ದಾರೆ. ಅದನ್ನು ಬಿಟ್ಟು ಬೇರೆ ವಿಷಯ ಬಗ್ಗೆ ಚರ್ಚೆ ನಡೆಸಿಲ್ಲ ಎಂದರು. ಆದರೆ ಈ ಸಭೆಯ ಮೂಲಕ ಸಚಿವ ಜಾರಕಿಹೊಳಿ ಅವರೊಂದಿಗಿನ ಅಸಮಾಧಾನ ನಿವಾರಿಸಲು ಶಿವಕುಮಾರ್ ಬಯಸಿದ್ದಾರೆ ಎಂದು ಪಕ್ಷದ ಮೂಲಗಳು ಹೇಳಿವೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರೊಂದಿಗೆ ಪಕ್ಷ ಸಂಘಟನೆಗೆ ಸಂಬಂಧಿಸಿದಂತೆ ಚರ್ಚಿಸಲು ಶಿವಕುಮಾರ್ ನವದೆಹಲಿಗೆ ತೆರಳಿದ್ದಾರೆ ಎನ್ನಲಾಗಿದೆ.

ಛತ್ತೀಸ್‌ಗಢ, ಮಿಜೋರಾಂ ಚುನಾವಣೆ: ಶೇ. 72ರಷ್ಟು ಮತದಾನ

ರಾಯಪುರ/ಐಜ್ವಾಲ್: ಛತ್ತೀಸಗಢ ಮತ್ತು ಮಿಜೋರಾಂ ವಿಧಾನಸಭೆಗೆ ಮಂಗಳವಾರ ಮತದಾನ ನಡೆದಿದ್ದು ಉಭಯ ರಾಜ್ಯಗಳಲ್ಲಿ ಸಂಜೆ ವೇಳೆಗೆ ಶೇ.72ರಷ್ಟು ಮತದಾನ ನಡೆದಿದೆ.



ಛತ್ತೀಸಗಢ ವಿಧಾನಸಭೆಗೆ ಮೊದಲ ಹಂತದಲ್ಲಿ 20 ಸ್ಥಾನಗಳಿಗೆ ಚುನಾವಣೆ ನಡೆಯಿತು. 5 ಗಂಟೆ ಸುಮಾರಿಗೆ ಶೇ. 69ರಷ್ಟು ಮತದಾನ ನಡೆದಿದೆ ಎಂದು ಚುನಾವಣೆ ಅಧಿಕಾರಿಗಳು ಹೇಳಿದ್ದಾರೆ.

ಮತದಾನಕ್ಕೆ 5,304 ಮತಗಟ್ಟೆಗಳನ್ನು ಸ್ಥಾಪಿಸಲಾಗಿತ್ತು. ಸಣ್ಣಪುಟ್ಟ ಗಲಾಟೆಗಳನ್ನು ಹೊರತುಪಡಿಸಿದರೆ ಚುನಾವಣೆ ಶಾಂತಿಯುತವಾಗಿ ನಡೆಯಿತು. ನಕ್ಸಲ್ ಪ್ರದೇಶಗಳಲ್ಲಿ ಮತದಾನ ನಡೆದಿದ್ದರಿಂದ ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿತ್ತು.

ಮಿಜೋರಾಂ ವಿಧಾನಸಭೆಯ 40 ಸ್ಥಾನಗಳಿಗೆ ಚುನಾವಣೆ ನಡೆಯಿತು. ಸಂಜೆ 5 ಗಂಟೆ ಸುಮಾರಿಗೆ ಶೇ.73ರಷ್ಟು ಮತದಾನ ನಡೆದಿದೆ ಎಂದು ಚುನಾವಣೆ ಅಧಿಕಾರಿಗಳು ಹೇಳಿದ್ದಾರೆ.

ಮತದಾನಕ್ಕೆ 1,276 ಮತಗಟ್ಟೆಗಳನ್ನು ಸ್ಥಾಪಿಸಲಾಗಿತ್ತು. ಸಣ್ಣಪುಟ್ಟ ಗಲಾಟೆಗಳನ್ನು ಹೊರತುಪಡಿಸಿದರೆ ಚುನಾವಣೆ ಶಾಂತಿಯುತವಾಗಿ ನಡೆಯಿತು. ಆಡಳಿತಾರೂಢ ಮಿಜೊ ನ್ಯಾಷನಲ್ ಫ್ರಂಟ್ (ಎಂಎನ್‌ಎಫ್), ವಿರೋಧ ಪಕ್ಷ ಝೆಡ್‌ಪಿಎಂ 40 ಕ್ಷೇತ್ರಗಳಿಗೂ ಅಭ್ಯರ್ಥಿಗಳನ್ನು ಕಣಕ್ಕಿಳಿಸಿವೆ. ಬಿಜೆಪಿ ಮತ್ತು ಎಎಪಿ ಕ್ರಮವಾಗಿ 23 ಮತ್ತು 4 ಕ್ಷೇತ್ರಗಳಲ್ಲಿ ಸ್ಪರ್ಧಿಸಿವೆ. ಮತದಾನಕ್ಕೆ ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ.

ಭ್ರಷ್ಟಾಚಾರ ಆರೋಪ: ಪೋರ್ಚುಗಲ್ ಪ್ರಧಾನಿ ರಾಜೀನಾಮೆ

ಲಿಸ್ಬನ್: ಭ್ರಷ್ಟಾಚಾರದ ಆರೋಪಗಳು ಕೇಳಿ ಬಂದ ಹಿನ್ನೆಲೆಯಲ್ಲಿ ಪೋರ್ಚುಗಲ್ ಪ್ರಧಾನಿ ಆಂಟೋನಿಯೊ ಕೋಸ್ಟಾ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.



ಭ್ರಷ್ಟಾಚಾರ ತನಿಖೆಯ ಭಾಗವಾಗಿ ಪ್ರಧಾನಿ ಕೋಸ್ಟಾ ಅಧಿಕೃತ ನಿವಾಸದ ಮೇಲೆ ದಾಳಿ ನಡೆಸಲಾಗಿತ್ತು. ದಾಳಿ ವೇಳೆ ಕೋಸ್ಟಾ ಅವರ ಉನ್ನತ ಸಹಾಯಕರ ಬಂಧನದ ನಂತರ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದರು. ರಾಷ್ಟ್ರೀಯ ದೂರದರ್ಶನದ ಭಾಷಣ ವೇಳೆ ತಾವು ತಮ್ಮ ರಾಜೀನಾಮೆ ಪತ್ರವನ್ನು ಅಧ್ಯಕ್ಷರಿಗೆ ಸಲ್ಲಿಸಿದ್ದೇನೆ. ನಾನು ನ್ಯಾಯಾಂಗ ವ್ಯವಸ್ಥೆಯನ್ನು ಸಂಪೂರ್ಣವಾಗಿ ನಂಬುತ್ತೇನೆ. ನನ್ನ ಆತ್ಮಸಾಕ್ಷಿಯು ಯಾವುದೇ ಕಾನೂನುಬಾಹಿರ ಅಥವಾ ಖಂಡನೆಗೆ ಒಳಗಾದ ಕೃತ್ಯದಿಂದ ಸ್ಪಷ್ಟವಾಗಿದೆ. ಪೋರ್ಚುಗೀಸ್ ಜನರ ಕಣ್ಣಲ್ಲಿ ಕಣ್ಣಿಟ್ಟು ಹೇಳಲು ಬಯಸುತ್ತೇನೆ ಎಂದರು. ಪೋರ್ಚುಗೀಸ್ ಅಧ್ಯಕ್ಷ ಮಾರ್ಸೆಲೊ ರೆಬೆಲೊ ಡಿ ಸೌಸಾ ಕೋಸ್ಟಾ ಅವರ ರಾಜೀನಾಮೆಯನ್ನು ಅಂಗೀಕರಿಸುವ ನಿರೀಕ್ಷೆಯಿದೆ. ನ್ಯಾಯಾಧೀಶರು ಕೋಸ್ಟಾ ಅವರ ಸಿಬ್ಬಂದಿ ಮುಖ್ಯಸ್ಥ ವಿಟರ್ ಎಸ್ಕೇರಿಯಾ, ಸೈನ್ಸ್ ಪಟ್ಟಣದ ಮೇಯರ್ ಮತ್ತು ಇತರ ಮೂವರ ವಿರುದ್ಧ ಬಂಧನ ವಾರಂಟ್ ಜಾರಿ ಮಾಡಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಡಿ.ಕೆ.ಶಿವಕುಮಾರ್ ವಿರುದ್ಧದ ತನಿಖೆಗೆ ಹೈಕೋರ್ಟ್ ತಡೆಯಾಜ್ಞೆ

ಶುಕ್ರವಾರ 'ಸುಪ್ರೀಂ'ನಲ್ಲಿ ಸಿಬಿಐ ಅರ್ಜಿ ವಿಚಾರಣೆ



ನವದೆಹಲಿ, ನ.7– ಅಕ್ರಮ ಆಸ್ತಿ ಸಂಪಾದನೆ ಪ್ರಕರಣದಲ್ಲಿ ಉಪ ಮುಖ್ಯಮಂತ್ರಿ ಡಿಕೆ ಶಿವ ಕುಮಾರ್ ವಿರುದ್ಧದ ತನಿಖೆಗೆ ತಡೆ ನೀಡಿರುವ ಕರ್ನಾಟಕ ಹೈಕೋರ್ಟ್ ತೀರ್ಪಿನ ವಿರುದ್ಧ ಸಿಬಿಐ ಸಲ್ಲಿಸಿರುವ ಅರ್ಜಿಯನ್ನು ವಿಚಾರಣೆ ನಡೆಸುವುದಾಗಿ ಸುಪ್ರೀಂಕೋರ್ಟ್ ಮಂಗಳವಾರ ಹೇಳಿದೆ.

ಸುಳ್ಳಿನ ಆಧಾರದಲ್ಲಿ ಸಂಪೂರ್ಣ ತನಿಖೆಗೆ ತಡೆ ನೀಡಲಾಗಿದೆ ಎಂದು ಸಿಬಿಐ ಪರ ವಾದ ಮಂಡಿಸಿದ ಎಎಸ್‌ಜಿ ಎಸ್.ವಿ. ರಾಜು ನ್ಯಾಯಾಲಯಕ್ಕೆ ತಿಳಿಸಿದರು. ಶಿವಕುಮಾರ್ ಅವರ ವಿಚಾರಣೆ ನಡೆಸದೆ ಹೈಕೋರ್ಟ್ ತನಿಖೆಗೆ ತಡೆಯಾಜ್ಞೆ ನೀಡಿದೆ ಎಂದು ಈ ಹಿಂದೆ ಸಿಬಿಐ ನ್ಯಾಯಾಲಯಕ್ಕೆ ತಿಳಿಸಿತ್ತು.

ಡಿ.ಕೆ.ಶಿವಕುಮಾರ್ ಪರ ವಾದ ಮಂಡಿಸಿದ ಹಿರಿಯ ವಕೀಲ ಮುಕುಲ್ ರೋಹಟಗಿ, ಉತ್ತರ ನೀಡಲು ಕೊಂಚ ಕಾಲಾವಕಾಶ ಕೋರಿದರು. ನ್ಯಾಯಾಲಯ ಶುಕ್ರವಾರ ಪ್ರಕರಣದ ವಿಚಾರಣೆ ಪುನರಾರಂಭಿಸಲಿದೆ. ಈ ಪ್ರಕರಣ ಸಂಬಂಧ ಜೂನ್‌ನಲ್ಲಿ ಹೈಕೋರ್ಟ್ ಸಿಬಿಐ ತನಿಖೆಗೆ ತಡೆ ನೀಡಿತ್ತು. ನಂತರ ಸಿಬಿಐ ಸುಪ್ರೀಂ ಕೋರ್ಟ್ ಮೆಟ್ಟಿಲೇರಿತ್ತು.

ಶಿವಕುಮಾರ್ ವಿರುದ್ಧದ ಅಕ್ರಮ ಆಸ್ತಿ ಸಂಪಾದನೆ ಪ್ರಕರಣದ ತನಿಖೆಗೆ ತಡೆ ನೀಡಿರುವ ಕರ್ನಾಟಕ ಹೈಕೋರ್ಟ್‌ನ ಮಧ್ಯಂತರ ಆದೇಶವನ್ನು ತೆರವು ಮಾಡಲು ಅಕ್ಟೋಬರ್ 17ರಂದು ನ್ಯಾಯಾಲಯ ನಿರಾಕರಿಸಿತ್ತು. ಆದರೆ ನ್ಯಾಯಾಲಯದ ಆದೇಶದ ವಿರುದ್ಧ ಸಿಬಿಐ ಮಾಡಿದ ಮೇಲ್ಮನವಿಯ ಬಗ್ಗೆ ಅವರ ಪ್ರತಿಕ್ರಿಯೆಯನ್ನು ಕೇಳಿತು.

ಏಪ್ರಿಲ್ 2013ರಿಂದ ಏಪ್ರಿಲ್ 2018ರ ನಡುವೆ ಶಿವಕುಮಾರ್ ಮತ್ತು ಅವರ ಕುಟುಂಬ ಸದಸ್ಯರಿಂದ ಸ್ವಾಧೀನಕ್ಕೆ ಪಡೆಯಲಾದ ಒಟ್ಟು ಮೌಲ್ಯವು 128 ಕೋಟಿಯಿಂದ 162 ಕೋಟಿಗೆ ಏರಿಕೆಯಾಗಿದೆ. ಇದು ಸುಮಾರು ಶೇ.45 ಅಥವಾ ರೂ.75 ಕೋಟಿಯಷ್ಟು ಏರಿಕೆಯಾಗಿದೆ ಎಂದು ಸಿಬಿಐ ತನ್ನ ಅರ್ಜಿಯಲ್ಲಿ ಆರೋಪಿಸಿತ್ತು.

ರಾಜ್ಯದಲ್ಲಿ ವೈದ್ಯರು, ವೈದ್ಯಕೀಯ ಸಿಬ್ಬಂದಿ ಕೊರತೆ

ಸ್ವಯಂಪ್ರೇರಿತ ಪಿಐಎಲ್ ದಾಖಲಿಸಿಕೊಂಡ ಹೈಕೋರ್ಟ್



ಬೆಂಗಳೂರು, ನ.7– ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ಮತ್ತು ವೈದ್ಯಕೀಯ ಸಿಬ್ಬಂದಿ ಕೊರತೆಯನ್ನು ಗಂಭೀರವಾಗಿ ಪರಿಗಣಿಸಿದ ಹೈಕೋರ್ಟ್, ಈ ವಿಷಯದ ಮೇಲೆ ಸ್ವಯಂ ಪ್ರೇರಿತವಾಗಿ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆಯನ್ನು (ಪಿಐಎಲ್) ದಾಖಲಿಸಿಕೊಂಡಿದೆ.

ಕಲಾಪ ಆರಂಭವಾಗುತ್ತಿದ್ದಂತೆಯೇ ಮುಖ್ಯ ನ್ಯಾಯಮೂರ್ತಿ ಪ್ರಸನ್ನ ಬಿ ವರಾಳೆ ಮತ್ತು ನ್ಯಾಯಮೂರ್ತಿ ಕೃಷ್ಣ ಎಸ್ ದೀಕ್ಷಿತ್ ಅವರಿದ್ದ ಪೀಠವು, ವೈದ್ಯರು, ತಂತ್ರಜ್ಞರು ಮತ್ತು ವಿವಿಧ ಸಿಬ್ಬಂದಿ ಸೇರಿದಂತೆ 16,500 ವೈದ್ಯಕೀಯ ಸಿಬ್ಬಂದಿ ಕೊರತೆ ಕುರಿತು ಅ.16ರಂದು ಪತ್ರಿಕೆಯಲ್ಲಿ ಪ್ರಕಟವಾದ ಸುದ್ದಿ ವರದಿ ಉಲ್ಲೇಖಿಸಿದರು.

ನಂತರ, ಈ ಸುದ್ದಿ ವರದಿಯ ಆಧಾರದ ಮೇಲೆ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ನೋಂದಾಯಿಸಲು ಮತ್ತು ಅದನ್ನು ನ್ಯಾಯಾಲಯದ ಮುಂದೆ ಇಡುವಂತೆ ಹೈಕೋರ್ಟ್‌ನ ರಿಜಿಸ್ಟ್ರಾರ್‌ಗೆ ಸೂಚಿಸಲಾಯಿತು.

ರಾಜ್ಯದಲ್ಲಿ ಗ್ರಾಮೀಣ ಭಾಗದ 454 ಕಡೆಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕೊರತೆಯಿದೆ. ಇದಲ್ಲದೆ, ರಾಜ್ಯದಲ್ಲಿ 723 ಎಂಬಿಬಿಎಸ್ ವೈದ್ಯರು, 7,492 ದಾದಿಯರು, 1,517 ಲ್ಯಾಬ್ ತಂತ್ರಜ್ಞರು, 1,517 ಫಾರ್ಮಸಿ ಸಿಬ್ಬಂದಿ, 1,752 ಸಹಾಯಕ ಸಿಬ್ಬಂದಿ ಮತ್ತು 3,253 ಗ್ರೂಪ್ ಡಿ ನೌಕರರು ಸೇರಿ ಹಲವು ಸಿಬ್ಬಂದಿ ಕೊರತೆಯಿದೆ ಎಂದು ವರದಿ ಪ್ರಕಟವಾಗಿರುವುದನ್ನು ಪೀಠ ಗಮನಿಸಿತು. ಇದರಲ್ಲಿ ದೊಡ್ಡ ಮಟ್ಟದ ಸಾರ್ವಜನಿಕ ಹಿತಾಸಕ್ತಿ ಅಡಗಿದ್ದು, ಸ್ವಯಂಪ್ರೇರಿತವಾಗಿ ಪ್ರಕರಣವನ್ನು ಕೈಗೆತ್ತಿಕೊಳ್ಳಲು ಮುಂದಾಯಿತು. ಈ ವಿಚಾರದಲ್ಲಿ ನ್ಯಾಯಾಲಯಕ್ಕೆ ನೆರವಾಗಲು ವಕೀಲ ಶ್ರೀಧರ್ ಪ್ರಭು ಅವರನ್ನು ಅಮಿಕಸ್ ಕ್ಯೂರಿಯನ್ನಾಗಿ ನೇಮಿಸಲಾಗಿದೆ.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಪದಾಧಿಕಾರಿಗಳ ಸಭೆ



ಹೆಬ್ಬಾಡಿಹುಂಡಿ, ನ. 7– ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಪದಾಧಿಕಾರಿಗಳ ಸಭೆ ಇತ್ತೀಚೆಗೆ ನಡೆಯಿತು. ಮೇಳಾಪುರ ವಲಯದ ಹೆಬ್ಬಾಡಿ ಹುಂಡಿ ಗ್ರಾಮದ ಮುಖಂಡ ಪಟೇಲ್ ಈರೇಗೌಡ, ಪಂಚಾಯಿತಿ ಸದಸ್ಯ ಈರೇಗೌಡ, ದೀಪಿಕಾ, ಹಾಲಿನ ಡೈರಿ ಕಾರ್ಯದರ್ಶಿ ರತ್ನಮ್ಮ, ಸೊಸೈಟಿ ನಿರ್ದೇಶಕ ಸುರೇಶ್, ಪ್ರಾದೇಶಿಕ ಆಡಳಿತ ಯೋಜನಾಧಿಕಾರಿ ಲೋಕೇಶ್, ಶ್ರೀರಂಗಪಟ್ಟಣ ಯೋಜನಾಧಿಕಾರಿ ಗಣಪತಿಭಟ್, ವಲಯ ಮೇಲ್ವಿಚಾರಕಿ ಆಶಾರಾಣಿ, ಸೇವಾ ಪ್ರತಿನಿಧಿ ಮಂಜುಳಾ, ಚಂದ್ರಶೇಖರ, ರಂಜಿತಾ, ಸುನಿತಾ, ಸೇವಾ ಪ್ರತಿನಿಧಿಗಳು, ಸಂಘದ ಸದಸ್ಯರು, ಗ್ರಾಮಸ್ಥರು ಹಾಜರಿದ್ದರು.

ಪ್ರತಿವಾರ ಉಳಿತಾಯ ಯೋಜನೆ ಸಂಬಂಧ ಸಭೆ, ಶಿಕ್ಷಣ, ಹೈನುಗಾರಿಕೆ, ಮನೆ ನವೀಕರಣ, ಮನೆ ಮೇಲೆ ಸಾಲ ಇನ್ನು ಮುಂತಾದ ಸೌಕರ್ಯಗಳ ಜೊತೆಗೆ ಸೇವಾ ಕೇಂದ್ರಗಳಲ್ಲಿ 40ಕ್ಕೂ ಹೆಚ್ಚು ಕಾರ್ಯಕ್ರಮಗಳು ಇವೆ ಎಂದು ಲೋಕೇಶ್ ತಿಳಿಸಿದರು.

ಶ್ರೀರಂಗಪಟ್ಟಣ ಯೋಜನಾಧಿಕಾರಿ ಗಣಪತಿ ಭಟ್, ವಾರ ಸಭೆ ನಡೆಸಿ, ಭವಿಷ್ಯದ ದೃಷ್ಟಿಯಿಂದ SBI ವಿಮಾ ಸಂಸ್ಥೆಯೊಂದಿಗೆ ಒಡಂಬಡಿಕೆ ಮಾಡಿಕೊಂಡು ವಿಮೆ ಮಾಡಿಸಬೇಕು. ಹಾಗೇ ವಾರದ ಚಾರ್ಟ್ ಸಿದ್ಧಪಡಿಸಿ ಸದಸ್ಯರಿಗೆ ಸಾಲಗಳನ್ನು ನೀಡಲಾಗಿದೆ. ಕಡಿಮೆ ಬಡ್ಡಿದರದಲ್ಲಿ ಕೃಷಿ, ಕುರಿ, ಹಸು, ಹೈನುಗಾರಿಕೆಗಳಿಗೆ ಹೆಚ್ಚು ಒತ್ತು ಕೊಟ್ಟು ಸಾಲ ಸೌಲಭ್ಯಗಳನ್ನು ನೀಡಲಾಗುತ್ತಿದೆ ಎಂದರು.

ದೀಪಾವಳಿಯಲ್ಲಿ ಬೆಳಗಲಿವೆ ಪವಿತ್ರ ದೇಶೀಯ ದೀಪಗಳು!









ಮೈಸೂರು, ನ.7(ಜಿಎ)–ದೀಪಾವಳಿಯಲ್ಲಿ ಪವಿತ್ರ ಬೆಳಕು ಬಿಂಬಿಸಲು ಗೋವಿನ ಸಗಣಿ, ತುಪ್ಪ, ಹಾಲು, ಗಂಜಲ ಮತ್ತು ಮೊಸರು ಬಳಸಿಕೊಂಡು ಪರಿಸರ ಸ್ನೇಹಿ ದೀಪಗಳು ಸಿದ್ಧಗೊಳ್ಳುತ್ತಿವೆ.

ಹೌದು, ದೀಪಗಳ ಹಬ್ಬ ದೀಪಾವಳಿಯಲ್ಲಿ ದೀಪ ಹಾಗೂ ಬೆಳಕೆ ದಿವ್ಯ ಚೇತನ. ಆದರೆ, ಕಾಲಕ್ಕೆ ತಕ್ಕಂತೆ ದೀಪಗಳ ಸ್ವರೂಪವೂ ಬದಲಾಗುತ್ತಿದ್ದು, ಮಣ್ಣಿನ ದೀಪದಿಂದ ಆರಂಭವಾದ ಆಚರಣೆ ಇಂದು ಎಲೆಕ್ಟ್ರಿಕ್ ದೀಪಗಳಾಗಿ ಬದಲಾಗಿವೆ. ಈ ನಡುವೆ ಮೈಸೂರಿನ ಎನ್‌ಜಿಓವೊಂದು ನಮ್ಮ ಸಂಸ್ಕೃತಿ ಮತ್ತು ಪರಿಸರದ ಕಾಳಜಿಯಿಂದ ಕಳೆದ 10 ವರ್ಷಗಳಿಂದ ಗೋವಿನ ಸಗಣಿ, ತುಪ್ಪ, ಹಾಲು, ಗಂಜಲ ಮತ್ತು ಮೊಸರು ಬಳಸಿ ದೀಪ ತಯಾರಿಸಿ ದೀಪಾವಳಿಯಂದು ಉಚಿತವಾಗಿ ನೀಡುವ ಕಾರ್ಯದಲ್ಲಿ ತೊಡಗಿದೆ.

ದೀಪಾವಳಿ ಎಂದ ಕೂಡಲೇ ಕಿರಿಯರಿಂದ ಹಿರಿಯರವರೆಗೂ ಎಲ್ಲರ ಅಚ್ಚುಮೆಚ್ಚಿನ ಹಬ್ಬವಾಗಿದೆ. ಅದರಲ್ಲೂ ಮಕ್ಕಳಿಗೆ ಪಟಾಕಿ ಸಿಡಿಸಲು, ಮಹಿಳೆಯರು ಸಿಹಿ ತಿನಿಸು ತಯಾರಿಸಲು ಉತ್ಸುಕರಾಗಿರುತ್ತಾರೆ. ಆದರೆ, ಸಂಜೆಯಾಗುತ್ತಿದ್ದಂತೆ ಎಲ್ಲಾ ಮನೆಯ ಮುಂದೆ ದೀಪಗಳು ಬೆಳಗುತ್ತವೆ. ಕಾಲಕ್ಕೆ ತಕ್ಕಂತೆ ದೀಪಗಳ ಆಕೃತಿ ಜೊತೆಗೆ ತಂತ್ರಜ್ಞಾನದಿಂದ ಮಣ್ಣು, ಎಣ್ಣೆ ಮಾಯವಾಗಿ ಸಂಪೂರ್ಣ ಎಲೆಕ್ಟ್ರಿಕ್ ದೀಪಗಳಾಗಿ ಬದಲಾಗುತ್ತಿವೆ.

ಮೈಸೂರಿನ ವಿದ್ಯಾರಣ್ಯಪುರಂನಲ್ಲಿರುವ ಪ್ರಗತಿ ಪ್ರತಿಷ್ಠಾನ ಸಂಸ್ಥೆಯೂ ಕಳೆದ 10 ವರ್ಷಗಳಿಂದ ಗೋವಿನ ಸಗಣಿ, ತುಪ್ಪ, ಹಾಲು, ಮೂತ್ರ ಮತ್ತು ಮೊಸರು ಬಳಸಿಕೊಂಡು ದೀಪ ಮಾಡಿ ಉಚಿತವಾಗಿ ಸಾರ್ವಜನಿಕರಿಗೆ ನೀಡುವ ಮೂಲಕ ದೀಪಾವಳಿ ಮತ್ತು ದೀಪದ ಮಹತ್ವ ಸಾರುತ್ತಿದ್ದಾರೆ. 2013ರಲ್ಲಿ ಪ್ರಾರಂಭವಾದ ಈ ಸಂಸ್ಥೆ ಪ್ರತಿ ವರ್ಷವೂ ದೀಪಾವಳಿಗೆ 5 ಸಾವಿರ ಸಗಣಿ ದೀಪಗಳನ್ನು ತಯಾರಿಸಿ, ಉಚಿತವಾಗಿ ಸಾರ್ವಜನಿಕರಿಗೆ ನೀಡುತ್ತಿದ್ದಾರೆ. ಕಳೆದ ವರ್ಷವೂ ನಗರದ ಕೆ.ಆರ್. ವೃತ್ತದಲ್ಲಿ ದೀಪಗಳನ್ನು ವಿತರಿಸಿದ್ದರು.

ದೀಪಾವಳಿಗೆ ಆರು ತಿಂಗಳು ಇರುವಂತೆಯೇ ಮೈಸೂರಿನ ಉದ್ಬೂರಿನ ಬಳಿ ಇರುವ ಪಿಂಜರಾ ಪೋಲ್‌ಗೆ ತೆರಳಿ ಅಲ್ಲಿನ ನಾಟಿ ಹಸುಗಳ ಸಗಣಿಯನ್ನು ಸಂಗ್ರಹಿಸಿಕೊಳ್ಳುತ್ತಾರೆ. ಪಿಂಜರಾ ಪೋಲ್‌ನವರು ಇವರ ಈ ಕಾರ್ಯಕ್ಕೆ ಸಾಥ್ ನೀಡಿದ್ದು, ಪ್ರತಿ ವರ್ಷವೂ ಉಚಿತವಾಗಿ ಸಗಣಿ ಪೂರೈಕೆ ಮಾಡುತ್ತಿದ್ದಾರೆ. ಇಲ್ಲಿಂದ ಸಗಣಿ ಪಡೆದುಕೊಂಡು ಅದನ್ನು ದೀಪ ಮಾಡಲು ಹದಗೊಳಿಸಿಕೊಳ್ಳುತ್ತಾರೆ. ಹಬ್ಬಕ್ಕೆ ಹತ್ತು ದಿನ ಬಾಕಿ ಇರುವಂತೆ ನಗರದ ವಿವಿಧ ಸಂಘ–ಸಂಸ್ಥೆ, ಕಾರ್ಯಕರ್ತರು, ಸ್ಕೌಟ್ ಅಂಡ್ ಗೈಡ್ಸ್ ವಿದ್ಯಾರ್ಥಿಗಳಿಗೆ ತರಬೇತಿ ನೀಡಿ ಅವರ ಮೂಲಕ ದೀಪಗಳನ್ನು ಮಾಡಿಸುತ್ತಾರೆ. ವಿದ್ಯಾರ್ಥಿಗಳು ಬಹಳ ಉತ್ಸಾಹದಿಂದ ಈ ಕಾರ್ಯದಲ್ಲಿ ತೊಡಗಿಸಿಕೊಳ್ಳುತ್ತಾರೆ. ಇವರು ಮಾಡುತ್ತಿರುವ ದೀಪಗಳು ಬಹಳ ಉಪಯುಕ್ತವಾಗಿದ್ದು, ಈ ಸಗಣಿ ದೀಪಗಳನ್ನು ಎರಡು ಬಾರಿ ಬಳಸಬಹುದಾಗಿದೆ. ನಂತರ ಅವೇ ಉರಿದು ಬೂದಿಯಾಗುತ್ತವೆ. ಆ ಗೊಬ್ಬರವನ್ನು ಸಸಿಗಳಿಗೆ ಹಾಕಬಹುದು. ಇದರಿಂದ ಸಸಿಯೂ ಸಂವೃದ್ಧಿಯಾಗಿ ಬೆಳೆಯಲು ಸಹಕಾರಿಯಾಗುತ್ತದೆ.

> "ಈಗಾಗಲೇ ಸಗಣಿ ದೀಪದ ತಯಾರಿಕೆ ಆರಂಭವಾಗಿದ್ದು, 3 ಸಾವಿರ ದೀಪಗಳು ರೆಡಿಯಾಗಿವೆ. ಇನ್ನು ಎರಡು ಸಾವಿರ ದೀಪ ಮಾಡಬೇಕಿದೆ. ಸದ್ಯದಲ್ಲಿಯೇ ಅದು ಪೂರ್ಣವಾಗಲಿದೆ. ಈ ಬಾರಿ ನ.11ರಂದು ದೇವರಾಜ ಮಾರುಕಟ್ಟೆ ಬಳಿಯ ಚಿಕ್ಕ ಗಡಿಯಾರದ ಮುಂಭಾಗ ದೀಪ ವಿತರಿಸುತ್ತೇವೆ.
> – ಡಾ.ಅಜಯ್‌ಕುಮಾರ್ ಜೈನ್, ಅಧ್ಯಕ್ಷ, ಪ್ರಗತಿ ಪ್ರತಿಷ್ಠಾನ

ಸಂಘಟಿತರಾದರೆ ಮಾತ್ರ ಹಿಂದುಳಿದ ಸಮುದಾಯ ಹಕ್ಕುಗಳ ಪಡೆಯಲು ಸಾಧ್ಯ

● ಮುಖ್ಯಮಂತ್ರಿ ಸಿದ್ದರಾಮಯ್ಯ ಸಲಹೆ ● ಸರ್ವರಿಗೂ ಸಮಾನ ಅವಕಾಶ ಸಂವಿಧಾನದ ಆಶಯ ● ಅದರನುಸಾರವೇ ರಾಜ್ಯ ಕಾಂಗ್ರೆಸ್ ಸರ್ಕಾರ ಕಾರ್ಯಕ್ರಮ ರೂಪಿಸುತ್ತಿದೆ



ಬೆಂಗಳೂರು,ನ.7(ಕೆಎಂಶಿ)– ಸಂಘಟನೆ ಬಲಿಷ್ಠವಾಗಿದ್ದರೆ ಮಾತ್ರ ಹಿಂದುಳಿದ ಸಮುದಾಯಗಳು ತಮ್ಮ ಹಕ್ಕುಗಳನ್ನು ಪಡೆದುಕೊಳ್ಳಲು ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಸರ್ವರಿಗೂ ಸಮಾನ ಅವಕಾಶ ಕಲ್ಪಿಸಬೇಕು ಎನ್ನುವುದು ಸಂವಿಧಾನದ ಆಶಯವಾಗಿದೆ, ಇದಕ್ಕೆ ತಕ್ಕಂತೆ ಕಾಂಗ್ರೆಸ್ ಸರ್ಕಾರ ಕಾರ್ಯಕ್ರಮಗಳನ್ನು ರೂಪಿಸುತ್ತಿದೆ ಎಂದರು.

ಜನರ ಕೊಳ್ಳುವ ಶಕ್ತಿ ಹೆಚ್ಚಾದರೆ ಆರ್ಥಿಕತೆ–ಜಿಡಿಪಿ ಬೆಳವಣಿಗೆ ಆಗುತ್ತದೆ, ಸಾರ್ವತ್ರಿಕ ಮೂಲ ಆದಾಯ ಪರಿಕಲ್ಪನೆಯಡಿ ನಮ್ಮ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ನಾಡಿನ ಜನತೆಗೆ ಕೊಟ್ಟಿದೆ.

ಸಾಮಾಜಿಕ, ಆರ್ಥಿಕ ಅಸಮಾನತೆ ತೊಡೆದು ಹಾಕಿದಾಗ ಮಾತ್ರ ವರ್ಗ ರಹಿತ, ಜಾತಿರಹಿತ ಸಮಾಜ ನಿರ್ಮಾಣ ಸಾಧ್ಯ. ಕಾಂಗ್ರೆಸ್ ಸರ್ಕಾರ ಸಮಾಜದ ಅಸಮಾನತೆ ಅಳಿಸಿ ಎಲ್ಲ ವರ್ಗದವರೂ ಮುಖ್ಯವಾಹಿನಿಗೆ ಬರುವಂತಹ ಕಾರ್ಯಕ್ರಮಗಳನ್ನು ರೂಪಿಸುತ್ತಿದೆ. ದಲಿತರು, ಹಿಂದುಳಿದ ವರ್ಗದವರು, ಎಲ್ಲಾ ಜಾತಿಯ ಬಡವರಿಗೂ ಶಕ್ತಿ ತುಂಬುವ ಕಾರ್ಯಕ್ರಮಗಳು, ಯೋಜನೆಗಳನ್ನು ನೀಡಿದ್ದೇವೆ ಎಂದರು.

ಒಂದು ಕೋಟಿ ರೂ.ವರೆಗಿನ ಕಾಮಗಾರಿಗಳಿಗೆ ಗುತ್ತಿಗೆಯಲ್ಲಿ ಮೀಸಲಾತಿ ಕೊಡುವ ಕಾರ್ಯಕ್ರಮವನ್ನು ಬಜೆಟ್‌ನಲ್ಲಿ ಘೋಷಿಸಿದ್ದೇವೆ. ಇದರೊಂದಿಗೆ ಐದು ಗ್ಯಾರಂಟಿ ಯೋಜನೆಗಳು ಮಹಿಳೆಯರು ಮತ್ತು ಅಶಕ್ತರಿಗೆ ಆರ್ಥಿಕ ಶಕ್ತಿ ತುಂಬುತ್ತಿದೆ. ಇದರಿಂದ ರಾಜ್ಯದ ಆರ್ಥಿಕತೆಯೂ ಬೆಳವಣಿಗೆಯಾಗುತ್ತಿದೆ ಎಂದರು.

ಪ್ರವಾಸಕ್ಕೂ ತೆರಳುವ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿ, ಬಿಜೆಪಿಯವರು ರಾಜಕಾರಣಕ್ಕಾಗಿ ಬರ ಅಧ್ಯಯನ ಮಾಡುತ್ತಿದ್ದಾರೆ. ಅದರ ಬದಲು ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿ ಪರಿಹಾರ ಕೊಡಿಸಲಿ ಎಂದು ತಿಳಿಸಿದ್ದಾರೆ.

ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಬರ ಅಧ್ಯಯನಕ್ಕೆ ಹಾಸನಕ್ಕೆ ತೆರಳಿರುವ ಕುರಿತು ಪ್ರತಿಕ್ರಿಯಿಸಿ, ಕೇಂದ್ರ ತಂಡ ಬರ ಅಧ್ಯಯನ ನಡೆಸಿ ಹೋಗಿದೆ, ಇನ್ನೂ ವರದಿ ನೀಡಿಲ್ಲ ಎಂದರು. ರಾಜ್ಯ ಬಿಜೆಪಿ ಬರ ಅಧ್ಯಯನ ಮಾಡಲಿ, ನಮ್ಮ ತಕರಾರು ಇಲ್ಲ, ರೈತರು ಹಾಗೂ ಕರ್ನಾಟಕದ ಬಗ್ಗೆ ಕಾಳಜಿ ಇದ್ದರೆ ಕೇಂದ್ರದಿಂದ ಪರಿಹಾರ ಕೊಡಿಸಲಿ. ಕೇಂದ್ರ ಸರ್ಕಾರಕ್ಕೆ 17,900 ಕೋಟಿ ರೂ. ಪರಿಹಾರ ಕೋರಲಾಗಿದೆ, ರಾಜ್ಯದಲ್ಲಿ ಸುಮಾರು 33,700 ಕೋಟಿ ರೂ. ಮೌಲ್ಯದ ಬೆಳೆ ನಷ್ಟವಾಗಿದೆ ಎಂದರು.

ರಾಜ್ಯದ 25 ಬಿಜೆಪಿ ಸಂಸದರು ಪರಿಹಾರ ಮೊದಲು ಪರಿಹಾರ ಕೊಡಿಸಲಿ, ಕೇಂದ್ರದ ಮಂತ್ರಿಗಳು ರಾಜ್ಯ ಬಿಜೆಪಿ ಸಂಸದರಿಗೆ ಸಮಯವನ್ನೇ ನೀಡಿಲ್ಲ, ಇವರಿಗೆ ಕರ್ನಾಟಕದ ಬಗ್ಗೆ ಕಾಳಜಿ ಇಲ್ಲ ಎಂದರು.

ಬರ ಕುರಿತು ವೈಜ್ಞಾನಿಕ ಸಮೀಕ್ಷೆಯಾಗಿಲ್ಲ ಎಂಬ ಮಾಜಿ ಸಿಎಂ ಹೆಚ್.ಡಿ. ಕುಮಾರಸ್ವಾಮಿ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, ಸಮೀಕ್ಷೆ ಮಾಡಿದವರು ಕೇಂದ್ರ ಸರ್ಕಾರದ ತಂಡ, ಈ ಬಗ್ಗೆ ಅವರೇ ಕೇಂದ್ರ ಸರ್ಕಾರಕ್ಕೆ ವರದಿ ನೀಡಬೇಕು ಎಂದರು. ರಾಜ್ಯ ಕೇಂದ್ರದ ಬಳಿ ಪರಿಹಾರ ಕೇಳಬಾರದಾ, ಕೇಂದ್ರ–ರಾಜ್ಯ ಸಮನ್ವಯದಿಂದ ಕೆಲಸ ಮಾಡಬೇಕು, ಕರ್ನಾಟಕದಲ್ಲಿ ಬರ ಇದೆ, ಕೇಂದ್ರ ಸರ್ಕಾರಕ್ಕೂ ಜವಾಬ್ದಾರಿ ಇದೆ, ರಾಜ್ಯದಲ್ಲಿನ ವಿರೋಧ ಪಕ್ಷಗಳು ಸಲಹೆ ಕೊಡಬೇಕು, ಬರೀ ಟೀಕೆ ಮಾಡುವುದಲ್ಲ ಎಂದರು.

ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಲೆಲ್ಲಾ ಭಯೋತ್ಪಾದಕರಲ್ಲಿ ಧೈರ್ಯ ಹೆಚ್ಚುತ್ತದೆ

ಪ್ರಧಾನಿ ನರೇಂದ್ರ ಮೋದಿ ಟೀಕೆ



ಸೂರಜ್‌ಪುರ(ಛತ್ತೀಸ್‌ಗಢ), ನ.7– ಛತ್ತೀಸ್‌ಗಢ ರಾಜ್ಯದಲ್ಲಿ ನಕ್ಸಲೀಯರ ಹಾವಳಿಯನ್ನು ತಡೆಯುವಲ್ಲಿ ಕಾಂಗ್ರೆಸ್ ವಿಫಲವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ, ಸರ್ಕಾರ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಕಾಂಗ್ರೆಸ್ ಪಕ್ಷ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದಾಗಲೆಲ್ಲಾ ನಕ್ಸಲೀಯರು ಮತ್ತು ಭಯೋತ್ಪಾದಕರು ಮತ್ತೆ ಧೈರ್ಯಶಾಲಿಗಳಾಗಿ ತಮ್ಮ ಚಟುವಟಿಕೆ ಹೆಚ್ಚಿಸಿಕೊಳ್ಳುತ್ತಾರೆ ಎಂದು ಟೀಕಿಸಿದರು.

ಛತ್ತೀಸ್‌ಗಢದ ಸೂರಜ್‌ಪುರ ಜಿಲ್ಲೆಯಲ್ಲಿ ಮಂಗಳವಾರ ಚುನಾವಣಾ ರ‍್ಯಾಲಿಯನ್ನುದ್ದೇಶಿಸಿ ಮಾತನಾಡಿದ ಮೋದಿ, ಆಪಾದಿತ ಮಹದೇವ್ ಬೆಟ್ಟಿಂಗ್ ಆ್ಯಪ್ ಹಗರಣದಲ್ಲಿ ಮುಖ್ಯಮಂತ್ರಿ ಭೂಪೇಶ್ ಬಘೇಲ್ ಅವರನ್ನು ಗುರಿಯಾಗಿಸಿ 30 ಪರ್ಸೆಂಟ್ ಕಮಿಷನ್ ಸರ್ಕಾರ, ಬಹಿರಂಗವಾಗಿ ಬೆಟ್ಟಿಂಗ್ ನಡೆಸುತ್ತಿದೆ ಎಂದು ಘೋಷಣೆ ಕೂಗಿ, ಮೋದಿ ಟೀಕಿಸಿದರು.

ಸಿಎಂ ಬಘೇಲ್ ಅವರನ್ನು ರಾಜ್ಯದಲ್ಲಿ ಜನರು ಪ್ರೀತಿಯಿಂದ 'ಕಾಕಾ' (ಚಿಕ್ಕಪ್ಪ) ಎಂದು ಕರೆಯುತ್ತಾರೆ. ರಾಜ್ಯದ ಒಟ್ಟು 90 ವಿಧಾನಸಭಾ ಕ್ಷೇತ್ರಗಳ ಪೈಕಿ 20 ಕ್ಷೇತ್ರಗಳಿಗೆ ಇಂದು ಮೊದಲ ಹಂತದ ಮತದಾನ ನಡೆಯುತ್ತಿದೆ. ದೇಶದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಲೆಲ್ಲ ಭಯೋತ್ಪಾದಕರು, ನಕ್ಸಲೀಯರು ಭುಗಿಲೇಳುತ್ತಾರೆ.ಕಾಂಗ್ರೆಸ್ ಎಲ್ಲಿ ಅಧಿಕಾರದಲ್ಲಿದೆಯೋ ಅಲ್ಲೆಲ್ಲ ಅಪರಾಧ ಮತ್ತು ಲೂಟಿಯ ಆಡಳಿತವಿದೆ. ನಕ್ಸಲ್ ಹಿಂಸಾಚಾರದ ಘಟನೆಗಳನ್ನು ಇಲ್ಲಿ ತಡೆಯಲು ಕಾಂಗ್ರೆಸ್ ಸರ್ಕಾರ ವಿಫಲವಾಗಿದೆ ಎಂದು ಪ್ರಧಾನಿ ಹೇಳಿದರು.



ಮೈಸೂರಿಗೆ ಆಗಮಿಸಿದ್ದ ವಿಜಯಪುರ ಶಾಸಕ, ಮಾಜಿ ಕೇಂದ್ರ ಸಚಿವ ಬಸನಗೌಡ ಪಾಟೀಲ್ ಯತ್ನಾಳ್ ಮಂಗಳವಾರ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ, ಚಾಮುಂಡೇಶ್ವರಿ ದರ್ಶನ ಪಡೆದರು. ಈ ವೇಳೆ ಕೃಷ್ಣರಾಜ ಕ್ಷೇತ್ರದ ಶಾಸಕ ಶ್ರೀವತ್ಸ ಮತ್ತಿತರರಿದ್ದರು.



ಮೈಸೂರು ಮತ್ತು ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆಯ್ಕೆ ಪ್ರಕ್ರಿಯೆ ಹಿನ್ನೆಲೆಯಲ್ಲಿ ಪೂರ್ವ ಸಿದ್ಧತಾ ಸಭೆ ನಡೆಸಿದ ವೀಕ್ಷಕರೂ ಆದ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಅವರನ್ನು ಕೆಪಿಸಿಸಿ ಕಾರ್ಯದರ್ಶಿ, ಲೋಕಸಭಾ ಚುನಾವಣೆ ಕಾಂಗ್ರೆಸ್ ಆಕಾಂಕ್ಷಿ ಗುರುಪಾದಸ್ವಾಮಿ ಅಭಿನಂದಿಸಿದರು.

ಆಂಧ್ರಪ್ರದೇಶದಲ್ಲಿ ಏಕಾಏಕಿ ಚಲಿಸಿದ ಬಸ್; ಮೂವರ ಸಾವು




ವಿಜಯವಾಡ, ನ.7– ವಿಜಯವಾಡದ ಬಸ್ ನಿಲ್ದಾಣದಲ್ಲಿ ಬಸ್ ಒಂದು ಏಕಾಏಕಿ ಚಲಿಸಿದ ಪರಿಣಾಮ ಮೂವರು ಸಾವನ್ನಪ್ಪಿದ್ದು ಹಲವರು ಗಾಯಗೊಂಡಿದ್ದಾರೆ.

ಪಂಡಿತ್ ನೆಹರು ಬಸ್ ನಿಲ್ದಾಣದಲ್ಲಿ ಬೆಳಿಗ್ಗೆ 8:20ರ ವೇಳೆಗೆ ಈ ಘಟನೆ ನಡೆದಿದೆ. ಘಟನೆಯು ಸಿಸಿಟಿವಿ ದೃಶ್ಯಾವಳಿ ವೈರಲ್ ಆಗತೊಡಗಿದ್ದು, ನಿಲ್ದಾಣದಲ್ಲಿ ನಿಂತಿದ್ದ ಬಸ್ ಏಕಾಏಕಿ ಚಾಲನೆಯಾಗಿದ್ದು, ಪ್ರಯಾಣಿಕರಿಗೆ ಕಲ್ಪಿಸಲಾಗಿದ್ದ ಆಸನ ವ್ಯವಸ್ಥೆ ಪ್ರದೇಶದಲ್ಲಿ ಅಳವಡಿಸಲಾಗಿದ್ದ ಸ್ಟೀಲ್ ರೇಲಿಂಗ್ಸ್‌ಗೆ ಡಿಕ್ಕಿ ಹೊಡೆದಿದೆ. ಅದೇ ಪ್ರದೇಶದಲ್ಲಿದ್ದ ಮೆಟಲ್ ಖುರ್ಚಿಗಳು ನಜ್ಜುಗುಜ್ಜಾಗಿದ್ದು, ಪ್ರಯಾಣಿಕರ ಪೈಕಿ ಮೂವರು ಸಾವನ್ನಪ್ಪಿದ್ದಾರೆ. ಚಾಲಕ ಬಸ್ ಅನ್ನು ಹಿಂದಕ್ಕೆ ಕೊಂಡೊಯ್ಯುವ ಬದಲು, ಮುಂದಕ್ಕೆ ಚಾಲನೆ ಮಾಡಿದ್ದೇ ಬಸ್ ಪ್ಲಾಟ್ ಫಾರ್ಮ್ ಮೇಲೆ ನುಗ್ಗಲು ಕಾರಣವಾಗಿದೆ ಎಂದು ಹಿರಿಯ ಅಧಿಕಾರಿ ಎಂ.ಏಸು ದಾನಮ್ ತಿಳಿಸಿದ್ದಾರೆ.

ಘಟನೆ ಸಂಬಂಧ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ. ವಿಜಯವಾಡ ಬಸ್ ನಿಲ್ದಾಣ ಆಂಧ್ರ ಪ್ರದೇಶ ಮತ್ತು ತೆಲಂಗಾಣ ಎರಡಕ್ಕೂ ಪ್ರಮುಖ ಸಂಪರ್ಕ ಕೇಂದ್ರವಾಗಿದೆ.

ಭಾರತದ ವಿರುದ್ಧ ಹೀನಾಯ ಸೋಲಿನ ಹಿನ್ನೆಲೆ

ವಜಾಗೊಂಡಿದ್ದ ಕ್ರಿಕೆಟ್ ಮಂಡಳಿ ಮರುಸ್ಥಾಪಿಸಿದ ಶ್ರೀಲಂಕಾ ಕೋರ್ಟ್



ಕೊಲಂಬೊ, ನ.7– ಐಸಿಸಿ ವಿಶ್ವಕಪ್‌ನಲ್ಲಿ ಭಾರತದ ವಿರುದ್ಧ ಶ್ರೀಲಂಕಾ ತಂಡವು ಹೀನಾಯ ಸೋಲನನುಭವಿಸಿದ ಬಳಿಕ ರಾಷ್ಟ್ರೀಯ ಕ್ರಿಕೆಟ್ ಮಂಡಳಿಯನ್ನು ವಜಾಗೊಳಿಸಿ ಶ್ರೀಲಂಕಾದ ಕ್ರೀಡಾ ಸಚಿವ ರೋಷನ್ ರಣಸಿಂಘೆ ಹೊರಡಿಸಿದ್ದ ಆದೇಶವನ್ನು ಮಂಗಳವಾರ ನ್ಯಾಯಾಲಯ ರದ್ದುಗೊಳಿಸಿದ್ದು, ವಿಚಾರಣೆ ಪೂರ್ಣಗೊಳ್ಳುವವರೆಗೆ ಕ್ರಿಕೆಟ್ ಮಂಡಳಿಯನ್ನು ತಾತ್ಕಾಲಿಕವಾಗಿ ಮರುಸ್ಥಾಪಿಸಿದೆ.

ಶ್ರೀಲಂಕಾ ಕ್ರಿಕೆಟ್ ಮಂಡಳಿಯನ್ನು ವಜಾಗೊಳಿಸಿ ಮಧ್ಯಂತರ ಸಮಿತಿಯನ್ನು ನೇಮಿಸಿರುವ ಸಚಿವ ರೋಷನ್ ರಣಸಿಂಘೆ ಅವರ ಕ್ರಮವನ್ನು ಪ್ರಶ್ನಿಸಿ ಮಂಡಳಿ ಅಧ್ಯಕ್ಷ ಶಮ್ಮಿ ಸಿಲ್ವಾ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಾಲಯ ಅಂಗೀಕರಿಸಿತು.

ರಾಷ್ಟ್ರೀಯ ಕ್ರಿಕೆಟ್ ಮಂಡಳಿ ಮರುಸ್ಥಾಪನೆಯು ಮುಂದಿನ ಎರಡು ವಾರಗಳವರೆಗೆ ಇರುತ್ತದೆ. ನ್ಯಾಯಾಲಯವು ಈ ಪ್ರಕರಣವನ್ನು ಮತ್ತೊಮ್ಮೆ ವಿಚಾರಣೆ ನಡೆಸುತ್ತದೆ ಎಂದು ನ್ಯಾಯಾಲಯದ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ರಾಷ್ಟ್ರೀಯ ಕ್ರಿಕೆಟ್ ಮಂಡಳಿಯನ್ನು ವಜಾಗೊಳಿಸಿದ್ದ ರಣಸಿಂಘೆ, 1996ರ ಏಕದಿನ ವಿಶ್ವಕಪ್ ವಿಜೇತ ತಂಡದ ನಾಯಕ ಅರ್ಜುನ ರಣತುಂಗ ಅವರನ್ನು ಮಂಡಳಿಯ ಮಧ್ಯಂತರ ಅಧ್ಯಕ್ಷರನ್ನಾಗಿ ನೇಮಿಸಿದ್ದರು. ಇದೀಗ ಈ ಆದೇಶಕ್ಕೆ ನ್ಯಾಯಾಲಯ ತಡೆ ನೀಡಿದ್ದು, ಶಮ್ಮಿ ಸಿಲ್ವಾ ಅವರೇ ಕೆಲಸಕ್ಕೆ ಮರಳಲಿದ್ದಾರೆ ಎಂದು ಮಂಡಳಿಯ ಅಧಿಕಾರಿಗಳು ತಿಳಿಸಿದ್ದಾರೆ.

ಮಂಡಳಿಯ ಬಾಕಿ ಉಳಿದಿರುವ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರವು ಕ್ಯಾಬಿನೆಟ್ ಸಮಿತಿಯನ್ನು ಸಹ ನೇಮಿಸಿದೆ. ಆರ್ಥಿಕವಾಗಿ ಸಂಕಷ್ಟದಲ್ಲಿರುವ ದ್ವೀಪ ರಾಷ್ಟ್ರದ ಶ್ರೀಮಂತ ಕ್ರೀಡಾ ಸಂಸ್ಥೆಯಾಗಿರುವ ಶ್ರೀಲಂಕಾ ಕ್ರಿಕೆಟ್ ಮಂಡಳಿಯೊಳಗೆ ವ್ಯಾಪಕ ಭ್ರಷ್ಟಾಚಾರದ ಆರೋಪಗಳು ಕೇಳಿಬಂದಿದ್ದು, ಮೇ ತಿಂಗಳಿಂದಲೂ ರಣಸಿಂಘೆ ಅವರು ಮಂಡಳಿಯೊಂದಿಗೆ ಸಂಘರ್ಷಕ್ಕಿಳಿದಿದ್ದಾರೆ.

1996ರ ವಿಶ್ವಕಪ್ ವಿಜೇತ ತಂಡದ ನಾಯಕ ರಣತುಂಗ ಅವರು ಸೋಮವಾರ ಅಧಿಕಾರ ವಹಿಸಿಕೊಂಡ ನಂತರ ಮಂಡಳಿಯನ್ನು ಭ್ರಷ್ಟಾಚಾರ ಮುಕ್ತಗೊಳಿಸಲು ಮತ್ತು ರಾಷ್ಟ್ರೀಯ ಕ್ರಿಕೆಟ್ ತಂಡವನ್ನು ಪುನರ್ನಿರ್ಮಿಸಲು ಪ್ರತಿಜ್ಞೆ ಮಾಡಿದ್ದರು.

ಶ್ರೀಲಂಕಾ ಕ್ರಿಕೆಟ್ ಮಂಡಳಿಯು ದೇಶದ ಅತ್ಯಂತ ಭ್ರಷ್ಟ ಸಂಸ್ಥೆ ಎಂದು ಹೆಸರಾಗಿದೆ. ನಾನು ಆ ಇಮೇಜ್ ಅನ್ನು ಬದಲಾಯಿಸಲು ಬಯಸುತ್ತೇನೆ ಎಂದು ರಣತುಂಗ ಸೋಮವಾರ ಹೇಳಿದ್ದಾರೆ.

ಚಾರಿತ್ರಿಕ ದಾಖಲೆಗಳು ನಾಡಿನ ಐತಿಹಾಸಿಕ, ಸಾಮಾಜಿಕ, ಆರ್ಥಿಕ ಅಭಿವೃದ್ಧಿಯ ಪೂರಕ



ಮೈಸೂರು, ನ.7– ಚಾರಿತ್ರಿಕ ದಾಖಲೆಗಳು ನಾಡಿನ ಸಾಂಸ್ಕೃತಿಕ ಮತ್ತು ಐತಿಹಾಸಿಕ, ಸಾಮಾಜಿಕ, ಆರ್ಥಿಕ ಅಭಿವೃದ್ಧಿಯ ಪೂರಕವಾಗಿದೆ. ದಾಖಲೆಗಳಿಲ್ಲದೆ ಯಾವುದೇ ಅಭಿವೃದ್ಧಿ ಯೋಜನೆಗಳನ್ನು ರೂಪಿಸಲು ಸಾಧ್ಯವಿರುವುದಿಲ್ಲ ಎಂದು ರಾಜ್ಯ ಪತ್ರಾಗಾರ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಹೆಚ್.ಎಲ್.ಮಂಜುನಾಥ್ ತಿಳಿಸಿದರು.

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೈರಾಪುರದ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ವಿಭಾಗ ಹಾಗೂ ರಾಜ್ಯ ಪತ್ರಾಗಾರ ಇಲಾಖೆ ಇವರ ಸಹಯೋಗದಲ್ಲಿ ಪತ್ರಾಗಾರ ಪರಿಚಯ ಉಪನ್ಯಾಸ ಮಾಲೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ವೈಜ್ಞಾನಿಕವಾಗಿ ಇತಿಹಾಸದ ಸಂಶೋಧನೆಗೆ ಚಾರಿತ್ರಿಕ ದಾಖಲೆಗಳು ಅವಶ್ಯಕವಾಗಿದೆ. ಈ ಹಿನ್ನೆಲೆಯಲ್ಲಿ ಚಾರಿತ್ರಿಕ ದಾಖಲೆಗಳನ್ನ ಸಂರಕ್ಷಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ 1973ರಲ್ಲಿ ಪ್ರಾರಂಭವಾಗಿದೆ ಎಂದರು.

ಸಾಮಾನ್ಯವಾಗಿ ದಾಖಲೆಗಳು ಕಡತಗಳ ರೂಪದಲ್ಲಿ ರಾಜ್ಯ ಪತ್ರದ ರೂಪದಲ್ಲಿ ನಡಾವಳಿಗಳು, ಆದೇಶಗಳು, ವಾರ್ಷಿಕ ವರದಿಗಳು, ಭಾಷಣಗಳು, ನಕ್ಷೆಗಳು, ಕಾಗದ ಪತ್ರಗಳು, ಛಾಯಾಚಿತ್ರಗಳು, ದಿನಪತ್ರಿಕೆಗಳು, ಧ್ವನಿ ಸಂಗ್ರಹ, ದಾಖಲೆಗಳ ರೂಪದಲ್ಲಿರುತ್ತವೆ. ದಾಖಲೆಗಳ ನಿರ್ವಹಣೆಗಾಗಿಯೇ ಸಾರ್ವಜನಿಕ ದಾಖಲೆಗಳ ಅಧಿನಿಯಮ 2013 ಅನ್ನು ಕರ್ನಾಟಕ ಸರ್ಕಾರ ಜಾರಿಗೆ ತಂದಿದೆ. ಈ ಅಧಿನಿಯಮದಲ್ಲಿ ದಾಖಲೆಗಳ ಸಂರಕ್ಷಣೆ ಬಗ್ಗೆ ದಾಖಲೆಗಳ ವರ್ಗೀಕರಣದ ಬಗ್ಗೆ ದಾಖಲೆಗಳ ನಾಶದ ಬಗ್ಗೆ ಉಲ್ಲೇಖಿಸಲಾಗಿದೆ. ದಾಖಲೆಗಳ ಮೌಲ್ಯಗಳನ್ನು ನಿರ್ಧರಿಸಿ ದಾಖಲೆಗಳನ್ನು ಎ.ಬಿ.ಸಿ.ಡಿ ಎಂಬ ನಾಲ್ಕು ವರ್ಗಗಳಾಗಿ ವಿಂಗಡಿಸಲಾಗಿದೆ. ರಾಜ್ಯ ಪತ್ರಾಗಾರ ಇಲಾಖೆ 1866ರಿಂದ 2019ರವರೆಗೆ ಹಲವಾರು ದಾಖಲೆಗಳನ್ನು ಸಂರಕ್ಷಿಸಿಕೊಂಡು ಬಂದಿರುತ್ತದೆ. ಏಕೀಕರಣ ಚಳವಳಿ, ಸ್ವಾತಂತ್ರ್ಯಹೋರಾಟದ ಚಳವಳಿಗಳು, ಹೋರಾಟಗಾರರು ಕುರಿತಂತಹ ವರದಿಗಳು ಧ್ವನಿ ಸುರುಳಿಗಳು, ಇಂತಹ ಅತ್ಯಮೂಲ್ಯ ದಾಖಲೆಗಳನ್ನು ಕೂಡ ಸಂರಕ್ಷಣೆ ಮಾಡಿಕೊಂಡು ಬಂದಿದೆ ಎಂದರು.

ರಾಜ್ಯ ಪತ್ರಾಗಾರ ಇಲಾಖೆಯು ಪ್ರಸ್ತುತ ಬೆಂಗಳೂರು, ಮೈಸೂರು, ಧಾರವಾಡ, ಗುಲ್ಬರ್ಗಗಳಲ್ಲಿ ಪ್ರಾದೇಶಿಕ ಕಚೇರಿಗಳನ್ನು ಒಳಗೊಂಡಿದೆ. ಮೈಸೂರು ಪತ್ರಾಗಾರ ಇಲಾಖೆಯು 1984ರಲ್ಲಿ ಪ್ರಾರಂಭವಾಗಿದ್ದು, ಇಲ್ಲಿ ಸುಮಾರು ಮೈಸೂರು ರಾಜ ಮನೆತನದ ದಿನನಿತ್ಯದ ಅರಮನೆ ಆಡಳಿತಕ್ಕೆ ಸಂಬಂಧಿಸಿದಂತೆ ಸುಮಾರು 160 ವರ್ಷಕ್ಕೂ ಹಳೆಯ 15,000 ಕ್ಕೂ ಹೆಚ್ಚು ಕಡತಗಳನ್ನು ಸಂರಕ್ಷಣೆ ಮಾಡಿಕೊಂಡು ಬಂದಿದೆ ಎಂದರು.

ಪತ್ರಾಗಾರ ದಾಖಲೆಗಳನ್ನು ಹಂತಹಂತವಾಗಿ ಪ್ರತಿ ವರ್ಷ ಡಿಜಿಟಲೀಕರಣ ಮತ್ತು ಟಿಷ್ಯೂ ಲ್ಯಾಮಿನೇಷನ್ ಮಾಡಿ ಸಂರಕ್ಷಣೆಯನ್ನು ಮಾಡಿಕೊಂಡು ಬಂದಿದ್ದಿವಿ. ಪ್ರಸ್ತುತ ರಾಜ್ಯ ಪತ್ರಾಗಾರ ಇಲಾಖೆ ಸುಮಾರು 1.20 ಕೋಟಿ ದಾಖಲೆಗಳನ್ನು ಡಿಜಿಟಲೀಕರಣ ಮಾಡಿ ಇಲಾಖೆ ವೆಬ್‌ನಲ್ಲಿ ಅಳವಡಿಸಲಾಗಿದೆ. www.kannadasiri.jar.nic.in ವೆಬ್‌ನಲ್ಲಿ ದಾಖಲೆಗಳನ್ನ ವೀಕ್ಷಣೆ ಮಾಡಬಹುದು ಎಂದರು. ಕಾರ್ಯಕ್ರಮದಲ್ಲಿ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ವ್ಯವಸ್ಥಾಪಕರಾದ ಲಲಿತಾಕುಮಾರಿ, ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ವಿಭಾಗದ ಮುಖ್ಯಸ್ಥರಾದ ಡಾ.ಬಿ.ಪಿ.ಇಂದಿರಾ, ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ.ಡಿ.ಪುರುಷೋತ್ತಮ್ ಇತರರು ಭಾಗವಹಿಸಿದ್ದರು.

ಮೈಸೂರು ಮಿತ್ರ

ಬುಧವಾರ 8 ನವೆಂಬರ್ 2023



ಪ್ರಧಾನಮಂತ್ರಿ ಸ್ವನಿಧಿ ಯೋಜನೆ

ಕರ್ನಾಟಕಕ್ಕೆ ಐದನೇ ಸ್ಥಾನ

ಯೋಜನೆ ರಾಜ್ಯ ಸಂಚಾಲಕ, ಮಾಜಿ ಸಚಿವ ರಾಮದಾಸ್

ಮಂಡ್ಯ, ನ.7– ಪ್ರಧಾನಮಂತ್ರಿ ಸ್ವನಿಧಿ ಯೋಜನೆಯಲ್ಲಿ ದೇಶದಲ್ಲೇ ಕರ್ನಾಟಕ 5ನೇ ಸ್ಥಾನದಲ್ಲಿದ್ದು, ಡಿಸೆಂಬರ್ ಅಂತ್ಯದೊಳಗೆ ಮೊದಲ ಸ್ಥಾನಕ್ಕೆ ತರಲು ಪ್ರಯತ್ನಿಸಲಾಗುವುದು ಎಂದು ಸ್ವನಿಧಿ ಯೋಜನೆ ರಾಜ್ಯ ಸಂಚಾಲಕ ಹಾಗೂ ಮಾಜಿ ಸಚಿವ ರಾಮದಾಸ್ ತಿಳಿಸಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸ್ವನಿಧಿ ಯೋಜನೆಯಡಿ ರಾಜ್ಯದ 311 ನಗರ, ಪಟ್ಟಣ ಪ್ರದೇಶಗಳ ಸ್ಥಳೀಯ ಸಂಸ್ಥೆಗಳಿಗೆ ಆದೇಶ ಹೊರಡಿಸಿದ್ದು, ರಾಜ್ಯದಲ್ಲಿ 3.31 ಲಕ್ಷ ಮಂದಿಗೆ ಸಾಲ ನೀಡುವ ಗುರಿ ಹೊಂದಲಾಗಿದ್ದು, 3.08 ಲಕ್ಷ ಮಂದಿಗೆ ಸಾಲ ನೀಡಲಾಗಿದೆ. ಡಿಸೆಂಬರ್ ಅಂತ್ಯದೊಳಗೆ ಗುರಿ ಸಾಧನೆ ಮಾಡಲಾಗುವುದು. ಈ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಪ್ರವಾಸ ಮಾಡುತ್ತಿದ್ದೇನೆ. ಈಗಾಗಲೇ 26 ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡಿದ್ದೇನೆ ಎಂದರು.

ಪ್ರಧಾನ ಮಂತ್ರಿಗಳು ರಾಜ್ಯಕ್ಕೆ 555 ಕೋಟಿ ರೂ. ಬಿಡುಗಡೆ ಮಾಡಿದ್ದು, ಈ ಯೋಜನೆಗೆ ವ್ಯಾಪಾರ ಸ್ಥರಲ್ಲದೆ, ಅಸಂಘಟಿತ ಕಾರ್ಮಿಕರನ್ನು ತರುವ ಉದ್ದೇಶ ಹೊಂದಲಾಗಿದೆ ಎಂದರು. ಸ್ವನಿಧಿ ಯೋಜನೆಯಡಿ ಪ್ರಾರಂಭಿಕ ಹಂತದಲ್ಲಿ 10 ಸಾವಿರ ರೂ. ಸಾಲ ವಿತರಿಸಲಾಗುವುದು. ಸಾಲ ಮರುಪಾವತಿ ಮಾಡಿದಲ್ಲಿ 20 ಸಾವಿರ ಹಾಗೂ 50 ಸಾವಿರಗಳಿಗೆ ಏರಿಕೆ ಮಾಡಲಾಗುವುದು. ಈ ಸಾಲವನ್ನು ನಿಗದಿತ ಸಮಯದೊಳಗೆ ಮರುಪಾವತಿ ಮಾಡಿದಲ್ಲಿ ಮುದ್ರಾ ಯೋಜನೆಗೆ ಪರಿವರ್ತನೆ ಮಾಡಿ 10 ಲಕ್ಷ ರೂ.ವರೆಗೆ ಯಾವುದೇ ಗ್ಯಾರಂಟಿಗಳಿಲ್ಲದೆ ಸಾಲ ನೀಡಲಾಗುತ್ತದೆ ಎಂದರು.

ಪ್ರಧಾನ ಮಂತ್ರಿ ಸ್ವನಿಧಿ, ಸಮೃದ್ಧಿ ತಕ್, ವಿಶ್ವಕರ್ಮ, ಆತ್ಮನಿರ್ಭರ, ಜೀವನ್ ಸುರಕ್ಷಾ ಸೇರಿದಂತೆ ವಿವಿಧ 7 ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಈ ಪೈಕಿ ಸ್ವನಿಧಿ ಯೋಜನೆಯಲ್ಲಿ ಇದುವರೆಗೆ ಬೀದಿ ಬದಿ ವ್ಯಾಪಾರಿಗಳು, ಸಣ್ಣ ಪುಟ್ಟ ವ್ಯಾಪಾರಸ್ಥರಿಗೆ ಸಾಲ ನೀಡಲಾಗುತ್ತಿತ್ತು. ಇದೀಗ ಮನೆ ಮನೆಗೆ ಪತ್ರಿಕೆ ಹಾಕುವವರು, ಹಾಲು ವಿತರಿಸುವವರು, ಇಸ್ತ್ರಿ ಮಾಡುವವರು, ಕ್ಯಾಟರಿಂಗ್, ಟೈಲರಿಂಗ್, ಮನೆ ಮನೆಗೆ ಆಹಾರ, ಇತರೆ ವಸ್ತುಗಳನ್ನು ವಿತರಣೆ ಮಾಡುವವರಿಗೆ ಸಾಲ ನೀಡುವ ಹೊಸ ಯೋಜನೆಯನ್ನು ಜಾರಿಗೊಳಿಸಲಾಗಿದೆ ಎಂದು ನುಡಿದರು.

ಪ್ರಧಾನಮಂತ್ರಿ ಜೀವನ್ ಸುರಕ್ಷಾ ಯೋಜನೆಯಡಿ ಅಪಘಾತ, ಸ್ವಾಭಾವಿಕ ಸಾವು ಸಂಭವಿಸಿದಲ್ಲಿ 2 ಲಕ್ಷ ರೂ. ಪರಿಹಾರ ವಿತರಿಸಲಾಗುತ್ತದೆ. ಮಾತೃ ವಂದನಾ ಯೋಜನೆಯಡಿ ಗರ್ಭಿಣಿ ಸ್ತ್ರೀಯರಿಗೆ ಪ್ರತಿ ತಿಂಗಳು 5 ಸಾವಿರ, ಹೆರಿಗೆಯಾದ ನಂತರ ತಾಯಂದಿರಿಗೆ ಪ್ರತಿ ತಿಂಗಳು 6 ಸಾವಿರ ಅವರ ಖಾತೆಗಳಿಗೆ ಜಮಾ ಮಾಡಲಾಗುತ್ತದೆ ಎಂದರು. ಜಿಲ್ಲೆಯ ಮಂಡ್ಯ, ಮದ್ದೂರು, ಮಳವಳ್ಳಿ, ಶ್ರೀರಂಗಪಟ್ಟಣ, ಕೆ.ಆರ್.ಪೇಟೆ, ಪಾಂಡವಪುರ, ನಾಗಮಂಗಲ ಹಾಗೂ ಬೆಳ್ಳೂರು ಸ್ಥಳೀಯ ಸಂಸ್ಥೆಗಳಲ್ಲಿ ಈ ಯೋಜನೆ ಜಾರಿಯಲ್ಲಿದ್ದು, ಯೋಜನೆ ಪಡೆದ ಕುಟುಂಬದ ಮಕ್ಕಳಿಗೂ ಸಹ ಸಹಾಯ ಮಾಡುವಂತಹ ಪೂರ್ಣ ಪ್ರಮಾಣದ ಯೋಜನೆ ರೂಪಿಸಲಾಗಿದೆ ಎಂದರು.

ಬ್ಯಾಂಕ್‌ಗಳಲ್ಲಿ ಫಲಾನುಭವಿಗಳಿಗೆ ಸರಿಯಾದ ರೀತಿ ಸಾಲ ನೀಡುತ್ತಿಲ್ಲ ಎಂಬ ಆರೋಪದ ಹಿನ್ನೆಲೆಯಲ್ಲಿ ಕೇಂದ್ರ ಹಣಕಾಸು ಸಚಿವರು ಸ್ವತಃ ಬ್ಯಾಂಕುಗಳ ಮುಖ್ಯಸ್ಥರೊಂದಿಗೆ ಸಭೆ ನಡೆಸಿ ಕಟ್ಟುನಿಟ್ಟಿನ ಸೂಚನೆ ನೀಡಿದ್ದು, ಸರ್ಕಾರ ನೀಡುವ ಹಣವನ್ನು ಈ ಯೋಜನೆಯಡಿ ಸಾಲ ವಿತರಿಸಬೇಕು. ಈ ಹಿನ್ನೆಲೆಯಲ್ಲಿ ಪ್ರತಿ ಬುಧವಾರ ಸಾಲಮೇಳ ಆಯೋಜಿಸುವಂತೆ ಸೂಚಿಸಲಾಗಿದ್ದು, ಎಲ್ಲಾ ಬ್ಯಾಂಕುಗಳಲ್ಲೂ ಪ್ರತಿ ಬುಧವಾರದಂದು ಸಾಲಮೇಳ ನಡೆಯಲಿದೆ ಎಂದರು.

ಬೀದಿಬದಿ ವ್ಯಾಪಾರಿಗಳು ಹೆಚ್ಚಾಗಿ ಫೋನ್ ಪೇ ಮೂಲಕ ಯುಪಿಐ ಬಳಸುತ್ತಿದ್ದು, ಇಂತಹ ಬಳಕೆದಾರರನ್ನು ಉತ್ತೇಜಿಸುವ ಸಲುವಾಗಿ ಅವರ ಖಾತೆಗೆ ಪ್ರತಿ ತಿಂಗಳು 100ರೂ. ಜಮಾ ಮಾಡಲಾಗುತ್ತದೆ. ಇದಕ್ಕಾಗಿ ಸರ್ಕಾರ 107.9 ಕೋಟಿ ರೂ.ಗಳನ್ನು ಮೀಸಲಿರಿಸಿದೆ ಎಂದರು. ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಪಿ. ಉಮೇಶ್, ಮುಖಂಡರಾದ ಸಚ್ಚಿದಾನಂದ, ಅಶೋಕ್ ಜಯರಾಂ, ಸಿ.ಟಿ.ಮಂಜುನಾಥ್ ಗೋಷ್ಠಿಯಲ್ಲಿದ್ದರು.



ಕಾವೇರಿಗಾಗಿ ಮುಂದುವರೆದ ಹೋರಾಟ

ಮಂಡ್ಯ, ನ.7– ಕಾವೇರಿ ಕೊಳ್ಳದ ಜಲಾಶಯಗಳಿಂದ ತಮಿಳುನಾಡಿಗೆ ನೀರು ಹರಿಸುವಂತೆ ಆದೇಶಿಸಿರುವ ಕಾವೇರಿ ನದಿ ನೀರು ನಿಯಂತ್ರಣಾ ಸಮಿತಿ, ಪ್ರಾಧಿಕಾರ ಹಾಗೂ ಕರ್ನಾಟಕದ ಹಿತ ಕಾಪಾಡದ ಕೇಂದ್ರ, ರಾಜ್ಯ ಸರ್ಕಾರದ ವಿರುದ್ಧ ಹೋರಾಟ ಮಂಡ್ಯದಲ್ಲಿ ಮುಂದುವರೆದಿದೆ.

ನಗರದ ಸರ್‌ಎಂವಿ ಪ್ರತಿಮೆ ಎದುರು ಜಿಲ್ಲಾ ರೈತ ಹಿತರಕ್ಷಣಾ ಸಮಿತಿಯ 64ನೇ ದಿನದ ನಿರಂತರ ಧರಣಿಯಲ್ಲಿ ಜಿಲ್ಲಾ ರೈತ ಉತ್ಪಾದಕರ ಕಂಪನಿಗಳ ಒಕ್ಕೂಟ, ಸ್ವಾಭಿಮಾನಿ ಒಕ್ಕಲಿಗರ ವೇದಿಕೆ ಹಾಗೂ ಮಹಿಳಾ ಒಕ್ಕೂಟದ ಕಾರ್ಯಕರ್ತರು ಭಾಗಿಯಾಗಿ ಕಾವೇರಿ ಹೋರಾಟ ಬೆಂಬಲಿಸಿದರು. ಬೆಂಗಳೂರು–ಮೈಸೂರು ಹೆದ್ದಾರಿ ತಡೆದು ಕಾವೇರಿ ನೀರು ಉಳಿಸಿಕೊಳ್ಳಲು ಮುಂದಾಗದ ರಾಜ್ಯ ಸರ್ಕಾರ ಹಾಗೂ ಸಂಕಷ್ಟ ಸಮಯದಲ್ಲಿ ಮಧ್ಯ ಪ್ರವೇಶಿಸದ ಪ್ರಧಾನಿ ನರೇಂದ್ರ ಮೋದಿ ಕರ್ನಾಟಕದ ಬಗ್ಗೆ ಮಲತಾಯಿ ಧೋರಣೆ ತೋರುತ್ತಿದ್ದಾರೆ ಎಂದು ಕಿಡಿಕಾರಿದರು.

ಕಾವೇರಿ ವಿಚಾರದಲ್ಲಿ ನ್ಯಾಯ ಸಿಗುವವರೆಗೂ ಹೋರಾಟ ಮುಂದುವರಿಸುತ್ತೇವೆ. ಆಳುವ ಸರ್ಕಾರಗಳು ಕನ್ನಡ ನಾಡಿನ ಹಿತ ಕಾಪಾಡಲು ಮುಂದಾಗಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಒಕ್ಕೂಟದ ಮಹದೇವು, ಶಿವರಾಮೇಗೌಡ, ಮಹದೇವಯ್ಯ, ಮಹೇಂದ್ರ ಸಿದ್ದೇಗೌಡ, ಹನುಮಂತೇಗೌಡ, ಸ್ವಾಭಿಮಾನಿ ಒಕ್ಕಲಿಗರ ವೇದಿಕೆಯ ಕೆ.ಸಿ. ರವೀಂದ್ರ, ಎಲ್.ಕೃಷ್ಣ, ಕೃಷ್ಣಪ್ಪ, ಧನಂಜಯ್, ಮಹಿಳಾ ಒಕ್ಕೂಟದ ಸುಶೀಲಮ್ಮ, ಕೋಮಲ, ಗಾಯತ್ರಿ, ಜ್ಯೋತಿ ನಾಗಣ್ಣ, ಪ್ರೇಮಾ, ನೀನಾ ಪಟೇಲ್, ಜಿಲ್ಲಾ ರೈತ ಹಿತರಕ್ಷಣಾ ಸಮಿತಿಯ ಸುನಂದ ಜಯರಾಂ, ಕೆ.ಬೋರಯ್ಯ, ಜಿ.ಬಿ.ಶಿವಕುಮಾರ್, ರೈತ ಸಂಘದ ಚಂದ್ರಶೇಖರ್, ಕೃಷ್ಣಪ್ರಕಾಶ್, ಮುದ್ದೇಗೌಡ, ನಾರಾಯಣ್, ಚಂದ್ರು, ಕನ್ನಡ ಸೇನೆ ಮಂಜುನಾಥ್ ಇತರರಿದ್ದರು.

ಕಸಾಪದಿಂದ ಯುವಕರಿಗೆ ಕನ್ನಡದ ಬಗ್ಗೆ ಅರಿವು



ಕೆ.ಆರ್.ಪೇಟೆ, ನ.7– ಯುವ ಜನರಲ್ಲಿ ನಾಡು–ನುಡಿ, ನೆಲ–ಜಲ ಹಾಗೂ ಸಾಹಿತ್ಯದ ಬಗ್ಗೆ ಅಭಿಮಾನ ಮೂಡಿಸುವ ಕೆಲಸವನ್ನು ಕನ್ನಡ ಸಾಹಿತ್ಯ ಪರಿಷತ್ ಮಾಡುತ್ತಿದೆ ಎಂದು ತಹಸೀಲ್ದಾರ್ ನಿಸರ್ಗಪ್ರಿಯ ತಿಳಿಸಿದರು.

ಪಟ್ಟಣದ ಗ್ರಾಮಭಾರತಿ ಶಿಕ್ಷಣ ಸಂಸ್ಥೆ ಸಭಾಂಗಣದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಆಯೋಜಿಸಿದ್ದ 3ನೇ ವರ್ಷದ ಶಾಲೆಗೊಂದು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸುವರ್ಣ ಕರ್ನಾಟಕ ಸ್ವಾತಂತ್ರ್ಯೋತ್ಸವ ಸಂಭ್ರಮದ ಅಂಗವಾಗಿ ಕಸಾಪ ತಾಲೂಕಿನ ಎಲ್ಲಾ ಪ್ರೌಢ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಕನ್ನಡದ ಏಕೀಕರಣ, ನೆಲ, ಜಲ ಹಾಗೂ ಭಾಷೆ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿದೆ. ದೇಶದಲ್ಲೇ ಹೆಚ್ಚು 8 ಜ್ಞಾನಪೀಠ ಪ್ರಶಸ್ತಿ ಪಡೆದಿರುವ ಕನ್ನಡ ಸಾಹಿತ್ಯ ಇತರೆ ಭಾಷೆಗಳಿಗಿಂತ ವಿಭಿನ್ನವಾಗಿದ್ದು, ಕಲಿಯಲು ಸುಲಭವಾಗಿದ್ದು ಎಲ್ಲರಿಗೂ ಅರ್ಥವಾಗುವಂತಹ ಅತ್ಯಂತ ಶ್ರೀಮಂತ ಭಾಷೆಯಾಗಿದೆ. ಕನ್ನಡದ ನೆಲದಲ್ಲಿ ವಾಸಿಸುವ ಪ್ರತಿಯೊಬ್ಬರೂ ಕನ್ನಡ ಕಲಿತು ಮಾತನಾಡುವ ಜೊತೆಗೆ ಕನ್ನಡದಲ್ಲೇ ವ್ಯವಹರಿಸುವಂತಾಗಬೇಕು ಎಂದರು.

ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಪೂರ್ಣಚಂದ್ರ ತೇಜಸ್ವಿ ಮಾತನಾಡಿದರು. ಇದೇ ವೇಳೆ ಕರ್ನಾಟಕ ನಾಮಕರಣ ಮಹೋತ್ಸವ 50 ವರ್ಷ ಕಾರ್ಯಕ್ರಮದಲ್ಲಿ ನಡೆದ ಪ್ರಬಂಧ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ಹಸ್ತಿಕಾ ಮತ್ತು ಇತರೆ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಗ್ರಾಮಭಾರತಿ ಪ್ರೌಢಶಾಲೆ ಮುಖ್ಯಶಿಕ್ಷಕ ಹೆಚ್.ಎಸ್.ಕೃಷ್ಣ ಅಧ್ಯಕ್ಷತೆ ವಹಿಸಿದ್ದರು. ಅಖಿಲ ಭಾರತ ವೀರಶೈವ ಮಹಾಸಭಾ ತಾಲೂಕು ಅಧ್ಯಕ್ಷ ವಿ.ಎಸ್. ಧನಂಜಯ್ ಕುಮಾರ್, ತಾಲೂಕು ಉಪನ್ಯಾಸಕರ ಸಂಘದ ಅಧ್ಯಕ್ಷ ಬಿ.ಎಲ್.ಮಂಜುನಾಥ್, ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎಸ್.ಎಂ.ಬಸವರಾಜು, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಪದ್ಮೇಶ್, ಸಾಹಿತಿಗಳಾದ ಶಿ.ಕುಮಾರಸ್ವಾಮಿ, ಲೋಕೇಶ್, ಕನ್ನಡ ನಾಗರಾಜು, ಮಹೇಶ್, ನೀಲಕಂಠ, ಹರಿಚರಣತಿಲಕ್ ಮತ್ತಿತರರಿದ್ದರು.

21 ಕೂಸಿನ ಮನೆ ಆರಂಭಕ್ಕೆ ಸಿದ್ಧತೆ



ಮಳವಳ್ಳಿ, ನ.7– ತಾಲೂಕಿನಾದ್ಯಂತ 21 ಕೂಸಿನ ಮನೆ ಆರಂಭಕ್ಕೆ ಸಿದ್ಧತೆ ಮಾಡಿಕೊಳ್ಳಲಾಗಿದ್ದು, ಮೊದಲನೇ ಹಂತದಲ್ಲಿ ದುಗ್ಗನಹಳ್ಳಿ, ಬಂಡೂರು, ಕಲ್ಲುವೀರನಹಳ್ಳಿ, ಕಂದೇಗಾಲ, ನೆಲಮಾಕನಹಳ್ಳಿಯಲ್ಲಿ ಆರಂಭಿಸಲಾಗಿದೆ. ಗ್ರಾಮೀಣ ಜನರು ಇದರ ಪ್ರಯೋಜನ ಪಡೆಯಬೇಕೆಂದು ಶಾಸಕ ಪಿ.ಎಂ.ನರೇಂದ್ರಸ್ವಾಮಿ ತಿಳಿಸಿದರು.

ಮಂಗಳವಾರ ತಾಲೂಕಿನ ಕಲ್ಲುವೀರನಹಳ್ಳಿ ಗ್ರಾಮದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ನೂತನವಾಗಿ ಆರಂಭಿಸಿರುವ ಕೂಸಿನ ಮನೆ ಶಿಶುಪಾಲನಾ ಕೇಂದ್ರ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮೀಣ ಜನರು ತಮ್ಮ ಮಗುವನ್ನು ಬಿಟ್ಟು ಕೂಲಿಗೆ ಹೋಗಲು ತೊಂದರೆಯಾಗುತ್ತಿದ್ದರಿಂದ ಮಕ್ಕಳನ್ನು ಪೋಷಿಸಲು ಶಿಶುಪಾಲನಾ ಕೇಂದ್ರ ತೆರೆಯಲಾಗುತ್ತಿದ್ದು, ಸದುಪಯೋಗಪಡಿಸಿಕೊಳ್ಳಬೇಕೆಂದು ತಿಳಿಸಿದರು.

ಅಂಗನವಾಡಿ ಕೇಂದ್ರದಲ್ಲಿ 3ರಿಂದ 6 ವರ್ಷದವರೆಗಿನ ಮಕ್ಕಳಿಗೆ ಶಿಕ್ಷಣ ಕಲಿಸುವ ಉದ್ದೇಶ ಹೊಂದಲಾಗಿದೆ. ಶಿಶುಪಾಲನಾ ಕೇಂದ್ರದಲ್ಲಿ ತರಬೇತಿ ಹೊಂದಿದ ಸ್ವಯಂ ಸೇವಕರಿಂದ 1 ರಿಂದ 3 ವರ್ಷದವರೆಗೂ ಮಕ್ಕಳನ್ನು ನೋಡಿಕೊಳ್ಳುವ ವ್ಯವಸ್ಥೆ ಮಾಡಲಾಗಿದೆ. ಇದರಿಂದ ಕೂಲಿಗೆ ಹೋಗುವ ಪೋಷಕರಿಗೂ ಅನುಕೂಲವಾಗಲಿದ್ದು, ಮಕ್ಕಳಿಗೆ ಅನ್ನ ತಿನ್ನಿಸುವುದನ್ನು ಕಲಿಸುವುದರ ಜೊತೆಗೆ ಬಾಣಂತಿಯರಿಗೆ ಮಕ್ಕಳನ್ನು ನೋಡಿಕೊಳ್ಳುವ ಬಗ್ಗೆ ತಿಳುವಳಿಕೆ ನೀಡಲಾಗುವುದು ಎಂದರು.

ಈ ವೇಳೆ ತಾಪಂ ಇಓ ಮಮತಾ, ಗ್ರಾಪಂ ಅಧ್ಯಕ್ಷ ಚನ್ನಿಗರಾಮು, ಟಿಎಪಿಸಿಎಂಎಸ್ ಅಧ್ಯಕ್ಷ ದ್ಯಾಪೇಗೌಡ, ಮಾಜಿ ಅಧ್ಯಕ್ಷ ಕುಳ್ಳ ಚನ್ನಂಕಯ್ಯ, ನಿರ್ದೇಶಕ ಲಿಂಗರಾಜು, ಗ್ರಾಪಂ ಸದಸ್ಯರಾದ ನಾಗರಾಜು, ಪಾಪಣ್ಣ, ಮುಖಂಡರಾದ ರೇವಣ್ಣ, ನಾಗರಾಜು, ರವಿ ಶಿವಲಿಂಗು ಇತರರಿದ್ದರು.

ಹಣಕಾಸು ವಿಚಾರದಲ್ಲಿ ಚಾಕುವಿನಿಂದ ಇರಿದು ವ್ಯಕ್ತಿ ಹತ್ಯೆ



ಭಾರತೀನಗರ, ನ.7– ವ್ಯಕ್ತಿಯೋರ್ವನನ್ನು ಚಾಕುವಿನಿಂದ ಇರಿದು ಹತ್ಯೆ ಮಾಡಿರುವ ಘಟನೆ ಭಾರತೀನಗರದಲ್ಲಿ ನಡೆದಿದೆ. ಇಲ್ಲಿಗೆ ಸಮೀಪದ ಮೆಳ್ಳಹಳ್ಳಿ ಗ್ರಾಮದ ನಿವಾಸಿ ಮಂಟೇಸ್ವಾಮಿ(35) ಹತ್ಯೆಗೊಳಗಾದವರು. ಬಾರ್ ಬೇಂಡಿಂಗ್ ಕೆಲಸ ಮಾಡುತ್ತಿದ್ದ ಮಂಟೇಸ್ವಾಮಿ ಹಾಗೂ ಕ್ಯಾನಹಳ್ಳಿ ರವಿ ಎಂಬುವರ ನಡುವೆ ಕೆಲ ದಿನಗಳ ಹಿಂದೆ ಹಣಕಾಸಿನ ವಿಚಾರದಲ್ಲಿ ಗಲಾಟೆ ನಡೆದಿತ್ತು. ಸೋಮವಾರ ಮಧ್ಯಾಹ್ನ ಹಣ ನೀಡುತ್ತೇನೆ ಬಾ ಎಂದು ರವಿ, ಮಂಟೇಸ್ವಾಮಿಯನ್ನು ಕರೆದಿದ್ದಾನೆ ಎನ್ನಲಾಗಿದೆ. ಈ ವೇಳೆ ಆತನ ಪತ್ನಿ ಲಾವಣ್ಯ ಹೋಗುವುದು ಬೇಡ ಎಂದು ತಡೆದರೂ ಮಂಟೇಸ್ವಾಮಿ, ರವಿ ಜೊತೆ ಹೋಗಿದ್ದಾನೆ. ಸಂಜೆ 5 ಗಂಟೆ ನಂತರ ಮಂಟೇಸ್ವಾಮಿ ಫೋನ್ ಸ್ವಿಚ್ ಆಫ್ ಆಗಿತ್ತು. ಅಲ್ಲದೇ ಮಂಟೇಸ್ವಾಮಿ ರಾತ್ರಿಯಾದರೂ ಮನೆಗೆ ಹಿಂತಿರುಗದಿದ್ದಾಗ ಕುಟುಂಬದವರು ಗಾಬರಿಗೊಂಡಿದ್ದು, ಸ್ನೇಹಿತರು ಮತ್ತು ಕುಟುಂಬಸ್ಥರು ರಾತ್ರಿ ಪೂರ್ತಿ ಹುಡುಕಾಡಿದ್ದಾರೆ. ಆದರೂ ಮಂಟೇಸ್ವಾಮಿ ಸಿಕ್ಕಿರಲಿಲ್ಲ. ಮಂಗಳವಾರ ಮುಂಜಾನೆ ಮನೆಯವರು ಹುಡುಕುತ್ತಿದ್ದಾಗ ಭಾರತೀನಗರ–ಮಂಡ್ಯ ರಸ್ತೆಯ ಸ್ವರೂಪ್ ಎಂಬುವರ ಜಮೀನಿನಲ್ಲಿ ಆತನ ಬೈಕ್ ನಿಂತಿದ್ದನ್ನು ಕಂಡು ಸುತ್ತಮುತ್ತ ಹುಡುಕಾಡಿದ್ದು, ಕೂಗಳತೆ ದೂರದಲ್ಲೇ ಮಂಟೇಸ್ವಾಮಿ ಮೃತದೇಹ ಕಂಡು ಗಾಬರಿಗೊಂಡ ಆತನ ಸ್ನೇಹಿತರು ಕೆಎಂ. ದೊಡ್ಡಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಡಿವೈಎಸ್‌ಪಿ ಕೃಷ್ಣಪ್ಪ, ಇನ್ಸ್‌ಪೆಕ್ಟರ್ ಶ್ರೀಧರ್, ಎಸ್‌ಐ ರಾಮಸ್ವಾಮಿ ಹಾಗೂ ಸಿಬ್ಬಂದಿ ಪರಿಶೀಲನೆ ನಡೆಸಿ ಶವವನ್ನು ಇಲ್ಲಿನ ಸರ್ಕಾರಿ ಆಸ್ಪತ್ರೆಗೆ ರವಾನಿಸಿ ಮರಣೋತ್ತರ ಪರೀಕ್ಷೆ ಬಳಿಕ ವಾರಸುದಾರರಿಗೆ ಒಪ್ಪಿಸಿದ್ದಾರೆ. ದುಷ್ಕರ್ಮಿಗಳು ಮಂಟೇಸ್ವಾಮಿ ಎದೆ ಭಾಗಕ್ಕೆ ಚಾಕುವಿನಿಂದ ಇರಿದು ಹತ್ಯೆ ಮಾಡಿದ್ದು, ಹಣಕಾಸಿನ ವಿಚಾರವಾಗಿ ಈ ದುಷ್ಕೃತ್ಯ ನಡೆದಿದೆ ಎಂದು ಶಂಕಿಸಲಾಗಿದೆ ಎಂದು ತಿಳಿಸಿದ್ದಾರೆ. ಈ ಸಂಬಂಧ ಕೆ.ಎಂ.ದೊಡ್ಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿಗಳ ಪತ್ತೆಗೆ ಕ್ರಮ ಕೈಗೊಳ್ಳಲಾಗಿದೆ.

ಪ್ರತಿಭಟನೆ: ಹತ್ಯೆಗೊಳಗಾದ ಮಂಟೇಸ್ವಾಮಿ ಮೃತದೇಹವನ್ನು ಟೆಂಪೋದಲ್ಲಿ ಕೆ.ಎಂ.ದೊಡ್ಡಿಯ ಮದ್ದೂರು–ಮಳವಳ್ಳಿ ಹೆದ್ದಾರಿಯಲ್ಲಿ ಮೆರವಣಿಗೆ ನಡೆಸಿ ಕೊಲೆ ಆರೋಪಿಗಳನ್ನು ಕೂಡಲೇ ಬಂಧಿಸಬೇಕೆಂದು ಆಗ್ರಹಿಸಿ ಮೃತನ ಸಂಬಂಧಿಕರು, ಸ್ನೇಹಿತರು ಪ್ರತಿಭಟನೆ ನಡೆಸಿದರು. ಆರೋಪಿಗಳನ್ನು ಕೂಡಲೇ ಬಂಧಿಸಬೇಕು. ಇಲ್ಲದಿದ್ದರೇ ಅಂತ್ಯಸಂಸ್ಕಾರ ನಡೆದ ಬಳಿಕ ಉಗ್ರ ಪ್ರತಿಭಟನೆ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಸುರೇಶ್, ಮನು, ಶ್ರೀನಿವಾಸ್, ಸೋಮಶೇಖರ್, ಆನಂದ್, ಬೆಳ್ಳೂರು ಮನು, ಕೃಷ್ಣಮೂರ್ತಿ ಸೇರಿದಂತೆ ಹಲವರಿದ್ದರು.

ಕಾರು ಉರುಳಿ: ತಿಪಟೂರಿನ ಐವರು ಜಲಸಮಾಧಿ

ಒಂದನೇ ಪುಟದಿಂದ

ಪರಿಣಾಮ ಕಾರು ಸಂಪೂರ್ಣವಾಗಿ ನೀರಿನಲ್ಲಿ ಮುಳುಗಿದ್ದರಿಂದ ಅದರಲ್ಲಿದ್ದವರು ಹೊರ ಬರಲು ಸಾಧ್ಯವಾಗದೆ ಜಲಸಮಾಧಿಯಾಗಿದ್ದಾರೆ.

ಕಾರು ನಾಲೆಗೆ ಉರುಳಿ ಬೀಳುವುದನ್ನು ಕಂಡ ಸ್ಥಳೀಯರು ತಕ್ಷಣವೇ ಓಡಿಹೋಗಿ ನಾಲೆಗೆ ಜಿಗಿದು ರಕ್ಷಣೆಗೆ ಪ್ರಯತ್ನಿಸಿದ್ದಾರೆ. ಆದರೆ ನಾಲೆಯಲ್ಲಿ ನೀರಿನ ರಭಸ ಜೋರಾಗಿದ್ದರಿಂದ ಕಾರಿನಲ್ಲಿರುವವರನ್ನು ರಕ್ಷಣೆ ಮಾಡಲು ಅವರಿಗೆ ಸಾಧ್ಯವಾಗಲಿಲ್ಲ. ಅಲ್ಲದೇ ನಿನ್ನೆಯಷ್ಟೇ ನಾಲೆಗೆ ಕೆಆರ್‌ಎಸ್ ಜಲಾಶಯದಿಂದ ಭಾರೀ ಪ್ರಮಾಣದ ನೀರು ಬಿಟ್ಟಿರುವುದರಿಂದ ನಾಲೆ ತುಂಬಿ ಹರಿಯುತ್ತಿದೆ. ಹಾಗಾಗಿ ರಕ್ಷಣೆ ಮಾಡಲಾಗದೆ ದಡಕ್ಕೆ ಬಂದಿದ್ದಾರೆ. ಆದರೆ ಚಾಲಕನ ನಿಯಂತ್ರಣ ತಪ್ಪಿ ಕಾರು ಉರುಳಿಬಿದ್ದಿದೆಯೋ? ಅಥವಾ ಈ ದುರ್ಘಟನೆಗೆ ಆತನ ಅಜಾಗರೂಕತೆ ಕಾರಣವೋ? ತಿಳಿಯುತ್ತಿಲ್ಲ ಎಂದು ಸ್ಥಳೀಯರು ಹೇಳುತ್ತಿದ್ದಾರೆ.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಪೊಲೀಸರು, ಅಗ್ನಿಶಾಮಕ ದಳದ ಸಿಬ್ಬಂದಿ ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ಕಾರ್ಯಾಚರಣೆ ನಡೆಸಿದರೂ ಕಾರು ಪತ್ತೆಯಾಗಲಿಲ್ಲ. ಬಳಿಕ ನುರಿತ ಈಜುಗಾರರ ಸಹಾಯದಿಂದ ಕಾರನ್ನು ಪತ್ತೆ ಹಚ್ಚಲಾಯಿತು. ಅಗ್ನಿಶಾಮಕ ಸಿಬ್ಬಂದಿ ಹಾಗೂ ಸ್ಥಳೀಯರು ಸುಮಾರು 4 ಗಂಟೆಗಳ ಸತತ ಕಾರ್ಯಾಚರಣೆ ನಡೆಸಿ, ಕ್ರೇನ್ ಮೂಲಕ ಕಾರನ್ನು ಮೇಲೆತ್ತಿದಾಗ ಐವರ ಮೃತದೇಹಗಳು ಅದರೊಳಗಿದ್ದವು. ಮೃತ ದೇಹಗಳನ್ನು ಕಾರಿನಿಂದ ಹೊರ ತೆಗೆಯುವ ವೇಳೆ ಮೊಬೈಲ್ ರಿಂಗ್ ಆಗುತ್ತಿತ್ತು. ಬಳಿಕ ಕರೆ ಬಂದ ನಂಬರ್‌ಗೆ ಪೊಲೀಸರು ವಾಪಸ್ ಕರೆ ಮಾಡಿದಾಗ ಮೃತರೆಲ್ಲರೂ ತಿಪಟೂರು ಮೂಲದವರು ಎಂದು ತಿಳಿದು ಬಂದಿತು. ಘಟನೆ ಸಂಬಂಧ ಪಾಂಡವಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಸ್ಥಳಕ್ಕೆ ಶಾಸಕ, ಡಿಸಿ ಭೇಟಿ: ಘಟನೆ ನಡೆದು ಮೂರೂವರೆ ಗಂಟೆ ಬಳಿಕ ಶಾಸಕ ದರ್ಶನ್ ಪುಟ್ಟಣ್ಣಯ್ಯ ಘಟನಾ ಸ್ಥಳಕ್ಕೆ ಆಗಮಿಸಿದರು. ಇದಕ್ಕೂ ಮುನ್ನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯತೀಶ್, ನಂತರ ಜಿಲ್ಲಾಧಿಕಾರಿ ಕುಮಾರ್, ಜಿಪಂ ಸಿಇಓ ಶೇಕ್ ತನ್ವೀರ್ ಆಸೀಫ್, ಎಸಿ ನಂದೀಶ್, ತಹಸೀಲ್ದಾರ್ ಸಂತೋಷ್ ಸೇರಿದಂತೆ ಹಲವು ಅಧಿಕಾರಿಗಳು ಸ್ಥಳಕ್ಕಾಗಮಿಸಿ, ಪರಿಶೀಲಿಸಿದರು.

ನಿರ್ಲಕ್ಷ್ಯವೇ ಕಾರಣ: ವಿಸಿ ನಾಲೆಯ ಸೇತುವೆ ಬಳಿ ಮತ್ತೊಂದು ಸೇತುವೆ ಕಾಮಗಾರಿ ನಡೆಯುತ್ತಿದ್ದು, ನಾಲೆಯ ಸೇತುವೆ ನಿರ್ಮಾಣದ ಕೆಲಸಕ್ಕಾಗಿ ತಡೆಗೋಡೆ ತೆರವುಗೊಳಿಸಲಾಗಿದೆ. ಅಲ್ಲದೆ ಇತ್ತೀಚೆಗೆ ಇದೇ ಸ್ಥಳದಲ್ಲಿ ಬಳ್ಳಾರಿ ಮೂಲದ ಸಿಮೆಂಟ್ ಲಾರಿ ಮೊಗಚಿ ನಾಲೆಗೆ ಬಿದ್ದಿದ್ದ ಕಾರಣ ತಡೆಗೋಡೆ ಕುಸಿದಿತ್ತು. ಇದರಿಂದ ತಡೆಗೋಡೆ ಇಲ್ಲದೆ ಕಾರು ನಾಲೆಗೆ ಉರುಳಿದೆ. ಇದಕ್ಕೆ ಅಧಿಕಾರಿಗಳು, ಗುತ್ತಿಗೆದಾರರ ನಿರ್ಲಕ್ಷ್ಯವೇ ಕಾರಣ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮಂಡ್ಯದಲ್ಲಿ ನಾಲೆಗಳ ದುರಂತ ಸರಣಿ

ಐವರ ದುರ್ಮರಣವಾಗಿದೆ. 5 ವರ್ಷಗಳ ಹಿಂದೆ 2018ರ ನವೆಂಬರ್ 24ರಂದು ಕನಗನಮರಡಿ ಬಳಿಯ ವಿಶ್ವೇಶ್ವರಯ್ಯ ನಾಲೆಗೆ ಖಾಸಗಿ ಬಸ್ ಉರುಳಿ 30 ಮಂದಿ ಸಾವನ್ನಪ್ಪಿದ್ದರು. ಮಂಗಳೂರು ಮೂಲದ ಬಳಕೆಗೆ ಯೋಗ್ಯವಲ್ಲದ ಖಾಸಗಿ ಬಸ್‌ನಲ್ಲಿ ಪ್ರಯಾಣಿಕರನ್ನು ಕರೆದುಕೊಂಡು ಹೋಗುತ್ತಿದ್ದ ಬಸ್ ದುರಂತಕ್ಕೀಡಾಗಿತ್ತು.

ಉಂಡುಬತ್ತಿಯಲ್ಲಿ 24 ಮಂದಿ ಸಾವು: 2011ರಲ್ಲಿ ಪಾಂಡವಪುರ ತಾಲೂಕಿನ ಅರಳಕುಪ್ಪೆ ಸೇರಿದಂತೆ ಸುತ್ತಮುತ್ತಲ ಗ್ರಾಮಸ್ಥರು ನಂಜನಗೂಡಿನಲ್ಲಿ ಬೀಗರ ಊತಣ ಮುಗಿಸಿ ಮೈಸೂರಿನ ಕಡೆಗೆ ಬರುವಾಗ ಮೈಸೂರು ಹೊರವಲಯದ ಉಂಡುಬತ್ತಿ ಕೆರೆಗೆ ಟೆಂಪೋ ಮಗುಚಿ 24 ಮಂದಿ ಪ್ರಾಣ ತೆತ್ತಿದ್ದರು. ಹೀಗೆ ನಾಲೆ ದುರಂತಗಳು ನಡೆಯುತ್ತಿದ್ದರೂ, ಸಂಬಂಧಿಸಿದವರು ಎಚ್ಚೆತ್ತುಕೊಳ್ಳುತ್ತಿಲ್ಲ. ಈಗಲಾದರೂ ದುರಂತಗಳನ್ನು ತಪ್ಪಿಸಲು ಸೂಕ್ತ ಯೋಜನೆ ರೂಪಿಸಿ ಅನುಷ್ಠಾನಗೊಳಿಸದಿದ್ದರೆ ಮತ್ತಷ್ಟು ಜೀವಗಳು ಬಲಿಯಾಗುತ್ತವೆ.





ಮೈಸೂರು, ನೆರೆ ಜಿಲ್ಲೆಗಳಲ್ಲಿ ನಾಲ್ಕೈದು ದಿನ ಮಳೆ ಸಾಧ್ಯತೆ



ಮೈಸೂರು, ನ.7(ಪಿಎಂ)– ಭಾರತೀಯ ಹವಾಮಾನ ಇಲಾಖೆಯ ವರದಿಯಂತೆ ಮುಂದಿನ ನಾಲ್ಕೈದು ದಿನಗಳವರೆಗೆ ಮೈಸೂರು, ಮಂಡ್ಯ, ಕೊಡಗು ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುವ ಸಂಭವವಿದೆ ಎಂದು ನಾಗನಹಳ್ಳಿಯ ಕೃಷಿ ಹವಾಮಾನ ಕ್ಷೇತ್ರ ವಿಭಾಗದ ಪ್ರಕಟಣೆಯಲ್ಲಿ ತಿಳಿಸಿದೆ.

ಮೈಸೂರು ಜಿಲ್ಲೆಗೆ ಸಂಬಂಧಿಸಿದಂತೆ ನ.8ರಿಂದ 12ರವರೆಗೆ ಮೋಡ ಕವಿದ ವಾತಾವರಣ ಇರಲಿದ್ದು, ಸಾಧಾರಣ ಮಳೆ ಬರುವ ಸಂಭವವಿದೆ. ಗರಿಷ್ಠ ಉಷ್ಣಾಂಶ 31 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ಉಷ್ಣಾಂಶ 21ರಿಂದ 22 ಡಿಗ್ರಿ ಸೆಲ್ಸಿಯಸ್ ದಾಖಲಾಗುವ ಸಾಧ್ಯತೆ ಇದೆ. ಅಂತೆಯೇ ಬೆಳಗಿನ ಗಾಳಿಯ ತೇವಾಂಶ ಶೇ.78ರಿಂದ 83ವರೆಗೆ ಮತ್ತು ಮಧ್ಯಾಹ್ನದ ಗಾಳಿಯ ತೇವಾಂಶ ಶೇ.56ರಿಂದ 60ರವರೆಗೆ ಹಾಗೂ ಗಾಳಿಯು ಗಂಟೆಗೆ 1ರಿಂದ 4 ಕಿಲೋಮೀಟರ್ ವೇಗದಲ್ಲಿ ಬೀಸುವ ಸಾಧ್ಯತೆ ಇದೆ. ನ.8ರಂದು 16 ಮಿ.ಮೀ., 9ರಂದು 12 ಮಿ.ಮೀ., 10ರಂದು 11 ಮಿ.ಮೀ., 11ರಂದು 10 ಮಿ.ಮೀ. ಮಳೆಯಾಗುವ ಸಂಭವವಿದೆ.

ಅಂತೆಯೇ ಮಂಡ್ಯ ಜಿಲ್ಲೆಗೆ ಸಂಬಂಧಿಸಿದಂತೆ ನ.8ರಿಂದ 12ವರೆಗೆ ಮೋಡ ಕವಿದ ವಾತಾವಣ ಇರಲಿದ್ದು, ತುಂತುರುವಿನಿಂದ ಸಾಧಾರಣ ಮಳೆ ಬರುವ ಸಂಭವವಿದೆ. ಗರಿಷ್ಠ ಉಷ್ಣಾಂಶ 32ರಿಂದ 33 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ಉಷ್ಣಾಂಶ 21 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗುವ ಸಾಧ್ಯತೆ ಇದೆ. ಬೆಳಗಿನ ಗಾಳಿಯ ತೇವಾಂಶ ಶೇ.90ರಿಂದ 95ರವರೆಗೆ ಹಾಗೂ ಮಧ್ಯಾಹ್ನದ ತೇವಾಂಶ ಶೇ.58ರಿಂದ 62ರವರೆಗೆ ಮತ್ತು ಗಾಳಿಯು ಗಂಟೆಗೆ 4ರಿಂದ 7 ಕಿಲೋಮೀಟರ್ ವೇಗದಲ್ಲಿ ಬೀಸುವ ಸಾಧ್ಯತೆ ಇದೆ. ನ.8ರಂದು 18 ಮಿ.ಮೀ., 9ರಂದು 12 ಮಿ.ಮೀ, 10ರಂದು 11 ಮೀ.ಮೀ., 11ರಂದು 7 ಮಿ.ಮೀ. ಮಳೆಯಾಗುವ ಸಾಧ್ಯತೆ ಇದೆ.

ಅದೇ ರೀತಿಯಲ್ಲಿ ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ ನ.8ರಿಂದ 12ರವರೆಗೆ ಮೋಡ ಕವಿದ ವಾತಾವರಣವಿದ್ದು, ಸಾಧಾರಣ ಮಳೆ ಬರುವ ಸಂಭವವಿದೆ. ಗರಿಷ್ಠ ಉಷ್ಣಾಂಶ 30 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ಉಷ್ಣಾಂಶ 20 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗುವ ಸಾಧ್ಯತೆಯಿದೆ. ಬೆಳಗಿನ ಗಾಳಿಯ ತೇವಾಂಶ ಶೇ.95ರಿಂದ 99ರವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇ.84ರಿಂದ 88ರವರೆಗೆ ಮತ್ತು ಗಾಳಿಯು ಗಂಟೆಗೆ 1ರಿಂದ 4 ಕಿಲೋಮೀಟರ್ ವೇಗದಲ್ಲಿ ಬೀಸುವ ಸಾಧ್ಯತೆಯಿದೆ. ನ.8ರಂದು 22 ಮಿ.ಮೀ., 9ರಂದು 21 ಮಿ.ಮೀ., 10ರಂದು 20 ಮಿ.ಮೀ., 11ರಂದು 14 ಮಿ.ಮೀ. ಹಾಗೂ 12ರಂದು 1 ಮಿ.ಮೀ. ಮಳೆಯಾಗುವ ಸಂಭವವಿದೆ.

ಚಾಮರಾಜನಗರ ಜಿಲ್ಲೆಗೆ ಸಂಬಂಧಿಸಿದಂತೆ ನ.8ರಿಂದ 12ರವರೆಗೆ ಮೋಡ ಕವಿದ ವಾತಾವರಣವಿದ್ದು, ಸಾಧಾರಣ ಮಳೆ ಬರುವ ಸಂಭವವಿದೆ. ಗರಿಷ್ಠ ಉಷ್ಣಾಂಶ 31 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ಉಷ್ಣಾಂಶ 21ರಿಂದ 22 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗುವ ಸಾಧ್ಯತೆಯಿದೆ. ಬೆಳಗಿನ ಗಾಳಿಯ ತೇವಾಂಶ ಶೇ.78ರಿಂದ 83ರವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇ.56ರಿಂದ 83ರವರೆಗೆ ಮತ್ತು ಗಾಳಿಯು ಗಂಟೆಗೆ 1ರಿಂದ 4 ಕಿಲೋಮೀಟರ್ ವೇಗದಲ್ಲಿ ಬೀಸುವ ಸಾಧ್ಯತೆಯಿದೆ. ನ.8ರಂದು 12 ಮಿ.ಮೀ., 9ರಂದು 11 ಮಿ.ಮೀ., 10ರಂದು 11 ಮಿ.ಮೀ., 11ರಂದು 10 ಮಿ.ಮೀ. ಮಳೆಯಾಗುವ ಸಾಧ್ಯತೆ ಇದೆ ಎಂದು ಕೃಷಿ ಹವಾಮಾನ ಕ್ಷೇತ್ರ ವಿಭಾಗವು ಪ್ರಕಟಣೆಯಲ್ಲಿ ತಿಳಿಸಿದೆ.




ದೆಹಲಿಯಲ್ಲಿ ನಡೆದ ನನ್ನ ಮಣ್ಣು ನನ್ನ ದೇಶ (ಮೇರಾ ದೇಶ್ ಮೇರಾ ಮಿಟ್ಟಿ) ಕಾರ್ಯಕ್ರಮದಲ್ಲಿ ಮೈಸೂರು ಜಿಲ್ಲೆಯಿಂದ ವಿವಿಧ ಕಾಲೇಜಿನ 50 ವಿದ್ಯಾರ್ಥಿಗಳು ಭಾಗವಹಿಸಿದ್ದರು. ನಂಜನಗೂಡು ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರಿನ್ಸಿಪಾಲ್ ಲಯನ್ ಸಿಆರ್‌ದಿನೇಶ್ ಮತ್ತಿತರರು ವಿದ್ಯಾರ್ಥಿಗಳೊಂದಿಗೆ ತೆರಳಿದ್ದರು.

ರಂಗಾಯಣ ಮಾಜಿ ನಿರ್ದೇಶಕ ಅಡ್ಡಂಡ ಸಿ.ಕಾರ್ಯಪ್ಪ ನಿರ್ದೇಶನದ

'ಕರಿನೀರ ವೀರ' ನಾಟಕಕ್ಕೆ ಪ್ರೇಕ್ಷಕ ಪ್ರಭುಗಳ ಮೆಚ್ಚುಗೆ

ಸ್ವಾತಂತ್ರ್ಯ ವೀರ ಸಾವರ್ಕರ್ ಯಾತನೆಯ ಬದುಕು ಅನಾವರಣ ; ಇಂದು ಮತ್ತೊಂದು ಪ್ರದರ್ಶನ







ಮೈಸೂರು,ನ.7(ಪಿಎಂ)– ಅದು ಅಂಡಮಾನ್ ಸೆಲ್ಯೂರ್ ಜೈಲಿನ ಆವರಣ. ಇಲ್ಲಿಗೆ ಬಂದ ಸೂಪರಿಂಟೆಂಡೆಂಟ್ ಬ್ರೌನಿಂಗ್ (ಬ್ರಿಟಿಷ್ ಪೊಲೀಸ್ ಅಧಿಕಾರಿ), '1857ರಲ್ಲಿ ಸಿಪಾಯಿ ದಂಗೆ ಮಾಡಿದರಲ್ಲ, ಆ ಕೈದಿಗಳನ್ನು ಇಲ್ಲೇ (ಅಂಡಮಾನ್ ಜೈಲ್) ಕೂಡಿ ಹಾಕಲಾಗಿತ್ತು' ಎನ್ನುತ್ತಿದ್ದಂತೆ, 'ಮೂರ್ಖ! ಅದು ಸಿಪಾಯಿ ದಂಗೆ ಅಲ್ಲ, ಪ್ರಥಮ ಸ್ವಾತಂತ್ರ್ಯ ಸಂಗ್ರಾಮ! ಈ ಬಗ್ಗೆ ಪುಸ್ತಕವನ್ನೇ ಬರೆದಿದ್ದೇನೆ. ಓದೋ ಮುಟ್ಠಾಳ್' ಎಂದು ಸ್ವಾತಂತ್ರ್ಯ ವೀರ ಸಾವರ್ಕರ್ ಅವರ ನುಡಿಗಳು ಮೊಳಗಿದವು!

ಮೈಸೂರಿನ ಕಲಾಮಂದಿರದಲ್ಲಿ ಮಂಗಳವಾರ ನಡೆದ 'ಕರಿನೀರ ವೀರ (ದೇಶಭಕ್ತಿಯ ಸಾಕ್ಷಿಪ್ರಜ್ಞೆ ವೀರ ಸಾವರ್ಕರ್ ಬದುಕಿನ ಕಥಾನಕ)' ನಾಟಕದ ಈ ದೃಶ್ಯಾವಳಿಗೆ ಪ್ರೇಕ್ಷಕರು ಶಿಳ್ಳೆ–ಚಪ್ಪಾಳೆಯ ಮಳೆ ಸುರಿಸಿ ಸಾವರ್ಕರ್ ಬಗೆಗಿನ ತಮ್ಮ ಅಭಿಮಾನ ವ್ಯಕ್ತಪಡಿಸಿದರು. ಸಾವರ್ಕರ್ ಪ್ರತಿಷ್ಠಾನ ಮೈಸೂರು ಅರ್ಪಿಸಿರುವ ಈ ನಾಟಕಕ್ಕೆ ಮೈಸೂರು ರಂಗಾಯಣದ ಮಾಜಿ ನಿರ್ದೇಶಕ ಅಡ್ಡಂಡ ಸಿ.ಕಾರ್ಯಪ್ಪ ಅವರ ರಚನೆ, ಪರಿಕಲ್ಪನೆ, ವಿನ್ಯಾಸ ಮತ್ತು ನಿರ್ದೇಶನವಿದ್ದು, ದೇಶದ ಸ್ವಾತಂತ್ರ್ಯಕ್ಕಾಗಿ ಸಾವರ್ಕರ್ ನಡೆಸಿದ ಹೋರಾಟ, ಅನುಭವಿಸಿದ ಯಾತನೆಯನ್ನು ಎಳೆಎಳೆಯಾಗಿ ಬಿಚ್ಚಿರುವ ಈ ನಾಟಕವು ಪ್ರೇಕ್ಷಕ ಪ್ರಭುಗಳ ಮೆಚ್ಚುಗೆಗೆ ಪಾತ್ರವಾಯಿತು.

ಮಹಾತ್ಮ ಗಾಂಧಿಯನ್ನು ಗೋಡ್ಸೆ ಗುಂಡಿಕ್ಕಿ ಹತ್ಯೆ ಮಾಡಿದ ಸನ್ನಿವೇಶದೊಂದಿಗೆ ಮೊದಲ ದೃಶ್ಯ ಅನಾವರಣವಾಗಲಿದ್ದು, ಈ ಸಂದರ್ಭದಲ್ಲಿ ಸಾವರ್ಕರ್ ವಿರುದ್ಧ ವಿನಾಕಾರಣ ಕೇಳಿ ಬರುವ ಆರೋಪಗಳು ಹಾಗೂ ಈ ಹಿನ್ನೆಲೆಯಲ್ಲಿ ಸಾವರ್ಕರ್ ಮತ್ತು ಅವರ ಕುಟುಂಬ ಅನುಭವಿಸುವ ಸಂಕಷ್ಟಗಳನ್ನು ಮನಮುಟ್ಟುವಂತೆ ನಿರ್ದೇಶಕರು ರಂಗದ ಮೇಲೆ ತಂದಿದ್ದಾರೆ. ಈ ದೃಶ್ಯದಲ್ಲಿ ಮೂಡಿಬರುವ ಸಾವರ್ಕರ್ ಅವರ ಯಾತನೆಯನ್ನು ಕಂಡು ಪ್ರೇಕ್ಷಕರು ಭಾವುಕರಾದರು.

ಬಾಪೂಜಿ ಕೊಂದವರು ದೇಶದ್ರೋಹಿಗಳು ಎಂದು ಧಿಕ್ಕಾರ ಕೂಗುತ್ತಾ ಸಾವರ್ಕರ್ ಅವರ ಮನೆ ಮೇಲೆ ದಾಳಿ ನಡೆಸುವ ಸನ್ನಿವೇಶದಲ್ಲಿ ಸಾವರ್ಕರ್ ಮತ್ತು ಅವರ ಕುಟುಂಬದವರ ಮೇಲೆ ನಡೆಯುವ ಹಿಂಸಾಚಾರವು ಪ್ರೇಕ್ಷಕರಲ್ಲಿ ದುಃಖದ ಭಾವ ಮೂಡಿಸಿತು. 'ಗಾಂಧಿ ಕೊಂದ ನಾಥೂರಾಮ್ ಗೋಡ್ಸೆ ನಿನ್ನ (ಸಾವರ್ಕರ್) ಶಿಷ್ಯ' ಎಂದು ಹಲವರು ಆರೋಪಿಸಿ ದಾಳಿ ಇಟ್ಟಾಗ, ಸಾವರ್ಕರ್ ಅನುಭವಿಸುವ ನೋವು ರಂಗದ ಮೇಲೆ ಅಮೋಘ ಅಭಿನಯದಲ್ಲಿ ಅನಾವರಣಗೊಂಡಿತು. ಗಾಂಧಿ ಹತ್ಯೆ ಪ್ರಕರಣದ ಸಂಬಂಧ ಸಾವರ್ಕರ್ ಅವರನ್ನು ಪೊಲೀಸರು ಬಂಧಿಸುವುದರೊಂದಿಗೆ ಈ ಮೊದಲ ದೃಶ್ಯಕ್ಕೆ ತೆರೆ ಬೀಳುತ್ತದೆ.

ಎರಡನೇ ದೃಶ್ಯದಲ್ಲಿ ಸಾವರ್ಕರ್ ಅವರು ಯುವಕರಾಗಿದ್ದಾಗಿನ ಘಟನಾವಳಿ ತೆರೆದುಕೊಳ್ಳಲಿದ್ದು, 26ರ ಹರೆಯದ ಸಾವರ್ಕರ್ ಇಂಗ್ಲೆಂಡಿನ ಕೋರ್ಟ್‌ನ ಕಟಕಟೆಯಲ್ಲಿ ನಿಂತು ವಿಚಾರಣೆ ಎದುರಿಸುವ ಸನ್ನಿವೇಶದೊಂದಿಗೆ ಈ ದೃಶ್ಯ ಆರಂಭಗೊಳ್ಳುತ್ತದೆ. ಈ ಸಂದರ್ಭದಲ್ಲಿ 'ನಾನೊಬ್ಬ ಭಾರತೀಯ, ನನ್ನ ನಿಷ್ಠೆ ಭಾರತ ಮಾತೆಗೆ, ನಾನು ಯಾವುದೇ ಅಪರಾಧ ಮಾಡಿಲ್ಲ' ಎಂಬ ಸಾವರ್ಕರ್ ಪಾತ್ರಧಾರಿಯ ಸಂಭಾಷಣೆಗೆ ಪ್ರೇಕ್ಷಕರು ಶಿಳ್ಳೆ–ಚಪ್ಪಾಳೆಯ ಮೂಲಕ ತಮ್ಮಲ್ಲಿನ ದೇಶಭಕ್ತಿಯನ್ನು ವ್ಯಕ್ತಪಡಿಸಿದರು.

ದೇಶದ್ರೋಹ (ಬ್ರಿಟಿಷ್ ಆಡಳಿತದ ವಿರುದ್ಧ) ಹಾಗೂ ಬ್ರಿಟಿಷ್ ಅಧಿಕಾರಿಯ ಕೊಲೆಗೆ ಕುಮ್ಮಕ್ಕು ನೀಡಿರುವ ಆರೋಪದ ಈ ಪ್ರಕರಣವು ಭಾರತದ ಮುಂಬೈ ಹೈಕೋರ್ಟಿನ ವಿಶೇಷ ನ್ಯಾಯಪೀಠಕ್ಕೆ ವರ್ಗಾವಣೆಗೊಳ್ಳುವ ಸನ್ನಿವೇಶದೊಂದಿಗೆ ಈ ದೃಶ್ಯ ಅಂತ್ಯಗೊಂಡಿತು. ನಂತರ ಆರಂಭಗೊಳ್ಳುವ ಮೂರನೇ ದೃಶ್ಯದಲ್ಲಿ ಈ ವಿಶೇಷ ನ್ಯಾಯಪೀಠದ ವಿಚಾರಣೆಯಲ್ಲಿ ಸಾವರ್ಕರ್ ಅವರಿಗೆ 50 ವರ್ಷಗಳ ಕಾಲ ಜೀವಾವಧಿ ಶಿಕ್ಷೆಯ ತೀರ್ಪು ಹೊರಬೀಳುವುದರೊಂದಿಗೆ ಈ ದೃಶ್ಯ ಅಂತ್ಯಗೊಂಡು, ಅಂಡಮಾನ್ ಸೆಲ್ಯೂಲರ್ ಜೈಲಿನ ದೃಶ್ಯಕ್ಕೆ ತೆರೆದುಕೊಳ್ಳುತ್ತದೆ.

ಕಲಾಮಂದಿರ ಭರ್ತಿ: ರಾಷ್ಟ್ರಭಾರತಿ ಚಾರಿಟೆಬಲ್ ಟ್ರಸ್ಟ್ ಸಹಕಾರದಲ್ಲಿ ನಡೆದ ಈ ನಾಟಕ ನೋಡಲು ಇಡೀ ಕಲಾಮಂದಿರ ಪ್ರೇಕ್ಷಕರಿಂದ ಬಹುತೇಕ ತುಂಬಿ ಹೋಗಿತ್ತು. ಗಜಾನನ ನಾಯ್ಕ್ ಮತ್ತು ಸುಬ್ರಹ್ಮಣ್ಯ ಮೈಸೂರು ಅವರ ಸಂಗೀತ, ಅನಿತಾ ಕಾರ್ಯಪ್ಪ ಅವರ ವಸ್ತ್ರವಿನ್ಯಾಸ, ಮಧುಸೂದನ್ ಅವರ ಬೆಳಕಿನ ವ್ಯವಸ್ಥೆ ಹಾಗೂ ಕಾರ್ತಿಕ್ ಉಪಮನ್ಯು ಮತ್ತು ಮಂಜುನಾಥ ಶಿಲ್ಪಿ ಅವರ ರಂಗ ಸಹಕಾರದಲ್ಲಿ ನಾಟಕವು ಅದ್ಭುತವಾಗಿ ಮೂಡಿಬಂದಿತು.

ಸಾವರ್ಕರ್ ಪಾತ್ರವನ್ನು ಹರಿಸಿಂಗ್ ಮತ್ತು ಕಿರಣ (ಸಾವರ್ಕರ್ ಅವರು ಯುವಕರಾಗಿದ್ದಾಗಿನ ಸನ್ನಿವೇಶ) ಅಮೋಘವಾಗಿ ಅಭಿನಯಿಸಿದರು. ಉಳಿದೆಲ್ಲಾ ಪಾತ್ರಧಾರಿಗಳು ತಮ್ಮ ಪಾತ್ರಗಳನ್ನು ಅತ್ಯಂತ ಅಚ್ಚುಕಟ್ಟಾಗಿ ಅಭಿನಯಿಸಿ ಪ್ರೇಕ್ಷಕರ ಮನಗೆದ್ದರು. ಇದೇ ಕಲಾಮಂದಿರಲ್ಲಿ ನಾಳೆ (ನ.8) ಸಂಜೆ 6ಕ್ಕೆ ಮತ್ತೊಂದು ಪ್ರದರ್ಶನ ಹಮ್ಮಿಕೊಳ್ಳಲಾಗಿದೆ.

ದೇಶಭಕ್ತಿ ಮೂಡಿಸುವ ಭಾಗವಾಗಿ ಈ ನಾಟಕ ಪ್ರದರ್ಶನ

— ಅಡ್ಡಂಡ ಸಿ.ಕಾರ್ಯಪ್ಪ —

ಮೈಸೂರು,ನ.7(ಪಿಎಂ)– ದೇಶಭಕ್ತಿ ಮೂಡಿಸುವ ಭಾಗವಾಗಿ ಈ ನಾಟಕ ಪ್ರದರ್ಶನ ಕಾಣುತ್ತಿದೆ. ಸ್ವಾತಂತ್ರ್ಯಕ್ಕಾಗಿ ದುಡಿದ ಯೋಧರ ಬಗ್ಗೆ ಜನಮಾನಸದಲ್ಲಿ ಅಭಿಮಾನ ಮೂಡಬೇಕು. ಇಂದು ಅದರ ಕೊರತೆ ಇಲ್ಲವಾದರೂ ರಾಜಕೀಯದ ಓಟಿಗಾಗಿ ಅದನ್ನು ಹಾಳು ಮಾಡುವ ಸನ್ನಿವೇಶವಿದೆ. ಅದಕ್ಕಾಗಿ ಈ ನಾಟಕ ಅಗತ್ಯವಿದೆ ಎಂದು ಅಡ್ಡಂಡ ಸಿ.ಕಾರ್ಯಪ್ಪ ತಿಳಿಸಿದರು.

ನಾಟಕ ಪ್ರದರ್ಶನದ ಬಳಿಕ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಅವರು, ಕಲಾಮಂದಿರದ ಆಸನಗಳ ಸಾಮರ್ಥ್ಯ 850ಕ್ಕೂ ಹೆಚ್ಚಿದ್ದು, ಇಂದಿನ ಪ್ರದರ್ಶನದಲ್ಲಿ ಎಲ್ಲವೂ ಭರ್ತಿಯಾಗಿತ್ತು. ನಾಳೆಯ ಪ್ರದರ್ಶನಕ್ಕೆ ಈಗಾಗಲೇ ಶೇ.75ರಷ್ಟು ಟಿಕೆಟ್‌ಗಳು (ಟಿಕೆಟ್ ದರ 100 ರೂ.) ಮಾರಾಟವಾಗಿವೆ. ಶೇ.25ರಷ್ಟು ನಾಳೆ ಮಾರಾಟವಾಗಲಿವೆ. ಕಲಾಮಂದಿರದಲ್ಲಿ ಟಿಕೆಟ್‌ನೊಂದಿಗೆ ಭರ್ತಿ ಪ್ರದರ್ಶನ ನೀಡುವುದು ಸಾಮಾನ್ಯ ಸಂಗತಿಯಲ್ಲ. 3 ಗಂಟೆ ಅವಧಿಯ ಈ ನಾಟಕವನ್ನು ಪ್ರೇಕ್ಷಕರು ಅತ್ಯಂತ ಆಸಕ್ತಿಯಿಂದ ನೋಡಿದ್ದಾರೆ. ಪಾತ್ರಧಾರಿಗಳಲ್ಲಿ ಒಬ್ಬೊಬ್ಬರು ಐದಾರು ಪಾತ್ರಗಳನ್ನು ನಿರ್ವಹಿಸಿದ್ದಾರೆ ಎಂದು ಮಾಹಿತಿ ನೀಡಿದರು.

ಮ್ಯಾಕ್ಸ್‌ವೆಲ್ ಮ್ಯಾಗ್ನಿಮಮ್ ಆಟ: ಆಸೀಸ್ ಸೆಮೀಸ್‌ಗೆ

ಮುಂಬೈ, ನ.7– ಗ್ಲೇನ್ ಮ್ಯಾಕ್ಸ್‌ವೆಲ್ ಅವರ ದ್ವಿಶತಕದ ನೆರವಿನಿಂದ ಆಸ್ಟ್ರೇಲಿಯಾ ಅಫ್ಘಾನಿಸ್ತಾನದ ವಿರುದ್ಧ 3 ವಿಕೆಟ್‌ಗಳ ಅಮೋಘ ಜಯ ಸಾಧಿಸಿದೆ. ಆ ಮೂಲಕ ವಿಶ್ವಕಪ್ ಪಂದ್ಯಾವಳಿಯ ಮೂರನೇ ತಂಡವಾಗಿ ಸೆಮಿಫೈನಲ್ ಪ್ರವೇಶಿಸಿದೆ. ಇತ್ತ ಪಂದ್ಯ ಗೆದ್ದು ಸೆಮೀಸ್ ಪ್ರವೇಶಿಸುವ ಆಸೆಯಲ್ಲಿದ್ದ ಅಫ್ಘಾನಿಸ್ತಾನ ಕನಸು ಭಗ್ನಗೊಂಡಿದೆ.

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಅಫ್ಘಾನಿಸ್ತಾನ ನಿಗದಿತ 50 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 291 ರನ್ ಗಳಿಸಿತು. ಈ ಗುರಿ ಬೆನ್ನತ್ತಿದ ಆಸ್ಟ್ರೇಲಿಯಾ 46.5 ಓವರ್‌ಗಳಲ್ಲೇ 293 ರನ್ ಗಳಿಸಿ ಜಯ ಸಾಧಿಸಿತು.

ಇನ್ನಿಂಗ್ಸ್ ಆರಂಭದಲ್ಲೇ ಆಸ್ಟ್ರೇಲಿಯಾ 52 ರನ್‌ಗಳಿಗೆ ಪ್ರಮುಖ ನಾಲ್ಕು ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿತು. ನಂತರವೂ ತಮ್ಮ ಕರಾರುವಾಕ್ ಬೌಲಿಂಗ್ ದಾಳಿಯಿಂದ ಆಸೀಸ್ ಬ್ಯಾಟಿಂಗ್ ಅನ್ನು ಛಿದ್ರಗೊಳಿಸಿದ ಆಫ್ಘನ್ ಬೌಲರ್‌ಗಳು ತಂಡದ ಮೊತ್ತ 97ರನ್ ಆಗುವಷ್ಟರಲ್ಲೇ 7ವಿಕೆಟ್ ಉರುಳಿಸಿದರು. ಸ್ಫೋಟಕ ಬ್ಯಾಟ್ಸ್‌ಮ್ಯಾನ್ ಟ್ರಾವಿಸ್ ಹೆಡ್, ಜೋಸ್ ಇಂಗ್ಲಿಸ್ ಶೂನ್ಯ ಸುತ್ತಿದ್ದರು. ಡೇವಿಡ್ ವಾರ್ನರ್ 18, ಮಿಚೆಲ್ ಮಾರ್ಷ್ 24, ಮಾರ್ನಸ್ ಲಾಬುಶೇನ್ 14, ಮಾರ್ಕಸ್ ಸ್ಟೋಯ್ನಿಸ್ 6, ಮಿಚೆಲ್ ಸ್ಟಾರ್ಕ್ 3 ರನ್‌ಗಳಿಗೆ ವಿಕೆಟ್ ಒಪ್ಪಿಸಿದರು.

ಇದಕ್ಕೂ ಮುನ್ನಾ ಹಾಲಿ ಚಾಂಪಿಯನ್ ಇಂಗ್ಲೆಂಡ್, ಪಾಕಿಸ್ತಾನ, ಶ್ರೀಲಂಕಾ ತಂಡಗಳಿಗೆ ಸೋಲುಣಿಸಿದ್ದ ಅಫ್ಘಾನಿಸ್ತಾನ ಆಸ್ಟ್ರೇಲಿಯಾ ವಿರುದ್ಧವೂ ಗೆಲ್ಲುವ ಎಲ್ಲಾ ಲಕ್ಷಣಗಳಿದ್ದವು. ಆದರೆ ಅಫ್ಘನ್ನರು ಗ್ಲೇನ್ ಮ್ಯಾಕ್ಸ್‌ವೆಲ್‌ಗೆ ಜೀವದಾನ ನೀಡಿದರು. ಇದರ ಸಂಪೂರ್ಣ ಲಾಭ ಪಡೆದ ಗ್ಲೇನ್ ಮ್ಯಾಕ್ಸ್‌ವೆಲ್ ಏಕಾಂಗಿ ಹೋರಾಟ ನಡೆಸಿ ತಂಡಕ್ಕೆ ಜಯ ತಂದು ಕೊಟ್ಟರು. ಮುರಿಯದ 8ನೇ ವಿಕೆಟ್‌ಗೆ ಗ್ಲೇನ್ ಮ್ಯಾಕ್ಸ್‌ವೆಲ್ ಹಾಗೂ ನಾಯಕ ಪ್ಯಾಟ್ ಕಮ್ಮಿನ್ಸ್ ಜೋಡಿ 170 ಎಸೆತಗಳಲ್ಲಿ 202 ರನ್‌ಗಳ ಜೊತೆಯಾಟ ನೀಡುವ ಮೂಲಕ ತಂಡವನ್ನು ಗೆಲುವಿನ ತಡ ಸೇರಿಸಿದರು. ಮ್ಯಾಕ್ಸ್‌ವೆಲ್ 128 ಎಸೆತಗಳಲ್ಲಿ 10 ಸಿಕ್ಸರ್, 21 ಬೌಂಡರಿ ಒಳಗೊಂಡ 201 ರನ್ ಸಿಡಿಸಿದರೇ ಪ್ಯಾಟ್ ಕಮ್ಮಿನ್ಸ್ 12 ರನ್ ಗಳಿಸಿ ಅಜೇಯರಾಗುಳಿದರು.

40.2ನೇ ಓವರ್‌ನಲ್ಲಿ ಆಸೀಸ್ 237 ರನ್ ಗಳಿಸಿದ್ದಾಗ ಮ್ಯಾಕ್ಸ್‌ವೆಲ್‌ಗೆ ತೀವ್ರವಾಗಿ ಕಾಲುನೋವು ಕಾಣಿಸಿಕೊಂಡಿತ್ತು. ಅವರು ಮೈದಾನ ತೊರೆಯುವ ಸಂದರ್ಭ ಎದುರಾಗಿತ್ತು. ಆದರೆ ತಂಡಕ್ಕಾಗಿ ಆಡುತ್ತೇನೆಂದು ನಿಂತ ಮ್ಯಾಕ್ಸಿ ದ್ವಿಶತಕ ಸಿಡಿಸುವ ಜೊತೆಗೆ ತಂಡಕ್ಕೆ ಗೆಲುವು ತಂದುಕೊಟ್ಟರು. ಜೊತೆಗೆ ಆಸ್ಟ್ರೇಲಿಯಾ ಪರ ದ್ವಿಶತಕ ಸಿಡಿಸಿದ ಮೊದಲ ಆಟಗಾರ ಎಂಬ ಖ್ಯಾತಿ ಗಳಿಸಿದ್ದು, ಮಾತ್ರವಲ್ಲದೇ ವಿಶ್ವಕಪ್ ಇತಿಹಾಸದಲ್ಲಿ ಚೇಸಿಂಗ್‌ನಲ್ಲಿ 5ನೇ ಕ್ರಮಾಂಕದಲ್ಲಿ ಅತಿಹೆಚ್ಚು ರನ್ ಗಳಿಸಿದ ಮೊದಲ ಆಟಗಾರ ಎಂಬ ದಾಖಲೆ ಮಾಡಿದರು. ಅಫ್ಘಾನಿಸ್ತಾನ ಪರ ನವೀನ್–ಉಲ್–ಹಕ್, ಅಜ್ಮತುಲ್ಲಾ ಒಮರ್ಜಾಯ್, ರಶೀದ್ ಖಾನ್ ತಲಾ 2 ವಿಕೆಟ್ ಕಿತ್ತರು.

ಇದಕ್ಕೂ ಮುನ್ನಾ ಬ್ಯಾಟಿಂಗ್ ಮಾಡಿದ ಅಫ್ಘಾನಿಸ್ತಾನ ಪರ ಆರಂಭಿಕ ಆಟಗಾರ ಇಬ್ರಾಹಿಂ ಜದ್ರಾನ್ ಜವಾಬ್ದಾರಿಯುತ ಶತಕ ಸಿಡಿಸಿ ವಿಶ್ವಕಪ್ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಶತಕ ಸಿಡಿಸಿದ ಸಾಧನೆ ಮಾಡಿದರು.

ಅಫ್ಘಾನಿಸ್ತಾನದ ಪರ ಇಬ್ರಾಹಿಂ ಜದ್ರಾನ್ 129, ರಶೀದ್ ಖಾನ್ 35, ರಹಮಾನುಲ್ಲಾ ಗುರ್ಬಾಜ್ 21, ರಹಮತ್ ಶಾ 30, ಹಸ್ಮತುಲ್ಲಾ ಶಾಹಿದಿ 26, ಅಜ್ಮತುಲ್ಲಾ ಒಮರ್ಜಾಯ್ 22, ಮೊಹಮ್ಮದ್ ನಬಿ 12 ರನ್ ಗಳಿಸಿ ಔಟಾದರು.

ಆಸೀಸ್ ಪರ ಮಿಚೆಲ್ ಸ್ಟಾರ್ಕ್ 1, ಜೋಶ್ ಹ್ಯಾಜಲ್‌ವುಡ್ 2, ಗ್ಲೇನ್ ಮ್ಯಾಕ್ಸ್‌ವೆಲ್ ಮತ್ತು ಆಡಂ ಝಂಪಾ ತಲಾ ಒಂದೊಂದು ವಿಕೆಟ್ ಪಡೆದರು. ಪಂದ್ಯದಲ್ಲಿ ಭರ್ಜರಿ ದ್ವಿಶತಕ ಸಿಡಿಸಿದ ಮ್ಯಾಕ್ಸ್‌ವೆಲ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಅಂಕಪಟ್ಟಿ ವಿವರ

ತಂಡ	ಪಂದ್ಯಗಳು	ಗೆಲುವು	ಸೋಲು	ಡ್ರಾ	ಅಂಕ
ಇಂಡಿಯಾ	8	8	0	0	16
ದಕ್ಷಿಣ ಆಫ್ರಿಕಾ	8	6	2	0	12
ಆಸ್ಟ್ರೇಲಿಯಾ	8	6	2	0	12
ನ್ಯೂಜಿಲ್ಯಾಂಡ್	8	4	4	0	8
ಪಾಕಿಸ್ತಾನ	8	4	4	0	8
ಅಫ್ಘಾನಿಸ್ತಾನ್	8	4	4	0	8
ಬಾಂಗ್ಲಾದೇಶ	8	2	6	0	4
ಶ್ರೀಲಂಕಾ	8	2	6	0	4
ನೆದರ್‌ಲ್ಯಾಂಡ್ಸ್	7	2	5	0	4
ಇಂಗ್ಲೆಂಡ್	7	1	6	0	2



ಜೋಗತಿ ದೀಕ್ಷೆ ಪಡೆದವರಷ್ಟೇ ಚೌಡಿಕೆ ಪದಗಳ ಹಾಡುತ್ತಾರೆ



ಮೈಸೂರು, ನ.7(ಎಸ್‌ಪಿಎನ್)– ಚೌಡಿ ಪದ ಎಂಬುದು ಜಾನಪದ ಹಿನ್ನೆಲೆಯದ್ದು. ಇದು ಶಕ್ತಿ ದೇವಿಯ ಆರಾಧನೆ ಸಂದರ್ಭದಲ್ಲಿ ದೇವಿ ಮಹಿಮೆಯನ್ನು ಜೋಗತಿಯರು ಹಾಡುತ್ತಾರೆ ಎಂದು ಪದ್ಮಶ್ರೀ ಪುರಸ್ಕೃತ ಬಿ.ಮಂಜಮ್ಮ ಜೋಗತಿ ಅಭಿಪ್ರಾಯಪಟ್ಟರು.


ಮೈಸೂರು ಕುವೆಂಪುನಗರದ ವೀಣೆ ಶೇಷಣ್ಣ ಭವನದಲ್ಲಿ ಗಾನಭಾರತೀ ಸಂಸ್ಥೆ ವತಿಯಿಂದ ನಡೆದ ಕನ್ನಡ ರಾಜ್ಯೋತ್ಸವ ಅಂಗವಾಗಿ ಮೂರನೇ ದಿನದ 'ಚೌಡಿಕೆ ಪದಗಳ ಗಾಯನ' ಮತ್ತು ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.


ಚೌಡಿಕೆ ಪದಗಳ ಗಾಯನವನ್ನು ಜೋಗತಿ ದೀಕ್ಷೆ ಪಡೆದವರು ಮಾತ್ರ ಹಾಡುತ್ತಾರೆ. ಬೇರೆಯವರು ಇದನ್ನು ಕಲಿಯಲು ಆಸಕ್ತಿ ತೋರುವುದಿಲ್ಲ. ಈ ಸಂಪ್ರದಾಯವು ಕರ್ನಾಟಕದ ನಾಲ್ಕು ಮುಖ್ಯಕೇಂದ್ರಗಳಾದ ಬಳ್ಳಾರಿಯ ಉಚ್ಚಂಗಿ, ಶಿವಮೊಗ್ಗ ಜಿಲ್ಲೆಯ ಚಂದ್ರಗುತ್ತಿ, ರಾಯಚೂರಿನ ಹುಲಿಗಿ ಮತ್ತು ಬೆಳಗಾವಿ ಸವದತ್ತಿ ಎಲ್ಲಮ್ಮ ದೇವಸ್ಥಾನದಲ್ಲಿ ಚೌಡಿ ಪದಗಳನ್ನು ಹಾಡುವ ಸಂಪ್ರದಾಯವಿದೆ ಎಂದರು.

ಈ ವೇಳೆ ಹಲವು ಚೌಡಿ ಪದಗಳನ್ನು ಹಾಡಿದರು. ಮರಿಯಮ್ಮನಹಳ್ಳಿ ರಾಮವ್ವ ಜೋಗತಿ ಸಂಗಡಿಗರು ಸಾಥ್ ನೀಡಿದರು.

ಸರ್ಕಾರಗಳು, ಸಚಿವರು ಬಂದು ಹೋದರು ಆದರೆ ನಮ್ಮ ಸಂವಿಧಾನ ಶಿಲ್ಪಿ ಡಾ. ಅಂಬೇಡ್ಕರ್‌ರ ಭವನಕ್ಕೆ ಮಾತ್ರ ಮುಕ್ತಿ ಸಿಕ್ಕಿಲ್ಲ!







ಮೈಸೂರು, ನ.7(ಎಸ್‌ಬಿಡಿ)– ಮೈಸೂರಿನಲ್ಲಿ ದಶಕದಿಂದ ನಿರ್ಮಾಣವಾಗುತ್ತಿರುವ 'ಡಾ.ಬಿ.ಆರ್.ಅಂಬೇಡ್ಕರ್ ಭವನ'ದ ಬಳಿ ಕೊಳಚೆ ಗುಂಡಿ ನಿರ್ಮಾಣವಾಗಿದೆ.

ಭವನದ ಸುತ್ತಲಿನ ಕಾಂಪೌಂಡ್ ಈಗಲೇ ದುಸ್ಥಿತಿ ತಲುಪುತ್ತಿದೆ. ದಿವಾನ್ಸ್ ರಸ್ತೆ ಹಾಗೂ ಬಿಡಾರಂ ಕೃಷ್ಣಪ್ಪ ರಸ್ತೆ ಕಡೆ ಕಾಂಪೌಂಡ್ ಬಳಿ ಕಸದ ರಾಶಿ ಬಿದ್ದಿದೆ ಪೌರಕಾರ್ಮಿಕರು ಬೆಳಗ್ಗೆ ಸ್ವಚ್ಛಗೊಳಿಸಿದ ಬೆನ್ನಲ್ಲೇ ಮತ್ತೆ ತ್ಯಾಜ್ಯ ತಂದು ಸುರಿಯಲಾಗುತ್ತಿದೆ. ಅಲ್ಲದೆ ಮೂತ್ರ ವಿಸರ್ಜನೆಗೆ ಈ ಕಾಂಪೌಂಡ್ ಬಳಕೆಯಾಗುತ್ತಿರುವುದು ಅತ್ಯಂತ ಶೋಚನೀಯ ಸಂಗತಿ. ಅತ್ತ ದೇವರಾಜ ಪೊಲೀಸ್ ಠಾಣೆ ಇರುವ ಕೃಷ್ಣವಿಲಾಸ ರಸ್ತೆ ಭಾಗದ ಕಾಂಪೌಂಡ್ ಕೂಡ ಇದಕ್ಕೆ ಹೊರತಾಗಿಲ್ಲ. ನಿರಂತರ ವಾಹನ ಹಾಗೂ ಜನ ಸಂಚಾರವಿದ್ದರೂ ಯಾವುದೇ ಮುಜುಗರವಿಲ್ಲದೆ ಕಾಂಪೌಂಡ್‌ಗೆ ಮೂತ್ರ ವಿಸರ್ಜನೆ ಮಾಡುತ್ತಿರುತ್ತಾರೆ. ರಸ್ತೆಯಲ್ಲಿ ಹೋದರೆ ದುರ್ವಾಸನೆ ಉಸಿರುಕಟ್ಟಿಸುತ್ತದೆ. ಕಾಂಪೌಂಡ್ ಒಳಗೂ ಗಿಡಗಂಟಿಗಳು ಬೆಳೆದಿವೆ. ನೆಲಮಾಳಿಗೆ ಮಾರ್ಗದಲ್ಲಿ ಪ್ಲಾಸ್ಟಿಕ್ ಬಾಟಲ್, ಪೇಪರ್, ಪ್ಲಾಸ್ಟಿಕ್ ತ್ಯಾಜ್ಯ ಹರಡಿದೆ.

ಈ ಭವನದ ಕಾಮಗಾರಿ ಆರಂಭವಾಗಿ ಸುಮಾರು 11 ವರ್ಷಗಳೇ ಕಳೆದವು. ಮೂರ್‍ನಾಲ್ಕು ಬಾರಿ ಸರ್ಕಾರ ಬದಲಾಯಿತು. ಅದೆಷ್ಟೋ ಜನ ಸಚಿವರು ಭೇಟಿ ನೀಡಿ, ಶೀಘ್ರ ಕಾಮಗಾರಿ ಮುಗಿಸಲು ಅಧಿಕಾರಿಗಳಿಗೆ ತಾಕೀತು ಮಾಡಿ ಹೋದರು. ಅದರ ಪರಿಣಾಮ ಏನೂ ಆಗಿಲ್ಲ. ಮೊದಲ ಹಂತದ ಕಾಮಗಾರಿಯಂತೆಯೇ ಎರಡನೇ ಹಂತದ ಕೆಲಸವೂ ಆಮೆ ಗತಿಯಲ್ಲಿ ಸಾಗಿದೆ. ನಗರದ ಹೃದಯ ಭಾಗದ ಸುಮಾರು ಎರಡು ಎಕರೆ ಜಾಗದಲ್ಲಿ ಶೇ.75ರಷ್ಟು ಕಾಮಗಾರಿ ಮುಗಿದಿರುವ ಈ ಭವ್ಯ ಭವನದ ಉದ್ಘಾಟನೆಗೆ ಇನ್ನೂ ಮುಹೂರ್ತ ಕೂಡಿಬಂದಿಲ್ಲ.

ದಿನಕಳೆದಂತೆ ಹೆಚ್ಚು ಖರ್ಚು: ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ 2012ರಲ್ಲಿ 14.66 ಕೋಟಿ ರೂ. ವೆಚ್ಚದಲ್ಲಿ 'ಡಾ.ಬಿ.ಆರ್.ಅಂಬೇಡ್ಕರ್ ಭವನ' ನಿರ್ಮಾಣ ಯೋಜನೆ ರೂಪಿಸಲಾಗಿತ್ತು. ನಂತರ 20.66 ಕೋಟಿ ರೂ.ಗೆ ಪರಿಷ್ಕರಿಸಲಾಯಿತು. ಮುಡಾ, ಸಮಾಜ ಕಲ್ಯಾಣ ಇಲಾಖೆ ಹಾಗೂ ನಗರ ಪಾಲಿಕೆಯ ನಿಗದಿತ ವಂತಿಕೆಯಿಂದ ಕಾಮಗಾರಿ ಆರಂಭಿಸಲಾಯಿತಾದರೂ ಮಂದಗತಿಯಲ್ಲಿ ಕೆಲಸ ಸಾಗಿತು. ದಶಕದ ಬಳಿಕ ಶೇ.75ರಷ್ಟು ಕಾಮಗಾರಿ ಮುಗಿದಿದ್ದು, ಎರಡನೇ ಹಂತದಲ್ಲಿ ಉಳಿದ ಕಾಮಗಾರಿಗೆ ಹೆಚ್ಚುವರಿ 22 ಕೋಟಿ ರೂ. ಅಂದಾಜಿಸಲಾಗಿದೆ ಹೀಗೆ ದಿನ ಕಳೆದಂತೆ ನಿರ್ಮಾಣ ವೆಚ್ಚ ಹೆಚ್ಚುತ್ತಲೇ ಹೋಗುತ್ತದೆ.

ಸ್ವಚ್ಛತೆಗೆ ಸೂಚಿಸಿದ್ದರು: ಸಮಾಜ ಕಲ್ಯಾಣ ಇಲಾಖೆ ಸಚಿವರೂ ಆದ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪನವರು ಲೋಕೋಪಯೋಗಿ ಇಲಾಖೆ ಪ್ರಧಾನ ಕಾರ್ಯದರ್ಶಿ ಡಾ.ಎಸ್.ಸೆಲ್ವಕುಮಾರ್, ಸಮಾಜ ಕಲ್ಯಾಣ ಇಲಾಖೆ ಆಯುಕ್ತ ಡಾ.ರಾಕೇಶ್ ಕುಮಾರ್, ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ಮುಡಾ ಆಯುಕ್ತ ದಿನೇಶ್ ಕುಮಾರ್, ಮಹಾನಗರ ಪಾಲಿಕೆ ಆಯುಕ್ತ ಅಶಾದ್ ಉರ್ ರೆಹ್ಮಾನ್ ಶರೀಫ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಡಾ.ಎಂ.ಕೃಷ್ಣರಾಜು ಅವರೊಂದಿಗೆ ಆಗಸ್ಟ್ ತಿಂಗಳಲ್ಲಿ ನಿರ್ಮಾಣ ಹಂತದ ಭವನಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದರು. ಬಾಕಿ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದರು. ಅಲ್ಲದೆ ಭವನದ ಸುತ್ತಲಿನ ಅನೈರ್ಮಲ್ಯ ಗಮನಿಸಿ, ಸ್ವಚ್ಛವಾಗಿಡುವಂತೆ ತಿಳಿಸಿದ್ದರು. ಹೆಚ್ಚುವರಿ ಅನುದಾನಕ್ಕೆ ಸಮಾಜ ಕಲ್ಯಾಣ ಇಲಾಖೆಯಿಂದ 10 ಕೋಟಿ ರೂ. ಮುಡಾದಿಂದ 9.5 ಕೋಟಿ ರೂ., ಮಹಾನಗರ ಪಾಲಿಕೆಯಿಂದ 2.5 ಕೋಟಿ ರೂ. ವಂತಿಕೆ ಒದಗಿಸುವುದಕ್ಕೂ ತೀರ್ಮಾನಿಸಲಾಗಿತ್ತು. ಆದರೆ ಮೂರು ತಿಂಗಳಾದರೂ ಈ ಬಗ್ಗೆ ಯಾವುದೇ ಬೆಳವಣಿಗೆ ಕಂಡುಬಂದಿಲ್ಲ.

ಈ ಬಾರಿ ದಸರಾ ಮಹೋತ್ಸವದ ಉದ್ಘಾಟನೆ, ಸಾಂಸ್ಕೃತಿಕ ಕಾರ್ಯಕ್ರಮಗಳ ಉದ್ಘಾಟನೆ ಸೇರಿದಂತೆ ಹಲವು ವೇದಿಕೆಗಳಲ್ಲಿ ಹಾಡಿನ ರೂಪದಲ್ಲಿ ಸಂವಿಧಾನ ಪೀಠಿಕೆ ಪ್ರಸಾರ ಮಾಡಿ ಗೌರವ ಸಲ್ಲಿಸಲಾಯಿತು. ಈ ಮೂಲಕ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ಅರ್ಥಪೂರ್ಣವಾಗಿ ಸ್ಮರಿಸಿಕೊಳ್ಳಲಾಯಿತು. ಅತ್ಯಾಕರ್ಷಕ ವಿದ್ಯುತ್ ದೀಪಾಲಂಕಾರದ ಭಾಗವಾಗಿ ಪ್ರಮುಖ ವೃತ್ತಗಳಲ್ಲಿ ಅಂಬೇಡ್ಕರ್ ಅವರ ಪ್ರತಿಕೃತಿ ನಿರ್ಮಿಸಿ ಗೌರವಿಸಲಾಯಿತು. ಆದರೆ ದಶಕ ಕಳೆದರೂ ಅಂಬೇಡ್ಕರ್ ಭವನ ಪೂರ್ಣಗೊಳಿಸಲು ಸಾಧ್ಯವಾಗದಿರುವುದು ಬೇಸರದ ಸಂಗತಿ. ಈ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರು ಗಮನಹರಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ಅನಧಿಕೃತ ಗೈರು ಹಾಜರಿ: ನೋಟೀಸ್

ಮೈಸೂರು, ನ. 7– ಮೈಸೂರಿನ ಬೋಗಾದಿ ವ್ಯಾಪ್ತಿಯ ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿ ನಿಲಯದ ಅಡುಗೆಯವರಾದ ನಾಗೇಂದ್ರ .ಆರ್ ಅವರು 2021ರ ಮಾರ್ಚ್ 17ರಿಂದ 19ರವರೆಗೆ ಅನಾರೋಗ್ಯದ ಕಾರಣ ನೀಡಿ ಸಾಂದರ್ಭಿಕ ರಜೆಯನ್ನು ಪಡೆದುಕೊಂಡಿದ್ದರು. ಅದರಂತೆ ಮಾರ್ಚ್ 20 ರಂದು ಕರ್ತವ್ಯಕ್ಕೆ ಹಾಜರಾಗಬೇಕಿದ್ದು, ಇದುವರೆಗೂ ಹಾಜರಾಗದೆ ಇರುವ ಕುರಿತು ಕಾರಣ ಕೇಳಿ ನೋಟಿಸ್‌ಗಳನ್ನು ಕಚೇರಿಯಿಂದ 2023 ರ ಏಪ್ರಿಲ್ 6 ರವರೆಗೂ ಕಳುಹಿಸಲಾಗಿದ್ದರು ಸಹ, ಯಾವುದೇ ಸಮಜಾಯಿಷಿ ಸ್ವೀಕೃತವಾಗಿರುವುದಿಲ್ಲ. ಆದ್ದರಿಂದ ಈ ಪ್ರಕಟಣೆ ಆದ ಹದಿನೈದು ದಿನಗಳ ಒಳಗೆ ಗೈರು ಹಾಜರಿ ಸಂಬಂಧ ಸೂಕ್ತ ಕಾರಣಗಳೊಂದಿಗೆ ಕರ್ತವ್ಯಕ್ಕೆ ಹಾಜರಾಗಲು ಸೂಚಿಸಿದೆ. ತಪ್ಪಿದ್ದಲ್ಲಿ ಕೆಸಿಎಸ್‌ಆರ್ 1957 (ಸಿ.ಸಿ.ಎ) ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳಲು ಶಿಫಾರಸ್ಸು ಮಾಡಲಾಗುವುದು ಎಂದು ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಂಡಿಎಂಎ ಮಾದಕ ವಸ್ತು ಮಾರಾಟ: ಮೂವರ ಬಂಧನ

95 ಸಾವಿರ ರೂ. ಮೌಲ್ಯದ ಮಾದಕ ವಸ್ತು ವಶ


ಪ್ರಮೋದ್


ರಾಶೀದ್


ದರ್ಶನ್

ಮಡಿಕೇರಿ, ನ.7– ನಿಷೇಧಿತ ಮಾದಕ ವಸ್ತು 'ಎಂಡಿಎಂಎ' ಮಾರಾಟ ಮಾಡುತ್ತಿದ್ದ ಮಡಿಕೇರಿ ಮೂಲದ ಮೂವರು ಆರೋಪಿಗಳನ್ನು ಮಂಗಳೂರು ಸಿಸಿಬಿ ಪೊಲೀಸರು ಬಂಧಿಸಿದ್ದು, ಆರೋಪಿಗಳಿಂದ 95 ಸಾವಿರ ರೂ. ಮೌಲ್ಯದ ಪದಾರ್ಥಗಳನ್ನು ವಶಪಡಿಸಿಕೊಳ್ಳಲಾಗಿದೆ.

ಮಡಿಕೇರಿ ಕೊಹಿನೂರ್ ರಸ್ತೆ ನಿವಾಸಿ ಪ್ರಮೋದ್ ಎಂ.ಜಿ. ಅಲಿಯಾಸ್ ಡಿಸ್ಕ್(30), ಕಾನ್ವೆಂಟ್ ಜಂಕ್ಷನ್‌ನ ರಾಶೀದ್ ಎಂ.ಝಡ್ ಅಲಿಯಾಸ್ ರಾಶಿ(41), ಮಡಿಕೇರಿ ತಾಲೂಕಿನ ಕಡಗದಾಳು ಗ್ರಾಮದ ಎಸ್.ದರ್ಶನ್(24) ಬಂಧಿತ ಆರೋಪಿಗಳು.

ಮಂಗಳೂರು ಪಳ್ನೀರು ಬಳಿಯ ಲಾಡ್ಜ್‌ವೊಂದರಲ್ಲಿ ಮೂವರು ಮಾದಕ ವಸ್ತುವನ್ನು ಮಾರಾಟ ಮಾಡುತ್ತಿದ್ದ ಬಗ್ಗೆ ಖಚಿತ ಮಾಹಿತಿ ಪಡೆದ ಮಂಗಳೂರು ಸಿಸಿಬಿ ಪೊಲೀಸರು ನ.6ರಂದು ದಾಳಿ ನಡೆಸಿ ಬಂಧಿಸಿದ್ದಾರೆ. ಆರೋಪಿಗಳಿಂದ 75 ಸಾವಿರ ರೂ. ಮೌಲ್ಯದ 15 ಗ್ರಾಂ ನಿಷೇಧಿತ ಮಾದಕ ವಸ್ತು ಎಂಡಿಎಂಎ, ಡಿಜಿಟಲ್ ತೂಕ ಮಾಪನ ಮತ್ತು ಮೊಬೈಲ್ ಫೋನ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ.

ಆರೋಪಿಗಳ ಪೈಕಿ ಪ್ರಮೋದ್ ಎಂ.ಜಿ. ಡಿಸ್ಕ್ ಎಂಬಾತನ ವಿರುದ್ಧ ಸುಳ್ಯ ಠಾಣೆಯಲ್ಲಿ ಕೊಲೆ ಪ್ರಕರಣ ಹಾಗೂ ಮಂಗಳೂರು ನಗರದ ಬರ್ಕೆ ಠಾಣೆಯಲ್ಲಿ ಕೊಲೆ ಯತ್ನ ಹಾಗೂ ಮಡಿಕೇರಿ ನಗರ ಠಾಣೆಯಲ್ಲಿ ಸುಲಿಗೆ, ದರೋಡೆ ಪ್ರಕರಣಗಳು ದಾಖಲಾಗಿವೆ. ರಾಶೀದ್ ಎಂ.ಝಡ್ ಎಂಬಾತ ವಿರುದ್ಧ ಮಡಿಕೇರಿ ತಾಲೂಕಿನ ಭಾಗಮಂಡಲ ಠಾಣೆಯಲ್ಲಿ ದರೋಡೆ ಹಾಗೂ ಮಡಿಕೇರಿ ನಗರ ಠಾಣೆಯಲ್ಲಿ ಕೊಲೆ, ದರೋಡೆ, ಸುಲಿಗೆ ಪ್ರಕರಣಗಳು ದಾಖಲಾಗಿದೆ. ಎಸ್.ದರ್ಶನ್ ಎಂಬಾತನ ವಿರುದ್ಧ ಮಡಿಕೇರಿ ನಗರ ಠಾಣೆಯಲ್ಲಿ ಕೊಲೆ ಯತ್ನ ಪ್ರಕರಣ ದಾಖಲಾಗಿವೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಮಂಗಳೂರು ನಗರ ಪೊಲೀಸ್ ಆಯುಕ್ತ ಅನುಪಮ್ ಅಗರ್ವಾಲ್ ಅವರ ಮಾರ್ಗದರ್ಶನದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಡಿಸಿಪಿ ಸಿದ್ದಾರ್ಥ ಗೋಯಲ್ ಮತ್ತು ಅಪರಾಧ ಮತ್ತು ಸಂಚಾರ ವಿಭಾಗದ ಡಿಸಿಪಿ ದಿನೇಶ್ ಕುಮಾರ್ ನಿರ್ದೇಶನದಂತೆ ಮಂಗಳೂರು ಸಿಸಿಬಿ ಘಟಕದ ಎಸಿಪಿ ಹೆಗಡೆ ಪಿ.ಎ. ನೇತೃತ್ವದ ತಂಡ ಆರೋಪಿಗಳ ಪತ್ತೆ ಕಾರ್ಯಾಚರಣೆ ನಡೆಸಿದೆ.

ಸುಂಟಿಕೊಪ್ಪ ಬಳಿ ವಿದ್ಯುತ್ ಕಂಬಕ್ಕೆ ಬೈಕ್ ಡಿಕ್ಕಿ

ಪೊದೆಯೊಳಗೆ ಎಸೆಯಲ್ಪಟ್ಟ ಬೈಕ್, ಸವಾರರಿಬ್ಬರ ಸಾವು







ಸುಂಟಿಕೊಪ್ಪ, ನ.7– ಬೈಕೊಂದು ರಸ್ತೆ ಬದಿಯ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಮತ್ತು ಸವಾರರು ಪೊದೆಯೊಳಗೆ ಎಸೆಯಲ್ಪಟ್ಟು ಸ್ಥಳದಲ್ಲೇ ಸಾವನ್ನಪ್ಪಿದ್ದ ಘಟನೆ ಸೋಮವಾರ ತಡರಾತ್ರಿ ಸುಂಟಿಕೊಪ್ಪ–ಕುಶಾಲನಗರ ರಾಷ್ಟ್ರೀಯ ಹೆದ್ದಾರಿ 275ರಲ್ಲಿ ಸಂಭವಿಸಿದೆ.

ಸುಂಟಿಕೊಪ್ಪ ಮಧುರಮ್ಮ ಬಡಾವಣೆ ನಿವಾಸಿಗಳಾದ ಏಳುಮಲೈ ಅವರ ಪುತ್ರ ಉದಯ(21) ಹಾಗೂ ದಿವಂಗತ ಗಣಪತಿ ಪೊನ್ನವ್ವ ಅವರ ಪುತ್ರ ಚಂದನ್(20) ಮೃತ ದುರ್ದೈವಿಗಳು.

ಇಬ್ಬರು ಯುವಕರು ಕುಶಾಲನಗರ ಮಾರ್ಗವಾಗಿ ಸುಂಟಿಕೊಪ್ಪಕ್ಕೆ ಆಗಮಿಸುತ್ತಿದ್ದಾಗ ಕೂರ್ಗ್‌ಹಳ್ಳಿ ಬಿರ್ಚ್‌ವುಡ್ ರೆಸಾರ್ಟ್ ಬಳಿ ಬೈಕ್ ಸವಾರನ ನಿಯಂತ್ರಣ ಕಳೆದುಕೊಂಡು ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದಿದೆ. ಇದರಿಂದ ಇಬ್ಬರು ಕೂಡ ಹೆದ್ದಾರಿಯಲ್ಲಿ ಬೆಳೆದು ನಿಂತಿದ್ದ ಪೊದೆಯೊಳಗೆ ಎಸೆಯಲ್ಪಟ್ಟು ಸ್ಥಳದಲ್ಲೇ ಸಾವಿಗೀಡಾಗಿದ್ದಾರೆ.


ಸೋಮವಾರ ತಡರಾತ್ರಿ ಈ ಘಟನೆ ನಡೆದಿದ್ದು, ಮಂಗಳವಾರ ಮುಂಜಾನೆವರೆಗೂ ಯಾರ ಗಮನಕ್ಕೂ ಬಂದಿರಲಿಲ್ಲ. ತೋಟಕ್ಕೆ ಕೂಲಿ ಕಾರ್ಮಿಕರನ್ನು ಸಾಗಿಸುವ ಜೀಪ್ ಚಾಲಕರೋರ್ವರು ಬೈಕ್ ಅಪಘಾತವಾಗಿರುವುದನ್ನು ಗಮನಿಸಿ ಕೂಡಲೇ ಸುಂಟಿಕೊಪ್ಪ ಪೊಲೀಸ್ ಠಾಣೆಗೆ ವಿಷಯ ತಿಳಿಸಿದರು. ಸುಂಟಿಕೊಪ್ಪ ಪೊಲೀಸರು ಸ್ಥಳಕ್ಕೆ ತೆರಳಿ ಪರಿಶೀಲಿಸಿದಾಗ ಬೈಕ್‌ನಲ್ಲಿದ್ದ ಇಬ್ಬರು ಸವಾರರ ಮುಖ, ತಲೆ, ಕೈ ಕಾಲುಗಳಿಗೆ ಗಂಭೀರ ಸ್ವರೂಪದ ಗಾಯಗಳಾಗಿ ಸ್ಥಳದಲ್ಲೇ ಮೃತಪಟ್ಟಿರುವುದು ಕಂಡು ಬಂದಿದೆ.

ಘಟನಾ ಸ್ಥಳಕ್ಕೆ ಮಡಿಕೇರಿ ಡಿವೈಎಸ್‌ಪಿ ಎಂ.ಜಗದೀಶ್, ಕುಶಾಲನಗರ ವೃತ್ತ ನಿರೀಕ್ಷಕ ಕೆ. ರಾಜೇಶ್ ಕೋಟ್ಯಾನ್, ಸುಂಟಿಕೊಪ್ಪ ಠಾಣಾಧಿಕಾರಿ ಎಂ.ಸಿ.ಶ್ರೀಧರ್ ಮತ್ತು ಸಿಬ್ಬಂದಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಮೃತದೇಹಗಳ ಮರಣೋತ್ತರ ಪರೀಕ್ಷೆ ನಡೆಸಿ ವಾರಸುದಾರರಿಗೆ ಹಸ್ತಾಂತರಿಸಲಾಯಿತು. ಘಟನೆಗೆ ಸಂಬಂಧಿಸಿದಂತೆ ಮಾಹಿತಿ ಮತ್ತು ಸಾಕ್ಷ್ಯಾಧಾರಗಳನ್ನು ಕಲೆ ಹಾಕಲಾಗುತ್ತಿದ್ದು, ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗಿದೆ ಎಂದು ಪೊಲೀಸ್ ಇಲಾಖೆ ತಿಳಿಸಿದೆ.

ಪೌರಕಾರ್ಮಿಕರಿಗೆ ನಿವೇಶನ, ವಸತಿ ಸೇರಿದಂತೆ ಅಗತ್ಯ ಸೌಲಭ್ಯ ಕಲ್ಪಿಸುವೆ

ಶಾಸಕ ಡಾ.ಮಂಥರ್‌ಗೌಡ ಭರವಸೆ



ಮಡಿಕೇರಿ, ನ.7– ಪೌರ ಕಾರ್ಮಿಕರಿಗೆ ನಿವೇಶನ, ವಸತಿ ಸೇರಿದಂತೆ ಸರ್ಕಾರದಿಂದ ಅಗತ್ಯ ಮೂಲ ಸೌಲಭ್ಯಗಳನ್ನು ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಮಡಿಕೇರಿ ಶಾಸಕ ಡಾ.ಮಂಥರ್ ಗೌಡ ಭರವಸೆ ನೀಡಿದ್ದಾರೆ.

ಮಡಿಕೇರಿ ನಗರಸಭೆ ವತಿಯಿಂದ ನಗರದ ಕಾವೇರಿ ಕಲಾಕ್ಷೇತ್ರದಲ್ಲಿ ಮಂಗಳವಾರ ನಡೆದ 'ಪೌರ ಕಾರ್ಮಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಪೌರಕಾರ್ಮಿಕರಿಗಾಗಿ ಸರ್ಕಾರ ಹಲವು ಸೌಲಭ್ಯಗಳನ್ನು ಕಲ್ಪಿಸಿದ್ದು, ಅವುಗಳನ್ನು ಬಳಸಿಕೊಂಡು ಉತ್ತಮ ಜೀವನ ನಡೆಸಬೇಕು. ತಾವು ಕರ್ತವ್ಯದ ಸಂದರ್ಭದಲ್ಲಿ ಸೂಕ್ತ ರಕ್ಷಣಾ ಸಾಮಗ್ರಿಗಳನ್ನು ಬಳಸಿ ಕಾರ್ಯನಿರ್ವಹಿಸಬೇಕು ಎಂದರು.

ಪೌರಕಾರ್ಮಿಕರು ರಜೆ ಕೇಳಿದಲ್ಲಿ ನೀಡಬೇಕು. ಯಾವುದೇ ಕಾರಣಕ್ಕೂ ಸತಾಯಿಸಬಾರದು. ಆರೋಗ್ಯದ ಕಡೆ ಹೆಚ್ಚಿನ ಗಮನಹರಿಸುವುದರ ಜೊತೆಗೆ, ಮಕ್ಕಳ ವಿದ್ಯಾಭ್ಯಾಸಕ್ಕೆ ಒತ್ತು ನೀಡಬೇಕು ಎಂದು ಅವರು ಸಲಹೆ ನೀಡಿದರು. ಸಾರ್ವಜನಿಕ ಸ್ಥಳಗಳಲ್ಲಿ ಕಸವನ್ನು ಎಲ್ಲೆಂದರಲ್ಲಿ ಬಿಸಾಡುವವರಿಂದ ದಂಡ ವಸೂಲಿ ಮಾಡಬೇಕು. ಈ ರೀತಿ ಆದಲ್ಲಿ ಪ್ರತಿಯೊಬ್ಬರೂ ಎಚ್ಚರವಹಿಸಲು ಸಾಧ್ಯ ಎಂದ ಅವರು, ನಗರಸಭೆಯಲ್ಲಿ ಓಬಳಿಯಂತ ಪೌರ ಕಾರ್ಮಿಕರು ನಾಲ್ಕು ದಶಕಗಳ ಕಾಲದಿಂದ ದುಡಿದಿದ್ದಾರೆ. ಅವರ ಆರೋಗ್ಯಕ್ಕೆ ಅಗತ್ಯ ನೆರವು ನೀಡಬೇಕು ಎಂದರಲ್ಲದೆ, ಓಬಳಿ ಅವರಿಗೆ ವೈಯಕ್ತಿಕವಾಗಿ 10 ಸಾವಿರ ರೂ.ವನ್ನು ಇದೇ ಸಂದರ್ಭದಲ್ಲಿ ನೀಡಿದರು. ಜೊತೆಗೆ ಹುಟ್ಟುಹಬ್ಬದ ಪ್ರಯುಕ್ತ ಪೌರಕಾರ್ಮಿಕರಿಗೆ ಶಾಸಕರು ವಸ್ತ್ರ ವಿತರಿಸಿದರು.

ನಗರಸಭೆ ಅಧ್ಯಕ್ಷೆ ಅನಿತಾ ಪೂವಯ್ಯ ಮಾತನಾಡಿ, ಪೌರಕಾರ್ಮಿಕರು ಮಡಿಕೇರಿ ನಗರದ ಕಿರೀಟವಿದ್ದಂತೆ, ಪೌರಕಾರ್ಮಿಕರು ಒಂದು ದಿನ ಸ್ವಚ್ಛತಾ ಕಾರ್ಯ ಕೈಗೊಳ್ಳದಿದ್ದಲ್ಲಿ ಊಹಿಸಿಕೊಳ್ಳುವುದು ಕಷ್ಟಸಾಧ್ಯ. ಆದ್ದರಿಂದ ಪೌರಕಾರ್ಮಿಕರನ್ನು ಗೌರವಿಸಬೇಕು ಎಂದರು.

ಮಡಿಕೇರಿ ದಸರಾ ಸೇರಿದಂತೆ ಹಲವು ಸಂದರ್ಭಗಳಲ್ಲಿ ಪೌರಕಾರ್ಮಿಕರು ಹೆಚ್ಚಿನ ಕೆಲಸ ನಿರ್ವಹಿಸಿದ್ದಾರೆ. ಮಡಿಕೇರಿ ನಗರದ ಪೌರಕಾರ್ಮಿಕರು ಉತ್ತಮವಾಗಿ ಕೆಲಸ ನಿರ್ವಹಿಸುತ್ತಿದ್ದಾರೆ ಎಂದು ಇದೇ ಸಂದರ್ಭದಲ್ಲಿ ಮೆಚ್ಚುಗೆ ವ್ಯಕ್ತಪಡಿಸಿದರು. ಜಿಲ್ಲಾಧಿಕಾರಿ ವೆಂಕಟ್ ರಾಜಾ ಮಾತನಾಡಿ ನಗರ, ಪಟ್ಟಣಗಳು ಸ್ವಚ್ಛವಾಗಿರಲು ಪೌರಕಾರ್ಮಿಕರ ಕರ್ತವ್ಯ ನಿಷ್ಠೆ ಹೆಚ್ಚಿನದ್ದಾಗಿದೆ. ಮಡಿಕೇರಿ ನಗರದಲ್ಲಿ ಉತ್ತಮ ವಾತಾವರಣ ಇರಲು ಪೌರಕಾರ್ಮಿಕರ ಪಾತ್ರ ಪ್ರಮುಖವಾಗಿದೆ ಎಂದರು.

ನಗರಸಭೆ ಉಪಾಧ್ಯಕ್ಷೆ ಸವಿತಾ ರಾಕೇಶ್, ನಗರಸಭೆ ಸದಸ್ಯ ರಾಜೇಶ್ ಯಲ್ಲಪ್ಪ, ಪೌರಾಯುಕ್ತ ವಿಜಯ್ ಮಾತನಾಡಿದರು. ಖಾಯಂ ಪೌರಕಾರ್ಮಿಕರಿಗೆ ತಲಾ 7 ಸಾವಿರ ವಿಶೇಷ ಭತ್ಯೆ ಚೆಕ್ ವಿತರಿಸಲಾಯಿತು. ಎಸ್‌ಎಸ್‌ಎಲ್‌ಸಿ, ಪಿಯುಸಿ ಮತ್ತು ಪದವಿಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಿಸಲಾಯಿತು. ಕ್ರೀಡಾಕೂಟದಲ್ಲಿ ಪಾಲ್ಗೊಂಡು ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ನಗರಸಭೆ ಸದಸ್ಯ ಮಹೇಶ್ ಜೈನಿ ಅವರು ಮಾತನಾಡಿದರು. ಶಾಸಕ ಡಾ.ಮಂಥರ್ ಗೌಡ ಮತ್ತು ಜಿಲ್ಲಾಧಿಕಾರಿ ವೆಂಕಟ್ ರಾಜಾ ಅವರಿಗೆ ಇದೇ ಸಂದರ್ಭದಲ್ಲಿ ಪೌರ ಸನ್ಮಾನ ನೀಡಿ ಗೌರವಿಸಲಾಯಿತು. ನಗರಸಭೆ ಸದಸ್ಯರಾದ ಉಮೇಶ್ ಸುಬ್ರಮಣಿ, ಚಿತ್ರಾವತಿ, ಕಲಾವತಿ, ಉಷಾ, ಶ್ವೇತಾ, ಸವಿತಾ, ಅರುಣ್ ಶೆಟ್ಟಿ, ಶಾರದ, ಚಂದ್ರಶೇಖರ್, ಪೌರ ಸೇವಾ ನೌಕರರ ಜಿಲ್ಲಾಧ್ಯಕ್ಷ ಪಿ.ಕೆ.ಸತೀಶ್, ತಾಲೂಕು ಅಧ್ಯಕ್ಷ ಎಸ್.ಕೆ.ಸತ್ಯ ನಾರಾಯಣ, ಇತರರು ಇದ್ದರು. ಪರಿಸರ ಎಂಜಿನಿಯರ್ ಸೌಮ್ಯ ನಿರೂಪಿಸಿ ದರು. ಸಹಾಯಕ ಎಂಜಿನಿಯರ್ ಹೇಮಂತ್ ಕುಮಾರ್ ಸ್ವಾಗತಿಸಿದರು. ನಗರಸಭೆ ಕಂದಾಯ ಅಧಿಕಾರಿ ತಾಹೀರ್ ವಂದಿಸಿದರು.

ಡೆತ್‌ನೋಟ್ ಬರೆದಿಟ್ಟು ಮಾಜಿ ಸೈನಿಕ ನಾಪತ್ತೆ

▸ ಕೆರೆದಂಡೆ ಬಳಿ ಚಪ್ಪಲಿ, ವಾಚ್ ಪತ್ತೆ ▸ ಸಂಜೆವರೆಗೆ ಶೋಧ ನಡೆಸಿದರೂ ಪತ್ತೆಯಾಗದ ಸುಳಿವು

ಮಡಿಕೇರಿ, ನ.7– ಕಳೆದ 2 ತಿಂಗಳ ಹಿಂದೆಯಷ್ಟೇ ಸೇನೆಯಿಂದ ನಿವೃತ್ತರಾಗಿರುವ ಮಾಜಿ ಸೈನಿಕ, ನಗರದ ಉಕ್ಕುಡ ನಿವಾಸಿ ಸಂದೇಶ್ (38) ಡೆತ್‌ನೋಟ್ ಬರೆದಿಟ್ಟು ನಾಪತ್ತೆಯಾಗಿರುವ ಘಟನೆ ನಡೆದಿದೆ.

ಬೆಳಗ್ಗೆ ಮನೆಯಿಂದ ವಾಯು ವಿಹಾರಕ್ಕೆ ಹೋಗಿ ಬರುವುದಾಗಿ ಮನೆಯಿಂದ ತೆರಳಿದ್ದ ಸಂದೇಶ್ ಸಂಜೆಯಾದರೂ ಮನೆಗೆ ಮರಳದ ಹಿನ್ನೆಲೆಯಲ್ಲಿ ಅವರ ಕುಟುಂಬದ ಸದಸ್ಯರು ಎಲ್ಲಾ ಕಡೆ ಹುಡುಕಾಟ ನಡೆಸಿದ್ದರು. ಈ ವೇಳೆ ಉಕ್ಕಡ ಪಂಪ್ ಕೆರೆಯ ದಂಡೆ ಮೇಲೆ ಸಂದೇಶ್ ಅವರಿಗೆ ಸೇರಿದ ಚಪ್ಪಲಿ ಹಾಗೂ ವಾಚ್ ಕಂಡು ಬಂದ ಹಿನ್ನೆಲೆಯಲ್ಲಿ ಅಗ್ನಿಶಾಮಕ ದಳ ಹಾಗೂ ಪೊಲೀಸ್ ಸಿಬ್ಬಂದಿಗಳು ಶೋಧ ಕಾರ್ಯ ನಡೆಸಿದರು. ಕತ್ತಲು ಆವರಿಸುವವರೆಗೂ ಕೆರೆಯಲ್ಲಿ ಶೋಧ ನಡೆಸಿದ ಅಗ್ನಿಶಾಮಕ ದಳದ ರಕ್ಷಣಾ ತಂಡ ಕತ್ತಲಾದ ಹಿನ್ನೆಲೆಯಲ್ಲಿ ಶೋಧ ಕಾರ್ಯವನ್ನು ಸ್ಥಗಿತಗೊಳಿಸಿದರು. ಈ ಕುರಿತು ಮಡಿಕೇರಿ ನಗರ ಪೊಲೀಸ್ ಠಾಣೆಯಲ್ಲಿ ವ್ಯಕ್ತಿ ನಾಪತ್ತೆ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ.

ಕಾಫಿ ತೋಟದಲ್ಲಿ ಬೀಡುಬಿಟ್ಟಿದ್ದ ಆನೆಗಳನ್ನು ಕಾಡಿಗಟ್ಟಿದ ಅರಣ್ಯ ಇಲಾಖೆ ಸಿಬ್ಬಂದಿ



ಸಿದ್ದಾಪುರ, ನ.7– ಕಾಫಿ ತೋಟಗಳಲ್ಲಿ ಬೀಡುಬಿಟ್ಟಿದ್ದ ಕಾಡಾನೆಗಳನ್ನು ಅರಣ್ಯ ಇಲಾಖೆ ಸಿಬ್ಬಂದಿಗಳು ಹರಸಾಹಸ ಪಟ್ಟು ಕಾಡಿಗಟ್ಟುವಲ್ಲಿ ಯಶಸ್ವಿಯಾಗಿದ್ದಾರೆ.

ವಿರಾಜಪೇಟೆ ತಾಲೂಕಿನ ಕಳತ್ಮಾಡು ಭಾಗದಲ್ಲಿ ಮೂರು ಮರಿಯೊಂದಿಗೆ ಕಾಣಿಸಿಕೊಂಡ ಹತ್ತು ಕಾಡಾನೆಗಳ ಹಿಂಡನ್ನು ಪಾಲಿಬೆಟ್ಟ ಮಾರ್ಗವಾಗಿ ಚೆನ್ನಂಗಿ ಅರಣ್ಯಕ್ಕೆ ಅಟ್ಟಲಾಯಿತು. ಉಪ ಅರಣ್ಯ ಸಂರಕ್ಷಣಾಧಿಕಾರಿ ಶರಣಬಸಪ್ಪ ಅವರ ಮಾರ್ಗದರ್ಶನದಲ್ಲಿ ಪೊನ್ನಂಪೇಟೆ ತಾಲೂಕು ಹಾಗೂ ವಿರಾಜಪೇಟೆ ತಾಲೂಕು ಭಾಗದಲ್ಲಿ ಆನೆ ಕಾಡಿಗಟ್ಟುವ ಕಾರ್ಯಾಚರಣೆಗೆ ಎರಡು ತಂಡಗಳನ್ನು ನಿಯೋಜಿಸಲಾಗಿತ್ತು.

ಸಹಾಯಕ ಸಂರಕ್ಷಣಾಧಿಕಾರಿಗಳಾದ ಕೊಚ್ಚೆರ ನೆಹರೂ, ಕೆ.ಪಿ ಗೋಪಾಲ್ ಹಾಗೂ ವಲಯ ಅರಣ್ಯಾಧಿಕಾರಿ ಕಳ್ಳಿರ ಎಂ ದೇವಯ್ಯ ನೇತೃತ್ವದಲ್ಲಿ 15ಕ್ಕೂ ಹೆಚ್ಚು ಸಿಬ್ಬಂದಿಗಳು ಬೆಳಗ್ಗಿನಿಂದಲೇ ಕಾರ್ಯಾಚರಣೆಗಿಳಿದು ಕಾಫಿ ತೋಟಗಳಲ್ಲಿ ಬೀಡು ಬಿಟ್ಟಿದ್ದ ಆನೆಗಳನ್ನು ಹರಸಾಹಸ ಪಟ್ಟು ಒಂದುಗೂಡಿಸಿ ಸುಮಾರು ಹತ್ತು ಕಿಲೋ ಮೀಟರ್‌ನಷ್ಟು ನಡೆದು ಚೆನ್ನಂಗಿ ಅರಣ್ಯಕ್ಕೆ ಅಟ್ಟುವಲ್ಲಿ ಯಶಸ್ವಿಯಾಗಿದ್ದಾರೆ.

ಈ ಸಂದರ್ಭ ಉಪ ವಲಯ ಅರಣ್ಯಾಧಿಕಾರಿಗಳಾದ ಸಂಜಿತ್ ಸೋಮಯ್ಯ, ದಿವಾಕರ್, ಇಟಿಎಫ್ ತಂಡದ ಶ್ರೀಶೈಲ ಸೇರಿದಂತೆ ಆರ್‌ಆರ್‌ಟಿ ಸಿಬ್ಬಂದಿಗಳು ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

ಪರ ಮಾಡುವ ಭಕ್ತರ ಜೊತೆಯಲ್ಲೇ ಪ್ರಸಾದ ಸ್ವೀಕರಿಸಿದ ಪ್ರಾಧಿಕಾರದ ಕಾರ್ಯದರ್ಶಿ ಸರಸ್ವತಿ



> ಪ್ರಾಧಿಕಾರದ ಕಾರ್ಯದರ್ಶಿಗಳು ನಮ್ಮ ಸಮಸ್ಯೆಗಳನ್ನು ಆಲಿಸಿ ಸಮಸ್ಯೆಗಳನ್ನು ಬಗೆಹರಿಸುವ ಭರವಸೆ ನೀಡಿದ್ದಾರೆ. ಇದಲ್ಲದೆ ನಮ್ಮ ಜೊತೆ ಕುಳಿತು ಊಟ ಮಾಡಿರುವುದು ನಮಗೆ ಸಂತಸ ತಂದಿದೆ.
> -ಪ್ರಭುಸ್ವಾಮಿ, ಶಿವಪುರ ಗ್ರಾಮ ನಿವಾಸಿ ಗುಂಡ್ಲುಪೇಟೆ

ಹನೂರು, ನ.7– ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದಲ್ಲಿ ಹರಕೆ ಹೊತ್ತು ಪರ ಮಾಡುವ ಭಕ್ತರ ಜೊತೆಯಲ್ಲಿಯೇ ಕುಳಿತು ಪ್ರಾಧಿಕಾರದ ಕಾರ್ಯದರ್ಶಿ ಸರಸ್ವತಿಯವರು ಪ್ರಸಾದ ಸ್ವೀಕರಿಸಿದ್ದಾರೆ.

ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದ ಪರ ಮಾಡುವ ಸ್ಥಳ ಪರಿಶೀಲನೆಗೆ ಪ್ರಾಧಿಕಾರದ ಕಾರ್ಯದರ್ಶಿಗಳು ತೆರಳಿದ್ದ ವೇಳೆ ಗುಂಡ್ಲುಪೇಟೆ ತಾಲೂಕಿನ ಕೋಡಹಳ್ಳಿ ಗ್ರಾಮದ ನಿವಾಸಿಗಳು ನೀವು ನಮ್ಮ ಜೊತೆಯಲ್ಲಿ ಊಟ ಮಾಡಬೇಕು ಎಂದು ಮನವಿ ಮಾಡಿದ್ದಾರೆ. ಆದರೆ ಕಾರ್ಯದರ್ಶಿಗಳು ಇಲ್ಲ ನೀವು ನಿಮ್ಮ ಪೂಜೆ ನೆರವೇರಿಸಿ ಎಂದು ತಿಳಿಸಿದ್ದಾರೆ ಆದರೆ ಶಿವಪುರ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷೆ ಶಿವಮ್ಮ ನೀವು ಬಡವರ ಜೊತೆ ಊಟ ಮಾಡುವುದಿಲ್ಲ ಬಿಡಿ ಎಂದು ತಿಳಿಸಿದ್ದಾರೆ. ಇಲ್ಲ ಬಡವರು ಶ್ರೀಮಂತರು ಎಂಬ ಭೇದ ಭಾವ ನನಗೆ ಇಲ್ಲ. ನಿಮ್ಮ ಜೊತೆ ನಾನು ಬಂದು ಪ್ರಸಾದ ಸ್ವೀಕರಿಸುತ್ತೇನೆ ಎಂದು ತಿಳಿಸಿದ್ದರು. ಅದರಂತೆ ಸಂಜೆ 5ರ ಸಮಯದಲ್ಲಿ ಪರ ಮಾಡುವ ಸ್ಥಳಕ್ಕೆ ಭೇಟಿ ನೀಡಿ ಪೂಜೆಯಲ್ಲಿ ಪಾಲ್ಗೊಂಡು ಪ್ರಸಾದವಾಗಿ ಮಾಡಲಾಗಿದ್ದ ಕಜ್ಜಾಯ, ಪಾಯಸ, ಅನ್ನ ಸಾಂಬಾರ್, ಹುಳಿ, ಸಂಡಿಗೆ ಪ್ರಸಾದ ಸ್ವೀಕರಿಸಿದ್ದಾರೆ.

ಎಸ್‌ಟಿಗೆ ಸೇರ್ಪಡೆಗೊಳಿಸುವಂತೆ ಆಗ್ರಹಿಸಿ ಸವಿತಾ ಸಮಾಜ ಪ್ರತಿಭಟನೆ



ಚಾಮರಾಜನಗರ, ನ.7– ಸವಿತಾ ಸಮಾಜವನ್ನು ಎಸ್‌ಟಿಗೆ ಸೇರ್ಪಡೆ ಮಾಡುವುದು ಸೇರಿದಂತೆ 8 ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ನಗರದಲ್ಲಿ ಮಂಗಳವಾರ ಸವಿತಾ ಸಮಾಜದ ಜಿಲ್ಲಾ ಘಟಕದಿಂದ ಪ್ರತಿಭಟನೆ ನಡೆಸಲಾಯಿತು.

ನಗರದ ಶ್ರೀಚಾಮರಾಜೇಶ್ವರಸ್ವಾಮಿ ದೇವಸ್ಥಾನದ ಮುಂಭಾಗ ಸಮಾವೇಶಗೊಂಡ ಸಮುದಾಯದ ಮುಖಂಡರು, ಯುವಕರು ಅಲ್ಲಿಂದ ಮಂಗಳವಾದ್ಯ ಕಲಾವಿದರೊಂದಿಗೆ ಶ್ರೀಭುವನೇಶ್ವರಿ ವೃತ್ತಕ್ಕೆ ತೆರಳಿ ಸಮುದಾಯಕ್ಕೆ ಎಸ್‌ಟಿ ಮೀಸಲಾತಿ ನೀಡುವಂತೆ ಘೋಷಣೆ ಕೂಗಿದರು. ಬಳಿಕ ಅಲ್ಲಿಂದ ಬಿ. ರಾಚಯ್ಯ ಜೋಡಿ ರಸ್ತೆಯ ಮೂಲಕ ಜಿಲ್ಲಾಡಳಿತ ಭವನಕ್ಕೆ ತೆರಳಿ ಕೆಲಕಾಲ ಪ್ರತಿಭಟನೆ ನಡೆಸಿದರು. ನಂತರ, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಈ ವೇಳೆ ಸವಿತಾ ಸಮಾಜದ ಜಿಲ್ಲಾಧ್ಯಕ್ಷ ಕೆ.ವಿ. ವೆಂಕಟರಾಜು ಪಣ್ಯದಹುಂಡಿ ಮಾತನಾಡಿ, ರಾಜಕೀಯವಾಗಿ, ಶೈಕ್ಷಣಿಕವಾಗಿ ಹಾಗೂ ಆರ್ಥಿಕವಾಗಿ ಹಿಂದುಳಿದಿರುವ ಸವಿತಾ ಸಮಾಜವನ್ನು ಎಸ್‌ಟಿಗೆ ಸೇರ್ಪಡೆ ಮಾಡುವ ಮೂಲಕ ಸೂಕ್ತ ಮೀಸಲಾತಿಯನ್ನು ನೀಡಬೇಕು. ಸಮುದಾಯದ ಜಾತಿ ನಿಂದನೆ ಪದವನ್ನು ಬಳಸಿದರೆ ಅವರಿಗೆ ಕಾನೂನಿನಡಿಯಲ್ಲಿ ಶಿಕ್ಷೆ ವಿಧಿಸುವ ಕಾಯ್ದೆಯನ್ನು ಜಾರಿಗೆ ತರಬೇಕು ಎಂದು ಒತ್ತಾಯಿಸಿದರು.

ಸವಿತಾ ಸಮುದಾಯದಲ್ಲದವರು ಹಾಗೂ ಹೊರ ರಾಜ್ಯದವರು ಗ್ರಾಮೀಣ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಕ್ಷೌರಿಕ ವೃತ್ತಿ ಅಂಗಡಿಯನ್ನು ತೆರೆಯುತ್ತಿದ್ದಾರೆ. ಇದರಿಂದ ವೃತ್ತಿಯನ್ನು ನಂಬಿ ಜೀವನ ನಡೆಸುತ್ತಿರುವ ಸಮುದಾಯದ ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು.

ರಾಜ್ಯದ ನಾಲ್ಕು ಭಾಗಗಳಲ್ಲಿ ಕ್ಷೌರಿಕ ತರಬೇತಿ ಹಾಗೂ ನಾದಸ್ವರ, ಡೋಲು ತರಬೇತಿ ಶಾಲೆಯನ್ನು ಆರಂಭಿಸುವ ಮೂಲಕ ಸಮುದಾಯದ ಜನರಿಗೆ ಅನುಕೂಲ ಕಲ್ಪಿಸಬೇಕು. ಸವಿತಾ ಸಮುದಾಯದ ಜಾತಿ ಪ್ರಮಾಣ ಪತ್ರದ ಆಧಾರದಡಿಯಲ್ಲಿ ಸಮುದಾಯದ ಜನರಿಗೆ ಉಚಿತ ಆರೋಗ್ಯ ವಿಮೆಯನ್ನು ನೀಡಬೇಕು ಎಂದು ಒತ್ತಾಯಿಸಿದರು.

ಸವಿತಾ ಮಹರ್ಷಿ ಜಯಂತ್ಯುತ್ಸವದ ಕಾರ್ಯಕ್ರಮದಲ್ಲಿ ಸಮುದಾಯದ ಸಾಧಕರಿಗೆ ಸವಿತಾ ರತ್ನ ಪ್ರಶಸ್ತಿಯನ್ನು ನೀಡಿ ಗೌರವಿಸಬೇಕು. ಬೆಂಗಳೂರಿನ ಪ್ರಮುಖ ರಸ್ತೆಗೆ ಸವಿತಾ ಮಹರ್ಷಿಯವರ ಹೆಸರನ್ನು ನಾಮಕರಣ ಮಾಡುವ ಜೊತೆಗೆ, ಸವಿತಾ ಮಹರ್ಷಿಯ ಪ್ರತಿಮೆಯನ್ನು ಸ್ಥಾಪಿಸಬೇಕು ಎಂದು ಆಗ್ರಹಿಸಿದರು.

ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದಿಂದ ನಡೆಸುತ್ತಿರುವ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಕ್ಷೌರಿಕ ವೃತ್ತಿ ಮಾಡಲು ಸರ್ಕಾರ ಸವಿತಾ ಸಮುದಾಯದ ಕ್ಷೌರಿಕರನ್ನು ನೇಮಕ ಮಾಡಿಕೊಳ್ಳಬೇಕು. ಮುಜರಾಯಿ ಇಲಾಖೆಯ ಎಲ್ಲಾ ದೇವಾಲಯಗಳಲ್ಲಿ ಧಾರ್ಮಿಕ ನಿಯಮದಂತೆ ನಾದಸ್ವರ ಮತ್ತು ಡೋಲು ನುಡಿಸಲು ನಿಯಮವಿರುವುದರಿಂದ ಎಲ್ಲಾ ದೇವಸ್ಥಾನದಲ್ಲಿ ಡೋಲು ಮತ್ತು ನಾದಸ್ವರ ನುಡಿಸಲು ಸಮುದಾಯದ ಕಲಾವಿದರನ್ನು ನೇಮಿಸಬೇಕು ಎಂದು ಸರ್ಕಾರಕ್ಕೆ ಮನವಿ ಮಾಡಿದರು.

ನಮ್ಮೆಲ್ಲ ಬೇಡಿಕೆಗಳನ್ನು ಸರ್ಕಾರ ಜ.15ರೊಳಗೆ ಈಡೇರಿಸಬೇಕು. ಇಲ್ಲದಿದ್ದರೇ ಸಮುದಾಯದ ಶ್ರೀಸವಿತಾನಂದನಾಥ ಸ್ವಾಮೀಜಿ ನೇತೃತ್ವದಲ್ಲಿ ಹಂಪಿಯಿಂದ ಬೆಂಗಳೂರಿನ ಫ್ರೀಡಂ ಪಾರ್ಕ್‌ನವರೆಗೆ ಪಾದಯಾತ್ರೆ ಮಾಡಿ ನಂತರ ಅಮರಣಾಂತ ಉಪವಾಸ ಸತ್ಯಾಗ್ರಹ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಸವಿತಾ ಸಮಾಜದ ಉಪಾಧ್ಯಕ್ಷ ರಂಗಸ್ವಾಮಿ, ಪ್ರಧಾನ ಕಾರ್ಯದರ್ಶಿ ಪುರುಷೋತ್ತಮ, ಗೌರವಾಧ್ಯಕ್ಷ ಮುದ್ದುಮಾಧು, ತಾಲೂಕು ಅಧ್ಯಕ್ಷ ಬಸವಶೆಟ್ಟಿ, ಕಾರ್ಯಾಧ್ಯಕ್ಷ ಸಿದ್ದರಾಜು, ಪ್ರಧಾನ ಕಾರ್ಯದರ್ಶಿ ರವಿ, ಮುಖಂಡರಾದ ನಂಜೇದೇವರು, ಬಿ. ಚಂದ್ರಶೇಖರ್, ನಿಂಗರಾಜು, ನಂಜುಂಡಸ್ವಾಮಿ, ಮಹದೇವ, ನಾಗ, ವೆಂಕಟೇಶ್, ನಟರಾಜು, ರವಿಕುಮಾರ್, ರಮೇಶ್ ಸೇರಿದಂತೆ ಸಮುದಾಯದ ಯುವಕರು, ತಾಲೂಕು ಪದಾಧಿಕಾರಿಗಳು ಹಾಜರಿದ್ದರು. ಬಳಿಕ, ಜಿಲ್ಲಾಡಳಿತ ಭವನದಿಂದ ತಹಸೀಲ್ದಾರ್ ಕಚೇರಿಗೆ ತೆರಳಿ ತಹಸೀಲ್ದಾರ್‌ಗೆ ಮನವಿ ಸಲ್ಲಿಸಿದರು.

ಮಗಳ ಮೇಲೆ ಅತ್ಯಾಚಾರವೆಸಗಿದ್ದ ವ್ಯಕ್ತಿಗೆ 20 ವರ್ಷ ಶಿಕ್ಷೆ

ಚಾಮರಾಜನಗರ, ನ.7– ಹೆಂಡತಿ ಹೊರ ಹೋದ ವೇಳೆ ಮಗಳ ಮೇಲೆ ಅತ್ಯಾಚಾರ ಎಸಗಿದ್ದ ತಂದೆಗೆ ಚಾಮರಾಜನಗರದ ಮಕ್ಕಳ ಸ್ನೇಹಿ ನ್ಯಾಯಾಲಯವು 20 ವರ್ಷ ಕಠಿಣ ಶಿಕ್ಷೆ ವಿಧಿಸಿ ಆದೇಶ ನೀಡಿದೆ.

ಶಿಕ್ಷೆಗೊಳಗಾದ ಅಪರಾಧಿಯು ಮೈಸೂರಿನ ನಿವಾಸಿ. ಈತ ಮೂರು ಮದುವೆಯಾಗಿದ್ದು, ಮೊದಲ ಹೆಂಡತಿ ದೂರವಾಗಿದ್ದರೆ, ಎರಡನೇ ಹೆಂಡತಿ ಮೃತಪಟ್ಟಿದ್ದಳು. ಚಾಮರಾಜನಗರ ಮೂಲದ ಮಹಿಳೆಯೊಬ್ಬರ ಜೊತೆ ಮೂರನೇ ವಿವಾಹವಾಗಿತ್ತು.

2022ರ ಜನವರಿ 4ರಂದು ಅಪರಾಧಿ ಪತ್ನಿ ಮಕ್ಕಳನ್ನು ಮನೆಯಲ್ಲಿ ಬಿಟ್ಟು ಹೊರಗಡೆ ತೆರಳಿದ್ದ ವೇಳೆ ಈತ ಅಪ್ರಾಪ್ತೆ ಮೇಲೆ ಅತ್ಯಾಚಾರ ಎಸಗಿದ್ದ. ಈ ಸಂಬಂಧ ಚಾಮರಾಜನಗರ ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ವೈದ್ಯಕೀಯ ಪರೀಕ್ಷೆಗಳಿಂದ ತಂದೆಯ ಹೇಯಕೃತ್ಯ ಸಾಬೀತಾದ ಹಿನ್ನೆಲೆ ಮಕ್ಕಳ ಸ್ನೇಹಿ ಹಾಗೂ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎ.ಸಿ. ನಿಶಾರಾಣಿ, ಅಪರಾಧಿಗೆ 20 ವರ್ಷ ಕಠಿಣ ಶಿಕ್ಷೆ ವಿಧಿಸಿದ್ದಾರೆ.

ಜೊತೆಗೆ, ನೊಂದ ಬಾಲಕಿಗೆ ಪರಿಹಾರ ರೂಪದಲ್ಲಿ 6 ಲಕ್ಷ ರೂ. 30 ದಿನದೊಳಗೆ ಕೊಡಬೇಕು ಎಂದು ಕಾನೂನು ಸೇವಾ ಪ್ರಾಧಿಕಾರವು ಆದೇಶಿಸಿದೆ. ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕ ಕೆ. ಯೋಗೇಶ್ ವಾದ ಮಂಡಿಸಿದ್ದರು.

ಉಡಿಗಾಲ ಪಿಎಸಿಸಿ ಬ್ಯಾಂಕ್ ವಿರುದ್ಧ ರೈತರ ಪ್ರತಿಭಟನೆ



ಚಾಮರಾಜನಗರ, ನ.7– ಸಾಲ ತಿರುವಳಿಗೆ ಒತ್ತಾಯಿಸಿ ತಾಲೂಕಿನ ಉಡಿಗಾಲ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಮುಂದೆ ಮಂಗಳವಾರ ಕಬ್ಬು ಬೆಳೆಗಾರರ ಸಂಘದಿಂದ ಪ್ರತಿಭಟನೆ ನಡೆಯಿತು.

ಸಂಘದ ಕಚೇರಿ ಮುಂಭಾಗ ಸಮಾವೇಶಗೊಂಡ ಪ್ರತಿಭಟನಾಕಾರರು ಸಹಕಾರ ಸಂಘದ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ, ಆಕ್ರೋಶ ವ್ಯಕ್ತಪಡಿಸಿದರು.

ಇದೇ ವೇಳೆ ಮಾತನಾಡಿದ ಪ್ರತಿಭಟನಾಕಾರರು, ಸಾಲ ತಿರುವಳಿಗಾಗಿ ಗ್ರಾಮದ ಕಬ್ಬು ಬೆಳೆಗಾರರ ಸಂಘದ ಗ್ರಾಮ ಘಟಕದಿಂದ ಸಂಘ ಮತ್ತು ಸಹಕಾರ ಸಂಘಗಳ ಸಹಾಯಕ ನಿಬಂಧಕರಿಗೆ ಕಳೆದ ಒಂದು ವರ್ಷದ ಹಿಂದೆ ಮನವಿ ಸಲ್ಲಿಸಿದ್ದರು. ಯಾವುದೇ ಪ್ರಯೋಜನವಾಗಿರಲಿಲ್ಲ ಎಂದು ದೂರಿದರು.

ಈ ವೇಳೆ ಸ್ಥಳದಲ್ಲೇ ಹಾಜರಿದ್ದ ಎಆರ್‌ಸಿಎಸ್ ದಯಾನಂದ್, ಸಿಇಓ ಸಿದ್ದಮಲ್ಲಪ್ಪ ಸಾಲ ತಿರುವಳಿ ಮಾಡಲು ಬರುವುದಿಲ್ಲ. ಸಾಲ ಮುಗಿದ ಸಂದರ್ಭದಲ್ಲೇ ರೈತರು ಬಂದು ಸಾಲ ತಿರುವಳಿ ಮಾಡಿಕೊಳ್ಳಬೇಕಿತ್ತು ಎಂದರು. ಇದರಿಂದ ಕೆಲಕಾಲ ಪ್ರತಿಭಟನಾನಿರತರು, ಬ್ಯಾಂಕ್ ಅಧ್ಯಕ್ಷ ಶಿವಕುಮಾರ್, ಸಿಇಓ ನಡುವೆ ಮಾತಿನ ಚಕಮಕಿ ನಡೆಯಿತು. ಬಳಿಕ, ಬ್ಯಾಂಕ್ ಅಧಿಕಾರಿಗಳು ಪರಿಶೀಲಿಸಿ ನಿಮ್ಮ ಬೇಡಿಕೆ ಈಡೇರಿಸಲಾಗುವುದು ಎಂದು ಭರವಸೆ ನೀಡಿದ ನಂತರ ಪ್ರತಿಭಟನೆ ಕೈ ಬಿಡಲಾಯಿತು.

ಪ್ರತಿಭಟನೆಯಲ್ಲಿ ಕಬ್ಬು ಬೆಳೆಗಾರರ ಸಂಘದ ಕಾರ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್, ತಾಲೂಕು ಅಧ್ಯಕ್ಷ ಮೂಡ್ಲುಪುರ ನಾಗರಾಜು, ಉಪಾಧ್ಯಕ್ಷ ಮಹದೇವಸ್ವಾಮಿ, ಗುರುಮಲ್ಲಪ್ಪ, ಮಲೆಯೂರು ಬಸವರಾಜು, ನಾಗೇಂದ್ರ, ಕೀರ್ತಿ, ಮಹದೇವಪ್ರಸಾದ್, ಗವಿಯಪ್ಪ, ಮಲ್ಲೇಶ, ಭದ್ರೇಶ್, ಸಿದ್ದೇಶ್, ಗುಂಡಪ್ಪ, ಮಲೆಯೂರು ಮಹೇಶ್, ಗುರು, ನಾಗೇಂದ್ರ, ರಘು, ಕಾಳಪ್ಪ ಇದ್ದರು.

ಟೋಪಿ ಹಿಡಿದು 'ಕಾವೇರಿ' ಪ್ರತಿಭಟನೆ



ಚಾಮರಾಜನಗರ, ನ.7– ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವ ಕ್ರಮವನ್ನು ಖಂಡಿಸಿ ಕರ್ನಾಟಕ ಸೇನಾ ಪಡೆ ವತಿಯಿಂದ ನಗರದಲ್ಲಿ ಕಳೆದ 57 ದಿನಗಳಿಂದ ನಿರಂತರವಾಗಿ ಪ್ರತಿಭಟನೆ ನಡೆಸುತ್ತಿದ್ದು ಇಂದು ಕೂಡ ಟೋಪಿ ಹಿಡಿದು ಪ್ರದರ್ಶಿಸುವ ಮೂಲಕ ವಿನೂತನ ಪ್ರತಿಭಟನೆ ನಡೆಸಲಾಯಿತು.

ನಗರದ ಶ್ರೀಚಾಮರಾಜೇಶ್ವರ ಉದ್ಯಾನವನದ ಮುಂಭಾಗದಲ್ಲಿ ಜಿಲ್ಲಾ ಕನ್ನಡ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಶಾ.ಮುರಳಿ ಅವರ ನೇತೃತ್ವದಲ್ಲಿ ಜಮಾಯಿಸಿದ ಪ್ರತಿಭಟನಾನಿರತರು ಅಲ್ಲಿಂದ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತಕ್ಕೆ ತೆರಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಟೋಪಿ ಹಿಡಿದು ಕೇಂದ್ರ ಮತ್ತು ರಾಜ್ಯ ಸರ್ಕಾರ, ತಮಿಳುನಾಡು ಸರ್ಕಾರ, ಕಾವೇರಿ ನೀರು ನಿರ್ವಹಣಾ ಮಂಡಳಿ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಪಣ್ಯದಹುಂಡಿ ರಾಜು, ನಿಜಧ್ವನಿ ಗೋವಿಂದರಾಜು, ಗು.ಪುರುಷೋತ್ತಮ್, ಮಹೇಶ್ ಗೌಡ, ಚಾ.ಹ.ರಾಮು, ಚಾ.ಸಿ.ಸಿದ್ದರಾಜು, ವೀರಭದ್ರ, ತಾಂಡವಮೂರ್ತಿ, ಲಿಂಗರಾಜು, ರಾಚಪ್ಪ ಪ್ರಕಾಶ್ ಇತರರು ಭಾಗವಹಿಸಿದ್ದರು.

ರಾಜ್ಯ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆ



ಚಾಮರಾಜನಗರ, ನ.7– ನಗರದ ಡಾ.ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಪದವಿ ಪೂರ್ವ ಕಾಲೇಜುಗಳ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಸೇವಾ ಭಾರತಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ರಾಜ್ಯ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.

ಕ್ರೀಡಾಂಗಣದಲ್ಲಿ ನಡೆದ ಕಬಡ್ಡಿ, ಬಾಲ್ ಬ್ಯಾಡ್ಮಿಂಟನ್, ಟೆನ್ನಿಕಾಯ್ಟ್, ಚೆಸ್, ಥ್ರೋ ಬಾಲ್, ಹ್ಯಾಂಡ್ ಬಾಲ್, ವಾಲಿಬಾಲ್, ನಡಿಗೆ ಸ್ಪರ್ಧೆ, ಗುಂಡು ಎಸೆತ ಮುಂತಾದ ಸ್ಪರ್ಧೆಗಳಲ್ಲಿ ಕಾಲೇಜಿನ 45 ವಿದ್ಯಾರ್ಥಿಗಳು ಪಾಲ್ಗೊಂಡು ಜಯ ಗಳಿಸಿ ರಾಜ್ಯಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.

ಕ್ರೀಡೆಯಲ್ಲಿ ಉತ್ತಮ ಸಾಧನೆಗೈದ ಎಲ್ಲಾ ವಿದ್ಯಾರ್ಥಿಗಳನ್ನು ಸೇವಾ ಭಾರತಿ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ, ಪ್ರಾಂಶುಪಾಲರು ಹಾಗೂ ಉಪನ್ಯಾಸಕ ವೃಂದದವರು ಅಭಿನಂದಿಸಿದರು. ರಾಜ್ಯಮಟ್ಟದ ಕ್ರೀಡಾಕೂಟದಲ್ಲೂ ಗೆದ್ದು ಜಿಲ್ಲೆಗೆ ಕೀರ್ತಿ ತರುವಂತೆ ಹಾರೈಸಿದ್ದಾರೆ.

ಒಂದನೇ ಪುಟದಿಂದ

ಮೈಸೂರು ಪಾಲಿಕೆಯಿಂದ 'ಜಲ್ ದಿವಾಳಿ'

ನೀಡಲಾಯಿತು. ಒಟ್ಟಾರೆ ವೈಜ್ಞಾನಿಕ ರೀತಿಯಲ್ಲಿ ನೀರನ್ನು ಶುದ್ಧಿಕರಣ ಮಾಡಿ ಕುಡಿಯಲು ಯೋಗ್ಯ ನೀರನ್ನು ನಗರಕ್ಕೆ ಹೇಗೆ ಒದಗಿಸಲಾಗುತ್ತದೆ ಎಂಬ ಸಮಗ್ರ ಚಿತ್ರಣವನ್ನು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯ ಎಕ್ಸಿಕ್ಯೂಟಿವ್ ಇಂಜಿನಿಯರ್ ಆಸೀಫ್ ಖಲೀಲ್ ನೀಡಿದರು.

ನದಿ ಪಾತ್ರದ ನೀರನ್ನು ಕುಡಿಯಲು ಯೋಗ್ಯ ನೀರಾಗಿ ಶುದ್ಧೀಕರಿಸಲು ಏನೆಲ್ಲಾ ಪ್ರಕ್ರಿಯೆಗಳಿವೆ. ಅದರ ಶ್ರಮ ಎಷ್ಟಿದೆ ಎಂಬುದನ್ನು ವಿವರಿಸಿದರು. ಈ ಕಾರ್ಯದಲ್ಲಿ ದಿನದ 24 ಗಂಟೆಯೂ ಸಿಬ್ಬಂದಿ ಕೆಲಸ ನಿರ್ವಹಿಸುತ್ತಾರೆ ಎಂದು ಹೇಳಿದರು. ಇದನ್ನೆಲ್ಲಾ ನೋಡಿದ ಮೇಲೆ ಕುಡಿಯುವ ನೀರಿನ ಮಹತ್ವ ಎಷ್ಟಿದೆ ಎಂಬುದು ನಿಮಗೆ ಮನವರಿಕೆ ಆಗಿರಬಹುದು. ಈ ವಿಚಾರ ನಿಮ್ಮಿಂದ ಪ್ರತಿಯೊಬ್ಬರಿಗೂ ತಿಳಿಯಬೇಕು ಎಂದು ಸಲಹೆ ನೀಡಿದರು. ಮುಂಜಾನೆ ಮನೆ ಮುಂದೆ ಸ್ವಚ್ಛಗೊಳಿಸುವಾಗ, ಪಾತ್ರೆ ತೊಳೆಯುವಾಗ, ಬಟ್ಟೆ ಸ್ವಚ್ಛಗೊಳಿಸುವ ಸಂದರ್ಭ, ಹೀಗೆ ಎಲ್ಲಾ ಸಮಯದಲ್ಲೂ ಯಾವುದೇ ಕಾರಣಕ್ಕೂ ನೀರನ್ನು ಅಪವ್ಯಯ ಮಾಡದೆ ಮಿತವಾಗಿ ಬಳಕೆ ಮಾಡಬೇಕು ಎಂದು ತಿಳಿ ಹೇಳಿದರು.

ಇಲ್ಲಿ ತಿಳಿದುಕೊಂಡಿರುವ ವಿಚಾರವನ್ನು ನಿಮ್ಮ ಸ್ವ ಸಹಾಯ ಸಂಘಗಳಲ್ಲಿರುವ ಮಹಿಳೆಯರಿಗೆ ಮನವರಿಕೆ ಮಾಡಿಕೊಡಬೇಕು. ನೀವು ಮೂಡಿಸುವ ಜಾಗೃತಿಯಿಂದ ಅವರೆಲ್ಲರೂ ಕುಡಿಯುವ ನೀರನ್ನು ಮಿತವಾಗಿ ಬಳಕೆ ಮಾಡುವಂತಾಗಬೇಕು ಎಂದು ಆಸೀಫ್ ಖಲೀಲ್ ಹೇಳಿದರು. ಇಂದು ನೀರು ಸರಬರಾಜು ಕೇಂದ್ರಕ್ಕೆ ಮಹಿಳಾ ಸ್ವ ಸಹಾಯ ಸಂಘಗಳ ಮುಖ್ಯಸ್ಥರನ್ನು ಕರೆದೊಯ್ದು ಮಾಹಿತಿ ನೀಡಲಾಗಿದೆ. ನಾಳೆ ಹಾಗೂ ನಾಡಿದ್ದು ಮತ್ತಷ್ಟು ಮಾಹಿತಿ ನೀಡಲು ಕಾರ್ಯಾಗಾರ ಆಯೋಜನೆ ಮಾಡಲಾಗಿದೆ ಎಂದು ನಗರ ಪಾಲಿಕೆಯ ಹೆಚ್ಚುವರಿ ಆಯುಕ್ತರಾದ ರೂಪಾ ತಿಳಿಸಿದರು.

ಹೊಂಗಳ್ಳಿಯ ನಂತರ ಮೈಸೂರಿನ ಯಾದವಗಿರಿಯ ವಾಣಿ ವಿಲಾಸ ಕುಡಿಯುವ ನೀರು ಸಂಗ್ರಹಾಲಯಕ್ಕೆ ಕರೆ ತಂದು ಅಲ್ಲಿನ ಪ್ರಕ್ರಿಯೆಗಳೇನು ಎಂಬ ಬಗ್ಗೆ ಕೂಡ ಮಾಹಿತಿ ನೀಡಲಾಯಿತು. ಜಲ್ ದಿವಾಳಿ ಅಭಿಯಾನ ಇಡೀ ದೇಶದಲ್ಲಿ ನಡೆಯುತ್ತಿದೆ. ಮೈಸೂರಿನಲ್ಲಿ ಅಭಿಯಾನದ ಕಾರ್ಯಕ್ರಮವಾಗಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗುತ್ತಿದೆ. ನೀರಿನ ಮಹತ್ವ ತಿಳಿಸುವ ಕೈಪಿಡಿ ಇರುವ ಕಿಟ್‌ಗಳನ್ನು ಮಹಿಳಾ ಸ್ವ ಸಹಾಯ ಸಂಘಗಳ ಮುಖ್ಯಸ್ಥರಿಗೆ ಈ ವೇಳೆ ವಿತರಿಸಲಾಯಿತು. ದೀಪಾವಳಿ ಹಬ್ಬದ ಸಂದರ್ಭದಲ್ಲಿ ನೀರ್ ತುಂಬೊ ಹಬ್ಬ ಆಚರಣೆ ವೇಳೆಯಲ್ಲಿ ಕೂಡ ನೀರನ್ನು ವ್ಯಯ ಮಾಡಲಾಗುತ್ತದೆ. ಹಬ್ಬದ ಹೆಸರಿನಲ್ಲಿ ನೀರನ್ನು ವ್ಯರ್ಥ ಮಾಡದಂತೆ ಕೂಡ ತಿಳಿಸಲಾಯಿತು. ಮೈಸೂರಿನ ಪೃಥ್ವಿ ಮಹಿಳಾ ಸ್ವಸಹಾಯ ಸಂಘ, ಹುಲಿಯಮ್ಮ ಸ್ವ ಸಹಾಯ ಸಂಘ, ಸಿರಿ ಅರೋರ ಮಹಿಳಾ ಸಂಘ, ವಿನಾಯಕ ಮಹಿಳಾ ಸ್ವ ಸಹಾಯ ಸಂಘ ಸೇರಿದಂತೆ 30 ವಿವಿಧ ಸ್ವ-ಸಹಾಯ ಸಂಘಗಳ ಮುಖ್ಯಸ್ಥರು ಭಾಗಿಯಾಗಿದ್ದರು. ಪ್ರತಿಯೊಂದು ಮಹಿಳಾ ಸ್ವ ಸಹಾಯ ಸಂಘದಲ್ಲಿ ನೂರಾರು ಮಹಿಳೆಯರು ಇರುತ್ತಾರೆ. ಈ ಹಿನ್ನೆಲೆ ಮುಖ್ಯಸ್ಥರ ಮೂಲಕ ಸಂಘಗಳ ಪ್ರತಿನಿಧಿಗಳಿಗೆ ಶುದ್ಧ ಕುಡಿಯುವ ನೀರಿನ ಮಹತ್ವ ತಿಳಿಸಲು ಈ ಅಭಿಯಾನ ಆಯೋಜಿಸಲಾಗಿದೆ.

ಡಿ.ಬಿ.ಚಂದ್ರೇಗೌಡ ಇನ್ನಿಲ್ಲ

ಪ್ರಧಾನ ಕಾರ್ಯದರ್ಶಿಯಾದರು. ಕಾಲೇಜು ಮುಗಿಸಿದ ನಂತರ ರಾಜಕೀಯ ಕ್ಷೇತ್ರದತ್ತ ಹೆಜ್ಜೆ ಇಟ್ಟರು. ಅದಕ್ಕೆ ಅವರಿಗೆ ವೇದಿಕೆ ಕಲ್ಪಿಸಿದ್ದು ಪ್ರಜಾ ಸೋಷಿಯಲಿಸ್ಟ್ ಪಕ್ಷ. 1967ರವರೆಗೆ ಪ್ರಜಾ ಸೋಷಿಯಲಿಸ್ಟ್ ಪಕ್ಷದಲ್ಲಿದ್ದ ಚಂದ್ರೇಗೌಡರು, ರಾಜಕೀಯ ಪಕ್ಷದ ಬದಲಾವಣೆ ಮಾಡಿ ಹೊಸ ರಾಜಕಾರಣ ಮಾಡಲು ನಿರ್ಧರಿಸಿ ಕಾಂಗ್ರೆಸ್ ಸೇರಿದ್ದರು. 1971ರಲ್ಲಿ ಮೊದಲ ಬಾರಿಗೆ ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದಿಂದ ಕಾಂಗ್ರೆಸ್‌ನಿಂದ ಸ್ಪರ್ಧಿಸಿ ಸಂಸತ್ ಪ್ರವೇಶಿಸಿದ್ದರು. ಆ ಮೂಲಕ ರಾಷ್ಟ್ರ ರಾಜಕಾರಣದಿಂದಲೇ ಅವರ ರಾಜಕೀಯ ಜೀವನ ಆರಂಭವಾಯಿತು. 1977ರಲ್ಲಿ ಚಿಕ್ಕಮಗಳೂರಿನ ಲೋಕಸಭಾ ಸದಸ್ಯರಾಗಿ ಕಾಂಗ್ರೆಸ್‌ನಿಂದಲೇ ಪುನರಾಯ್ಕೆಯಾದರು. ಅದಾದ ವರ್ಷದಲ್ಲೇ 1978ರಲ್ಲಿ ಇಂದಿರಾ ಗಾಂಧಿಯವರು ಲೋಕಸಭೆಗೆ ಸ್ಪರ್ಧಿಸಲು ಅವಕಾಶ ನೀಡಿ ತಮ್ಮ ಸಂಸತ್ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸುವ ಮೂಲಕ ಗಮನ ಸೆಳೆದಿದ್ದರು.

ಇಂದಿರಾಗಾಂಧಿ ಅವರಿಗಾಗಿ ಸಂಸತ್ ಸ್ಥಾನ ಮತ್ತು ಕ್ಷೇತ್ರ ತ್ಯಾಗ ಮಾಡಿದ್ದ ಚಂದ್ರೇಗೌಡರನ್ನು ಕಾಂಗ್ರೆಸ್ 1978-1983ರವರೆಗೆ ವಿಧಾನ ಪರಿಷತ್ ಸದಸ್ಯರನ್ನಾಗಿ ಮಾಡಿತು. ಮುಖ್ಯಮಂತ್ರಿ ದೇವರಾಜು ಅರಸು ಅವರ ಸಂಪುಟದಲ್ಲಿ 1979-1980 ಅವಧಿಯಲ್ಲಿ ನೀರಾವರಿ ಸಚಿವರಾಗಿದ್ದರು. ಬದಲಾದ ರಾಜಕೀಯ ಪರಿಸ್ಥಿತಿಯಲ್ಲಿ ದೇವರಾಜು ಅರಸು ಅವರೊಂದಿಗೆ ಕ್ರಾಂತಿರಂಗದಲ್ಲಿ ಗುರುತಿಸಿಕೊಂಡು 1980-81ರ ಅವಧಿಯಲ್ಲಿ ವಿಧಾನಪರಿಷತ್ತಿನ ವಿರೋಧ ಪಕ್ಷದ ನಾಯಕರಾಗಿ ಕಾರ್ಯನಿರ್ವಹಿಸಿದ್ದರು. ಆದರೆ ಅಲ್ಲಿ ರಾಜಕೀಯ ಭವಿಷ್ಯ ಭದ್ರವಾಗದ ಹಿನ್ನೆಲೆಯಲ್ಲಿ ಮತ್ತೆ ಪಕ್ಷ ಬದಲಾವಣೆ ಮಾಡಿ ಜನತಾ ಪಕ್ಷ ಸೇರಿದ್ದರು. 1983 ರಲ್ಲಿ ತೀರ್ಥಹಳ್ಳಿ ಕ್ಷೇತ್ರದಿಂದ ಜನತಾ ಪಕ್ಷದ ಅಭ್ಯರ್ಥಿಯಾಗಿ ವಿಧಾನಸಭೆ ಪ್ರವೇಶಿಸಿದರು. ಈ ಅವಧಿಯಲ್ಲಿ ವಿಧಾನಸಭೆ ಸ್ಪೀಕರ್ ಆಗಿ ಚಂದ್ರೇಗೌಡ ಕರ್ತವ್ಯ ನಿರ್ವಹಿಸಿದ್ದರು. 1986 ಜನತಾ ಪಕ್ಷದಿಂದ ರಾಜ್ಯಸಭಾ ಸದಸ್ಯರಾಗಿ ಆಯ್ಕೆಯಾದರು. ಬಳಿಕ ಜನತಾಪಕ್ಷ ಜನತಾ ದಳವಾಯಿತು. 1989ರಲ್ಲಿ ಮರಳಿ ರಾಜ್ಯ ರಾಜಕಾರಣಕ್ಕೆ ಬಂದ ಅವರು ತೀರ್ಥಹಳ್ಳಿ ಕ್ಷೇತ್ರವನ್ನು ಪ್ರತಿನಿಧಿಸಿದರು.

ಜನತಾದಳದಿಂದ ಮತ್ತೆ ಕಾಂಗ್ರೆಸ್ ಕಡೆ ಮುಖ ಮಾಡಿದ ಚಂದ್ರೇಗೌಡ 1999ರಲ್ಲಿ ಶೃಂಗೇರಿ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ಆಯ್ಕೆಯಾದರು. ಎಸ್.ಎಂ ಕೃಷ್ಣ ಸಂಪುಟದಲ್ಲಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರಾಗಿ ಕೆಲಸ ಮಾಡಿದರು. ಆದರೆ ಮತ್ತೆ ಪಕ್ಷಾಂತರ ಮಾಡಿದ ಚಂದ್ರೇಗೌಡ ಬಿಜೆಪಿ ಸೇರ್ಪಡೆಯಾದರು. 2009ರಲ್ಲಿ ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸಿ, ಗೆದ್ದಿದ್ದರು. ನಂತರ ವಯೋಸಹಜ ಸಮಸ್ಯೆಗಳಿಂದಾಗಿ ಚುನಾವಣೆ ಹಾಗೂ ರಾಜಕಾರಣ ಎರಡರಿಂದಲೂ ದೂರ ಉಳಿದಿದ್ದ ಚಂದ್ರೇಗೌಡರು ಇದೀಗ ಇಹಲೋಕ ತ್ಯಜಿಸಿದ್ದಾರೆ. ರಾಜ್ಯ ರಾಜಕೀಯದಲ್ಲಿ ಅವರ ಹೆಜ್ಜೆ ಗುರುತು ಅಜರಾಮರವಾಗಿದೆ.

ಗೌಡರು ತಮ್ಮ ಪುತ್ರಿ ಸಂಗೀತಾರನ್ನು ಲೇಟ್ ಎ.ಕೆ.ಸುಬ್ಬಯ್ಯರ 3ನೇ ಪುತ್ರ ಪ್ರಸ್ತುತ ವಿರಾಜಪೇಟೆ ಶಾಸಕ ಎ.ಎಸ್.ಪೊನ್ನಣ್ಣ ಅವರ ಸಹೋದರ ದಿನು ಪೊನ್ನಪ್ಪರಿಗೆ ಕೊಟ್ಟು ವಿವಾಹ ಮಾಡಿದ್ದರಿಂದ ಕೊಡಗಿನೊಂದಿಗೂ ಡಿ.ಬಿ.ಚಂದ್ರೇಗೌಡರು ಸಂಬಂಧ ಹೊಂದಿದ್ದರು. ಇಂದು ಸಂಜೆ 6 ಗಂಟೆವರೆಗೆ ಮೂಡಿಗೆರೆಯ ಅದ್ಯಂತಾಯ ರಂಗಮಂದಿರದಲ್ಲಿ ಚಂದ್ರೇಗೌಡರ ಪಾರ್ಥಿವ ಶರೀರವನ್ನು ಸಾರ್ವಜನಿಕರ ದರ್ಶನಕ್ಕೆ ಇರಿಸಲಾಗಿತ್ತು. ಬುಧವಾರ (ನ.8) ದಾರದಹಳ್ಳಿಯ ಪೂರ್ಣಚಂದ್ರ ಎಸ್ಟೇಟ್‌ನಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ. ಮೈಸೂರು ರೇಸ್ ಕ್ಲಬ್ ಹಿರಿಯ ಸದಸ್ಯರಾಗಿದ್ದ ಡಿ.ಬಿ. ಚಂದ್ರೇಗೌಡರ ನಿಧನಕ್ಕೆ ಎಂಆರ್‌ಸಿ ಸಂತಾಪ ಸೂಚಿಸಿದೆ.

ಭಾರಿ ಗೋಲ್‌ಮಾಲ್!

'ಡಿ' ಗ್ರೂಪ್ ನೌಕರ ರವಿ ಎಂಬುವರನ್ನು ನಾನು ವಾಸವಿರುವ ಮುಡಾ ಕ್ವಾರ್ಟರ್ಸ್‌ಗೆ ಕಳುಹಿಸಿ ಕಡತವೊಂದಕ್ಕೆ ಸಹಿ ಮಾಡುವಂತೆ ಆತನ ಮೂಲಕ ಕೇಳಿದ್ದರು. ಆ ಕಡತವು ವಲಯ-1ರ ಮಹದೇವ ನಾಯಕ ಎಂಬುವರದ್ದಾಗಿದ್ದು, ಕುಪ್ಪಲೂರು 3ನೇ ಹಂತದ ಬಡಾವಣೆ ಸರ್ವೆ ನಂಬರ್ 96, 96-ಎ ಆಗಿತ್ತು ಆದರೆ ಹಾಲಿ ಇರುವ ಕಾರ್ಯದರ್ಶಿ ಜಿ.ಡಿ. ಶೇಖರ ಅವರ ಸಹಿ ಪಡೆಯಬೇಕೆಂದು ಹೇಳಿ ನಾನು ಆ ಕಡತವನ್ನು ವಾಪಸ್ ಕಳುಹಿಸಿದ್ದೇನೆ ಎಂದು ಕುಸುಮಾಕುಮಾರಿ ದೂರಿನಲ್ಲಿ ತಿಳಿಸಿದ್ದಾರೆ.

ಕಡತವನ್ನು ನನ್ನ ಬಳಿ ತಂದಾಗ ಅದರ ಫೋಟೋ ತೆಗೆದುಕೊಂಡಿದ್ದೇನೆ. ಕಂಡಿಕೆ 87ರಲ್ಲಿ ಕಾರ್ಯದರ್ಶಿ ಸಹಿಗೆ ಬಾಕಿ ಇತ್ತು. ಆ ಜಾಗದಲ್ಲಿ ಜಿ.ಡಿ. ಶೇಖರ ಅವರ ಸಹಿ ಆಗಬೇಕಿತ್ತು. ಆದರೆ, ಅಲ್ಲಿ ನನ್ನ ಸಹಿ ಹೋಲುವಂತಹ ಸಹಿ ಮಾಡಲಾಗಿದೆ ಎಂದು ತಿಳಿದುಬಂದಿದೆ. ನನಗೆ ವಿಷಯ ತಿಳಿದ ತಕ್ಷಣವೇ ನಾನು ಪ್ರಾಧಿಕಾರದ ಆಯುಕ್ತರಾದ ಜಿ.ಟಿ.ದಿನೇಶಕುಮಾರ್ ಅವರಿಗೆ ದೂರವಾಣಿ ಮೂಲಕ ತಿಳಿಸಿ, ಲಿಖಿತ ದೂರನ್ನೂ ಅಕ್ಟೋಬರ್ 5ರಂದು ನೀಡಿದ್ದೇನೆ ಎಂದು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿರುವ ದೂರಿನಲ್ಲಿ ಅವರು ತಿಳಿಸಿದ್ದಾರೆ. ನನ್ನ ಸಹಿ ಹೋಲುವಂತೆ ಬೇರೆ ಯಾರೋ ಕಡತದಲ್ಲಿ ಸಹಿ ಮಾಡಿದ್ದಾರೆ. ಅವರ ಪತ್ತೆ ಮಾಡಿ ಕಾನೂನು ರೀತಿಯ ಕ್ರಮ ಜರುಗಿಸಲು ಆಯುಕ್ತರಿಗೆ ನಿರ್ದೇಶನ ನೀಡುವಂತೆ ಮನವಿ ಮಾಡಿರುವ ಕುಸುಮಾಕುಮಾರಿ, ನಂದೀಶ ಹಾಗೂ ಗುರುದತ್ ಸಾಕ್ಷಿಯನ್ನು ನಾಶ ಮಾಡುವ ಸಂಭವವಿರುವುದರಿಂದ ತಕ್ಷಣ ಕ್ರಮ ಕೈಗೊಳ್ಳುವಂತೆಯೂ ಕೋರಿಕೊಂಡಿದ್ದಾರೆ. ಈ ಕಡತವು ಬದಲಿ ನಿವೇಶನ ಮಂಜೂರು ಮಾಡುವ ಸಂಬಂಧದ್ದಾಗಿದ್ದು, ಕೆಲ ಪಟ್ಟಭದ್ರ ಹಿತಾಸಕ್ತಿಗಳ ಕೈವಾಡದಿಂದ ಭಾರೀ ಗೋಲ್‌ಮಾಲ್ ನಡೆಸುವ ಸಲುವಾಗಿ ಮುಡಾ ಕಾರ್ಯದರ್ಶಿ ಅವರ ನಕಲಿ ಸಹಿ ಮಾಡಲಾಗಿದೆ ಎಂದು ಹೇಳಲಾಗುತ್ತಿದೆ.

ವರದಿ ಮಂಡನೆ; ಸಿಎಂಗೆ ಮನವಿ

ಸದನದ ಮುಂದೆ ಮಂಡಿಸುವಂತೆ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಲಾಗಿದೆ ಎಂದು ಪರಮೇಶ್ವರ ತಿಳಿಸಿದರು. ಸಮಾಜ ಕಲ್ಯಾಣ ಸಚಿವ ಡಾ. ಎಚ್.ಸಿ.ಮಹದೇವಪ್ಪ, ಆಹಾರ ಸಚಿವ ಕೆ.ಎಚ್.ಮುನಿಯಪ್ಪ, ಆರ್‌ಡಿಪಿಆರ್ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ನಮ್ಮಲ್ಲಿ ಕೆಲವರು ಈ ವಿಷಯವನ್ನು ಸಿಎಂ ಗಮನಕ್ಕೆ ತಂದಿದ್ದೇವೆ. ಈ ಬಗ್ಗೆ ಸಮಾಜದ ಮುಖಂಡರ ಜತೆ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಸಿಎಂ ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.

ನ್ಯಾ. ಸದಾಶಿವ ಆಯೋಗದ ವರದಿಯಂತೆ ಒಳ ಮೀಸಲಾತಿ ವಿಚಾರವಾಗಿ ತೀವ್ರ ಸ್ವರೂಪದ ಹೋರಾಟ ನಡೆಸಿ, ಸರ್ಕಾರದ ಮೇಲೆ ಒತ್ತಡ ಹೇರಬೇಕು ಎಂದು ಮಾದಿಗ ಸಮುದಾಯದ ಮುಖಂಡರಿಗೆ ಆಹಾರ ಇಲಾಖೆ ಸಚಿವ ಕೆಹೆಚ್ ಮುನಿಯಪ್ಪ ಸೋಮವಾರ ಕರೆ ನೀಡಿದ್ದಾರೆ. ಸದಾಶಿವ ಆಯೋಗದ ಶಿಫಾರಸು ಜಾರಿಗಾಗಿ ತೀವ್ರ ಆಂದೋಲನದ ಅಗತ್ಯವಿದೆ. ನಿಮ್ಮ ಸ್ಥಳೀಯ ಶಾಸಕರ ಮನೆಗೆ ಮುತ್ತಿಗೆ ಹಾಕಿ. ಅವರಿಗೆ ಕಾರ್ಯಕ್ರಮಗಳನ್ನು ನಡೆಸಲು ಬಿಡಬೇಡಿ. ಸಚಿವನಾಗಿದ್ದುಕೊಂಡೇ ನಾನು ನಿಮಗೆ ಈ ರೀತಿ ಹೇಳುತ್ತಿದ್ದೇನೆ. ಹೀಗೆ ಹೇಳುವ ಸಂದರ್ಭ ಬಂದಿದೆ ಎಂದು ಕರ್ನಾಟಕ ಆದಿಜಾಂಬವ ಸಾಂಸ್ಕೃತಿಕ ಸಮಿತಿಯ ಮುಖಂಡರ ಸಭೆಯಲ್ಲಿ ಮುನಿಯಪ್ಪ ತಮ್ಮ ಭಾಷಣದಲ್ಲಿ ಹೇಳಿದ್ದಾರೆ.

ಮೈಸೂರಲ್ಲಿ ಮಧ್ಯರಾತ್ರಿ ಮಹಾಮಳೆ

ಕೆಲವೆಡೆ ಉರುಳಿ ಬಿದ್ದ ಮರಗಳು; ಮನೆಗಳಿಗೆ ನುಗ್ಗಿದ ನೀರು: ಪಾಲಿಕೆ, ಅಗ್ನಿಶಾಮಕ ದಳದಿಂದ ಪರಿಹಾರ ಕಾರ್ಯಾಚರಣೆ



ಅರವಿಂದನಗರದಲ್ಲಿ ಚರಂಡಿಯನ್ನು ಒಡೆದು ಮಳೆ ನೀರು ಸರಾಗವಾಗಿ ಹರಿದು ಹೋಗುವಂತೆ ಮಾಡಲಾಗಿದೆ.



ಭಾರಿ ಮಳೆಗೆ ಮರ ಉರುಳಿ ಬಿದ್ದಿರುವುದು

ಮೈಸೂರು, ನ.7(ಎಂಟಿವೈ)- ಸಾಂಸ್ಕೃತಿಕ ನಗರಿ ಮೈಸೂರಲ್ಲಿ ಸೋಮವಾರ ರಾತ್ರಿ ಸುರಿದ ಧಾರಾಕಾರ ಮಳೆಯಿಂದಾಗಿ 8 ಮರ ಧರೆಗುರುಳಿದ್ದು, 10 ಮನೆಗಳಿಗೆ ನೀರು ನುಗ್ಗಿದ್ದರೆ, ದಸರಾ ವಸ್ತುಪ್ರದರ್ಶನದ ಕೆಲ ಮಳಿಗೆಗಳ ವಿವಿಧ ಪದಾರ್ಥಗಳು ನೀರಿನಿಂದ ತೊಯ್ದು ಸಾಕಷ್ಟು ಹಾನಿಯಾಗಿದೆ.

ಮೈಸೂರು ಭಾಗದಲ್ಲಿ ಕಳೆದ ನಾಲ್ಕು ದಿನಗಳಿಂದ ಸಂಜೆ ವೇಳೆ ಸಾಧಾರಣ ಮಳೆ ಸುರಿಯುತ್ತಿದ್ದು, ಆದರೆ ಕಳೆದ ರಾತ್ರಿ ಧಾರಾಕಾರ ಮಳೆಯಿಂದಾಗಿ ತಗ್ಗು ಪ್ರದೇಶದ ಜನ ಕಂಗೆಡುವಂತೆ ಮಾಡಿದೆ. ಮೈಸೂರು ನಗರ ಸೇರಿದಂತೆ ತಾಲೂಕು ವ್ಯಾಪ್ತಿಯಲ್ಲಿ 79.4 ಮಿ.ಮೀಟರ್ ಮಳೆ ಬಿದ್ದಿದೆ. ಸಂಜೆ ಆರಂಭವಾದ ಮಳೆ ಮುಂಜಾನೆವರೆಗೂ ಸುರಿದಿದೆ. ಇದರಿಂದ ಸಣ್ಣಪುಟ್ಟ ಅವಾಂತರ ಹೊರತುಪಡಿಸಿದರೆ ಯಾವುದೇ ದೊಡ್ಡ ಮಟ್ಟದ ಹಾನಿ ಸಂಭವಿಸದೇ ಇರುವುದು ಸಮಾಧಾನ ತಂದಿದೆ. ಅಗ್ನಿಶಾಮಕ ಸಿಬ್ಬಂದಿ ಹಾಗೂ ಪಾಲಿಕೆಯ ಅಭಯ ತಂಡದ ಸದಸ್ಯರು ರಾತ್ರಿಯಿಡೀ ಮಳೆ ಅವಾಂತರಗಳ ಎದುರಿಸಲು ಸಜ್ಜಾಗಿದ್ದರು.

ಮುಂಜಾನೆ ವಿವಿಧೆಡೆ ಮರ ಬಿದ್ದಿರುವ ದೂರು ಕೇಳಿ ಬಂದ ಹಿನ್ನೆಲೆಯಲ್ಲಿ ಪಾಲಿಕೆ ಅಭಯ ತಂಡದ ಸದಸ್ಯರು ಪುಲಿಕೇಶಿ ರಸ್ತೆ, ಆದಿಚುಂಚನಗಿರಿ ರಸ್ತೆ ಬಂದಂತಮ್ಮ ಕಾಳಮ್ಮ ದೇವಾಲಯದ ಮುಂಭಾಗ, ಸರ ಸ್ವತಿಪುರಂ, ಕುವೆಂಪುನಗರದಲ್ಲಿ ಬಿದ್ದಿದ್ದ ಮರಗಳನ್ನು ತೆರವು ಮಾಡಿದರು.

ಬನ್ನಿಮಂಟಪ ಸೇರಿದಂತೆ ವಿವಿಧೆಡೆ ಕಳೆದ ರಾತ್ರಿಯೇ ಕುಟುಂಬದ ಸದಸ್ಯರು ಮನೆಗೆ ನುಗ್ಗಿದ್ದ ಮಳೆ ನೀರನ್ನು ಹೊರ ಹಾಕಿದ್ದರು. ಆದರೆ, ಮೇಟಗಳ್ಳಿಯ ದೊಡ್ಡ ಮೋರಿ ಹಾಗೂ ಒಂಟಿಕೊಪ್ಪಲಿನಲ್ಲಿ ನಾಲ್ಕೈದು ಮನೆಗಳಿಗೆ ನುಗ್ಗಿದ್ದ ಮಳೆ ನೀರನ್ನು ಅಭಯ ತಂಡದ ಸಿಬ್ಬಂದಿ ಹೊರ ಹಾಕಿದರು.

ದಸರಾ ವಸ್ತು ಪ್ರದರ್ಶನ: ದಸರಾ ವಸ್ತುಪ್ರದರ್ಶನ ಆವರಣದಲ್ಲಿ ಕಳೆದ ರಾತ್ರಿಯೇ ಭಾರಿ ಪ್ರಮಾಣದಲ್ಲಿ ಮಳೆ ನೀರು ಸಂಗ್ರಹವಾಗಿತ್ತು. ವಿವಿಧ ವಸ್ತುಗಳ ಮಾರಾಟ ಮಳಿಗೆಗಳ ಮುಂದಿನ ಪಾದಚಾರಿ ಮಾರ್ಗದಲ್ಲಿ ಮಳೆ ನೀರು ಹೆಚ್ಚಿನ ಪ್ರಮಾಣದಲ್ಲಿ ಸಂಗ್ರಹವಾಗಿತ್ತು. ಕೆಲ ಮಳಿಗೆಗಳಲ್ಲಿ ಮಳೆ ನೀರು ಸೋರಿಕೆಯಾಗಿ ಮಾರಾಟಕ್ಕಾಗಿ ಇಟ್ಟಿದ್ದ ಉಡುಪು, ಬೆಡ್‌ಶೀಟ್ ಸೇರಿದಂತೆ ಇನ್ನಿತರ ವಸ್ತುಗಳು ಮಳೆ ನೀರಲ್ಲಿ ತೊಯ್ದು ಹೋಗಿವೆ. ಇಂದು ಬೆಳಗ್ಗೆ ಒದ್ದೆಯಾಗಿದ್ದ ವಿವಿಧ ವಸ್ತುಗಳನ್ನು ವ್ಯಾಪಾರಿಗಳು ಬಿಸಿಲಿನಲ್ಲಿ ಒಣಗಿಸಲು ಮುಂದಾಗಿದ್ದರು. ಪಾದಚಾರಿ ಮಾರ್ಗದಲ್ಲಿ ಸಂಗ್ರಹವಾಗಿದ್ದ ಮಳೆ ನೀರು ಬಹುತೇಕ ಇಂಗಿ ಹೋಗಿದ್ದು, ಅಮ್ಯೂಸ್‌ಮೆಂಟ್ ಪಾರ್ಕ್ ಬಳಿ ಕೆಸರುಮಯವಾಗಿದೆ. ಇಲ್ಲಿನ ವ್ಯವಸ್ಥಾಪಕರು ವಸ್ತುಪ್ರದರ್ಶನ ಪ್ರಾಧಿಕಾರದ ಸಿಇಓ ರಾಜೇಶ್ ಅವರನ್ನು ಭೇಟಿ ಮಾಡಿ, ಅಮ್ಯೂಸ್‌ಮೆಂಟ್ ಪಾರ್ಕ್ ಬಳಿ ಪ್ರವಾಸಿಗರು ಓಡಾಡುವ ರಸ್ತೆಗೆ ಎಂ-ಸ್ಯಾಂಡ್ ಹಾಕುವಂತೆ ಮನವಿ ಮಾಡಿದ್ದಾರೆ. ಇನ್ನೆರಡು ದಿನ ಮಳೆ ಮುಂದುವರೆದರೆ ವಸ್ತು ಪ್ರದರ್ಶನದ ಮೈದಾನ ಇನ್ನಷ್ಟು ಕೆಸರುಮಯವಾಗಲಿದೆ.

ಜೆ.ಕೆ.ಮೈದಾನ: ದೀಪಾವಳಿ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಮೈಸೂರಿನ ಜೆ.ಕೆ.ಮೈದಾನದಲ್ಲಿ ಪಟಾಕಿ ಮಾರಾಟ ಮಳಿಗೆ ನಿರ್ಮಾಣ ಕಾರ್ಯವೂ ನಡೆಯುತ್ತಿದ್ದು, ಮಳೆಯಿಂದಾಗಿ ಮೈದಾನದಲ್ಲಿ ನೀರು ತುಂಬಿಕೊಂಡಿದೆ. ಪಟಾಕಿ ಮಳಿಗೆ ಸುತ್ತಲೂ ಚರಂಡಿ ಮಾದರಿಯಲ್ಲಿ ಕಾಲುವೆ ತೋಡಿ, ಮಳೆ ನೀರು ಸರಾಗವಾಗಿ ಹರಿದು ಹೋಗಲು ವ್ಯವಸ್ಥೆ ಮಾಡಲಾಗುತ್ತಿದೆ. ಇದರಿಂದ ಪಟಾಕಿ ಮಳಿಗೆಗಳಿಗೆ ಮಳೆ ಬಂದರೂ ಯಾವುದೇ ತೊಂದರೆಯಾಗದಂತೆ ಕಟ್ಟೆಚ್ಚರವಹಿಸಲು ವ್ಯಾಪಾರಿಗಳು ಮುಂದಾಗಿದ್ದಾರೆ.

ಮೈಸೂರಲ್ಲಿ ಸೋಮವಾರ ರಾತ್ರಿ 79.4 ಮಿ.ಮೀ ಮಳೆ ಬಂದಿದೆ

ಮೈಸೂರು ನಗರ ಸೇರಿದಂತೆ ತಾಲೂಕು ಪ್ರದೇಶದಲ್ಲಿ ಸೋಮವಾರ ಸಂಜೆಯಿಂದ ಮುಂಜಾನೆವರೆಗೂ 79.4 ಮಿ.ಮೀ. ಮಳೆ ದಾಖಲಾಗಿದೆ. ಇನ್ನು ಎರಡು ದಿನ ಮಳೆ ಬರುವ ಸಾಧ್ಯತೆ ಇದೆ.

- ಡಾ.ರಾಮಚಂದ್ರ, ಕ್ಷೇತ್ರ ಅಧೀಕ್ಷಕರು, ನಾಗನಹಳ್ಳಿ ಕೃಷಿ ಸಂಶೋಧನಾ ಕೇಂದ್ರ



ಮೈಸೂರಿನ ಉತ್ತರಾಧಿಮಠದ ರಸ್ತೆ ಮಳೆಯಿಂದ ಕೆಸರುಮಯವಾಗಿರುವುದು



ದಸರಾ ವಸ್ತುಪ್ರದರ್ಶನದಲ್ಲಿ ಮಳೆ ನೀರು ಸೋರಿ ತೊಯ್ದ ವಸ್ತುಗಳನ್ನು ಒಣಗಲು ಹಾಕಿರುವುದು.

ಸುಡುವ ಸ್ಮಶಾನ ಜಲಾವೃತ



ಭಾರಿ ಮಳೆಯಿಂದ ಮೈಸೂರಿನ ಹರಿಶ್ಚಂದ್ರ ಘಾಟ್‌ನ ಸುಡುವ ಸ್ಮಶಾನ ಜಲಾವೃತವಾಗಿದೆ. ಇಲ್ಲಿರುವ 26 ದಹನಕಟ್ಟೆಗಳಲ್ಲಿ 18 ಕಟ್ಟೆಗಳ ಸುತ್ತ ನೀರು ತುಂಬಿಕೊಂಡಿದ್ದರಿಂದ ಹಾಲು-ತುಪ್ಪ ಕಾರ್ಯ ನೆರವೇರಿಸಲು ಹಲವರು ಪರದಾಡುವಂತಾಗಿತ್ತು. ಮಳೆ ನೀರು ಹೊರಹೋಗಲು ಸೂಕ್ತ ವ್ಯವಸ್ಥೆ ಕಲ್ಪಿಸದಿರುವುದೇ ಈ ಸಮಸ್ಯೆಗೆ ಕಾರಣ ಎಂದು ಸಾರ್ವಜನಿಕರು ಬೇಸರ ವ್ಯಕ್ತಪಡಿಸಿದ್ದಾರೆ.

ಪಾಲಿಕೆ ಸಿಬ್ಬಂದಿ ಕಾರ್ಯಾಚರಣೆ: ಮೈಸೂರಲ್ಲಿ ರಾತ್ರಿ ವೇಳೆ ಮಳೆ ಸುರಿಯುತ್ತಿದ್ದು, ಮಳೆ ನೀರು ಸರಾಗವಾಗಿ ಹರಿದು ಹೋಗಲು ಕಾರ್ಯಾಚರಣೆ ಆರಂಭಿಸಲಾಗಿದೆ. ಕೆಲವೆಡೆ ಚರಂಡಿಗಳಲ್ಲಿ ತ್ಯಾಜ್ಯ ವಸ್ತುಗಳು ಕಟ್ಟಿಕೊಂಡು ಮಳೆ ನೀರು ಹರಿದು ಹೋಗಲು ಅಡಚಣೆಯಾಗುತ್ತಿದೆ. ಇದರಿಂದ ತಗ್ಗು ಪ್ರದೇಶಗಳಿಗೆ ನೀರು ನುಗ್ಗುವ ಸಂಭವವಿದೆ. ಈ ಹಿನ್ನೆಲೆಯಲ್ಲಿ ಪಾಲಿಕೆಯ 65 ವಾರ್ಡ್ ವ್ಯಾಪ್ತಿಯಲ್ಲಿಯೂ ಮಳೆ ನೀರಿನ ಚರಂಡಿಗಳ ಪರಿಶೀಲನೆಗೆ ಪಾಲಿಕೆ ಸಿಬ್ಬಂದಿಗಳ ತಂಡ ಕಾರ್ಯೋನ್ಮುಖವಾಗಿದೆ.



ಮೈಸೂರು ನಗರ ಪಾಲಿಕೆ ವಾರ್ಡ್ ನಂ 6ರ ಗೋಕುಲಂ-ಬೃಂದಾವನ ಬಡಾವಣೆಯ ಶ್ರೀ ಕೃಷ್ಣ ಪಾರ್ಕ್‌ನಲ್ಲಿ ಅಳವಡಿಸಿರುವ ಜಿಮ್ ಉಪಕರಣಗಳನ್ನು ಪಾಲಿಕೆ ಸದಸ್ಯ ಎಸ್.ಬಿ.ಎಂ.ಮಂಜು, ವಾರ್ಡ್‌ನ ಕುಮಾರಿ ದಿಯಾ ಉದ್ಘಾಟಿಸಿದರು. ಈ ವೇಳೆ ಡಾ.ಹರಿದಾಸ್ ಉಪಾಧ್ಯಾಯ ಕೌಶಿಕ್, ಬಸವರಾಜ್, ಪ್ರಭುದೇವ್, ಶ್ರೀಧರನ್, ವಲಯ ಆಯುಕ್ತೆ ಚಂದ್ರಮ್ಮ, ಇಂಜಿನಿಯರ್ ರಾಮಣ್ಣ, ಗೀತಾ ಉಪಾಧ್ಯಾಯ, ಶೋಭಾ ಭೋಜರಾಜ್, ಗೀತಾ ಮಂಜುನಾಥ್, ರೇಖಾ ರಂಜಿನಿ, ಮಾಲಾ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಗ್ಯಾರಂಟಿ ಯೋಜನೆಗಳಿಂದ ರಾಜ್ಯ ದಿವಾಳಿಯತ್ತ

- ಕರ್ನಾಟಕ ಪ್ರಜಾಪಾರ್ಟಿ ಆರೋಪ
- ಅನ್ನಭಾಗ್ಯ ಹೊರತು ಬೇರೆ ಗ್ಯಾರಂಟಿ ಸ್ಥಗಿತಕ್ಕೆ ಆಗ್ರಹ



ಮೈಸೂರು, ನ.5(ಜಿಎ)-ರಾಜ್ಯ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳಿಂದಾಗಿ ರಾಜ್ಯ ದಿವಾಳಿಯತ್ತ ಸಾಗಿದೆ. ಹೀಗಾಗಿ ಅನ್ನಭಾಗ್ಯ ಉಳಿಸಿಕೊಂಡು ಉಳಿದ ಗ್ಯಾರಂಟಿಗಳನ್ನು ಹಿಂಪಡೆಯಬೇಕೆಂದು ಕರ್ನಾಟಕ ಪ್ರಜಾಪಾರ್ಟಿ ರೈತ ಪರ್ವ ಪಕ್ಷದ ರಾಜ್ಯಾಧ್ಯಕ್ಷ ಡಾ.ಬಿ. ಶಿವಣ್ಣ ಆಗ್ರಹಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಲ್ಕು ಗ್ಯಾರಂಟಿಗಳ ವಾಪಸು ಪಡೆದು ಅಭಿವೃದ್ಧಿಗೆ ಅನುದಾನ ನೀಡಬೇಕು. ಗೃಹಜ್ಯೋತಿ, ಗೃಹಲಕ್ಷ್ಮಿ, ಯುವನಿಧಿ, ಉಚಿತ ಪ್ರಯಾಣದ ಯೋಜನೆಗಳಿಗಾಗಿ ಸಾರ್ವಜನಿಕರು ಪಾವತಿ ಮಾಡುತ್ತಿರುವ ತೆರಿಗೆ ಹಣವನ್ನು ರಾಜ್ಯ ಸರ್ಕಾರ ಅಭಿವೃದ್ಧಿಗೆ ಮಾರಕವಾದ ರೀತಿ ಬಳಸುತ್ತಿದೆ. ಸಾರ್ವಜನಿಕರಿಗೆ, ರೈತಾಪಿ ವರ್ಗದವರಿಗೆ ಅನುಕೂಲವಾಗುವಂತಹ ವಿದ್ಯುತ್, ಶಿಕ್ಷಣ ಮತ್ತು ಆರೋಗ್ಯ ಯೋಜನೆಗಳಿಗೆ ಸರ್ಕಾರದಿಂದ ಅನುದಾನ ಬಿಡುಗಡೆ ಮಾಡುತ್ತಿಲ್ಲ ಎಂದು ದೂರಿದರು.

ಗ್ರಾಮೀಣ ಹಾಗೂ ನಗರ ಪ್ರದೇಶಗಳು ಅಭಿವೃದ್ಧಿ ಕಾಣದೆ ದುಸ್ಥಿತಿಯ ಮಟ್ಟಕ್ಕೆ ತಲುಪುತ್ತಿವೆ. ಹಾಗಾಗಿ ಯಾವುದೇ ಉಚಿತ ಯೋಜನೆಗಳಿಂದ ದೇಶ ಮತ್ತು ರಾಜ್ಯಕ್ಕೆ ಅನುಕೂಲ ವಾಗುವುದಕ್ಕಿಂತ ಭವಿಷ್ಯತ್ತಿನಲ್ಲಿ ಅಪಾಯ ಕಾರಿ. ಆದ್ದರಿಂದ ಕೂಡಲೇ ನಾಲ್ಕು ಯೋಜನೆಗಳನ್ನು ಮುಖ್ಯಮಂತ್ರಿಗಳು ವಾಪಸು ಪಡೆಯಬೇಕು. ಇಲ್ಲವಾದರೆ, ಪಕ್ಷದ ವತಿಯಿಂದ ಡಿಸೆಂಬರ್ ತಿಂಗಳಾಂತ್ಯದಲ್ಲಿ ಬೆಂಗಳೂರಿಗೆ ಬೈಕ್ ರ್‍ಯಾಲಿ ಮೂಲಕ ಆಗಮಿಸಿ, ವಿಧಾನ ಸೌಧಕ್ಕೆ ಮುತ್ತಿಗೆ ಹಾಕುತ್ತೇವೆ ಎಂದು ಎಚ್ಚರಿಸಿದರು.

ಈ ವೇಳೆ ಪಕ್ಷದ ವಿವಿಧ ಘಟಕಗಳಿಗೆ ನೇಮಕಗೊಂಡವರಿಗೆ ನೇಮಕಾತಿ ಪತ್ರ ವಿತರಿಸಲಾಯಿತು. ಪದಾಧಿಕಾರಿಗಳಾದ ಪಿ. ಕುಮಾರಸ್ವಾಮಿ, ಮೋಹನ್‌ದಾಸ್, ಶಿವು, ಆರ್. ಶ್ರೀನಿವಾಸ್, ಶುಭಶ್ರೀ, ಪುಷ್ಪಾವತಿ ಉಪಸ್ಥಿತರಿದ್ದರು.

ಮಹಾರಾಜ ತಾಂತ್ರಿಕ ಮಹಾವಿದ್ಯಾಲಯದಿಂದ ರಾಜ್ಯಮಟ್ಟದ ತಾಂತ್ರಿಕ ವಿಚಾರ ಸಂಕಿರಣ



ಮೈಸೂರು, ನ.5(ಜಿಎ)-ಮೈಸೂರಿನ ಮಹಾರಾಜ ತಾಂತ್ರಿಕ ಮಹಾವಿದ್ಯಾಲಯದ ಸಿವಿಲ್ ಎಂಜಿನಿಯರಿಂಗ್ ವಿಭಾಗದ ವತಿಯಿಂದ ಇದೇ ನ. 16ರ ಬೆಳಗ್ಗೆ 9ರಿಂದ 24 ಗಂಟೆಗಳ ಕಾಲ ವಿನೂತನ ರೀತಿಯಲ್ಲಿ ಮ್ಯಾರಥಾನ್ ಮಾದರಿಯ ರಾಜ್ಯ ಮಟ್ಟದ ತಾಂತ್ರಿಕ ವಿಚಾರ ಸಂಕಿರಣ ಆಯೋಜಿಸಲಾಗಿದೆ ಎಂದು ಪ್ರಾಚಾರ್ಯ ಡಾ.ಬಿ.ಸಿ. ನರೇಶ್ ಕುಮಾರ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಚಾರ ಸಂಕಿರಣವನ್ನು ಕಾಲೇಜಿನ ಆವರಣದಲ್ಲಿ ಆಯೋಜಿಸಿದ್ದು, ದಿನವಿಡೀ ನಡೆಯುವ ಈ ಸಿವಿಲ್ ಎಂಜಿನಿಯರಿಂಗ್ ಹಬ್ಬದಲ್ಲಿ ಸಿವಿಲ್ ಎಂಜಿನಿಯರಿಂಗ್ ಮತ್ತು ಅರ್ಕಿಟೆಕ್ಚರ್‌ನ ವಿದ್ಯಾರ್ಥಿಗಳಿಗೆ ಮಾಡೆಲ್ ಮೇನಿಯಾ, ಐಡಿಯಾಥಾನ್, ಎಸ್ಟಿಮ್ಯಾಟ್ರಿಕ್ಸ್, ಕ್ಯಾಟ್ವೆಂಚರ್, ಬ್ರೈನ್ ಟೀಸರ್, ಸ್ಕಿಫ್ಟೋಮೇನಿಯಾ, ಎಶೋ ಬಿಲ್ಡ್ ನಂತಹ ಕೌಶಲ್ಯಕ್ಕೆ ಸವಾಲಾಗಬಲ್ಲ ಸ್ಪರ್ಧೆಗಳು ಇರುತ್ತವೆ. ಆಸಕ್ತ ವಿದ್ಯಾರ್ಥಿಗಳು ಮೂವರ ತಂಡ ರಚಿಸಿಕೊಂಡು ಆನ್‌ಲೈನ್‌ನಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗೆ ದೂ. 9110225282 ಅನ್ನು ಸಂಪರ್ಕಿಸಬಹುದಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಸಿವಿಲ್ ವಿಭಾಗದ ಮುಖ್ಯಸ್ಥ ಡಾ.ಸಿ. ರಾಮಕೃಷ್ಣಗೌಡ, ಆಡಳಿತಾಧಿಕಾರಿ ಅನಿರುದ್ಧ, ಸಹ ಪ್ರಾಧ್ಯಾಪಕ ರವಿ ಕಿರಣ್, ಶಿವಸಾಗರ್ ಉಪಸ್ಥಿತರಿದ್ದರು.



ಮೈಸೂರಿನ ಕೂರ್ಗಳ್ಳಿಯ ಬಿಇಎಂಎಲ್ ಕ್ರೀಡಾಂಗಣದಲ್ಲಿ ಸವಿತಾ ಸಮಾಜ ಆಯೋಜಿಸಿದ್ದ ರಾಜ್ಯ ಮಟ್ಟದ ಕ್ರಿಕೆಟ್ ಪಂದ್ಯಾವಳಿಯನ್ನು ಮೈಸೂರು ನಗರ ಕಾಂಗ್ರೆಸ್ ಹಿಂದುಳಿದ ವರ್ಗಗಳ ಅಧ್ಯಕ್ಷ ಎನ್.ಆರ್.ನಾಗೇಶ್ ಉದ್ಘಾಟಿಸಿದರು. ಸವಿತಾ ಸಮಾಜದ ನಗರಾಧ್ಯಕ್ಷ ಹರೀಶ್ ರೆಡ್ಡಿ, ರಂಗಭೂಮಿ ಕಲಾವಿದ ಹುಯಿಲಾಳು ರಾಮಸ್ವಾಮಿ, ಬನ್ನೂರು ಪುರಸಭಾ ಸದಸ್ಯ ಮುರುಳಿಧರ್, ಜಿಲ್ಲಾ ಬಿಜೆಪಿ ವಕ್ತಾರ ರಾಜಕುಮಾರ್, ಸವಿತಾ ಸಮಾಜದ ಮುಖಂಡರಾದ ಹರೀಶ್ ರಂಜನ್, ಶ್ರೀನಿವಾಸ್, ಲೋಕೇಶ್, ನಾಗಪ್ಪ, ರಾಜು ರೆಡ್ಡಿ, ರಾಘು ಈಡಿಗ, ಸತೀಶ್ ಶಿವು ಸೇರಿದಂತೆ ಇತರರು ಹಾಜರಿದ್ದರು.


ಬೆಂಗಳೂರಲ್ಲಿ ಧಾರಾಕಾರ ಮಳೆ; ಹಾನಿಯ ಬಗ್ಗೆ ಡಿಸಿಎಂ ಡಿ.ಕೆ.ಶಿವಕುಮಾರ್ ಪರಿಶೀಲನೆ

ಬೆಂಗಳೂರು, ನ. 7 (ಕೆಎಂಶಿ)– ನಗರದ ವಿವಿಧೆಡೆ ನಿನ್ನೆ ರಾತ್ರಿ ಧಾರಾಕಾರವಾಗಿ ಸುರಿದ ಮಳೆಯಿಂದ ಉಂಟಾಗಿರುವ ಅನಾಹುತಗಳ ಬಗ್ಗೆ ಬೆಂಗಳೂರು ನಗರಾಭಿವೃದ್ಧಿ ಖಾತೆಯನ್ನೂ ಹೊಂದಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬಿಬಿಎಂಪಿಯ ವಾರ್ ರೂಂಗೆ ಭೇಟಿ ನೀಡಿ, ಮಾಹಿತಿ ಪಡೆದರು.

ನಗರದ ವಿವಿಧ ಭಾಗಗಳಲ್ಲಿ ಉಂಟಾಗಿರುವ ಸಮಸ್ಯೆಗಳನ್ನು ಪರಿಶೀಲಿಸಿ, ವಾರ್ ರೂಮ್‌ಗೆ ಬಂದ ದೂರವಾಣಿ ಕರೆಗಳನ್ನು ಸ್ವೀಕರಿಸಿ ಅಹವಾಲುಗಳಿಗೆ ಸ್ಪಂದಿಸಿದರು. ಬಿಬಿಎಂಪಿ ಕೇಂದ್ರ ಕಚೇರಿಯ ಕಂಟ್ರೋಲ್ ರೂಂ, ಇಂಟಿಗ್ರೇಟೆಡ್ ಕಮಾಂಡ್ ಸೆಂಟರ್‌ಗೆ ಭೇಟಿ ನೀಡಿ ಮಳೆಯಿಂದ ಉಂಟಾದ ಅನಾಹುತಗಳ ಪರಿವೀಕ್ಷಣೆ ನಡೆಸಿದರು. ಈ ಸಂದರ್ಭದಲ್ಲಿ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್, ಪಾಲಿಕೆಯ ಹಿರಿಯ ಅಧಿಕಾರಿಗಳು, ವಿಪತ್ತು ನಿರ್ವಹಣಾ ಕೇಂದ್ರದ ಅಧಿಕಾರಿಗಳು ಉಪಸ್ಥಿತರಿದ್ದು ಸಾರ್ವಜನಿಕರ ದೂರುಗಳಿಗೆ ಸ್ಪಂದಿಸಿದರು.

ಬಿಬಿಎಂಪಿಯ ಎಲ್ಲಾ 8 ವಲಯಗಳ ಆಯುಕ್ತರು, ಜಂಟಿ ಆಯುಕ್ತರು, ಮುಖ್ಯ ಅಭಿಯಂತರರು ಆಯಾ ವಲಯಗಳಲ್ಲಿ ನಿನ್ನೆ ರಾತ್ರಿಯಿಂದ ಇಂದು ಬೆಳಗಿನವರೆಗೆ ಕಾರ್ಯನಿರ್ವಹಿಸಿ, ಮಳೆಯಿಂದಾದ ಅನಾಹುತಗಳನ್ನು ಪರಿಶೀಲಿಸಿದರು.

ವಿಪತ್ತು ನಿರ್ವಹಣಾ ಕೋಶದ ಅಧಿಕಾರಿಗಳು ಅನಾಹುತ ಸಂಭವಿಸಿದ ಸ್ಥಳಗಳಲ್ಲಿ ಸಂಗ್ರಹವಾಗಿದ್ದ ಭಾರಿ ಪ್ರಮಾಣದ ನೀರನ್ನು ತೆರವುಗೊಳಿಸುತ್ತಿದ್ದಾರೆ.





ಗೃಹಲಕ್ಷ್ಮೀಯರಿಗೆ ಪ್ರತಿ ತಿಂಗಳ 20ರೊಳಗೆ ಹಣ ಸಂದಾಯ

ಬೆಂಗಳೂರು: ರಾಜ್ಯದ ಮಹತ್ವಾಕಾಂಕ್ಷೆಯ ಗೃಹಲಕ್ಷ್ಮೀ ಯೋಜನೆಯ ಹಣ ಫಲಾನುಭವಿಗಳ ಖಾತೆಗೆ ಪ್ರತಿ ತಿಂಗಳ 15ರಿಂದ 20 ರೊಳಗೆ ಜಮೆ ಆಗಲಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ.



ಕೆವೈಸಿ, ತಾಂತ್ರಿಕ ತೊಂದರೆ ಕಾರಣದಿಂದ ಒಂದು ಕೋಟಿ 10 ಲಕ್ಷ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಹಣ ವರ್ಗಾವಣೆಗೆ ತೊಂದರೆ ಆಗಿದ್ದು, ಸರ್ಕಾರದಿಂದ ಹಣ ಬರುವುದು ಸಹ ನಿಧಾನವಾದ್ದರಿಂದ ಜಮೆ ಆಗಲು ತಡವಾಗುತ್ತಿತ್ತು. ಆದರೆ, ಇದೀಗ, ತಾಂತ್ರಿಕ ಸಮಸ್ಯೆ ಪರಿಹರಿಸುವ ಕೆಲಸ ಆಗುತ್ತಿದೆ, ಬ್ಯಾಂಕ್ ಖಾತೆಗೆ ಒಂದು ತಿಂಗಳು ಹಣ ಜಮೆ ಆಗುವುದು ತಡವಾದರೂ ಎರಡು ತಿಂಗಳ ಮೊತ್ತ ನಾಲ್ಕು ಸಾವಿರ ರೂ. ಒಮ್ಮೆಗೇ ಬರಲಿದೆ. ಆತಂಕ ಬೇಡ ಎಂದರು. ಈ ತಿಂಗಳಿನ ಕಂತು ಒಂದು ಕೋಟಿ 10 ಲಕ್ಷ ಫಲಾನುಭವಿಗಳಿಗೆ ನೀಡಲು ಸರ್ಕಾರದಿಂದ ಹಣ ಬಿಡುಗಡೆ ಆಗಿದೆ. ಸರ್ಕಾರದಿಂದ ಖಾತೆಗೆ ಹಣ ಬರಲು 25 ದಿನ ಬೇಕಾಗುತ್ತಿತ್ತು, ಇದನ್ನು ಮತ್ತಷ್ಟು ಸರಳೀಕರಣಗೊಳಿಸಲಾಗಿದೆ ಎಂದರು.

ಚಿತ್ರಕಲಾ ಸ್ಪರ್ಧೆ ಪ್ರಚಾರ ಸಾಮಗ್ರಿಗಳನ್ನು ಬಿಡುಗಡೆಗೊಳಿಸಿದ ಮಾಳವಿಕಾ ಅವಿನಾಶ್



ಮೈಸೂರು, ನ. 7– ಮೈಸೂರಿನ ಕಲಾಮಂದಿರದಲ್ಲಿ ನಡೆದ ಕನ್ನಡದ ಹಬ್ಬಕ್ಕೆ ಆಗಮಿಸಿದ್ದ ನಟಿ ಮಾಳವಿಕಾ ಅವಿನಾಶ್ ಅವರು ಶ್ರೀ ಭುವನೇಶ್ವರಿ ಸೇವಾ ಟ್ರಸ್ಟ್ ವತಿಯಿಂದ ನ. 18ರಂದು ಆಯೋಜಿಸಿರುವ ಚಿತ್ರಕಲಾ ಸ್ಪರ್ಧೆಯ ಪೋಸ್ಟರ್ ಅನ್ನು ಬಿಡುಗಡೆಗೊಳಿಸಿದರು.

ಬಳಿಕ ಮಾತನಾಡಿದ ಭುವನೇಶ್ವರಿ ಸೇವಾ ಟ್ರಸ್ಟ್ ಅಧ್ಯಕ್ಷರಾದ ನಾಗಶ್ರೀ ಸುಚೇಂದ್ರ, ನ.18ರಂದು ಸ್ವಾತಂತ್ರ್ಯ ಹೋರಾಟಗಾರರ ಉದ್ಯಾನವನದಲ್ಲಿ ಬೆಳಗ್ಗೆ 11ರಿಂದ ಮಧ್ಯಾಹ್ನ 1ರವರೆಗೂ ಕನ್ನಡ ರಾಜ್ಯೋತ್ಸವದ ಪ್ರಯುಕ್ತ ಕರ್ನಾಟಕಕ್ಕೆ ಸಂಬಂಧಿಸಿದ ಪ್ರವಾಸಿ ತಾಣಗಳು ಅಥವಾ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರ ಚಿತ್ರಗಳ ಬಿಡಿಸುವ ಚಿತ್ರಕಲಾ ಸ್ಪರ್ಧೆಯನ್ನು ಆಯೋಜಿಸಲಾಗಿದೆ.

8 ವರ್ಷದ ಮಕ್ಕಳಿಂದ 12 ವರ್ಷ, 12 ರಿಂದ 18 ವರ್ಷ ಹಾಗೂ 18 ವರ್ಷದಿಂದ ಮೇಲ್ಪಟ್ಟವರು ಮೂರು ವಿಭಾಗ ಇರುತ್ತದೆ. ವಿಜೇತರಾದ ಮೂರು ವಿಭಾಗದ ಮೂರು ಸ್ಪರ್ಧಾಳುಗಳಿಗೆ ಬಹುಮಾನವನ್ನು ನೀಡಲಾಗುವುದು. ಸ್ಪರ್ಧಿಸಿದ ಎಲ್ಲಾ ಸ್ಪರ್ಧಾಳುಗಳಿಗೆ ಉತ್ತೇಜಿಸಲು ಪ್ರಮಾಣ ಪತ್ರ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ 8123535992/7411789108 ಸಂಪರ್ಕಿಸಬಹುದು ಎಂದು ತಿಳಿಸಿದರು

ಇದೇ ಸಂದರ್ಭದಲ್ಲಿ ನಗರಪಾಲಿಕೆ ಸದಸ್ಯರಾದ ಪ್ರಮೀಳಾ ಭರತ್, ಸಮಾಜ ಸೇವಕರಾದ ಕಡಕೊಳ ಜಗದೀಶ್, ಸಂಘದ ಕಾರ್ಯದರ್ಶಿ ಕಾವೇರಮ್ಮ, ಇನ್ನಿತರರು ಹಾಜರಿದ್ದರು.

ಏಷಿಯನ್ ಮಾಸ್ಟರ್ಸ್ ಅಥ್ಲೆಟಿಕ್ಸ್‌ನಲ್ಲಿ ಮೈಸೂರಿನ ಕ್ರೀಡಾಪಟುಗಳು ಭಾಗಿ



ಮೈಸೂರು, ನ.7(ಬಿಎಲ್‌ಯು)– ಫಿಲಿಫೈನ್ಸ್ ನ್ಯೂ ಕ್ಲಾಕ್ ಸಿಟಿಯಲ್ಲಿ ನವೆಂಬರ್ 8 ರಿಂದ 12ನೇ ತಾರೀಖಿನ ತನಕ ನಡೆಯುವ 22ನೇ ಏಷಿಯನ್ ಮಾಸ್ಟರ್ಸ್ ಅಥ್ಲೆಟಿಕ್ಸ್ ಚಾಂಪಿಯನ್ ಶಿಪ್‌ನಲ್ಲಿ ಮೈಸೂರಿನ ಹಲವು ಕ್ರೀಡಾಪಟುಗಳು ಭಾರತವನ್ನು ಪ್ರತಿನಿಧಿಸುತ್ತಿದ್ದಾರೆ.

ಮೈಸೂರು ಜಿಲ್ಲಾ ಮಾಸ್ಟರ್ಸ್ ಅಸೋಸಿಯೇಷನ್‌ನಿಂದ ಆಯ್ಕೆಯಾದ ಕ್ರೀಡಾಪಟುಗಳಾದ ಮಾದಪ್ಪ ಯೋಗೇಂದ್ರ, ಎಸ್.ಮಹದೇವ್, ಹೆಚ್.ಎಂ.ಸುಜಾತ, ಅರುಣ್, ಜಿ.ಜಿ.ರಘುನಂದನ್, ಎಂ.ಡಿ. ನಾಗೇಂದ್ರ ಡಾ. ಆರ್.ರಾಜ್ ಗೋಪಾಲ್ ಹಾಗೂ ಎಂ.ಕೃಷ್ಣಯ್ಯ ಭಾರತವನ್ನು ಪ್ರತಿನಿಧಿಸುತ್ತಿದ್ದಾರೆ. ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ಹಾಗೂ ಪತ್ರಕರ್ತ ದೀಪಕ್ ಕ್ರೀಡಾಪಟುಗಳಿಗೆ ಸ್ಪೋರ್ಟ್ಸ್ ಕಿಟ್ ಹಾಗೂ ಬ್ಲೇಜರ್‌ಗಳನ್ನು ನೀಡಿ, ಶುಭ ಕೋರಿದರು. ಈ ವೇಳೆ ಅಸೋಸಿಯೇಷನ್ ಉಪಾಧ್ಯಕ್ಷರಾದ ಸಿ.ಎನ್.ಗಣೇಶ್, ಸೋಮಶೇಖರ್, ಎಂ.ಯೋಗೇಂದ್ರ, ಕಾರ್ಯದರ್ಶಿ ಪಿ.ಜಿ.ಸತ್ಯನಾರಾಯಣ, ಅಥ್ಲೆಟಿಕ್ ಕೋಚ್ ಜಿ.ಆರ್.ಪ್ರಭಾಕರ್, ಮೈಸೂರು ವಿವಿ ದೈಹಿಕ ನಿರ್ದೇಶಕ ಡಾ.ವೆಂಕಟೇಶ್ ಈ ವೇಳೆ ಉಪಸ್ಥಿತರಿದ್ದರು.

ಮೈಸೂರು ಮೆಡಿಕಲ್ ಕಾಲೇಜು ಆವರಣದಲ್ಲಿ ನಾಲ್ವಡಿ ಪ್ರತಿಮೆ ಪ್ರತಿಷ್ಠಾಪನೆ



ಮೈಸೂರು, ನ. 7(ಆರ್‌ಕೆ)– ಶತಮಾನೋತ್ಸವದ ಅಂಗವಾಗಿ ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ (ಎಂಎಂಸಿ ಆರ್‌ಐ) ಆವರಣದಲ್ಲಿ ಸಂಸ್ಥೆಯ ಸಂಸ್ಥಾಪಕರಾದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಕೃಷ್ಣ ಶಿಲಾ ಪ್ರತಿಮೆಯನ್ನು ಇಂದು ಪ್ರತಿಷ್ಠಾಪಿಸಲಾಯಿತು.

2024 ರಲ್ಲಿ ಸಂಸ್ಥೆ 100 ವರ್ಷ ಪೂರೈಸಲಿರುವ ಹಿನ್ನೆಲೆಯಲ್ಲಿ ಶತಮಾನೋತ್ಸವದ ನೆನಪಿಗಾಗಿ ಕಾಲೇಜಿನಲ್ಲಿ ವೈದ್ಯಕೀಯ ಪದವಿ ಪಡೆದ 1962ನೇ ತಂಡದ ವಿದ್ಯಾರ್ಥಿಗಳ ಪ್ರಾಯೋಜಕತ್ವದಲ್ಲಿ ನಾಲ್ವಡಿಯವರ ಪ್ರತಿಮೆಯನ್ನು ಪ್ರತಿಷ್ಠಾಪಿಸಲಾಗಿದ್ದು, ಮುಂದಿನ ವಾರ ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಅವರು ಅನಾವರಣಗೊಳಿಸುವರು.

ವಿಶೇಷವಾಗಿ ರೂಪಿಸಿರುವ ವೇದಿಕೆ ಮೇಲೆ ಇಂದು ಕೃಷ್ಣ ಶಿಲಾ ಪ್ರತಿಮೆಯನ್ನು ಕ್ರೇನ್ ಮೂಲಕ ಪ್ರತಿಷ್ಠಾಪಿಸಿ ಮೈಸೂರು ಮೆಡಿಕಲ್ ಕಾಲೇಜಿನ ಮೂಲಕ ಹಳೇ ವಿದ್ಯಾರ್ಥಿಗಳು ಸಂಭ್ರಮಿಸಿದರು. ಸಂಸ್ಥೆಯ ಡೀನ್ ಅಂಡ್ ಡೈರೆಕ್ಟರ್ ಕೆ.ಆರ್.ದಾಕ್ಷಾಯಿಣಿ, ಮಾಜಿ ನಿರ್ದೇಶಕ ಡಾ. ದಿನೇಶ್, ಹಿರಿಯ ವೈದ್ಯರುಗಳಾದ ಡಾ. ಲಕ್ಷ್ಮೀನಾರಾಯಣ, ಡಾ. ಉದಯಶಂಕರ್, ಡಾ. ದೇವೇಗೌಡ, ಕ್ಯಾಪ್ಟನ್ ಡಾ.ವೆಂಕಟೇಶ್, ಡಾ. ಶಶಿಧರ, ಡಾ. ನಟರಾಜ್ ಸೇರಿದಂತೆ ಹಲವರು ನಾಲ್ವಡಿ ಅವರ ಪ್ರತಿಮೆ ಪ್ರತಿಷ್ಠಾಪನೆ ವೇಳೆ ಪಾಲ್ಗೊಂಡಿದ್ದರು.

8 ಅಡಿ ಎತ್ತರದ ಕಪ್ಪು ಶಿಲೆಯಲ್ಲಿ ರೂಪಿಸಿರುವ ಪ್ರತಿಮೆಯ ವೇದಿಕೆಯಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಸಂಕ್ಷಿಪ್ತ ಮಾಹಿತಿಯನ್ನು ನೀಡಲಾಗಿದೆ.

ಡಿ ಪೌಲ್ ಕಾಲೇಜಿಗೆ ಪ್ರಥಮ ಬಹುಮಾನ

ಮೈಸೂರು, ನ.7(ಬಿಎಲ್‌ಯು)– ಮಾಂಡವ್ಯ ವಲಯದ ಅಂತರಕಾಲೇಜು ಪುರುಷರ ಬಾಸ್ಕೆಟ್ ಬಾಲ್ ಮತ್ತು ಟೆನ್ನಿಸ್ ಪಂದ್ಯಾವಳಿಯಲ್ಲಿ ಡಿ ಪೌಲ್ ಪ್ರಥಮ ದರ್ಜೆ ಕಾಲೇಜು ಪ್ರಥಮ ಬಹುಮಾನ ಗಳಿಸಿದೆ.



ಶ್ರೀರಂಗಪಟ್ಟಣ ತಾಲೂಕು ಅವೆರಳ್ಳಿಯ ಕಾಲೇಜಿನ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ ಪಂದ್ಯಾವಳಿಯಲ್ಲಿ ಪಿಇಎಸ್ ಪ್ರಥಮ ದರ್ಜೆ ಕಾಲೇಜಿನ ವಿರುದ್ಧ ಡಿ ಪೌಲ್ ಪ್ರಥಮ ದರ್ಜೆ ಕಾಲೇಜು ಜಯಗಳಿಸಿದೆ. ದ್ವಿತೀಯ ಸ್ಥಾನವನ್ನು ಪಿಇಎಸ್ ಕಾಲೇಜು ಹಾಗೂ ತೃತೀಯ ಸ್ಥಾನವನ್ನು ಶ್ರೀರಂಗಪಟ್ಟಣದ ಪರಿವರ್ತನಾ ಪ್ರಥಮ ದರ್ಜೆ ಕಾಲೇಜು ಪಡೆದುಕೊಂಡಿದೆ.

ಟೆನ್ನಿಸ್ ವಿಭಾಗದಲ್ಲಿ ಭಾರತಿ ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ದ್ವಿತೀಯ ಸ್ಥಾನವನ್ನು ಡಿ ಪೌಲ್ ಪ್ರಥಮ ದರ್ಜೆ ಕಾಲೇಜು ಪಡೆದುಕೊಂಡಿದೆ. ಕ್ರೀಡಾಕೂಟ ಆಯೋಜಿಸಿದ್ದ ಡಿ ಪೌಲ್ ಕಾಲೇಜಿಗೆ ಮೈಸೂರು ವಿಶ್ವವಿದ್ಯಾನಿಲಯ ಹಾಗೂ ಮಾಂಡವ್ಯ ವಲಯದ ಸಂಯೋಜಕರು ಧನ್ಯವಾದ ತಿಳಿಸಿದ್ದಾರೆ.

ಸಾಹಸಸಿಂಹ ವಿಷ್ಣುವರ್ಧನ್ ಸ್ಮಾರಕದಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ



ಮೈಸೂರು, ನ.7–ಮೈಸೂರಿನ ಕರುಣಾಮಯಿ ವಿಷ್ಣುವರ್ಧನ್ ಅಭಿಮಾನಿ ಬಳಗ ಹಾಗೂ ಜೀವಧಾರ ರಕ್ತ ನಿಧಿ ಕೇಂದ್ರದ ವತಿಯಿಂದ ಮೈಸೂರು ತಾಲೂಕಿನ ಉದ್ಬೂರು ಗೇಟ್ ಬಳಿ ಇರುವ ವಿಷ್ಣುವರ್ಧನ್ ಸ್ಮಾರಕದಲ್ಲಿ 68ನೇ ಕನ್ನಡ ರಾಜ್ಯೋತ್ಸವವನ್ನು ಕನ್ನಡ ಬಾವುಟ ಹಾರಿಸಿ ಭುವನೇಶ್ವರಿಗೆ ಜೈಕಾರ ಕೂಗುವ ಮೂಲಕ ಶ್ರದ್ಧೆಯಿಂದ ಆಚರಿಸಲಾಯಿತು.

ಈ ವೇಳೆ ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್ ಮಾತನಾಡಿ, ಕನ್ನಡದ ಹಲವಾರು ಕಟ್ಟಾಳುಗಳು ಮತ್ತು ಮಹನೀಯರ ಹೋರಾಟದ ಫಲವಾಗಿ ಇಂದು ಕರ್ನಾಟಕದ ಕಂಪು ವಿಶ್ವವ್ಯಾಪಿಯಾಗಿದೆ. ಕನ್ನಡ ಭಾಷೆಗೆ ಎಂದಿಗೂ ಅಳಿವು ಇಲ್ಲ. ಸೂರ್ಯಚಂದ್ರ ಇರುವಂತೆ ಅದು ಶಾಶ್ವತ ಎಂದರು. ಕನ್ನಡ ಮೂವಿ ವಿಷ್ಣು ಅಭಿಮಾನಿ ಬಳಗದ ಸಂಚಾಲಕರಾದ ನಂದೀಶ್ ನಾಯಕ್, ಸೂರಜ್, ಸದಾಶಿವ್, ವಿ.ಎಂ.ನಾಗರಾಜು, ಸುಭಾಷ್, ವರುಣಾ ಮಹೇಶ್, ಚಂದ್ರು ವಿಜಿ, ಹರೀಶ್ ನಾಯ್ಡು ಹಾಗೂ ಇನ್ನಿತರರು ಹಾಜರಿದ್ದರು.

ಫಲಾನುಭವಿಗಳಿಗೆ ಹೊಲಿಗೆ ಯಂತ್ರ ವಿತರಣೆ



ಮೈಸೂರು, ನ.7–ಮೈಸೂರು ಮಹಾನಗರ ಪಾಲಿಕೆಯ ವತಿಯಿಂದ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಕ್ಕೆ ಮೀಸಲಿಟ್ಟಿರುವ ಶೇಕಡ 24.1 ಯೋಜನೆ ಅಡಿ ಇಂದು ವಾರ್ಡ್ ನಂಬರ್ 55ರಲ್ಲಿ 16 ಜನ ಫಲಾನುಭವಿಗಳಿಗೆ ಹೊಲಿಗೆ ಯಂತ್ರವನ್ನು ಮೈಸೂರು ಮಹಾನಗರ ಪಾಲಿಕೆ ಸದಸ್ಯರಾದ ಮಾ.ವಿ. ರಾಮಪ್ರಸಾದ್ ನೀಡಿದರು.

ಬಳಿಕ ಮಾತನಾಡಿದ ಅವರು, ಮೈಸೂರು ಮಹಾನಗರ ಪಾಲಿಕೆಯಲ್ಲಿ 24.1 ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಹಲವಾರು ಯೋಜನೆಗಳಿವೆ. ಈ ಯೋಜನೆ ಅಡಿಯಲ್ಲಿ ಹೊಲಿಗೆ ಯಂತ್ರ, ವಿದ್ಯಾರ್ಥಿ ಪ್ರೋತ್ಸಾಹ ಧನ ಮತ್ತು ಇನ್ನು ಹಲವಾರು ಯೋಜನೆಗಳಿದ್ದು, ಅದೇ ರೀತಿ 7.5 ಯೋಜನೆ ಅಡಿಯಲ್ಲಿ ಸಾಮಾನ್ಯ ವರ್ಗದವರಿಗೆ ಹಾಗೂ ಓಬಿಸಿ ವರ್ಗದವರಿಗೆ ಸಂಬಂಧಿಸಿದಂತೆ ವಿದ್ಯಾರ್ಥಿ ಪ್ರೋತ್ಸಾಹ ಧನ, ಲ್ಯಾಪ್‌ಟಾಪ್, ವೈದ್ಯಕೀಯ ಪ್ರೋತ್ಸಾಹ ಧನ, ಪಕ್ಕಾ ಮನೆ ಯೋಜನೆ ಸೇರಿದಂತೆ ಹಲವಾರು ಯೋಜನೆಗಳಿದ್ದು, ಇದನ್ನು ನಾಗರಿಕರು ಸದುಪಯೋಗಪಡಿಸಿಕೊಳ್ಳಬೇಕೆಂದು ಮನವಿ ಮಾಡಿದರು.

ಅಧಿಕಾರಿಗಳಾದ ಪ್ರತಾಪ್, ರಶ್ಮಿ, ಸ್ವರ್ಣ, ನಂದೀಶ್, ಮುಖಂಡರಾದ ಸಿ ಸಂದೀಪ್, ಮಂಜುನಾಥ್, ಸುಬ್ರಹ್ಮಣ್ಯ ನಾಯಕ್, ಧರ್ಮೇಂದ್ರ ದೇವೇಂದ್ರಸ್ವಾಮಿ, ಸೋಮೇಶ್, ಲಕ್ಷ್ಮಣ್, ರಮೇಶ್ ಹಾಜರಿದ್ದರು.

ಅರ್ಜಿ ಆಹ್ವಾನ

ಮೈಸೂರು, ನ. 7– ಡಾ.ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ಮತ್ತು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ವತಿಯಿಂದ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ. ಯೋಜನೆಗಳಾದ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಐ.ಎಸ್.ಬಿ. ಯೋಜನೆ, ಗಂಗಾ ಕಲ್ಯಾಣ ಯೋಜನೆ, ಭೂ ಒಡೆತನ ಯೋಜನೆ ಹಾಗೂ ಮೈಕ್ರೋ ಕ್ರೆಡಿಟ್ ಯೋಜನೆಗಳ ಅಡಿಯಲ್ಲಿ ಸೌಲಭ್ಯ ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ವೆಬ್ಸೈಟ್ http://sevasindhu.karnataka.gov.in ಮೂಲಕ ಅರ್ಜಿಯನ್ನು ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ನ.29 ಕೊನೆಯ ದಿನಾಂಕ. ದೂ.0821-2332480. ಡಾ.ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

ಅಂಚೆ ಇಲಾಖೆಯಲ್ಲಿರುವ ಸೇವಾ ಸೌಲಭ್ಯಗಳು, ಯೋಜನೆಗಳ ಕುರಿತು ಫೋನ್–ಇನ್ ಕಾರ್ಯಕ್ರಮ

ಮೈಸೂರು, ನ.7–ಮೈಸೂರಿನ ಜೆಎಸ್‌ಎಸ್ ರೇಡಿಯೋ 91.2 ಎಫ್‌ಎಂನಲ್ಲಿ ನಾಳೆ (ನ 8) ಬೆಳಗ್ಗೆ 11.30 ರಿಂದ 12.30ರವರೆಗೆ ಅಂಚೆ ಇಲಾಖೆಯಲ್ಲಿರುವ ಸೇವಾ ಸೌಲಭ್ಯಗಳು ಮತ್ತು ಇಲಾಖೆಯಲ್ಲಿರುವ ಯೋಜನೆಗಳ ಕುರಿತು ಉಪ ಅಂಚೆ ಅಧ್ಯಕ್ಷರಾದ ಸುನಿಲ್ ಎಸ್ ಹಳಪೇಟಿ, ಮತ್ತು ಮೈಸೂರು ಅಂಚೆ ವಿಭಾಗದ ಮಾರುಕಟ್ಟೆ ವ್ಯವಸ್ಥಾಪಕರಾದ ಡಾ. ಸುರೇಶ್ ಕುಮಾರ್ ಅವರ ಜೊತೆ ನೇರ ಸಂದರ್ಶನ ಫೋನ್–ಇನ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಸಾರ್ವಜನಿಕರು ಹಾಗೂ ಗ್ರಾಹಕರು ಅಂಚೆ ಇಲಾಖೆಯ ಸೇವೆಗಳು, ಯೋಜನೆಗಳು ಹಾಗೂ ನಿಯಮಗಳ ಕುರಿತು ಯಾವುದೇ ಪ್ರಶ್ನೆಗಳು, ಸಮಸ್ಯೆಗಳು ಹಾಗೂ ಸಲಹೆಗಳು ಇದ್ದಲ್ಲಿ, ಕರೆಮಾಡಿ ಅಂಚೆ ಅಧಿಕಾರಿಗಳ ಜೊತೆ ದೂರವಾಣಿ ಸಂಖ್ಯೆ: 82967 25912, 0821-2546563 ಮೂಲಕ ನೇರವಾಗಿ ಮಾತನಾಡಬಹುದು.

ತೊದಲುವಿಕೆಯ ಅರಿವು ಕಾರ್ಯಕ್ರಮ

ಮೈಸೂರು, ನ.7– ಮೈಸೂರಿನಲ್ಲಿರುವ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ(ಆಯಿಷ್)ಯಲ್ಲಿ 'ಅಂತಾರಾಷ್ಟ್ರೀಯ ತೊದಲುವಿಕೆ ಜಾಗೃತಿ ದಿನ'ದ ಅಂಗವಾಗಿ ಶಾಲಾ ಶಿಕ್ಷಕರಲ್ಲಿ ತೊದಲುವಿಕೆಯ ಕುರಿತು ಅರಿವು ಮೂಡಿಸಲಾಯಿತು.

ಜಿಲ್ಲೆಯಾದ್ಯಂತ 350ಕ್ಕೂ ಹೆಚ್ಚು ಶಿಕ್ಷಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದು, ತೊದಲುವಿಕೆಯ ಗುರುತಿಸುವಿಕೆ, ತೊದಲುವಿಕೆಯ ನಿರ್ವಹಣೆ ಮತ್ತು ಮಾರ್ಗದರ್ಶನಗಳು, ತರಗತಿಯಲ್ಲಿ ಹೊಂದಾಣಿಕೆಗಳು ಹಾಗೂ ಸಂವಹನ ನ್ಯೂನತೆ ಹೊಂದಿರುವ ಮಕ್ಕಳಿಗೆ ನೀಡುವ ಸೌಲಭ್ಯಗಳ ಕುರಿತು ತಿಳಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಉಸ್ತುವಾರಿ ನಿರ್ದೇಶಕ ಪ್ರೊ.ಅಜೀಶ್ ಕೆ. ಅಬ್ರಹಾಂ ವಹಿಸಿದ್ದರು. ಚಿಕಿತ್ಸಾ ಸೇವಾ ವಿಭಾಗದ ಮುಖ್ಯಸ್ಥರಾದ ಡಾ.ಎನ್.ಸ್ವಪ್ನ, ನಿರರ್ಗಳ ಘಟಕದ ಅಧ್ಯಕ್ಷರಾದ ಡಾ.ಸಂಗೀತ ಮಹೇಶ್ ಉಪಸ್ಥಿತರಿದ್ದರು.



ಕನ್ನಡ ರಾಜ್ಯೋತ್ಸವದ ಅಂಗವಾಗಿ ಮೈಸೂರಿನಲ್ಲಿ ಜಿಲ್ಲಾಡಳಿತ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ರಾಜ್ಯ ನಾಯಕರ ಹಿತರಕ್ಷಣಾ ವೇದಿಕೆ ಅಧ್ಯಕ್ಷ ದ್ಯಾವಪ್ಪ ನಾಯಕ ಅವರಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಜಿಲ್ಲಾ ಮಟ್ಟದ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಮಾಡಿದರು. ಈ ವೇಳೆ ಮೇಯರ್ ಶಿವಕುಮಾರ್, ವಿಧಾನಪರಿಷತ್ ಸದಸ್ಯ ಮಂಜೇಗೌಡ, ಸಾಹಿತ್ಯ ಪರಿಷತ್ ಜಿಲ್ಲಾ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್ ಮತ್ತು ಮೋಹನ್ ಕುಮಾರ್ ಗೌಡ ಉಪಸ್ಥಿತರಿದ್ದರು.

ಕನಕದಾಸ ಜಯಂತಿ ಪೂರ್ವಭಾವಿ ಸಭೆ

ಮೈಸೂರು, ನ. 7– ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನ.30ರಂದು ಕನಕದಾಸ ಜಯಂತಿ ಆಚರಿಸುವ ಕುರಿತು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನ.8 ರಂದು ಸಂಜೆ 5:30 ಕ್ಕೆ ಜಿಲ್ಲಾ ಪಂಚಾಯತ್‌ನ ಡಿ.ದೇವರಾಜ ಅರಸು ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಎಂ.ಡಿ. ಸುದರ್ಶನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೇರಿ ಕ್ಯೂರಿ, ಸಿ.ವಿ.ರಾಮನ್ ವಿಜ್ಞಾನ ತಾರೆಗಳು

ಸಾಹಿತಿ ಬನ್ನೂರು ರಾಜು ಗೌರವ ನಮನ

ಮೈಸೂರು, ನ. 7– ಭಾರತ ಅಲ್ಲದೆ ಇಡೀ ಏಷ್ಯಾದಲ್ಲಿಯೇ ಮೊಟ್ಟ ಮೊದಲಿಗೆ ಭೌತವಿಜ್ಞಾನದಲ್ಲಿ ಪ್ರತಿಷ್ಠಿತ ನೊಬೆಲ್ ಪ್ರಶಸ್ತಿ ಪಡೆದು ಭಾರತದ ಹಿರಿಮೆಯನ್ನು ಜಗದಗಲ ಬೆಳಗಿದ ಸರ್ ಸಿ.ವಿ.ರಾಮನ್ ಮತ್ತು ಎರಡು ಬಾರಿ ನೊಬೆಲ್ ಪ್ರಶಸ್ತಿ ಪಡೆದ ಜಗತ್ತಿನ ಏಕೈಕ ಮಹಿಳೆ ಎನಿಸಿದ ಪೋಲೆಂಡ್‌ನ ಮೇರಿ ಕ್ಯೂರಿ ಇವರಿಬ್ಬರೂ ವಿಜ್ಞಾನ ಲೋಕದ ಧ್ರುವತಾರೆಗಳೆಂದು ಸಾಹಿತಿ ಬನ್ನೂರು ಕೆ.ರಾಜು ಬಣ್ಣಿಸಿದರು.



ನಗರದ ಪ್ರತಿಷ್ಠಿತ ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಸಾಹಿತ್ಯಿಕ ಸೇವಾ ಸಂಸ್ಥೆಗಳಾದ ಹಿರಣ್ಮಯಿ ಪ್ರತಿಷ್ಠಾನ ಮತ್ತು ಕಾವೇರಿ ಬಳಗ ಸಂಸ್ಥೆಗಳು ಸಂಯುಕ್ತವಾಗಿ ತಾಲೂಕಿನ ಹೂಟಗಳ್ಳಿಯ ಸರ್ಕಾರಿ ಪ್ರೌಢಶಾಲೆಯಲ್ಲಿ ಏರ್ಪಡಿಸಿದ್ದ ವಿಜ್ಞಾನಿಗಳಾದ ಸರ್ ಸಿ.ವಿ.ರಾಮನ್ ಮತ್ತು ಮೇರಿ ಕ್ಯೂರಿ ಅವರ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾಗಿ ಮಾತನಾಡಿದ ಅವರು, ಭಾರತರತ್ನ ಸರ್ ಸಿ.ವಿ. ರಾಮನ್ ಅವರು ಮೂಲತಃ ತಮಿಳುನಾಡಿನವರಾದರೂ ವಿಜ್ಞಾನ ಲೋಕದ ಅವರ ಎಲ್ಲಾ ರೀತಿಯ ಸಂಶೋಧನೆಗಳಿಗೂ ಕನ್ನಡನಾಡು ಕರ್ಮಭೂಮಿಯಾಗಿತ್ತು. ವಿಶೇಷವಾಗಿ ಅವರಿಗೆ ನೊಬೆಲ್ ಪ್ರಶಸ್ತಿಯನ್ನು ತಂದುಕೊಟ್ಟ ಬೆಳಕಿನ ಆವಿಷ್ಕಾರವಾದ ರಾಮನ್ ಎಫೆಕ್ಟ್ ಅಥವಾ ರಾಮನ್ ಪರಿಣಾಮದ ಸಂಶೋಧನೆಗೆ ಮೂಲವೇ ಕನ್ನಡ ನಾಡಿನ ಬೆಂಗಳೂರಾಗಿದ್ದು ಇದರ ಸಂಪೂರ್ಣ ಕ್ರೆಡಿಟ್ ನಮ್ಮ ನಾಡು ಕರ್ನಾಟಕಕ್ಕೆ ಸಲ್ಲುತ್ತದೆ ಎಂದರು.

ಖ್ಯಾತ ಸಂಖ್ಯಾಶಾಸ್ತ್ರಜ್ಞ ಎಸ್. ಜಿ.ಸೀತಾರಾಮ್ ಅವರು ಸರ್ ಸಿ. ವಿ. ರಾಮನ್ ಮತ್ತು ಮೇರಿ ಕ್ಯೂರಿ ಅವರ ಬದುಕು, ಸಂಶೋಧನೆ,ಸಾಧನೆ, ಸಿದ್ಧಿ ಕುರಿತಂತೆ ವಿದ್ಯಾರ್ಥಿಗಳಿಗೆ ಮನಮುಟ್ಟುವಂತೆ ಅತ್ಯಂತ ಸರಳವಾಗಿ ಉಪನ್ಯಾಸ ನೀಡಿದರು. ಹಾಗೆಯೇ ಹತ್ತನೇ ತರಗತಿಯ ವಿದ್ಯಾರ್ಥಿನಿ ಕು.ಅನುಷಾ ಅವರು ಮೇರಿ ಕ್ಯೂರಿ ಕುರಿತು ಮಾತನಾಡಿ ಗಮನ ಸೆಳೆದರಲ್ಲದೆ ರೂಪಶ್ರೀ ಜೊತೆಗೂಡಿ ಕವಿರಾಜಮಾರ್ಗ ಕಾವ್ಯವಾಚನ ಮಾಡಿ ಒಂದು ಕ್ಷಣ ನೆರೆದಿದ್ದವರನ್ನು ಮೂಕವಿಸ್ಮಿತಗೊಳಿಸಿದರು. ಹಿರಣ್ಮಯಿ ಪ್ರತಿಷ್ಠಾನದ ಅಧ್ಯಕ್ಷ ಎ.ಸಂಗಪ್ಪ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಖ್ಯಾತ ಕಲಾವಿದೆ ಹಾಗೂ ಲೇಖಕಿ ಡಾ. ಜಮುನಾರಾಣಿ ಮಿರ್ಲೆ ಮತ್ತು ಕಾವೇರಿ ಬಳಗದ ಅಧ್ಯಕ್ಷೆ ಎನ್.ಕೆ.ಕಾವೇರಿಯಮ್ಮ ಅವರು ಇದೇ ಸಂದರ್ಭದಲ್ಲಿ ನಡೆದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಾದ ಚಿತ್ರಕಲಾ ಸ್ಪರ್ಧೆಯಲ್ಲಿ ವಿಕಾಸ್ ನಾಯಕ (ಪ್ರ), ವಿನೋದ (ದ್ವಿ), ಗಗನ (ತೃ), ಗೀತಗಾಯನ ಸ್ಪರ್ಧೆಯಲ್ಲಿ ಎನ್.ಚಂದು(ಪ್ರ), ಶಶಿರೇಖಾ (ದ್ವಿ), ಉಲ್ಲಾಸ್ (ತೃ), ಭಾಷಣ ಸ್ಪರ್ಧೆಯಲ್ಲಿ ಅನುಷಾ (ಪ್ರ), ಯಶಸ್ವಿನಿ(ದ್ವಿ), ಮಂಗಳಮ್ಮ(ತೃ) ಅವರುಗಳಿಗೆ ಬಹುಮಾನ ವಿತರಿಸಿ, ಗೌರವಿಸಿದರು.

ಸರ್ ಸಿ.ವಿ.ರಾಮನ್ ಮತ್ತು ಮೇರಿ ಕ್ಯೂರಿ ಅವರ ಭಾವಚಿತ್ರಗಳಿಗೆ ಪುಷ್ಪ ನಮನ ಸಲ್ಲಿಸುವುದರ ಮೂಲಕ ಆರಂಭವಾದ ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯ ಶಿಕ್ಷಕಿ ಪಿ.ವಿ.ಸಂಗೀತಾ ಅಧ್ಯಕ್ಷತೆ ವಹಿಸಿದ್ದರು. ಜಾದೂಗಾರ್ ಗುರುಸ್ವಾಮಿ ಶಿಕ್ಷಕರಾದ ಡಿ.ಎಂ.ಮಹದೇವು, ಹೆಚ್.ಬಿ.ಅಣ್ಣೇಗೌಡ, ಎಂ.ರಂಗಸ್ವಾಮಿ, ಎಂ.ಎಸ್.ಶಿವಕುಮಾರ್, ಹೆಚ್.ಬಿ. ರೂಪಶ್ರೀ, ಪಿ.ಪುಷ್ಪ, ಕೆ.ಎಸ್. ಈಶ್ವರಿ, ಶರೀನ್ ಬಾನು, ಎಸ್.ಎಸ್. ಉಜ್ವಲಾ, ಭಾಗ್ಯಲಕ್ಷ್ಮಮ್ಮ ಉಪಸ್ಥಿತರಿದ್ದರು.

ಮಾರ್ಟಳ್ಳಿ ಸೇಂಟ್ ಮೇರಿಸ್ ಪ್ರೌಢಶಾಲೆಗೆ ಸಮಗ್ರ ಪ್ರಶಸ್ತಿ



ಮೈಸೂರು, ನ. 7– ಮೈಸೂರಿನ ಶ್ರೀ ರಾಮಕೃಷ್ಣ ವಿದ್ಯಾಶಾಲೆಯ ಹಳೆಯ ವಿದ್ಯಾರ್ಥಿಗಳ ಬಳಗ ಮತ್ತು ವಿವೇಕಾನಂದ ಸೇವಾ ಸಂಸ್ಥೆಯು ಶ್ರೀ ರಾಮಕೃಷ್ಣ ವಿದ್ಯಾಶಾಲೆಯ 50ನೇ ಸುವರ್ಣ ಮಹೋತ್ಸವದ ಪ್ರಯುಕ್ತ ಶ್ರೀಮತ್ ಶಾಂಭವಾನಂದಜೀ ಸ್ಮರಣಾರ್ಥವಾಗಿ ಅಂತರ ಪ್ರೌಢಶಾಲಾ ಸಾಮಾನ್ಯ ಜ್ಞಾನ ಪರೀಕ್ಷೆ ಕರ್ನಾಟಕದಾದ್ಯಂತ ಏರ್ಪಡಿಸಲಾಗಿತ್ತು.

ಹನೂರು ತಾಲೂಕಿನ ರಾಮಾಪುರ ಪರೀಕ್ಷಾ ಕೇಂದ್ರದಲ್ಲಿ ಬರೆಯಲಾದ 344 ವಿದ್ಯಾರ್ಥಿಗಳಲ್ಲಿ ಆಯ್ಕೆ ಮಾಡಲಾದ 9ನೇ ತರಗತಿಯಲ್ಲಿ ನಾಲ್ಕು ವಿದ್ಯಾರ್ಥಿಗಳ ಪೈಕಿ ಮಾರ್ಟಳ್ಳಿಯ ಸೆಂಟ್ ಮೇರಿಸ್ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ಸುಜನ್ ಗೌತಮ್ 3ನೇ ಸ್ಥಾನ, ದೀಪಕ್ ತಮಯನ್ 1ನೇ ಸ್ಥಾನ ಹಾಗೂ 10ನೇ ತರಗತಿಯಲ್ಲಿ ನಾಲ್ಕು ವಿದ್ಯಾರ್ಥಿಗಳ ಪೈಕಿ ಅಲ್ಬೀನ ಮರಿಯಾ 1ನೇ ಸ್ಥಾನ ಗಳಿಸುವುದರ ಜೊತೆಗೆ ಒಟ್ಟಾರೆ ಸಮಗ್ರ ಪ್ರಶಸ್ತಿಯನ್ನು ಪಡೆದುಕೊಂಡರು.

ವರುಣ ಕ್ಷೇತ್ರಕ್ಕೆ ಮಾತ್ರ ಹಗಲು, ರಾತ್ರಿ ವಿದ್ಯುತ್

● ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಆರೋಪ ● ಬೆಂಕಿಪುರಕ್ಕೆ ಬಿಜೆಪಿ ಬರ ಅಧ್ಯಯನ ತಂಡ



ಹುಣಸೂರು, ನ.7–ಸಿದ್ದರಾಮಯ್ಯ ನೇತೃತ್ವದ ಸರ್ಕಾರ ರಾಜ್ಯದ ರೈತರಿಗೆ ಅನ್ಯಾಯ ಮಾಡುತ್ತಿದ್ದು, ಮುಖ್ಯಮಂತ್ರಿ ಕ್ಷೇತ್ರ ವರುಣ ವ್ಯಾಪ್ತಿಯ ಕೃಷಿ ಪಂಪ್‌ಸೆಟ್‌ಗಳಿಗೆ ಮಾತ್ರ ಹಗಲು ಮತ್ತು ರಾತ್ರಿ ವೇಳೆ ವಿದ್ಯುತ್ ನೀಡಲಾಗುತ್ತಿದೆ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಆರೋಪಿಸಿದರು.

ತಾಲೂಕಿನ ಬಿಳಿಕೆರೆ ಹೋಬಳಿಯ ಬೆಂಕಿಪುರ ಗ್ರಾಮಕ್ಕೆ ಮಂಗಳವಾರ ಭೇಟಿ ನೀಡಿದ ಬಿಜೆಪಿ ಬರ ಅಧ್ಯಯನ ತಂಡ ರೈತರ ಜಮೀನುಗಳಲ್ಲಿ ಬೆಳೆ ಪರಿಶೀಲಿಸಿ, ರೈತರ ಸಮಸ್ಯೆ ಆಲಿಸಿತು. ಈ ವೇಳೆ ಮಾತನಾಡಿದ ಅವರು, ಬೇರೆ ಜಿಲ್ಲೆಗಳಿಗೆ ರಾತ್ರಿ ಮಾತ್ರ ವಿದ್ಯುತ್ ನೀಡಲಾಗುತ್ತಿದೆ. ಮುಖ್ಯಮಂತ್ರಿಗಳ ಖಜಾನೆ ಮಾಲೀಕ ಸಚಿವ ಹೆಚ್.ಸಿ.ಮಹದೇವಪ್ಪ ಅವರ ಕ್ಷೇತ್ರಕ್ಕೂ ವಿದ್ಯುತ್ ನೀಡಲು ತಾರತಮ್ಯ ಮಾಡಲಾಗುತ್ತಿದೆ. ಇದರಿಂದ ರೈತರ ಸಮಸ್ಯೆ ಕೇಳುವವರೇ ಇಲ್ಲ ಎಂದರು.

ಕೇಂದ್ರ ಸರ್ಕಾರದ ಕಿಸಾನ್ ಸಮ್ಮಾನ್ ಯೋಜನೆಯ 6000 ರೂ. ಜತೆಗೆ ಹಿಂದೆ ಮುಖ್ಯಮಂತ್ರಿಯಾಗಿದ್ದ ಬಿ.ಎಸ್.ಯಡಿಯೂರಪ್ಪನವರು ರಾಜ್ಯ ಸರ್ಕಾರದಿಂದ 4000 ರೂ. ನೀಡುತ್ತಿದ್ದರು. ಇದರಿಂದ ರೈತರಿಗೆ ಒಟ್ಟು 10 ಸಾವಿರ ರೂ. ಸಿಗುತ್ತಿತ್ತು. ಈಗ ಕೇಂದ್ರ ಸರ್ಕಾರ 8000 ರೂ. ನೀಡುತ್ತಿದೆ. ಆದರೆ, ಈಗಿನ ರಾಜ್ಯ ಸರ್ಕಾರ ಕಿಸಾನ್ ಸಮ್ಮಾನ್ ಯೋಜನೆಯ 4000 ರೂ. ನೀಡುತ್ತಿಲ್ಲ ಎಂದು ತಿಳಿಸಿದರು.

ರೈತರ ಸಮಸ್ಯೆ ಆಲಿಸಲು ಮುಖ್ಯಮಂತ್ರಿಯಾಗಲಿ ಅಥವಾ ಸಚಿವರಾಗಲಿ ಮುಂದಾಗುತ್ತಿಲ್ಲ. ಕಳೆದ ಬಾರಿ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿದ್ದಾಗ ರಾಜ್ಯದಲ್ಲಿ 2520 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದರು. ಆಗಲೂ ಬರಗಾಲ ಬಂದಿತ್ತು. ಈ ಬಾರಿಯು ಬರಗಾಲ ಬಂದಿದೆ. ರೈತರ ಸಾಲಮನ್ನಾ ಮಾಡಬೇಕು ಎಂದು ಆಗ್ರಹಿಸಿದರು.

ಕೇಂದ್ರ ಸರ್ಕಾರ ಈಗಾಗಲೇ ನೀಡಿರುವ 500 ಕೋಟಿ ರೂ. ನೈಸರ್ಗಿಕ ವಿಕೋಪ ನಿಧಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಉಳಿದಿದೆ. ಮುಖ್ಯಮಂತ್ರಿ ಈ ಹಣವನ್ನು ಬಳಸದೆ ಕೇವಲ ಕಾಂಗ್ರೆಸ್ ವರಿಷ್ಠರಾದ ಸೋನಿಯ ಗಾಂಧಿ ಹಾಗೂ ರಾಹುಲ್ ಗಾಂಧಿ ಅವರನ್ನು ಮೆಚ್ಚಿಸಲು ಪ್ರಧಾನಿ ನರೇಂದ್ರ ಮೋದಿ ಬಗ್ಗೆ ಅಗೌರವವಾಗಿ ಮಾತನಾಡುತ್ತಿದ್ದಾರೆ. ರಾಜ್ಯದಲ್ಲಿ ಮುಂದಿನ ಮುಖ್ಯಮಂತ್ರಿ ಯಾರು ಎಂಬುದರ ಬಗ್ಗೆ ಕಾಂಗ್ರೆಸ್‌ನಲ್ಲಿ ಚರ್ಚೆ ನಡೆಯುತ್ತಿದೆ. ಆದರೆ, ಅಭಿವೃದ್ಧಿ ಹಾಗೂ ರೈತರ ಸಮಸ್ಯೆ ಬಗ್ಗೆ ಚರ್ಚೆ ಆಗುತ್ತಿಲ್ಲ. ಇದರಿಂದ ರಾಜ್ಯದಲ್ಲಿ ಅಭಿವೃದ್ಧಿ ಶೂನ್ಯವಾಗಿದೆ. ಕಾಂಗ್ರೆಸ್‌ನ ಶಾಸಕರೇ ಅಭಿವೃದ್ಧಿಗೆ ಹಣ ನೀಡಿ ಎಂದು ಸರ್ಕಾರಕ್ಕೆ ಅಂಗಲಾಚುತ್ತಿದ್ದಾರೆ ಎಂದು ಟೀಕಿಸಿದರು.

ಸಂಸದ ಪ್ರತಾಪ್ ಸಿಂಹ, ಮಾಜಿ ಸಚಿವರಾದ ಸಿ.ಎಚ್.ವಿಜಯ್‌ಶಂಕರ್, ಎನ್.ಮಹೇಶ್, ಶಾಸಕ ಶ್ರೀವತ್ಸ, ಮಾಜಿ ಶಾಸಕ ನಿರಂಜನ್ ಕುಮಾರ್, ಬಿಜೆಪಿ ಜಿಲ್ಲಾಧ್ಯಕ್ಷೆ ಮಂಗಳಾ ಸೋಮಶೇಖರ್, ರೈತ ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ.ನವೀನ್ ಕುಮಾರ್, ಚಂದ್ರಶೇಖರ್, ರಮೇಶ್‌ಕುಮಾರ್, ನಗರಸಭಾ ಸದಸ್ಯ ಗಣೇಶ್ ಕುಮಾರಸ್ವಾಮಿ, ಪರಮೇಶ್, ಹನಗೋಡು ಮಂಜುನಾಥ್, ರವಿಶಂಕರ್ ಇತರರು ಹಾಜರಿದ್ದರು.

ತಕ್ಷಣ ಬರ ಪರಿಹಾರ ವಿತರಿಸಲಿ



ಬೆಟ್ಟದಪುರ, ನ.7–ರಾಜ್ಯ ಸರ್ಕಾರ ತಕ್ಷಣ ಬರ ಪರಿಹಾರ ವಿತರಿಸಬೇಕು ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಆಗ್ರಹಿಸಿದರು.

ಪಿರಿಯಾಪಟ್ಟಣ ತಾಲೂಕಿನ ಅಲ್ಲನಾಯಕನಹಳ್ಳಿ ಗ್ರಾಮದಲ್ಲಿ ಮಂಗಳವಾರ ಬರ ಅಧ್ಯಯನ ನಡೆಸಿ, ನಂತರ ಬೆಟ್ಟದಪುರದ ಕನ್ನಡ ಮಠದ ಆವರಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಸಮರ್ಪಕವಾಗಿ ವಿದ್ಯುತ್ ಪೂರೈಸದಿರುವುದರಿಂದ ಬೆಳೆಗಳಗೆ ನೀರಿಲ್ಲದೆ ಒಣಗುತ್ತಿವೆ. ಇದರಿಂದ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಈ ಬಗ್ಗೆ ಅಧ್ಯಯನ ನಡೆಸದೆ ಗ್ಯಾರಂಟಿ ಗುಂಗಿನಲ್ಲಿ ಸರ್ಕಾರ ನಡೆಯುತ್ತಿದೆ.

ಪಿರಿಯಾಪಟ್ಟಣ ತಾಲೂಕಿನಲ್ಲಿ ಬರದಿಂದ ಅಪಾರ ಪ್ರಮಾಣದ ಬೆಳೆಗಳು ನಾಶವಾಗಿದೆ. ಆದರೆ, ಯಾವ ಸಚಿವರು, ಅಧಿಕಾರಿಗಳು ಭೇಟಿ ನೀಡಿ ಬರ ಅಧ್ಯಯನ ನಡೆಸದೆ ಅಂದಾಜಿನಲ್ಲಿ ಲೆಕ್ಕ ಕೊಡುತ್ತಿದ್ದಾರೆ. ಮುಂದಿನ ಅಧಿವೇಶದಲ್ಲಿ ಬಿಜೆಪಿಯ 66 ಶಾಸಕರು ಬರಗಾಲದ ಬಗ್ಗೆ ಚರ್ಚೆ ಮಾಡಿ, ಸರ್ಕಾರದ ಗಮನ ಸೆಳೆಯುತ್ತೇವೆ ಎಂದರು.

ಇದೇ ವೇಳೆ ಅಲ್ಲನಾಯಕನಹಳ್ಳಿಯಲ್ಲಿ ಸಾಲ ಬಾಧೆಯಿಂದ ಆತ್ಮಹತ್ಯೆ ಮಾಡಿಕೊಂಡ ರೈತ ಮಂಜುನಾಥ್ ಅವರ ಮನೆಗೆ ಭೇಟಿ ನೀಡಿದ ಯತ್ನಾಳ್ ವೈಯಕ್ತಿಕವಾಗಿ 50 ಸಾವಿರ ರೂ. ಪರಿಹಾರ ನೀಡಿದರು. ಬಿಜೆಪಿ ತಾಲೂಕು ಅಧ್ಯಕ್ಷ ಎಂ.ಎಂ.ರಾಜೇಗೌಡ, ಪ್ರಧಾನ ಕಾರ್ಯದರ್ಶಿ ಬೆಮ್ಮತ್ತಿ ಚಂದ್ರು, ರೈತ ಮೋರ್ಚಾ ಜಿಲ್ಲಾಧ್ಯಕ್ಷ ರಮೇಶ್ ಕುಮಾರ್, ಮುಖಂಡರಾದ ಪುಟ್ಟಬುದ್ದಿ, ವಿಕ್ರಂ ರಾಜು, ವಸಂತ್ ಕುಮಾರ್, ರಾಜೇಂದ್ರ, ಆರ್.ಟಿ.ಸತೀಶ್, ಕೌಲನಹಳ್ಳಿ ಸೋಮಶೇಖರ್, ನಳಿನಿ, ಲೋಕಪಾಲಯ್ಯ, ಜಗದೀಶ್, ರಮೇಶ್, ಮಹದೇವ್ ಹಾಜರಿದ್ದರು.

ರಾಮದೂರು: ಪಿರಿಯಾಪಟ್ಟಣ ತಾಲೂಕಿನ ರಾಮದೂರು ಸುತ್ತಮುತ್ತಲಿನ ಗ್ರಾಮಗಳ ರೈತರ ಜಮೀನಿಗೆ ಮಂಗಳವಾರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ನೇತೃತ್ವದ ಬಿಜೆಪಿ ಬರ ಅಧ್ಯಯನ ತಂಡ ಭೇಟಿ ನೀಡಿ, ಪರಿಶೀಲಿಸಿ ಮಾಹಿತಿ ಪಡೆಯಿತು.

ದೊಡ್ಡಬೇಲಾಳು ಗ್ರಾಮದ ರೈತ ಸಣ್ಣ ತಮ್ಮೇಗೌಡರ ಮೆಕ್ಕೆ ಜೋಳ, ಮಾಕೋಡುಬೋರೆ ಗ್ರಾಮದ ದೊಡ್ಡಸೋಮೇಗೌಡ ಹಾಗೂ ರಾಜೇಗೌಡರ ಶುಂಠಿ ಬೆಳೆ, ಆರ್.ಡಿ.ಕೊಪ್ಪಲು ಗ್ರಾಮದ ರೈತ ಬಸವಣ್ಣ ಅವರ ರಾಗಿ ಬೆಳೆ ಜಮೀನುಗಳಿಗೆ ಭೇಟಿ ನೀಡಿ, ಬರದಿಂದ ರೈತರಿಗೆ ಉಂಟಾಗಿರುವ ನಷ್ಟದ ಬಗ್ಗೆ ಮಾಹಿತಿ ಪಡೆಯಲಾಯಿತು.

ತಂಬಾಕು ಮಂಡಳಿಯ ನಿರ್ದೇಶಕ ವಿಕ್ರಂರಾಜು, ರಾಮದೂರು ಬಿಜೆಪಿ ಮಹಾಶಕ್ತಿ ಕೇಂದ್ರದ ಅಧ್ಯಕ್ಷ ಕಲ್ಲೂರು ಅಶೋಕ್, ಮುಖಂಡರಾದ ವಸಂತ್ ಕುಮಾರ್, ಪಿ.ಜೆ.ರವಿ, ಹರಳಹಳ್ಳಿ ಅಭಿ ಆರಾಧ್ಯ, ಹಾಜರಿದ್ದರು.

ಆನೆ ಕಾವಲುಗಾರರನ್ನು ನೇಮಿಸಿ



ಸರಗೂರು, ನ.7–ಕಾಡುಪ್ರಾಣಿಗಳಿಂದ ರೈತರ ಸಾವು–ನೋವು ಆಗದಂತೆ ಸೂಕ್ತ ಕ್ರಮ ವಹಿಸಬೇಕು ಎಂದು ಅರಣ್ಯಾಧಿಕಾರಿಗಳಿಗೆ ಶಾಸಕ ಅನಿಲ್ ಚಿಕ್ಕಮಾದು ಖಡಕ್ ಸೂಚನೆ ನೀಡಿದರು.


ಮೊಳೆಯೂರು ವಲಯ ಅರಣ್ಯದಂಚಿನ ಹೊಸಕೋಟೆ ಸಂಪರ್ಕ ರಸ್ತೆ ಪಕ್ಕದ ಜಮೀನಿನಲ್ಲಿ–ಸೋಮವಾರ ಕೆಲಸ ಮಾಡುತ್ತಿದ್ದ ರೈತ ಬಾಲಾಜಿ ನಾಯಕನ ಮೇಲೆ ಹುಲಿ ದಾಳಿ ಕೊಂದುಹಾಕಿದ್ದರಿಂದ ಮಧ್ಯರಾತ್ರಿ ಘಟನಾ ಸ್ಥಳಕ್ಕೆ ಆಗಮಿಸಿ ಮೃತ ಕುಟುಂಬಕ್ಕೆ ಸಾಂತ್ವನ ಹೇಳಿ ಮಾತನಾಡಿದ ಅವರು, ಅರಣ್ಯ ಇಲಾಖಾಧಿಕಾರಿಗಳು ಸಮರ್ಪಕವಾಗಿ ಕರ್ತವ್ಯ ನಿರ್ವಹಿಸದ ಹಿನ್ನೆಲೆಯಲ್ಲಿ ಇಂತಹ ದುರಂತಗಳು ಸಂಭವಿಸುತ್ತಿವೆ ಕೂಡಲೇ ಅರಣ್ಯ ಇಲಾಖೆ ಎಚ್ಚೆತ್ತು ಆನೆ ಕಾವಲುಗಾರರನ್ನು ನೇಮಿಸಬೇಕು. ಕಾಡಾನೆ ಹಾಗೂ ಹುಲಿ ಹಾವಳಿ ತಡೆಗೆ ಸೂಕ್ತ ಕ್ರಮ ವಹಿಸಬೇಕು ಎಂದು ತಾಕೀತು ಮಾಡಿದರು.

ಇದೇ ವೇಳೆ ಮಾತನಾಡಿದ ಜಿಪಂ ಮಾಜಿ ಸದಸ್ಯ ಪಿ.ರವಿ, ಮಾನವ–ವನ್ಯಜೀವಿ ಸಂಘರ್ಷ ನಿರಂತರವಾಗಿದ್ದು, ಸರ್ಕಾರ ಕೂಡಲೇ ಕಡಿವಾಣ ಹಾಕಬೇಕು ಎಂದು ಮನವಿ ಮಾಡಿದರು.

ಇದೇ ವೇಳೆ ಅರಣ್ಯಾಧಿಕಾರಿಗಳು ಮೃತ ರೈತ ಬಾಲಾಜಿ ನಾಯಕ ಕುಟುಂಬಕ್ಕೆ ಇಲಾಖೆ ವತಿಯಿಂದ 15 ಲಕ್ಷ ರೂ. ಪರಿಹಾರ ಚೆಕ್ ನೀಡಿದರು. ತಹಶೀಲ್ದಾರ್ ಪರಶಿವಮೂರ್ತಿ, ರೈತ ಮುಖಂಡರಾದ ಅಣ್ಣಯ್ಯಸ್ವಾಮಿ, ಭೀಮ್‌ರಾಜ್, ಮೊಳೆಯೂರು ಹರಿದಾಸ್, ಡಿ.ಪಿ.ನಟರಾಜ್, ಪ್ರಕಾಶ್‌ಚಂದ್ರ, ಕುರ್ಣೇಗಾಲ ಬೆಟ್ಟಸ್ವಾಮಿ, ನಾರಾಯಣ ನಾಯ್ಕ, ಹೇಮಾಜಿನಾಯ್ಕ, ರಮೇಶ್, ರಾಮು, ಚಂದ್ರ ಶಿವಾಜಿ ನಾಯ್ಕ, ಸುಂದರ, ಸುರೇಶ್, ಸಿದ್ದಯ್ಯ, ಸಿಎಫ್‌ಓ ಡಾ.ಪಿ. ರಮೇಶ್‌ಕುಮಾರ್, ಎಸಿಎಫ್ ಪರಮೇಶ್, ಡಿವೈಎಸ್‌ಪಿ ಗೋಪಾಲಕೃಷ್ಣ, ಸರಗೂರು ಪೊಲೀಸ್ ಠಾಣೆ ಎಸ್‌ಐ ಲಕ್ಷ್ಮಿಕಾಂತ್, ಪಿಎಸ್‌ಐ ನಂದೀಶ್ ಕುಮಾರ್, ಆರ್‌ಎಫ್‌ಓಗಳಾದ ಕೆ.ಅಮೃತ್, ನಾರಾಯಣ್ ಹಾಜರಿದ್ದರು.

ಮಂಗಳವಾರ ಬಿ.ಮಟಕೆರೆ ಪ್ರಾಥಮಿಕ ಆರೋಗ್ಯ ಕೇಂದ್ರಲ್ಲಿ ವೈದ್ಯಾಧಿಕಾರಿ ಡಾ.ಚಂದ್ರಶೇಖರ್ ರೈತ ಬಾಲಾಜಿ ನಾಯಕನ ಮರಣೋತ್ತರ ಪರೀಕ್ಷೆ ನಡೆಸಿ, ನಂತರ ಮೃತ ದೇಹವನ್ನು ವಾರಸುದಾರರಿಗೆ ಒಪ್ಪಿಸಲಾಯಿತು. ಈ ಸಂಬಂಧ ಸರಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನಾನು ಜಾತಿ, ಪಕ್ಷ ರಾಜಕಾರಣ ಮಾಡೋಲ್ಲ



ಕೆ.ಆರ್.ನಗರ, ನ.7–ಕ್ಷೇತ್ರದ ಜನತೆಯ ಆಶೀರ್ವಾದದಿಂದ ಶಾಸಕನಾಗಿರುವ ನಾನು ಅಧಿಕಾರಾವಧಿಯಲ್ಲಿ ಜಾತಿ ಮತ್ತು ಪಕ್ಷ ರಾಜಕಾರಣ ಮಾಡದೆ, ಉತ್ತಮ ಆಡಳಿತ ನೀಡುವ ಮೂಲಕ ಕ್ಷೇತ್ರದಲ್ಲಿ ಸರ್ವ ಜನಾಂಗದ ತೋಟ ನಿರ್ಮಾಣ ಮಾಡಲಿದ್ದೇನೆ ಎಂದು ಶಾಸಕ ಡಿ.ರವಿಶಂಕರ್ ಹೇಳಿದರು.


ತಾಲೂಕಿನ ಹೆಬ್ಬಾಳು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ವಾಣಿಜ್ಯ ಕಟ್ಟಡಗಳ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ರೈತರಿಗೆ ಅನುಕೂಲ ಕಲ್ಪಿಸುತ್ತಿರುವ ಸಹಕಾರ ಸಂಘಗಳ ಏಳಿಗೆ ಮತ್ತು ಅವುಗಳ ಆರ್ಥಿಕ ಅಭಿವೃದ್ಧಿಗೆ ಶ್ರಮಿಸಲು ಸದಾ ಬದ್ಧನಾಗಿದ್ದು, ಸರ್ಕಾರದಿಂದ ಬರುವ ಸವಲತ್ತು ಕೊಡಿಸಲಾಗುವುದು ಎಂದರು.

ಶೇ.70ರಷ್ಟು ರೈತರು ದೇಶದ ಬೆನ್ನೆಲುಬಾಗಿದ್ದು, ಅವರ ಆರ್ಥಿಕ ಸಂಕಷ್ಟಕ್ಕೆ ಸ್ಪಂದಿಸುವುದು ಸರ್ಕಾರದ ಕರ್ತವ್ಯ. ಇದನ್ನು ಅರಿತಿರುವ ನಾನು ರೈತರ ಉದ್ಧಾರಕ್ಕಾಗಿ ಇರುವ ಸಹಕಾರ ಸಂಘಗಳ ಅಭಿವೃದ್ಧಿಗೆ ಎಲ್ಲಾ ಸಹಕಾರ ನೀಡುತ್ತೇನೆ ಎಂದು ಭರವಸೆ ನೀಡಿದರು.

ಎಂಸಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಹಾಗೂ ಶಾಸಕ ಜಿ.ಡಿ.ಹರೀಶ್‌ಗೌಡ ಮಾತನಾಡಿ, ಬ್ಯಾಂಕ್‌ನ ವ್ಯವಹಾರಗಳ ಬಗ್ಗೆ ಸಿಬಿಐ ತನಿಖೆ ಮಾಡಿದರೂ ಸರ್ಕಾರ ಮತ್ತು ದೂರು ಕೊಟ್ಟವರಿಗೆ ಲಾಭವಾಗುವುದಿಲ್ಲ. ನಷ್ಟದಲ್ಲಿದ್ದ ಬ್ಯಾಂಕ್ ಅನ್ನು ಐದು ವರ್ಷದ ಅವಧಿಯಲ್ಲಿ ಲಾಭದತ್ತ ಕೊಂಡೊಯ್ಯಲು ಶ್ರಮಿಸಿದ್ದೇನೆ. ಸುಮಾರು 977 ಕೋಟಿ ರೂ.ಠ ಠೇವಣಿಗೆ ಆಡಳಿತ ಮಂಡಳಿಯ ಶ್ರಮವಿದೆ ಎಂದು ಹೇಳಿದರು.

ಸಾಲಿಗ್ರಾಮ ಮತ್ತು ಕೆಆರ್.ನಗರ ತಾಲೂಕಿನ 23 ಸಂಘಗಳಿಗೆ ಡಿಸಿಸಿ ಬ್ಯಾಂಕ್‌ನಿಂದ 93 ಕೋಟಿ ರೂ. ಸಾಲವನ್ನು 209 ಕೋಟಿ ರೂ.ಗೆ ಏರಿಸಲಾಗಿದೆ. ಇದರಿಂದ ರೈತರಿಗೆ ಅನುಕೂಲವಾಗಿದ್ದು, ಮುಚ್ಚುವ ಹಂತದಲ್ಲಿದ್ದ ಹೆಬ್ಬಾಳು ಸಂಘವನ್ನು ಪ್ರಗತಿಯತ್ತ ಕೊಂಡೊಯ್ಯಲು ಕಾರಣರಾದ ಇಲ್ಲಿನ ಸಿಇಓ ಡಿ.ಎಸ್.ಚಂದ್ರಶೇಖರ್ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.


ಇದೇ ವೇಳೆ ಮಹಿಳಾ ಸ್ವ–ಸಹಾಯ ಸಂಘಗಳಿಗೆ ಸಾಲದ ಚೆಕ್‌ಗಳನ್ನು ವಿತರಿಸಲಾಯಿತು. ಎಂಡಿಸಿಸಿ ಬ್ಯಾಂಕ್ ನಿರ್ದೇಶಕರಾದ ಅಮಿತ್.ವಿ.ದೇವರಹಟ್ಟಿ, ಹೆಚ್. ಸುಬ್ಬಯ್ಯ, ಸಂಘದ ಅಧ್ಯಕ್ಷ ಹೆಚ್.ಆರ್. ಬಾಲಕೃಷ್ಣ, ಉಪಾಧ್ಯಕ್ಷ ಸಿ.ಎಂ.ರಾಜೇಶ್, ನಿರ್ದೇಶಕರಾದ ಸಿ.ಆರ್.ಶಿವಪ್ರಕಾಶ್, ರಾಮಚಂದ್ರನಾಯಕ, ಎನ್.ಪಿ.ಪ್ರಸನ್ನ, ಹೆಚ್.ಹೆಚ್.ನಾಗೇಂದ್ರ ಹೆಚ್.ಕೆ.ಧನಂಜಯ, ಮಂಜುನಾಥ್, ಕೇಬಲ್ ರವಿ, ಶಶಿಕಲಾ, ರೂಪಾ, ರವಿಕುಮಾರ್, ಜಿಲ್ಲಾ ಬ್ಯಾಂಕ್ ಪ್ರತಿನಿಧಿ ಲಿಂಗರಾಜು, ಸಂಘದ ಸಿಇಓ ಡಿ.ಎಸ್.ಚಂದ್ರಶೇಖರ್, ಸಿಬ್ಬಂದಿ ಉದಯಕುಮಾರ್, ಕುಬೇರ, ಪುನೀತ್‌ಕುಮಾರ್ ಹಾಜರಿದ್ದರು.



ಹುಲಿ ದಾಳಿಯಿಂದ ಮೃತಪಟ್ಟ ಸರಗೂರು ತಾಲೂಕಿನ ಕಾಡಬೇಗೂರು ಲಂಬಾಣಿ ಕಾಲೋನಿಯ ರೈತ ಬಾಲಾಜಿ ನಾಯಕ್ ಅವರ ನಿವಾಸಕ್ಕೆ ಮಂಗಳವಾರ ಮಾಜಿ ಶಾಸಕ ಬಿ.ಹರ್ಷವರ್ಧನ್ ಭೇಟಿ ನೀಡಿ, ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿ ವೈಯುಕ್ತಿಕ ಧನಸಹಾಯ ಮಾಡಿದರು. ನಂಜನಗೂಡು ಬಿಜೆಪಿ ಮಂಡಲ ಅಧ್ಯಕ್ಷ ಪಿ.ಮಹೇಶ್, ನಗರಾಧ್ಯಕ್ಷ ಶ್ರೀನಿವಾಸರೆಡ್ಡಿ, ರೈತ ಮೋರ್ಚಾ ಅಧ್ಯಕ್ಷ ನಂಜುಂಡಸ್ವಾಮಿ, ಜಿತೇಂದ್ರ, ಮಹದೇವನಾಯ್ಕ, ಮಲ್ಲೇಶ್‌ನಾಯ್ಕ, ಗುರುಸ್ವಾಮಿ ಇದ್ದರು.

ಜಿಪಂ ಎಇಇ ವಿರುದ್ಧ ಮಾಜಿ ಶಾಸಕ ಪ್ರತಿಭಟನೆ

● ವಾಲ್ಮೀಕಿ ಭವನ ನಿರ್ಮಾಣ ಅನುದಾನ ಬಿಡುಗಡೆ ಸುಳ್ಳು ವರದಿ ● ಬೀಚನಹಳ್ಳಿ ಚಿಕ್ಕಣ್ಣ ಆರೋಪ



ಹೆಚ್.ಡಿ.ಕೋಟೆ, ನ.7–ಪಟ್ಟಣದ ಗದ್ದಿಗೆ ವೃತ್ತದಲ್ಲಿ ನಿರ್ಮಾಣವಾಗುತ್ತಿರುವ ವಾಲ್ಮೀಕಿ ಸಮುದಾಯ ಭವನ ಕಾಮಗಾರಿಯ ಅನುದಾನದ ವರದಿಯ ಸತ್ಯಸತ್ಯತೆಯನ್ನು ಮರೆಮಾಚಿ ಶಾಸಕ ಅನಿಲ್ ಚಿಕ್ಕಮಾದು ಪರವಾಗಿ ಜಿಲ್ಲಾ ಪಂಚಾಯಿತಿ ಸಹಾಯಕ ಕಾರ್ಯಪಾಲಕ ಅಭಿಯಂತರ ನಾಗರಾಜು ಹೇಳಿಕೆ ನೀಡುತ್ತಿದ್ದಾರೆ, ಆದ್ದರಿಂದ ಸೂಕ್ತ ದಾಖಲಾತಿ ನೀಡುವಂತೆ ಒತ್ತಾಯಿಸಿ ಪಟ್ಟಣದ ಜಿಪಂ ಕಚೇರಿ ಎದುರು ಮಂಗಳವಾರ ಮಾಜಿ ಶಾಸಕ ಬೀಚನಹಳ್ಳಿ ಚಿಕ್ಕಣ್ಣ ತಮ್ಮ ಬೆಂಬಲಿಗರೊಂದಿಗೆ ಪ್ರತಿಭಟನೆ ನಡೆಸಿದರು.

ವಾಲ್ಮೀಕಿ ಜಯಂತಿಯ ಪೂರ್ವಭಾವಿ ಸಭೆಯಲ್ಲಿ ಅಭಿಯಂತರ ನಾಗರಾಜು, ವಾಲ್ಮೀಕಿ ಭವನ ನಿರ್ಮಾಣದ ಕಾಮಗಾರಿಯ ಅನುದಾನದ ಬಿಡುಗಡೆ ವರದಿಯ ವಿಚಾರವಾಗಿ ಸುಳ್ಳು ಹೇಳಿಕೆ ನೀಡಿ ನಾಯಕ ಸಮುದಾಯ ಮತ್ತು ಕ್ಷೇತ್ರದ ಜನರಲ್ಲಿ ಗೊಂದಲ ಸೃಷ್ಟಿಸಿದ್ದಾರೆ. ನಾನು ಅಧಿಕಾರವಾಧಿಯಲ್ಲಿ ಬಿಡುಗಡೆಯಾಗಿದ್ದ ಶಾಸಕರ ಅನುದಾನದ ವಿವರವನ್ನು ಮರೆಮಾಚಿ ಬೇರೆಯವರಿಗೆ ಅನುಕೂಲವಾಗುವ ರೀತಿ ಹೇಳಿಕೆ ನೀಡಿದ್ದಾರೆ ಎಂದು ಬೀಚನಹಳ್ಳಿ ಚಿಕ್ಕಣ್ಣ ಆರೋಪಿಸಿದರು.

ಕಳೆದ ತಿಂಗಳು ಜಿಪಂ ಕಚೇರಿಗೆ ಮುತ್ತಿಗೆ ಹಾಕಿ ನಾಗರಾಜು ಅವರನ್ನು ತರಾಟೆಗೆ ತೆಗೆದುಕೊಂಡಾಗ ಸಮಗ್ರ ವರದಿಯನ್ನು ವಾರದೊಳಗೆ ಕೊಡುತ್ತೇನೆ ಎಂದು ಹೇಳಿದ್ದರು. ಆದರೆ, ಈವರೆಗೂ ದಾಖಲಾತಿ ಒದಗಿಸಿಲ್ಲ. ನನ್ನ ಅಧಿಕಾರವಾಧಿಯಲ್ಲಿ ಸಮುದಾಯ ಭವನಕ್ಕೆ ನೀಡಿರುವ ಜಾಗ ಮತ್ತು 1.40 ಕೋಟಿ ರೂ. ಬಿಡುಗಡೆಯ ದಾಖಲಾತಿಯನ್ನು ನಾನೇ ಇಲಾಖೆಗಳಿಂದ ತಂದಿದ್ದೇನೆ ಎಂದರು.

ಇದೇ ವೇಳೆ ಅಭಿಯಂತರ ನಾಗರಾಜು ಮಾತನಾಡಿ, ಮಾಜಿ ಶಾಸಕ ಬೀಚನಹಳ್ಳಿ ಚಿಕ್ಕಣ್ಣ ಅವರು ವಾಲ್ಮೀಕಿ ಸಮುದಾಯದ ಭವನಕ್ಕೆ ಸಂಬಂಧಿಸಿದಂತೆ ಪೂರ್ವ ದಾಖಲಾತಿ ವಿವರಗಳನ್ನ ನೀಡಿ ಎಂದು ಕಳೆದ ತಿಂಗಳು ತಿಳಿಸಿದ್ದರು. ಅದರಂತೆ ನಾನು ನಮ್ಮ ಇಲಾಖೆಯ ವಿವರಗಳನ್ನು ಅವರಿಗೆ ತಿಳಿಸಿದ್ದೇನೆ. ಅವರ ಅವಧಿಯಲ್ಲಿ ನಡೆದ ಕಾಮಗಾರಿಗಳ ಬಗ್ಗೆ ಬೇರೆ ಇಲಾಖೆಯಲ್ಲಿ ಇದ್ದ ಸಂಪೂರ್ಣ ದಾಖಲಾತಿ ವಿವರಗಳನ್ನು ಅವರಿಗೆ ಇಂದು ನೀಡಲಿದ್ದೇನೆ ಎಂದು ತಿಳಿಸಿದರು.

ಪ್ರತಿಭಟನೆಯಲ್ಲಿ ತಾಲೂಕು ನಾಯಕ ಸಂಘದ ಪ್ರಧಾನ ಕಾರ್ಯದರ್ಶಿ ಚಾಕಳ್ಳಿ ಕೃಷ್ಣ, ಮುಖಂಡರಾದ ಚಾ.ನಂಜುಂಡಮೂರ್ತಿ, ಕೋಟೆ ಕೃಷ್ಣನಾಯಕ, ಸರಗೂರು ಚೆನ್ನಪ್ಪ, ಮಾದೇವ ನಾಯಕ, ಜವರ ನಾಯಕ, ಸಿದ್ದರಾಜು, ಸಣ್ಣ ನಾಯಕ, ಸೋಮನಾಯಕ, ಗಣೇಶ, ರಮೇಶ, ಕಾಂತನಾಯಕ ನಿಂಗನಾಯಕ, ಮಾದೇವ ನಾಯಕ, ನವೀನ, ಬೋರ್‌ವೆಲ್ ಆನಂದ್, ವೀರನಾಯಕ, ಸ್ವಾಮಿ, ಬೆಟ್ಟಪ್ಪ, ನಾಗರಾಜು, ರವಿ, ಬೆಟ್ಟನಾಯಕ, ಗೋವಿಂದರಾಜು, ದೇವನಾಯಕ, ಚನ್ನ ನಾಯಕ, ಸಣ್ಣಸ್ವಾಮಿ ನಾಯಕ, ಚಿಕ್ಕತಿಮ್ಮ ನಾಯಕ, ಸರಗೂರು ನಾಗೇಂದ್ರ ಹಾಜರಿದ್ದರು.

> ನನ್ನ ಬಳಿ ಇದ್ದಂತ ಸಂಪೂರ್ಣ ದಾಖಲಾತಿಗಳನ್ನ ಶಿರಸ್ತೆದಾರ್ ಮಹೇಶ್ ಅವರಿಗೆ ನೀಡಿದ್ದೇನೆ. ನನ್ನ ಅವಧಿಯಲ್ಲಿ ಯಾವುದೇ ಹಣ ಬಿಡುಗಡೆಯಾಗಿಲ್ಲ ಎಂದು ಸುಳ್ಳು ಮಾಹಿತಿಯನ್ನು ನೀಡಿರುವ ಜಿಪಂ ಸಹಾಯಕ ಕಾರ್ಯಪಾಲಕ ಅಭಿಯಂತರ ನಾಗರಾಜು ಅವರನ್ನ ಅಮಾನತುಗೊಳಿಸಬೇಕು. ಇಲ್ಲದಿದ್ದಲ್ಲಿ ಉಗ್ರ ಹೋರಾಟ ಮಾಡಲಾಗುವುದು.
> –**ಬೀಚನಹಳ್ಳಿ ಚಿಕ್ಕಣ್ಣ**, ಮಾಜಿ ಶಾಸಕ

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಟೈಗರ್ ನಾಗೇಶ್ವರ್ ರಾವ್ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಘೋಸ್ಟ್ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಯಾರಿಯನ್ (ಹಿ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಭಗವತಿ ಕೇಸರಿ (ತೆ)	4 ಪ್ರದರ್ಶನಗಳು
ಗಾಯಿತ್ರಿ	
ಲಿಯೋ (ಕ)	2 ಪ್ರದರ್ಶನಗಳು
ರಾಜಕಮಲ್	
ಮಾ ಊರಿ ಪಾಲಿಮೆರಿ ಪಾರ್ಟ್–2 (ತೆ)	4 ಪ್ರದರ್ಶನಗಳು
ಸಂಗಂ	
ಟಗರುಫಲ್ಯ(ಕ)	4 ಪ್ರದರ್ಶನಗಳು
ಲಿಡೋ	
ಭಾವಪೂರ್ಣ (ಕ)	2 ಪ್ರದರ್ಶನಗಳು
ಲಿಯೋ (ತ)	2 ಪ್ರದರ್ಶನಗಳು
ತಿಬ್ಬಾದೇವಿ	
ಲಿಯೋ(ತ)	4 ಪ್ರದರ್ಶನಗಳು
ಪ್ರಭಾ	
ಟಿಆರ್‌ಪಿ ರಾಮ(ಕ)	2 ಪ್ರದರ್ಶನಗಳು
ಗರುಡ ಪುರಾಣ(ಕ)	2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಟಗರುಪಲ್ಯ (ಕ): ಬೆ.10.45ಕ್ಕೆ, ಮ.1.20ಕ್ಕೆ, ರಾ.7.15ಕ್ಕೆ, ಲಿಯೋ (ತ): ಸಂ.4ಕ್ಕೆ, ಘೋಸ್ಟ್ (ಕ): ರಾ.9.50ಕ್ಕೆ.
ಸ್ಕ್ರೀನ್ 2	ಗರುಡ ಪುರಾಣ (ಕ): ಬೆ.10.50ಕ್ಕೆ, ಲಿಯೋ (ತ): ಮ.1.35ಕ್ಕೆ, ಯುಟಿ 69 (ಹಿಂ): ಸಂ.4.45ಕ್ಕೆ, ಕೀಡಾ ಕೋಲ (ತೆ): ರಾ.7.15ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	12th ಫೇಲ್ (ಹಿಂ): ಬೆ.10.45ಕ್ಕೆ, ರಾ.7ಕ್ಕೆ, ಕ್ರೇಜಿ ಕೀರ್ತಿ (ಕ): ಮ.1.45ಕ್ಕೆ, ಟಗರುಪಲ್ಯ (ಕ): ಸಂ.4.15ಕ್ಕೆ, ಗರುಡನ್ (ಮ): ರಾ.9.55ಕ್ಕೆ.
ಸ್ಕ್ರೀನ್ 4	ಘೋಸ್ಟ್ (ಕ): ಬೆ.10.40ಕ್ಕೆ, ಮ.1.30ಕ್ಕೆ, ಸಂ.4.20ಕ್ಕೆ, ರಾ.7.10ಕ್ಕೆ, ಟಗರು ಪಲ್ಯ (ಕ): ರಾ.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಘೋಸ್ಟ್ (ಕ): ಬೆ.10ಕ್ಕೆ, ಮ.12.55ಕ್ಕೆ, ಮ.3.50ಕ್ಕೆ, ಸಂ.6.45ಕ್ಕೆ, ರಾ.9.40ಕ್ಕೆ.
ಸ್ಕ್ರೀನ್ 2	ಟಗರುಪಲ್ಯ (ಕ): ರಾ.10.05ಕ್ಕೆ, ಸಂ.4.20ಕ್ಕೆ, ರಾ.7.10ಕ್ಕೆ, ರಾ.10ಕ್ಕೆ, ಲಿಯೋ (ತ): ಮ.12.55ಕ್ಕೆ.
ಸ್ಕ್ರೀನ್ 3	ಕೀಡಾ ಕೋಲ (ತೆ): ಬೆ.9.55ಕ್ಕೆ, ಮ.3.25ಕ್ಕೆ, ಟಗರು ಪಲ್ಯ (ಕ): ಮ.12.35ಕ್ಕೆ, ಲಿಯೋ (ಕ): ಸಂ.6.05ಕ್ಕೆ, ಲಿಯೋ (ತ): ರಾ.9.30ಕ್ಕೆ.
ಸ್ಕ್ರೀನ್ 4	ಲಿಯೋ (ತ): ಬೆ.10.30ಕ್ಕೆ, ಟಗರುಪಲ್ಯ (ಕ): ಮ.1.55ಕ್ಕೆ, ಟಿ.ಆರ್.ಪಿ. ರಾಮ (ಕ): ಸಂ.4.45ಕ್ಕೆ, ಗರುಡನ್ (ಮ): ರಾ.7.30ಕ್ಕೆ, ಕೀಡಾ ಕೋಲ(ತೆ): ರಾ.10.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಸೈಕಲ್ ಸವಾರಿ (ಕ): ಬೆ.10.30ಕ್ಕೆ, ಕ್ರೇಜಿ ಕೀರ್ತಿ (ಕ): ಮ.1.30ಕ್ಕೆ, ಗರುಡ ಪುರಾಣ (ಕ): ಸಂ.4ಕ್ಕೆ, ಬಿಸ್ತ್ರಕಟ್ಟೆ (ಕ): ಸಂ.6.45ಕ್ಕೆ, ಲಿಯೋ (ತ): ರಾ.9.15ಕ್ಕೆ.
ಸ್ಕ್ರೀನ್ 2	ಟಗರುಪಲ್ಯ (ಕ): ಬೆ.10.45ಕ್ಕೆ, ಮ.1.40ಕ್ಕೆ, ಸಂ.4.30ಕ್ಕೆ, ರಾ.7.15ಕ್ಕೆ
ಸ್ಕ್ರೀನ್ 3	ಲಿಯೋ (ತ): ಮ.1.30ಕ್ಕೆ, ರಾ.7ಕ್ಕೆ
ಸ್ಕ್ರೀನ್ 4	ಘೋಸ್ಟ್ (ಕ): ಬೆ.10.30ಕ್ಕೆ, ಸಂ.4.10ಕ್ಕೆ, ಸಂ.6.45ಕ್ಕೆ, ಲಿಯೋ (ಕ): ಮ.1.05ಕ್ಕೆ, ಟಗರುಪಲ್ಯ (ಕ): ರಾ.9.15ಕ್ಕೆ.

ಪಿವಿಆರ್ ಸಿನಿಮಾಸ್
ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಘೋಸ್ಟ್ (ಕ): ಬೆ.9ಕ್ಕೆ, ಬೆ.10.20ಕ್ಕೆ, ಮ.1.15ಕ್ಕೆ, ಮ.3.20ಕ್ಕೆ, ರಾ.7.35ಕ್ಕೆ, ರಾ.9.45ಕ್ಕೆ, ರಾ.10.30ಕ್ಕೆ, 12th ಫೇಲ್ (ಹಿಂ): ಮ.3.50ಕ್ಕೆ, ಭಗವಂತ್ ಕೇಸರಿ (ತೆ): ರಾ.7.05ಕ್ಕೆ, ಗಣಪತ್: ಎ ಹೀರೋ (ಹಿಂ): ಸಂ.4.10ಕ್ಕೆ, ಕಿಲ್ಲರ್ಸ್ ಆಫ್ ಫ್ಲವರ್ ಮೂನ್ (ಇಂ): ಬೆ.10ಕ್ಕೆ, ಮ.2.05ಕ್ಕೆ, ಸಂ.6.10ಕ್ಕೆ, ರಾ.10.15ಕ್ಕೆ, ಲಿಯೋ (ಕ): ಮ.12.45ಕ್ಕೆ, ಲಿಯೋ (ತ): ಬೆ.11.55ಕ್ಕೆ, ಸಂ.4.10ಕ್ಕೆ, ಸಂ.6.15ಕ್ಕೆ, ರಾ.9.40ಕ್ಕೆ, ರಾ.10.30ಕ್ಕೆ, ಮುಜಿಬ್ ದಿ ಮೇಕಿಂಗ್ ಆಫ್ ಎ ನೇಷನ್ (ಹಿಂ): ರಾ.10ಕ್ಕೆ, ಟಗರುಪಲ್ಯ (ಕ): ಮ.1ಕ್ಕೆ, ರಾ.7ಕ್ಕೆ, ತೇಜಸ್ (ಹಿಂ): ಬೆ.11.05ಕ್ಕೆ, ಮ.1.45ಕ್ಕೆ, ಸಂ.4.25ಕ್ಕೆ, ರಾ.7.05ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಹೆಡಿಯಾಲ ಭಾಗದ ಗ್ರಾಮಗಳಿಗೆ ದರ್ಶನ್ ಧ್ರುವನಾರಾಯಣ್ ಭೇಟಿ



ಮಲ್ಕುಂಡಿ, ನ.7–ಇತ್ತೀಚೆಗೆ ಹುಲಿ ದಾಳಿ ನಡೆಸಿ, ರೈತ ವೀರಭದ್ರ ಭೋವಿಗೆ ತೀವ್ರ ಗಾಯಗೊಳಿಸಿ, ಹಸುಗಳನ್ನು ಕೊಂಡುಹಾಕಿದ ನಂಜನಗೂಡು ತಾಲೂಕಿನ ಮಲ್ಕುಂಡಿ ಹಾಗೂ ಹೆಡಿಯಾಲ ಭಾಗದ ಗ್ರಾಮಗಳಿಗೆ ಶಾಸಕ ದರ್ಶನ್ ಧ್ರುವನಾರಾಯಣ್ ಭೇಟಿ ನೀಡಿ ಪರಿಶೀಲಿಸಿ, ರೈತರ ಕಷ್ಟ ಆಲಿಸಿದರು.

ಬಳಿಕ ಮಾತನಾಡಿದ ಶಾಸಕರು, ಅರಣ್ಯದಂಚಿನ ಗ್ರಾಮಗಳಲ್ಲಿ ಕಾಡುಪ್ರಾಣಿಗಳ ಹಾವಳಿ ತಪ್ಪಿಸಲು ಅರಣ್ಯಾಧಿಕಾರಿಗಳು ಕ್ರಮ ವಹಿಸಬೇಕು. ರೈತರು ಜಮೀನಿನಲ್ಲಿ ಬೆಳೆದ ಫಸಲುಗಳು ಕಾಡುಪ್ರಾಣಿಗಳ ಪಾಲಾಗುತ್ತಿವೆ. ಈ ಬಗ್ಗೆ ಸರ್ಕಾರದ ಗಮನಕ್ಕೆ ತಂದಿದ್ದೇನೆ. ಹುಲಿ ದಾಳಿಯಿಂದ ಗಾಯಗೊಂಡಿರುವ ಮಹದೇವನಗರ ಗ್ರಾಮದ ವೀರಭದ್ರ ಭೋವಿ ಅವರನ್ನು ಆಸ್ಪತ್ರೆಗೆ ದಾಖಲಿಸಿ, ಸರ್ಕಾರದ ವತಿಯಿಂದ ಚಿಕಿತ್ಸೆ ನೀಡಲಾಗುತ್ತಿದೆ ಎಂದರು.

ಇದೇ ವೇಳೆ ತಾಪಂ ಮಾಜಿ ಅಧ್ಯಕ್ಷ ನಾಗೇಶ್ ರಾಜ್, ಕಾಂಗ್ರೆಸ್ ಹಿಂದುಳಿದ ವರ್ಗದ ಜಿಲ್ಲಾಧ್ಯಕ್ಷ ಕೆ.ಮಾರುತಿ, ಅರಣ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ಹಾಜರಿದ್ದರು.

ರುಕ್ಮಿಣಿ ನಿಧನ



ಹಿರೀಕ್ಯಾತನಹಳ್ಳಿ, ನ.7– ಹುಣಸೂರು ತಾಲೂಕಿನ ಬಿಳಿಗೆರೆ ಗ್ರಾಮ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಹಾಗೂ ಹಾಲಿ ಸದಸ್ಯ ಮಾರಗೌಡನಹಳ್ಳಿ ಗ್ರಾಮದ ರುಕ್ಮಿಣಿ (43) ಅನಾರೋಗ್ಯದಿಂದ ಮಂಗಳವಾರ ನಿಧನರಾದರು. ಮೃತರು ಪತಿ ಸಿದ್ದಲಿಂಗೇಗೌಡ, ಇಬ್ಬರು ಪುತ್ರಿಯರು, ಒಬ್ಬ ಪುತ್ರನನ್ನು ಅಗಲಿದ್ದಾರೆ. ಗ್ರಾಮದ ಮೃತರ ಜಮೀನಿನಲ್ಲಿ ಅಂತ್ಯಕ್ರಿಯೆ ನಡೆಯಿತು. ಬಿಳಿಗೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷ ಉಪಾಧ್ಯಕ್ಷ ಹಾಗೂ ಸದಸ್ಯರು, ಪಿಡಿಒ, ಸಿಬ್ಬಂದಿ ಅಂತಿಮ ದರ್ಶನ ಪಡೆದರು.


ಅಶ್ವಿನಿ ಎಂಟರ್‌ಪ್ರೈಸಸ್ ಅಂಡ್ ಬಿಲ್ಡರ್ಸ್, ಕರಾವಳಿ ಸೀಫುಡ್
ರೆಸ್ಟೋರೆಂಟ್ ಮಾಲೀಕರು ಹಾಗೂ ಖ್ಯಾತ ಉದ್ಯಮಿಗಳಾದ
ಜಿ. ಮಂಜುಗೌಡ
51ನೇ ವರ್ಷದ
ಹುಟ್ಟುಹಬ್ಬದ ಶುಭಾಶಯಗಳು
ಜಿ.ಮಂಜು (ಮಂಜುಗೌಡ)
ನಿಕಟಪೂರ್ವ ಅಧ್ಯಕ್ಷರು, ಜಿಲ್ಲಾ ಒಕ್ಕಲಿಗರ ಸಂಘ (ರಿ)
ಮೈಸೂರು-ಚಾಮರಾಜನಗರ
ಮಾಲೀಕರು, ಅಶ್ವಿನಿ ಎಂಟರ್‌ಪ್ರೈಸಸ್ ಅಂಡ್ ಬಿಲ್ಡರ್ಸ್
ಮಾಲೀಕರು, ಕರಾವಳಿ ಸೀಫುಡ್ ರೆಸ್ಟೋರೆಂಟ್
ಶುಭಕೋರುವವರು :
ದಸರಾ ವಸ್ತು ಪ್ರದರ್ಶನ ಮಳಿಗೆದಾರರು


ಸಂತೋಷ್‌ರವರಿಗೆ
ಹುಟ್ಟುಹಬ್ಬದ
ಶುಭಾಶಯಗಳು
ಕರಾವಳಿ ಸೀಫುಡ್ ರೆಸ್ಟೋರೆಂಟ್ ಮಾಲೀಕರು
ಹಾಗೂ ಖ್ಯಾತ ಉದ್ಯಮಿಗಳಾದ
ಜಿ. ಮಂಜುಗೌಡ ರವರಿಗೆ
51ನೇ ವರ್ಷದ
ಹುಟ್ಟುಹಬ್ಬದ ಶುಭಾಶಯಗಳು
ಶುಭಕೋರುವವರು : ಸಿಬ್ಬಂದಿ ವರ್ಗ
ಕರಾವಳಿ ಸೀಫುಡ್ ರೆಸ್ಟೋರೆಂಟ್


ನಿಕಟಪೂರ್ವ ಅಧ್ಯಕ್ಷರು,
ಜಿಲ್ಲಾ ಒಕ್ಕಲಿಗರ ಸಂಘ (ರಿ), ಮೈಸೂರು-
ಚಾಮರಾಜನಗರ ಹಾಗೂ ಉದ್ಯಮಿಗಳಾದ
ಜಿ. ಮಂಜುಗೌಡ ರವರಿಗೆ
51ನೇ ವರ್ಷದ
ಹುಟ್ಟುಹಬ್ಬದ ಶುಭಾಶಯಗಳು
ಜಿ.ಮಂಜು (ಮಂಜುಗೌಡ)
ನಿಕಟಪೂರ್ವ ಅಧ್ಯಕ್ಷರು, ಜಿಲ್ಲಾ ಒಕ್ಕಲಿಗರ ಸಂಘ (ರಿ.)
ಮೈಸೂರು-ಚಾಮರಾಜನಗರ
ಮಾಲೀಕರು, ಅಶ್ವಿನಿ ಎಂಟರ್‌ಪ್ರೈಸಸ್ ಅಂಡ್ ಬಿಲ್ಡರ್ಸ್
ಮಾಲೀಕರು, ಅಶ್ವಿನಿ ಗೋಲ್ಡ್ ಕಂಪನಿ
ಶುಭಕೋರುವವರು :
ಜಿ. ಮಂಜುಗೌಡ
ಸ್ನೇಹ ಬಳಗ
93437 06416